www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ನಾಡಿನ ಸಮಸ್ತ ಜನತೆಗೆ ಹಾಗೂ ಪತ್ರಿಕಾ ಓದುಗರು, ವರದಿಗಾರರು, ಜಾಹೀರಾತುದಾರರಿಗೆ
**ಪತ್ರಿಕಾ ಬಳಗದಿಂದ**



**ಗೌರಿ-ಗಣೇಶ ಹಬ್ಬದ ಹಾರ್ದಿಕ ಶುಭಾಶಯಗಳು**

**ಸೂಚನೆ:** ಹಬ್ಬದ ನಿಮಿತ್ತ ಬುಧವಾರ ಕಚೇರಿಗೆ ಬಿಡುವು ಇರುವ ಕಾರಣದಿಂದ ಗುರುವಾರ ಪತ್ರಿಕೆ ಮುದ್ರಣವಾಗುವುದಿಲ್ಲ.

-ಸಂಪಾದಕರು, ಉದಯವಾಹಿನಿ



## ಕ್ಷಮೆ ಯಾಚಿಸಿದ ಶಾಸಕ ಶಿವಲಿಂಗೇಗೌಡ

• ಉದಯವಾಹಿನಿ ಅರಸೀಕೆರೆ



ವಿಧಾನಸಭಾ ಅಧಿವೇಶನದ ವೇಳೆ ಸ್ಪೀಕರ್ ಸ್ಥಾನದಲ್ಲಿದ್ದ ಉಪಾಧ್ಯಕ್ಷರ ಆಕ್ಷೇಪಾರ್ಹ ಪದ ಬಳಕೆ ವಿಚಾರ ಸಂಬಂಧಿಸಿದಂತೆ ಶಾಸಕ ಶಿವಲಿಂಗೇಗೌಡ ಉಪಾಧ್ಯಕ್ಷ ರುದ್ರಪ್ಪ ಅವರನ್ನು ಕ್ಷಮೆ ಕೇಳಿದ್ದಾರೆ. ಮಾತಿನ ಭರದಲ್ಲಿ ಅರಿವಿಲ್ಲದೆ ಅಂತಹ ಪದ ಬಂದಿದೆ. ಆಗಲೇ ಅದರ ಅರಿವಾಗಿ ಕಡತದಿಂದ ತೆಗೆಯಲು ನಾನು ಹೇಳಿದ್ದೇನೆ. ಮಾನ್ಯ ಉಪಾಧ್ಯಕ್ಷರು ಕೂಡ ಹೇಳಿ ಕಡತದಿಂದ ತೆಗೆಯಲಾಗಿದೆ. ಆದರೂ ಕೂಡ ಆದ ಘಟನೆ ಬಗ್ಗೆ ವಿಷಾದ ವ್ಯಕ್ತಪಡಿಸುತ್ತೇನೆ ಎಂದಿದ್ದಾರೆ.

ಕೇಂದ್ರ, ರಾಜ್ಯ, ಜಂಟಿ ಸಹಾಯೋಗದ ಅನುದಾನ ಹಂಚಿಕೆಯ ಬಗ್ಗೆ ನಾನು ಮಾತನಾಡಬೇಕಿತ್ತು ಈ ಸಂದರ್ಭದಲ್ಲಿ ಬಿಜೆಪಿಯವರು ಗಲಾಟೆ ಮಾಡಿ ನನಗೆ ಮಾತನಾಡಲು ಅಡ್ಡಿಪಡಿಸಿದರು. ಈ ಸಂದರ್ಭದಲ್ಲಿ ನಾನು ತಾಳ್ಮೆ ಕಳೆದುಕೊಂಡು ಪದ ಬಳಕೆ ಮಾಡಿದ್ದೇನೆ ಉಪಾಧ್ಯಕ್ಷರಲ್ಲಿ ವಿನಯ ಪೂರ್ವಕವಾಗಿ ಕ್ಷಮೆ ಕೇಳುವುದಾಗಿ ಶಾಸಕ ಹಾಗೂ ಕರ್ನಾಟಕ ಸರ್ಕಾರದ ಗೃಹ ಮಂಡಳಿಯ ಅಧ್ಯಕ್ಷ ಕೆ ಎಂ ಶಿವಲಿಂಗೇಗೌಡ ಹೇಳಿಕೆ ಬಿಡುಗಡೆ

## ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿ ಬೃಹತ್ ಯೋಜನೆಗಳು ಹಾಗೂ ರಚನೆಯಾಗಲಿರುವ ಐದು ನಗರ ಪಾಲಿಕೆಗಳಿಗೆ ಹಣಕಾಸು ಹಂಚಿಕೆ ಮಾಡುವ ಅಧಿಕಾರವುಳ್ಳ ಗ್ರೇಟರ್ ಬೆಂಗಳೂರು ಪ್ರಾಧಿಕಾರವನ್ನು ರಚಿಸಿ, ನಗರಾಭಿವೃದ್ಧಿ ಇಲಾಖೆ ಮಂಗಳವಾರ ಅಧಿಸೂಚನೆ ಹೊರಡಿಸಿದೆ. ಮುಖ್ಯಮಂತ್ರಿ ಜಿಬಿಎ ಅಧ್ಯಕ್ಷರಾಗಿದ್ದಾರೆ. ಬಿಬಿಎಂಪಿ ವ್ಯಾಪ್ತಿಯನ್ನು 'ಗ್ರೇಟರ್ ಬೆಂಗಳೂರು ಪ್ರದೇಶ' ಎಂದು ಹೆಸರಿಸಿ, 'ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ'ಯನ್ನು 2025ರ ಮೇ 15ರಂದು ಜಾರಿ ಮಾಡಲಾಗಿತ್ತು. ಅಂದಿನಿಂದ ನಾಲ್ಕು ತಿಂಗಳಲ್ಲಿ ಜಿಬಿಎ ರಚನೆಯಾಗಬೇಕಿತ್ತು. ಜಿಬಿಎಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷರಾಗಿದ್ದು, ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉಪಾಧ್ಯಕ್ಷರಾಗಿದ್ದಾರೆ. ಬಿಬಿಎಂಪಿಯ ಮುಖ್ಯ ಆಯುಕ್ತ ಎಂ. ಮಹೇಶ್ವರ್ ರಾವ್ ಅವರಿಗೆ ಜಿಬಿಎ ಮುಖ್ಯ ಆಯುಕ್ತರ ಹುದ್ದೆಯನ್ನು ಹೆಚ್ಚುವರಿಯಾಗಿ ವಹಿಸಿ ಕೊಟ್ಟಿದ್ದು, ಅವರು ಸದಸ್ಯ


# ಬಯಲಾಯ್ತು ಷಡ್ಯಂತ್ರ ಬುರುಡೆ ಗ್ಯಾಂಗ್ ಅತಂತ್ರ

## ಮನೆಯ ಮೂಲೆ ಮೂಲೆಯಲ್ಲಿ ಸರ್ಚ್ ಆಪರೇಷನ್

## ಚಿನ್ನಯ್ಯನ ವಿಚಾರಣೆಯಲ್ಲಿ ಅನೇಕ ಮಾಹಿತಿ ಬಯಲು











• ಉದಯವಾಹಿನಿ, ಮಂಗಳೂರು

ಧರ್ಮಸ್ಥಳ ಪ್ರಕರಣದಲ್ಲಿ ಸುಳ್ಳಿನ ಪ್ರಚಾರ ನಡೆಸಿದವರ ಮೇಲೆ ಎಸ್‌ಐಟಿ ತನಿಖೆ ನಡೆಸುತ್ತಿದೆ. ಮಹೇಶ್ ಶೆಟ್ಟಿ ತಿಮರೋಡಿ ದೂರುದಾರನಾಗಿದ್ದ ಆರೋಪಿ ಚಿನ್ನಯ್ಯನಿಗೆ ಆಶ್ರಯ ಕೊಟ್ಟ ಹಿನ್ನೆಲೆ ಇಂದು ಬೆಳ್ಳಂಬೆಳಗ್ಗೆ 9-30ರ ವೇಳೆಗೆ ಎಸ್ ಐಟಿ ದಾಳಿ ನಡೆಸಿದೆ. ಈ ವೇಳೆ ಚಿನ್ನಯ್ಯನ ಮೊಬೈಲ್ ಪತ್ತೆ ಆಗಿದೆ.

- ಚಿನ್ನಯ್ಯನಿಗೆ ಆಶ್ರಯ ಕೊಟ್ಟ ವಿಷಯವನ್ನು ಸ್ವತಃ ತಿಮರೋಡಿ ಒಪ್ಪಿಕೊಂಡಿದ್ದರು .
- ಧರ್ಮಸ್ಥಳ ಪ್ರಕರಣದಲ್ಲೂ ತಿಮರೋಡಿ ಸಿಲುಕಿ ಬೀಳುವ ಸಾಧ್ಯತೆ ಇದೆ.
- ಎಕರೆಗಟ್ಟಲೆ ಜಾಗದಲ್ಲಿರುವ ಮಹೇಶ್ ಶೆಟ್ಟಿ ತಿಮರೋಡಿ ಮನೆ ಹಾಗೂ ಸಹೋದರನ ಮನೆಯ ಮೂಲೆ ಮೂಲೆಯಲ್ಲಿ ಸರ್ಚ್ ಆಪರೇಷನ್ ನಡೆಸುತ್ತಿದೆ.

ಮಹೇಶ್ ಶೆಟ್ಟಿ ತಿಮರೋಡಿ ಮನೆಯ ಶೋಧಕ್ಕೆ ಸರ್ಚ್ ವಾರಂಟ್ (ನ್ಯಾಯಾಲಯದ ಅನುಮತಿ) ಪಡೆದ ಎಸ್ ಐ ಟಿ, ಆರೋಪಿ ಚಿನ್ನಯ್ಯನನ್ನು ಕರೆದುಕೊಂಡು ತಿಮರೋಡಿ ಮನೆಗೆ ಮಹಜರು ನಡೆಸಲು ಆಗಮಿಸಿದೆ. ತಿಮರೋಡಿ ಮನೆಯ ಸುತ್ತ ಪೊಲೀಸ್ ಬಂದೋ ಬಸ್ತ್ ಮಾಡಲಾಗಿದೆ.

### ಭಿನ್ನಾಭಿಪ್ರಾಯ ಮೂಡಿರುವುದು ವೈರಲ್

ಇದೀಗ ಸೌಜನ್ಯ ಪರ ಹೋರಾಟಗಾರರಿದ್ದ ಮಹೇಶ್ ಶೆಟ್ಟಿ ತಿಮರೋಡಿ ಹಾಗೂ ಗಿರೀಶ್ ಮಟ್ಟೆಣ್ಣವರ್ ತಂಡಗಳ ನಡುವೆಯೇ ಭಿನ್ನಾಭಿಪ್ರಾಯ ಮೂಡಿರುವುದು ವೈರಲ್ ಆಗಿರುವ ಆಡಿಯೋ ಒಂದರಿಂದ ಬಹಿರಂಗ ಆಗಿದೆ. ತಿಮರೋಡಿ ತಂಡದ , ಹಾಗೂ ಸೌಜನ್ಯ ಹೋರಾಟಗಾರರಾಗಿರುವ ದಿನೇಶ್ ಗಾಣಿಗ -ಸಾರ್ವಜನಿಕರೊಬ್ಬರೊಂದಿಗೆ ಮಾತನಾಡಿರುವ ಆಡಿಯೋ ವೈರಲ್ ಆಗಿದೆ. ಗಿರೀಶ್ ಮಟ್ಟೆಣ್ಣವರ್ ಬೇರೆ ಊರಿನಿಂದ ಬಂದವನ ಮಾತು ಕೇಳಿಯೇ ಇಷ್ಟೆಲ್ಲ ಸಮಸ್ಯೆ ಆಗಿದೆ, ಮೊದಲು ಅವನನ್ನು ಹೊರಹಾಕಿ ಎಂದು ಹೇಳುತ್ತಿರುವುದು ಆಡಿಯೋದಲ್ಲಿದೆ.

### ತಿಮರೋಡಿ ನಿವಾಸದ ಮೇಲೆ ಎಸ್‌ಐಟಿ ದಾಳಿ

ಎಸ್‌ಐಟಿ ತನಿಖೆ ತಿಮರೋಡಿ ಹಾಗೂ ಆವರ ಸಹೋದರ ಮೋಹನ್‌ಕುಮಾರ್ ಶೆಟ್ಟಿ ಮನೆಯಲ್ಲಿ ಕೂಡಾ ನಡೆಸುತ್ತಿದೆ.

ಜಿತೇಂದ್ರ, ದಯಾಮ ಸೇರಿದಂತೆ ಹಲವು ಅಧಿಕಾರಿಗಳ ತಂಡ ಕೆಲಸ ಮಾಡುತ್ತಿದೆ. ಚಿನ್ನಯ್ಯನ 25 ವಿಡಿಯೋಗಳನ್ನು ಮಾಡಲಾಗಿದೆ. ಈಗಾಗಲೆ 3 ವಿಡಿಯೋಗಳ ತುಣುಕುಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಾಕಲಾಗಿದೆ.

ಚಿನ್ನಯ್ಯನ ಮೊಬೈಲ್‌ಗಾಗಿ ತಿಮರೋಡಿ ಮನೆಯಲ್ಲಿ ಶೋಧ ನಡೆದಿದ್ದು, ಆತನ ಬಳಸುತ್ತಿದ್ದ ಮೊಬೈಲ್ ಸಿಕ್ಕಿದೆ ಎನ್ನಲಾಗಿದೆ, ತಿಮರೋಡಿ ಮನೆಯಲ್ಲಿ ಚಿನ್ನಯ್ಯನಿಗೆ ಆಶ್ರಯ ನೀಡಿದ ಶಂಕೆ ಇದ್ದು, ಈತ ಇದೇ ಮನೆಯಿಂದ ನಾನಾ ಯೂಟ್ಯೂಬ್ ಚಾನೆಲ್ ಗಳಿಗೆ ಸಂದರ್ಶನ ನೀಡಿದ್ದ. ತಿಮರೋಡಿ ಮನೆಯ ಸಿಸಿಟಿವಿ ಹಾರ್ಡ್ ಡಿಸ್ಕ್ ಅನ್ನು ವಶಕ್ಕೆ ಪಡೆಯಲಾಗಿದೆ. ಎಸ್.ಐ.ಟಿ ತನಿಖಾಧಿಕಾರಿ ಜಿತೇಂದ್ರ ಕುಮಾರ್ ದಯಾಮ ನೇತೃತ್ವದಲ್ಲಿ ಅಧಿಕಾರಿಗಳ ತಂಡ ದಾಳಿ ನಡೆಸಿದೆ. ಅನಧಿಕೃತ ಶವ ಹೂತು ಹಾಕಿದ ಆರೋಪ ಮಾಡಿದ್ದ ಚಿನ್ನಯ್ಯನಿಗೆ ಉಜಿರೆಯ ನಿವಾಸದಲ್ಲಿ ಮಹೇಶ್ ಶೆಟ್ಟಿ ತಿಮರೋಡಿ ಕಳೆದ ಎರಡು ತಿಂಗಳಿಂದ ಅಶ್ರಯ ನೀಡಿದ್ದರಿಂದ ಸಂಬಂಧಿಸಿದ ವಸ್ತುಗಳನ್ನು ವಶಪಡಿಸಿಕೊಳ್ಳಲು ಈ ದಾಳಿ ನಡೆಯುತ್ತಿದೆ ಎನ್ನಲಾಗಿದೆ.

ಒಂದೆಡೆ ಸುಜಾತಾ ಭಟ್ ವಿಚಾರಣೆಗೆ ಹಾಜರಾಗಿದ್ದಾರೆ. ಕಳೆದ ಎರಡು ದಿನದಿಂದ ಸಮೀರ್ ಎಂಡಿ ವಿಚಾರಣೆ ಕೂಡಾ ನಡೆಯುತ್ತಿದೆ. ಚಿನ್ನಯ್ಯ ಎಸ್ ಐಟಿ ಕಸ್ಟಡಿಯಲ್ಲಿದ್ದು, ಆತ ಸಂಚಿನ ಹಿಂದೆ ಇರುವವರ ಬಗ್ಗೆ ಬಾಯಿ ಬಿಡುತ್ತಿದ್ದಂತೆ ಬುರುಡೆ ಗ್ಯಾಂಗ್ ಹಿಂದಿರುವವರಿಗೆ ನಡುಕ ಹುಟ್ಟಿಸಿದ್ದು, ಈತನಿಗೆ ಆಶ್ರಯ ಕೊಟ್ಟಿದ್ದ ತಿಮರೋಡಿಗೂ ಈಗ ಸಂಕಷ್ಟ ಎದುರಾಗಿದೆ.

### ಆಡಿಯೋದಲ್ಲಿ ಏನಿದೆ?

ಎಲ್ಲಾ ಹಾಳಾಗಿಹೋಯ್ತು.. ಆ ಸುಜಾತಾ ಭಟ್ ಅಜ್ಜಿಯನ್ನು ಕರೆಸಿದ್ದು ಯಾರು. ಆ ಮಟ್ಟೆಣ್ಣವರ್ ನ ವಾಪಾಸ್ ಕಳಿಸಿದ್ರೆ ಸರಿ ಇರುತ್ತೆ. ಹೋರಾಟಗಾರರನ್ನೆಲ್ಲ ಒದ್ದುಒಳಗೆ ಹಾಕ್ತಾರೆ. ಮಟ್ಟೆಣ್ಣೆವರ್ ಘಟ್ಟದವ, ನಿಮ್ಮನೆಲ್ಲ ಹಾಳು ಮಾಡ್ತಾನೆ. ಅವನನ್ನು ಮೊದಲು ಕಳಿಸಿ ಇಲ್ಲದಿದ್ರೆ ತಿಮರೋಡಿ ಬೀಡೆಲ್ಲಾ ಹುಡಿ ಆಗುತ್ತೆ. ಜನ ಎಲ್ಲಾ ಉಜಿರೆ ಕಡೆ ಬರ್ತಿದ್ದಾರೆ. ನಿಮ್ಮ ತಲೆಯಲ್ಲಿರುವ ನಾಲ್ಕು ಕೂದಲೆಲ್ಲ ಕಿತ್ತು ಹಾಕ್ತಾನೆ ಅವನು ಎಂದು ಮಟ್ಟೆಣ್ಣವರ್ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಇದಕ್ಕೆ ಸೌಜನ್ಯ ಪರ ಹೋರಾಟಗಾರರು ಸಮಾಧಾನ ಮಾಡಿ ಆಯ್ತು, ಮಾತಾಡುತ್ತಿದ್ದೇವೆ ಎಂದು ಸಮಾಧಾನ ಪಡಿಸಿದ್ದಾರೆ. ಇದಕ್ಕೆ ಮತ್ತೆ ಆಕ್ರೋಶ ಹೊರಹಾಕಿ ಹಾಳೆ ತಟ್ಟೆ ಹಿಡ್ಕೊಂಡು ಓಡ್ರಿ ಎಲ್ಲಾ.. ಹೋರಾಟವೆಲ್ಲ ಎಲ್ಲಾ ಬರೀ ಸುಳ್ಳಾಯ್ತು, ಮರ್ಯಾದೆ ಹೋಯ್ತು, ನಮಗೆ ಬೇಜಾರಾಗಿ ಬಿಟ್ಟಿದೆ ಈಗ ಎಂದು ಅಸಮಾಧಾನ ಹೊರಹಾಕಿದ್ದಾರೆ.

# ಚಾಮುಂಡಿ ಬೆಟ್ಟ ಹಿಂದೂಗಳ ಆಸ್ತಿಯಲ್ಲ

• ಉದಯವಾಹಿನಿ, ಬೆಂಗಳೂರು

### ಎಲ್ಲಾ ಧರ್ಮದವರಿಗೂ ಪ್ರವೇಶವಿದೆ

ಚಾಮುಂಡಿ ಬೆಟ್ಟಕ್ಕೆ ಎಲ್ಲಾ ಧರ್ಮದವರಿಗೂ ಪ್ರವೇಶವಿದೆ. ಎಲ್ಲಾ ಸಮಾಜದವರು ಚಾಮುಂಡಿ ಬೆಟ್ಟಕ್ಕೆ ಹೋಗುತ್ತಾರೆ, ದೇವರ ಬಳಿ ಪ್ರಾರ್ಥನೆ ಮಾಡಿಕೊಳ್ಳುತ್ತಾರೆ. ಇದು ಹಿಂದೂಗಳ ಆಸ್ತಿಯಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು. ಮೈಸೂರು ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಬೇಡ ಎಂಬ ಬಿಜೆಪಿ ನಾಯಕರ ವಿರೋಧದ ಬಗ್ಗೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದರು. ನಾವುಗಳು ಮಸೀದಿ, ದರ್ಗಾಗಳಿಗೆ, ಜೈನರ ಬಸದಿಗಳಿಗೆ, ಚರ್ಚ್, ಗುರುದ್ವಾರಗಳಿಗೆ ಹೋಗುತ್ತೇವೆ. ನಾವು ಗುರುದ್ವಾರಕ್ಕೆ ಹೋಗೋದನ್ನ ಯಾರಾದರೂ ತಪ್ಪಿಸಿದ್ದಾರಾ? ಹಿಂದೂ ದೇವಸ್ಥಾನಗಳಿಗೆ ಅವರುಗಳು ಬರುವುದನ್ನು ನಾವು ವಿರೋಧಿಸಿದ್ದೇವೆಯೇ? ಯಾವುದೇ ಶ್ರದ್ಧಾ ಕೇಂದ್ರಗಳಿಗೆ ಯಾರು ಬೇಕಾದರೂ ಹೋಗಿ ಬರಬಹುದು ಎಂದರು.

ಎಷ್ಟೋ ಜನ ಹಿಂದೂಗಳು ಮುಸ್ಲಿಮರಾಗಿ, ಕ್ರಿಶ್ಚಿಯನ್ನರಾಗಿ ಹಾಗೂ ಬೇರೆ ಧರ್ಮದವರು ಹಿಂದೂಗಳಾಗಿ ಮತಾಂತರ ಆಗಿಲ್ಲವೇ? ಮುಸ್ಲಿಮರು ಹಿಂದೂ ಧರ್ಮದ ಆಚರಣೆಗಳನ್ನು ಮಾಡುತ್ತಿಲ್ಲವೇ? ಅಯೋಧ್ಯೆ ರಾಮನಿಗೆ ಹಿಂದುಗಳು ಮಾತ್ರ ಬರಬೇಕು ಎಂದು ಏಕೆ ಬೋರ್ಡ್ ಹಾಕಿಲ್ಲ? ಬಿಜೆಪಿ ಸರ್ಕಾರ ಇದ್ದ ವೇಳೆ ಹಾಗೂ ಈಗ ಇಡೀ ದೇಶದಲ್ಲಿ ಹಜ್ ಕಮಿಟಿ, ಅಲ್ಪಸಂಖ್ಯಾತ ಇಲಾಖೆಗಳನ್ನು ಏಕೆ ರದ್ದು ಮಾಡಲಿಲ್ಲ? ಇದೆಲ್ಲವೂ ರಾಜಕೀಯ ಎಂದು ತಿರುಗೇಟು ನೀಡಿದರು. ಮಕ್ಕಳು ತಮಗೆ ಬೇಕಾದ್ದ ಧರ್ಮ ಅನುಸರಿಸುತ್ತಾರೆ ನಮ್ಮದು ಜಾತ್ಯಾತೀತ ರಾಷ್ಟ್ರ. ನಮ್ಮ ಸಂವಿಧಾನದ ಮೂಲಕ ಎಲ್ಲರಿಗೂ ಅವಕಾಶ, ಸ್ವಾತಂತ್ರ್ಯ ಕಲ್ಪಿಸಲಾಗಿದೆ. ಎಲ್ಲರಿಗೂ ಸಂವಿಧಾನದ ರಕ್ಷಣೆಯಿದೆ. ಎಲ್ಲರಿಗೂ ಅವರವರ ನಂಬಿಕೆ ಮೇಲೆ ವಿಶ್ವಾಸವಿದೆ. ಮುಸ್ಲಿಂ ಅಥವಾ ಕ್ರಿಶ್ಚಿಯನ್ ಹೆಣ್ಣು, ಹಿಂದು ಅಥವಾ ಇತರೇ ಧರ್ಮದ ಗಂಡಿಗೆ ಜನಿಸಿದ ಮಕ್ಕಳು ತಮಗೆ ಬೇಕಾದ್ದನ್ನು ಅನುಸರಿಸುತ್ತಾರೆ ಎಂದರು.



ನಾಡಹಬ್ಬ ಮೈಸೂರು ದಸರಾ ಉದ್ಘಾಟನೆಗೆ ಬೂಕರ್ ಪ್ರಶಸ್ತಿ ಪುರಸ್ಕೃತ ಸಾಹಿತಿ ಬಾನು ಮುಷ್ತಾಕ್ ಅವರನ್ನು ಆಯ್ಕೆ ಮಾಡಿರುವ ಸರಕಾರದ ಕ್ರಮಕ್ಕೆ ಪರ-ವಿರೋಧದ ಕದನ ತೀವ್ರಗೊಂಡಿದೆ. ಹಿಂದೂ ಧರ್ಮದ ನಂಬಿಕೆ ಒಪ್ಪದಿರುವವರಿಗೆ ನಾಡಹಬ್ಬ ಉದ್ಘಾಟನೆಗೆ ಆಹ್ವಾನ ನೀಡಿರುವುದೇ ಹಾಸ್ಯಾಸ್ಪದ ಎಂದು ಬಿಜೆಪಿ ಮುಖಂಡರು ಸೋಮವಾರ ತೀವ್ರ ಆಕ್ಷೇಪ ಎತ್ತಿದರು. ಪ್ರಶಸ್ತಿ ಕಾರಣಕ್ಕೆ ಆಯ್ಕೆ ಸಮರ್ಥಿಸುವುದಾದರೆ




## ಆರ್‌ಎಸ್‌ಎಸ್ ಗೀತೆ ವಿವಾದ ಡಿಕೆಶಿ ಕ್ಷಮೆಯಾಚನೆ ಸ್ವಾಗತಿಸಿದ ಬಿ.ಕೆ. ಹರಿಪ್ರಸಾದ್

• ಉದಯವಾಹಿನಿ, ಬೆಂಗಳೂರು



ವಿಧಾನಸಭೆಯಲ್ಲಿ ಆರ್‌ಎಸ್‌ಎಸ್ ಪ್ರಾರ್ಥನಾ ಗೀತೆ ಹಾಡಿದ್ದಕ್ಕಾಗಿ ಡಿ.ಕೆ. ಶಿವಕುಮಾರ್ ಅವರು ಕ್ಷಮೆ ಯಾಚಿಸಿರುವುದನ್ನು ಸ್ವಾಗತಿಸಿರುವ ವಿಧಾನ ಪರಿಷತ್‌ನ ಕಾಂಗ್ರೆಸ್ ಸದಸ್ಯ ಬಿ.ಕೆ. ಹರಿಪ್ರಸಾದ್, ಕಾಂಗ್ರೆಸ್ ಪಕ್ಷದ ಸಿದ್ಧಾಂತದಲ್ಲಿ ರಾಜಿ ಇಲ್ಲ' ಎಂದರು. 'ಕೆಪಿಸಿಸಿ ಅಧ್ಯಕ್ಷರು ಆರ್‌ಎಸ್ ಗೀತೆ ಹಾಡುವುದು ತಪ್ಪು. ಡಿ.ಕೆ. ಶಿವಕುಮಾರ್ ಅವರು ಕೆಪಿಸಿಸಿ ಅಧ್ಯಕ್ಷರಾಗಿ ಹಾಡಿದ್ದರೆ ಕ್ಷಮೆ ಯಾಚಿಸಲೇಬೇಕು' ಎಂದು ಹರಿಪ್ರಸಾದ್ ಅವರು ಸೋಮವಾರ ಒತ್ತಾಯಿಸಿದ್ದರು.

ಸುದ್ದಿಗಾರರ ಜೊತೆ ಮಂಗಳವಾರ ಮಾತನಾಡಿದ ಬಿ.ಕೆ. ಹರಿಪ್ರಸಾದ್, ಡಿ.ಕೆ. ಶಿವಕುಮಾರ್ ಅವರ ಜೊತೆ ರೊಂದಿಗೆ ವೈಯಕ್ತಿಕವಾಗಿ ಯಾವುದೇ ಸಮಸ್ಯೆ ಇಲ್ಲ. ಬದಲಾಗಿ ಮಹಾತ್ಮ ಗಾಂಧಿಯನ್ನು ಕೊಂದ ಸಂಘಟನೆಯ ಹಾಡು ಹಾಡಿದ್ದಕ್ಕೆ ಮಾತ್ರ ವಿರೋಧ ವ್ಯಕ್ತಪಡಿಸಿದ್ದೆ' ಎಂದರು. ಉಪ ಮುಖ್ಯಮಂತ್ರಿಯಾಗಿ ಅವರು (ಶಿವಕುಮಾರ್) ಅದನ್ನು ಪಠಿಸಿದರೆ ನನಗೆ ಯಾವುದೇ ಆಕ್ಷೇಪವಿಲ್ಲ. ಕಾಂಗ್ರೆಸ್ ಅಧ್ಯಕ್ಷರಾಗಿ, ಕಾಂಗ್ರೆಸ್, ಸಂವಿಧಾನ ಮತ್ತು ತ್ರಿವರ್ಣ ಧ್ವಜವನ್ನು ವಿರೋಧಿಸುವ ಆರ್‌ಎಸ್‌ಎಸ್‌ನ ಪ್ರಾರ್ಥನೆಯ ಹಾಡನ್ನು ಹಾಡುವ ಅಗತ್ಯ ಇಲ್ಲ' ಎಂದು ಹೇಳಿದರು. 'ಕಾಂಗ್ರೆಸ್ ಪಕ್ಷವನ್ನು ನಾನು ಅಥವಾ ಡಿ.ಕೆ. ಶಿವಕುಮಾರ್ ಕಟ್ಟಿಲ್ಲ. ಭವಿಷ್ಯಕ್ಕಾಗಿ ಅದನ್ನು ಉಳಿಸಲು ಯಾರೋ ನಮಗೆ ನೀಡಿದ್ದಾರೆ. ನಮಗೆ ಶಕ್ತಿ ಇದ್ದರೆ, ನಾವು ಅದನ್ನು ಉಳಿಸಿ ಭವಿಷ್ಯದ ಪೀಳಿಗೆಗೆ ನೀಡಬೇಕಾಗುತ್ತದೆ. ಇಲ್ಲಿ ಯಾರೂ ಶಾಶ್ವತವಲ್ಲ' ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು. 'ರಾಹುಲ್ ಗಾಂಧಿಯವರ ಮೇಲೆ 54 ಕೇಸುಗಳಿವೆ. ರಾಹುಲ್ ಗಾಂಧಿಯವರ ವಿರುದ್ಧ ಕೆ.ಎನ್. ರಾಜಣ್ಣ ಮಾತನಾಡಿಲ್ಲ. ಯಾರ್‍ಯಾರ ನಿಲುವು ಏನು ಎನ್ನುವುದು ನಮಗೆ ಗೊತ್ತಿದೆ. ರಾಜಣ್ಣ, ಶಿವಕುಮಾರ್ ಇಬ್ಬರೂ ಕಾಂಗ್ರೆಸ್‌ನವರೆ. ನಿಷ್ಠೆ ಬಗ್ಗೆ ಚರ್ಚೆ ಬೇಡ' ಎಂದೂ ಹೇಳಿದರು.

# ರಸ್ತೆ ಪರಿಶೀಲಿಸಿದ ಡಿಕೆಶಿ 5000 ರಸ್ತೆ ಗುಂಡಿಗಳನ್ನು ಮುಚ್ಚಲು ಬಿಬಿಎಂಪಿಗೆ ಡೆಡ್‌ಲೈನ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಗರದ ರಸ್ತೆಗಳು ಹದಗೆಟ್ಟಿದ್ದು, ಗುಣಮಟ್ಟ, ರಸ್ತೆ ಗುಂಡಿಗಳನ್ನು ಮುಚ್ಚುವ ವಿಚಾರವಾಗಿ ನಗರದ ಶಾಸಕರೆಲ್ಲರೂ ಗಮನಕ್ಕೆ ತಂದಿದ್ದರು. ಹೀಗಾಗಿ ಡಿಸಿಎಂ ಸೋಮವಾರ ಮಧ್ಯರಾತ್ರಿ, ಬಾಗಲೂರು ಬಸ್ ನಿಲ್ದಾಣದ ಬಳಿ ರಸ್ತೆ ಗುಂಡಿ ಮುಚ್ಚುವ ಕಾರ್ಯ ಪರಿಶೀಲನೆ ನಡೆಸಿದರು.

ಬಳಿಕ ಪ್ರತಿಕ್ರಿಯೆ ನೀಡಿದ ಅವರು, ನಗರದಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವ ಸಲುವಾಗಿ ರಸ್ತೆ ಗುಂಡಿ ಗಮನ ತಂತ್ರಾಂಶ ಸಿದ್ದಪಡಿಸಿದ್ದೇವೆ. ಪೊಲೀಸರಿಗೂ ಅವರ ಠಾಣೆಗಳ ವ್ಯಾಪ್ತಿಯಲ್ಲಿ ಗುಂಡಿಗಳಿರುವ ಪಟ್ಟಿ ಕೊಡಲು ತಿಳಿಸಲಾಗಿತ್ತು. ಆಪ್‌ನಲ್ಲಿ ನಾಗರೀಕರು ದೂರುಗಳನ್ನು ಸಲ್ಲಿಸುತ್ತಾರೆ ಎಂದು ಡಿಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು. ಇತ್ತೀಚೆಗೆ ಬಾಗಲೂರು ರಸ್ತೆಯಲ್ಲಿ ಹೋದಾಗ ರಸ್ತೆ ಸ್ಥಿತಿ ನೋಡಿ ಬೇಸರವಾಗಿತ್ತು. ನಗರದ ಎಲ್ಲಾ ಕಡೆ ರಸ್ತೆ ಗುಂಡಿ ಮುಚ್ಚುವ ಕೆಲಸ ಮಾಡಲಾಗುತ್ತಿದೆ. 5000ಕ್ಕೂ ಹೆಚ್ಚು ಗುಂಡಿಗಳನ್ನು ಗುರುತಿಸಲಾಗಿದ್ದು, ಅದರಲ್ಲಿ 4400 ರಸ್ತೆ ಗುಂಡಿಗಳನ್ನು ಆದ್ಯತೆ ಮೇಲೆ ಮುಗಿಸಲು ಸೂಚನೆ ನೀಡಲಾಗಿದೆ. ಅದರಂತೆ ಕಳೆದ 4 ದಿನಗಳಿಂದ 2200 ಗುಂಡಿಗಳನ್ನು ಮುಚ್ಚಲಾಗಿದೆ ಎಂದು ಹೇಳಿದರು. 3 ದಿನದಲ್ಲಿ ಎಲ್ಲಾ ಗುಂಡಿಗಳನ್ನು ಮುಚ್ಚಬೇಕು ಎಂದುಕೊಂಡಿದ್ದೇವೆ. ರಾತ್ರಿ ಹೊತ್ತು ಮಾತ್ರ ಕೆಲಸ ಮಾಡಲು ಸಾಧ್ಯ. ಹೀಗಾಗಿ ಗುಣಮಟ್ಟ ಪರಿಶೀಲಿಸಲು ಬಂದಿದ್ದೇವೆ ಎಂದರು. ನಗರದಲ್ಲಿ ಸ್ವಚ್ಛತೆ ಕಾಪಾಡುವ ಕೆಲಸ ಮಾಡಲಾಗುತ್ತಿದ್ದು, ಸ್ಕೈವಾಕ್‌ಗಳನ್ನು ಸ್ವಚ್ಛ ಮಾಡಲಾಗಿದೆ. ರಸ್ತೆ ಗುಂಡಿಗಳನ್ನು ಮುಚ್ಚಿ ಹೋಗುವುದು ಮಾತ್ರವಲ್ಲ, ಗುಣಮಟ್ಟದ ಕೆಲಸ ಆಗಬೇಕು. ಈ ನಿಟ್ಟಿನಲ್ಲಿ ಹಾಟ್ ಮಿಕ್ಸ್, ಕೋಲ್ಡ್ ಮಿಕ್ಸ್ ಹಾಗೂ ಇಕೋಫಿಕ್ಸ್ ಸೇರಿದಂತೆ ಮೂರೂ ಮಾದರಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು.

'ರಸ್ತೆ ನಿರ್ಮಾಣ ಮಾಡುವಾಗ ಉತ್ತಮ ಗುಣಮಟ್ಟ ಕಾಯ್ದುಕೊಳ್ಳಬೇಕಲ್ಲವೇ ಎಂಬ ಪ್ರಶ್ನೆಗೆ,' ಬಾರೀ ವಾಹನಗಳ ಓಡಾಟ, ಮಳೆಗಾಲ ಸೇರಿದಂತೆ ಇನ್ನಿತರೆ ಸಮಸ್ಯೆಗಳು ಇರುತ್ತವೆ. ಅದಕ್ಕಾಗಿ ಹಂತ-ಹಂತವಾಗಿ ಕಾಂಕ್ರೀಟ್ ರಸ್ತೆ ಮಾಡಲಾಗುತ್ತಿದೆ. ಇದು 30 ವರ್ಷ ಬಾಳಿಕೆ ಬರಲಿದೆ ಎಂದರು. 'ಗುಂಡಿಗಳಿಂದಲೇ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿದೆ ಎಂದು ಕೇಳಿದ ಪ್ರಶ್ನೆಗೆ', 'ಹೆಣ್ಣು ಮಕ್ಕಳನ್ನು, ಚಿಕ್ಕ ಮಕ್ಕಳನ್ನು ಕರೆದೊಯ್ಯುವಾಗ ತೊಂದರೆಗಳಾಗುವುದನ್ನು ನಾನು ಗಮನಿಸಿದ್ದೇನೆ. ಅದಕ್ಕಾಗಿ ರಸ್ತೆ ಗುಂಡಿಗಳನ್ನು ಮುಚ್ಚಲಾಗುತ್ತಿದೆ. ರಸ್ತೆ ಗುಂಡಿಗಳ ಮೇಲ್ವಿಚಾರಣೆಗಾಗಿಯೇ ರಸ್ತೆ ಗುಂಡಿ ಗಮನ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದೆ' ಎಂದರು.


ಉದಯವಾಹಿನಿ ಚಿತ್ರ

> ಬೆಂಗಳೂರು ನಗರದ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯವನ್ನು ಪರಿಶೀಲಿಸಲು ಡಿಸಿಎಂ ಡಿ ಕೆ ಶಿವಕುಮಾರ್ ಅವರು ಮಧ್ಯರಾತ್ರಿ ಬಾಗಲೂರು ಬಸ್ ನಿಲ್ದಾಣಕ್ಕೆ ಭೇಟಿ ನೀಡಿದರು. ರಸ್ತೆ ಗುಂಡಿಗಳನ್ನು ಮುಚ್ಚಲು ರಸ್ತೆ ಗುಂಡಿ ಗಮನ ತಂತ್ರಾಂಶವನ್ನು ಸಿದ್ಧಪಡಿಸಲಾಗಿದೆ. ಈಗಾಗಲೇ 5000ಕ್ಕೂ ಹೆಚ್ಚು ಗುಂಡಿಗಳನ್ನು ಗುರುತಿಸಲಾಗಿದ್ದು, 2200 ಗುಂಡಿಗಳನ್ನು ಮುಚ್ಚಲಾಗಿದೆ ಮತ್ತು ಮೂರು ದಿನಗಳಲ್ಲಿ ಎಲ್ಲಾ ಗುಂಡಿಗಳನ್ನು ಮುಚ್ಚುವ ಗುರಿಯನ್ನು ಹೊಂದಲಾಗಿದೆ ಎಂದು ಅವರು ತಿಳಿಸಿದರು.

## ಭರತನಾಟ್ಯ ಪ್ರದರ್ಶನ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಆಗಸ್ಟ್ 28, ಗುರುವಾರ ಸಂಜೆ 5-15ಕ್ಕೆ ಡಾ. ವಿದ್ಯಾ ಎಸ್. ಅವರ ನಿರ್ದೇಶನದಲ್ಲಿ ನೃತ್ಯ ಲೋಕ ಶಾಲೆಯ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದ್ದಾರೆ.

**ಸ್ಥಳ :** ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು41

## ಇನ್ನು ಮುಂದೆ ಎಲ್ಲೆಂದರಲ್ಲಿ ಬೀದಿ ನಾಯಿಗಳಿಗೆ ಊಟ ಹಾಕುವಂತಿಲ್ಲ

• ಉದಯವಾಹಿನಿ, ಬೆಂಗಳೂರು

ಇನ್ನು ಮುಂದೆ ನಗರದಲ್ಲಿ ಬೀದಿ ನಾಯಿಗಳಿಗೆ ಎಲ್ಲೆಂದರಲ್ಲಿ ಅಲ್ಲಿ ಊಟ ಹಾಕುವುದಕ್ಕೆ ನಿಷೇಧ ಹೇರಲಾಗಿದೆ. ಸುಪ್ರೀಂ ಕೋರ್ಟ್ ತೀರ್ಪು ಆಧರಿಸಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ವಿಶೇಷ ಆಯುಕ್ತ ವಿಕಾಸ್ ಕಿಶೋರ್ ಸುರಲ್ಕರ್ ತಿಳಿಸಿದ್ದಾರೆ. ನಗರದಲ್ಲಿ ಎಲ್ಲೆಂದರಲ್ಲಿ ಊಟ ಹಾಕುವ ಬದಲು ಬೀದಿ ನಾಯಿಗಳಿಗೆ ಊಟ ಹಾಕಲೆಂದೇ ಬಿಬಿಎಂಪಿ ನಿಗದಿಪಡಿಸಿರುವ ಜಾಗಗಳಲ್ಲೇ ಊಟ ಹಾಕಬೇಕು ಎಂದು ಅವರು ಸೂಚನೆ ನೀಡಿದ್ದಾರೆ. ನಗರದ ಸುಮಾರು 50 ಸಾವಿರಕ್ಕೂ ಹೆಚ್ಚು ರಸ್ತೆಗಳ ಕೊನೆಯಲ್ಲಿ ಬೀದಿ ನಾಯಿಗಳಿಗೆ ಊಟದ ನೀಡೋದಕ್ಕೆ ಸ್ಥಳದ ವ್ಯವಸ್ಥೆ ಮಾಡಲಾಗಿದೆ.

ಹೀಗಾಗಿ ಪಾಲಿಕೆ ನಿಗದಿಪಡಿಸಿರುವ ಸ್ಥಳಗಳಲ್ಲೇ ಊಟ ಹಾಕಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ. ನಿಮ ಮನೆ ಮುಂದೆ ಬರುವ ಬೀದಿ ನಾಯಿಗಳಿಗೆ ಊಟ ಹಾಕಬಾರದು ನೀವು ಬೀದಿ ನಾಯಿಗಳಿಗೆ ಹಾಕುವ ಊಟದಿಂದ ಅಕ್ಕಪಕ್ಕದವರಿಗೆ ಕಿರಿ ಕಿರಿಯಾಗುವ ಸಾಧ್ಯತೆ ಇರುವುದರಿಂದ ರಸ್ತೆ ಕೊನೆಯಲ್ಲಿ ನಿಗದಿಪಡಿಸಿರುವ ಜಾಗದಲ್ಲೇ ಶ್ವಾನಗಳಿಗೆ ಊಟ ಹಾಕಬೇಕು ಎಂದು ಅವರು ತಿಳಿಸಿದ್ದಾರೆ. ಒಂದು ವೇಳೆ ಎಲ್ಲೆಂದರಲ್ಲಿ ಊಟ ಹಾಕಿ ಅದರಿಂದ ಯಾವುದೇ ರೀತಿಯ ಅನಾಹುತ ಆದರೆ ಅದಕ್ಕೆ ನಿಮನ್ನೇ ಹೊಣೆ ಮಾಡಲಾಗುವುದು ಎಂದು ಅವರು ಇದೇ ಸಂದರ್ಭದಲ್ಲಿ ಎಚ್ಚರಿಸಿದ್ದಾರೆ.

## ಕೆಎಸ್‌ಆರ್‌ಟಿಸಿ ನೌಕರರಿಂದ ಲಂಚ ಪಡೆದ ಅಧಿಕಾರಿಗಳು: ದೂರು

• ಉದಯವಾಹಿನಿ, ಬೆಂಗಳೂರು

ಬೇಕಾದ ಮಾರ್ಗದಲ್ಲಿ ಕರ್ತವ್ಯಕ್ಕೆ ನಿಯೋಜಿಸಲು ಆ್ಯಪ್ ಆಧಾರಿತ ಪಾವತಿ ಮೂಲಕ ಲಂಚ ಪಡೆದ ಕೆಎಸ್‌ಆರ್‌ಟಿಸಿಯ ಇಬ್ಬರು ಅಧಿಕಾರಿಗಳ ವಿರುದ್ಧ ಮೇಲಧಿಕಾರಿಗಳಿಗೆ ಸಿಬ್ಬಂದಿ ದೂರು ನೀಡಿದ್ದಾರೆ. ಬೆಂಗಳೂರು ಕೇಂದ್ರೀಯ ವಿಭಾಗದ ಘಟಕ 1ರಲ್ಲಿ ಸಹಾಯಕ ಸಂಚಾರ ನಿರೀಕ್ಷಕಿಯಾಗಿರುವ (ಎಟಿಐ) ಸಂಗೀತಾ ಮತ್ತು ಸಹಾಯಕ ಸಂಚಾರ ಅಧೀಕ್ಷಕಿಯಾಗಿರುವ (ಎಟಿಎಸ್) ಸ್ವಪ್ನಾ ಅವರು ಚಾಲಕರು ಮತ್ತು ನಿರ್ವಾಹಕರಿಂದ ಲಂಚ ಪಡೆದಿದ್ದಾರೆ ಎಂದು ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕರಿಗೆ ಜಯದೇವ ಎಂ. ಅವರು ದೂರು ನೀಡಿ, ದಾಖಲೆಗಳನ್ನು ಸಲ್ಲಿಸಿದ್ದಾರೆ.

ಸಂಗೀತಾ ಅವರ ಖಾತೆಗೆ ಈ ವರ್ಷ ಫೆಬ್ರುವರಿ 27ರಂದು 50,000, ಜೂನ್ 26ರಂದು 1,100 ಪಾವತಿಯಾಗಿದೆ. ಸ್ವಪ್ನಾ ಅವರ ಖಾತೆಗೆ ಫೆಬ್ರುವರಿ 24, ಮಾರ್ಚ್ 12ರಂದು ತಲಾ 5,000. ಮಾರ್ಚ್ 28, ಏಪ್ರಿಲ್ 4, 9, 24, ಮೇ 11 ರಂದು ತಲಾ 1,000, ಮೇ 7ರಂದು 500 ಪಾವತಿಯಾಗಿದೆ. ಬಸಣ್ಣ ಹುಡೇದ ಎಂಬ ಚಾಲಕರೊಬ್ಬರ ಖಾತೆಯಿಂದ ಈ ಇಬ್ಬರು ಅಧಿಕಾರಿಗಳಿಗೆ ಪಾವತಿಯಾಗಿದೆ. ಈ ಇಬ್ಬರು ಅಧಿಕಾರಿಗಳ ವಿರುದ್ಧ ಸರ್ಕಾರದ ನಿಯಮಾವಳಿ, ಲೋಕಾಯುಕ್ತ ಕಾಯ್ದೆ, ಕೆಎಸ್‌ಆರ್‌ಟಿಸಿ ಶಿಸ್ತು ಪ್ರಾಧಿಕಾರದ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಬೇಕು ಎಂದು ದೂರಿನಲ್ಲಿ ಒತ್ತಾಯಿಸಿದ್ದಾರೆ. ಇಬ್ಬರು ಅಧಿಕಾರಿಗಳ ವಿರುದ್ಧ ದೂರು ಬಂದಿದೆ. ಆಂತರಿಕ ತನಿಖೆ ನಡೆಯುತ್ತಿದೆ ಎಂದು ಕೆಎಸ್‌ಆರ್‌ಟಿಸಿ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

## ಈಜಿಪುರ ಮೇಲ್ಸೇತುವೆಯಲ್ಲಿ ಬಿರುಕು ಸಮಸ್ಯೆಯಲ್ಲ; ಮಧ್ಯಂತರ ವರದಿ

• ಉದಯವಾಹಿನಿ, ಬೆಂಗಳೂರು

ನಿರ್ಮಾಣ ಹಂತದಲ್ಲಿರುವ ಈಜಿಪುರ ಮೇಲ್ಸೇತುವೆಯಲ್ಲಿ ಇತ್ತೀಚೆಗೆ ಸಣ್ಣ ಬಿರುಕು ಪತ್ತೆಯಾಗಿತ್ತು. ಇದು, ಮೇಲ್ಸೇತುವೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ದೊಡ್ಡ ಸಮಸ್ಯೆ ಅಲ್ಲ ಎಂದು ಭಾರತೀಯ ವಿಜ್ಞಾನ ಸಂಸ್ಥೆಯ ಪ್ರಾಧ್ಯಾಪಕರೊಬ್ಬರು ಸಲ್ಲಿಸಿರುವ ಮಧ್ಯಂತರ ವರದಿಯಲ್ಲಿ ಉಲ್ಲೇಖಿಸಲಾಗಿದೆ. ಮೇಲ್ಸೇತುವೆ ನಿರ್ಮಾಣಕ್ಕೆ ಬಳಸಿರುವ ಪದಾರ್ಥಗಳಲ್ಲಿ ಯಾವುದೇ ದೋಷಗಳು ಇಲ್ಲ. ನಿರ್ದಿಷ್ಟ ಭಾಗದಲ್ಲಿ ಬಿರುಕು ಕಾಣಿಸಿಕೊಳ್ಳುವುದಕ್ಕೆ ಅಲ್ಲಿ ಕೈಗೊಂಡಿದ್ದ ಪಂಚಿಂಗ್ ಕಾರ್ಯದಲ್ಲಿನ ವೈಫಲ್ಯವೇ ಕಾರಣ. ಗುಣಮಟ್ಟದ ಕಾಂಕ್ರೀಟ್ ಮಿಶ್ರಣ ಹಾಕುವ ಮೂಲಕ ಇದನ್ನು ಸರಿಪಡಿಸಬಹುದು ಎಂದೂ ವರದಿಯಲ್ಲಿ ಉಲ್ಲೇಖಿಸಿದ್ದಾರೆ. ಈಜಿಪುರ ಮೇಲೇತುವೆಯಲ್ಲಿ ಅಳವಡಿಸಲಾಗಿದ್ದ ಸೆಗ್‌ಮೆಂಟ್‌ನಲ್ಲಿ ಬಿರುಕು ಕಾಣಿಸಿಕೊಂಡ ಬಗ್ಗೆ ಪರೀಕ್ಷೆ ನಡೆಸಿರುವ ಐಐಎಸ್‌ಸಿ ಸಿವಿಲ್ ಎಂಜಿನಿಯರಿಂಗ್ ವಿಭಾಗದ ಪ್ರೊ. ಜೆ.ಎಂ.ಚಂದ್ರ ಕಿಶನ್ ಅವರು ಎಲ್ಲಾ ರೀತಿಯ ಪರೀಕ್ಷೆಗಳನ್ನು ಕೈಗೊಂಡೇ ಸೆಗ್‌ಮೆಂಟ್‌ಗಳನ್ನು ಅಳವಡಿಸಬೇಕು. ಹಾನಿಗೊಳಗಾದ ಕಾಂಕ್ರೀಟ್ ಅನ್ನು ತೆಗೆದುಹಾಕುವ ಮೂಲಕ ತಕ್ಷಣದ ದುರಸ್ತಿ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ. ಬಿಬಿಎಂಪಿ ರಸ್ತೆ ಮೂಲಸೌಕರ್ಯ ವಿಭಾಗದ ಮುಖ್ಯ ಎಂಜಿನಿಯರ್ ರಾಘವೇಂದ್ರ ಪ್ರಸಾದ್, ಬಿರುಕು ಬಿಟ್ಟಿರುವುದು ದೊಡ್ಡ ಸಮಸ್ಯೆಯಲ್ಲ. ಗೊಂದಲಗಳು ನಿವಾರಣೆಯಾಗಿದೆ. ಶೀಘ್ರದಲ್ಲೇ ಕೆಲಸ ಆರಂಭಿಸಲಾಗುವುದು ಎಂದರು. ಈಜಿಪುರ ಮುಖ್ಯರಸ್ತೆಯಲ್ಲಿ 2.38 ಕಿ.ಮೀ. ಉದ್ದದ ಮೇಲೇತುವೆ ನಿರ್ಮಿಸಲಾಗುತ್ತಿದೆ. ಒಟ್ಟು 762 ಸೆಪ್ಟೆಂಟ್ ಕಾಸ್ಟಿಂಗ್‌ಗಳನ್ನು ಅಳವಡಿಸಬೇಕಿದ್ದು, 437 ಸೆಪ್ಟೆಂಟ್ ಕಾಸ್ಟಿಂಗ್ ಅಳವಡಿಸಲಾಗಿದೆ. 2026ರ ವೇಳೆಗೆ ಕಾಮಗಾರಿ ಪೂರ್ಣಗೊಳ್ಳಲಿದೆ.

# ಪೊಲೀಸರಿಗೆ ಲೋಕಾಯುಕ್ತ ಕೋರ್ಟ್ ಚಾಟಿ

### ಪೊಲೀಸ್ ಠಾಣೆಗಳಲ್ಲಿ ಸಂತ್ರಸ್ತರಿಗೆ ಲಂಚಕ್ಕಾಗಿ ಕಿರುಕುಳ; ಎಸಿಪಿ ಸೇರಿ ಹಲವರು ಅರೆಸ್ಟ್, ಜಾಮೀನು ಕೊಡಲ್ಲ ಎಂದ ಲೋಕಾ

• ಉದಯವಾಹಿನಿ, ಬೆಂಗಳೂರು

ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಪೊಲೀಸ್ ಠಾಣೆಗಳಲ್ಲಿ ಭ್ರಷ್ಟಾಚಾರ ಮಿತಿಮೀರಿದ್ದು, ದೂರುಗಳನ್ನು ಹೊತ್ತು ಠಾಣೆಗೆ ಬರುವ ಸಂತ್ರಸ್ತರಿಗೆ ಲಂಚಕ್ಕಾಗಿ ಕಿರುಕುಳ ನೀಡಲಾಗುತ್ತಿದೆ- ಇವು ಲೋಕಾಯುಕ್ತ ವಿಶೇಷ ನ್ಯಾಯಾಲಯದ ಕಿಡಿ ನುಡಿಗಳು. ಪೊಲೀಸ್ ಠಾಣೆಗಳಲ್ಲಿ ಕಾಸು ಕೊಟ್ಟರೆ ಮಾತ್ರ ಕೆಲಸ ಎಂಬ ಆರೋಪಗಳಿಗೆ ನಿದರ್ಶನ ಎಂಬಂತೆ ಕಳೆದ ಎಂಟು ತಿಂಗಳಲ್ಲಿ ನ್ಯಾಯ ಕೇಳಿ ಠಾಣೆ ಮೆಟ್ಟಿಲು ಹತ್ತಿದವರ ಬಳಿಯೇ ಲಕ್ಷಗಟ್ಟಲೆ ಲಂಚ ಪಡೆದ ಎಸಿಪಿ ಸೇರಿ 10ಕ್ಕೂ ಹೆಚ್ಚು ಪೊಲೀಸ್ ಅಧಿಕಾರಿ, ಸಿಬ್ಬಂದಿ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ. ಪೊಲೀಸ್ ಠಾಣೆಗಳಲ್ಲಿ ಮಿತಿ ಮೀರಿದ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕುವಂತೆ ನ್ಯಾಯಾಲಯಗಳು ಹಲವು ಬಾರಿ ತಪರಾಕಿ ಹಾಕಿದರೂ ಸುಧಾರಣೆ ಮಾತ್ರ ಮರೀಚಿಕೆಯಾಗಿದೆ.

ಸಿವಿಲ್ ವ್ಯಾಜ್ಯದಲ್ಲಿ ಹಸ್ತಕ್ಷೇಪ, ಕ್ರಿಮಿನಲ್ ಪ್ರಕರಣದಲ್ಲಿ 'ಬಿ' ರಿಪೋರ್ಟ್ ಸಲ್ಲಿಸಲು ಲಂಚ ಹಾಗೂ ದೂರು ದಾಖಲಿಸಿ ತನಿಖೆ ನಡೆಸಲು ಹಣಕ್ಕೆ ಬೇಡಿಕೆ ಸೇರಿದಂತೆ ಹತ್ತಾರು ಕಾರಣಗಳಿಂದ ಹಲವು ಪೊಲೀಸರು ಸಿಕ್ಕಿಬಿದ್ದಿದ್ದಾರೆ. ಪ್ರತಿ ತಿಂಗಳು ನಗರ ವ್ಯಾಪ್ತಿಯಲ್ಲಿ ಒಬ್ಬ ಪೊಲೀಸ್ ಅಧಿಕಾರಿಯಾದರೂ ಲಂಚದ ಉರುಳಿನಲ್ಲಿ ಬಂಧನವಾಗಿ ಜೈಲು ಸೇರುತ್ತಿದ್ದಾರೆ. ಕೆಲ ಪೊಲೀಸರು ಲೋಕಾಯುಕ್ತ ಟ್ರ್ಯಾಪ್‌ನಿಂದ ತಪ್ಪಿಸಿಕೊಂಡರೂ ಅಂಥವರ ವಿರುದ್ಧವೂ ಲೋಕಾಯುಕ್ತದಲ್ಲಿ ಕ್ರಿಮಿನಲ್ ಕೇಸ್ ದಾಖಲಾಗಿ ತನಿಖೆ ನಡೆಯುತ್ತಿದೆ.

**ಭ್ರಷ್ಟಾಚಾರ ಕ್ರೂರ ಅಪರಾಧಂತೆ:** ಈ ನಡುವೆ, ಇತ್ತೀಚೆಗಷ್ಟೇ ಗಂಡ-ಹೆಂಡತಿ ಜಗಳದಲ್ಲಿಯೂ 1 ಲಕ್ಷ ರೂ.ಲಂಚ ಪಡೆದು ಜೈಲು ಸೇರಿದ್ದ ರಾಮಮೂರ್ತಿ ನಗರ ಠಾಣೆಯ ಇನ್ಸ್‌ಪೆಕ್ಟರ್ ಎನ್.ಎಚ್. ರಾಜಶೇಖರ್, ಪಿಎಸ್‌ಐ ರುಮಾನ್ ಪಾಷಾ ಹಾಗೂ ಮಧ್ಯವರ್ತಿ ಇಮ್ರಾನ್‌ಗೆ ಜಾಮೀನು ನೀಡಲು ನಿರಾಕರಿಸಿರುವ ಲೋಕಾಯುಕ್ತ ನ್ಯಾಯಾಲಯ, ಪೊಲೀಸ್ ಠಾಣೆಗಳ ಭ್ರಷ್ಟಾಚಾರದ ಕುರಿತು ಅಸಮಾಧಾನ ವ್ಯಕ್ತಪಡಿಸಿದೆ. ಭ್ರಷ್ಟಾಚಾರ ಎಂಬುದು ಅಂಕೆಗೆ ಸಿಗದಂತೆ ನಾಗಾಲೋಟದಲ್ಲಿ ಸಾಗುತ್ತಿದೆ. ಇದರಿಂದ ಜನಸಾಮಾನ್ಯರು ಸಂಕಷ್ಟಕ್ಕೆ ಗುರಿಯಾಗುತ್ತಿದ್ದಾರೆ. ಭ್ರಷ್ಟಾಚಾರ ಎಂಬುದು ಕ್ರೂರ ಅಪರಾಧಕ್ಕೆ ಕಡಿಮೆ ಏನಲ್ಲ, ಈ ಪಿಡುಗನ್ನು ಹಿಮ್ಮೆಟ್ಟಿಸಬೇಕಿದೆ ಎಂದು ಆಕ್ರೋಶ ವ್ಯಕ್ತಪಡಿಸಿದೆ. ಕಾನೂನು ಕುಣಿಕೆಯಿಂದ ತಪ್ಪಿಸಿಕೊಳ್ಳುವ ಸಲುವಾಗಿ ಸರಕಾರಿ ಅಧಿಕಾರಿಗಳು ಲಂಚ ಸ್ವೀಕರಿಸುವ ಸಲುವಾಗಿಯೇ ಮಧ್ಯವರ್ತಿಗಳನ್ನು ನೇಮಕ ಮಾಡಿಕೊಂಡಿರುವುದು ಗುಟ್ಟಾಗಿ ಉಳಿದಿಲ್ಲ. ಮಧ್ಯವರ್ತಿಗಳು, ಸರಕಾರಿ ಅಧಿಕಾರಿಗಳ ಪರವಾಗಿ ಜನಸಾಮಾನ್ಯರಿಂದ ಲಂಚ ಪಡೆಯುತ್ತಿದ್ದಾರೆ. ಈ ಅಕ್ರಮ ನಿರಂತರವಾಗಿ ನಡೆಯುತ್ತಿದೆ ಎಂದು ನ್ಯಾಯಾಲಯ ತಿಳಿಸಿದೆ. ಅಷ್ಟೇ ಅಲ್ಲದೆ, ಲಂಚ ಪಡೆದು ಬಂಧನವಾಗಿರುವ ಪೊಲೀಸ್ ಅಧಿಕಾರಿಗಳು ಪ್ರಭಾವಿಗಳಾಗಿದ್ದು, ಜಾಮೀನು ನೀಡಿದರೆ ಸಾಕ್ಷ್ಯಾಧಾರಗಳನ್ನು ತಿರುಚುವ ಹಾಗೂ ಸಾಕ್ಷಿಗಳ ಮೇಲೆ ಪ್ರಭಾವ ಬೀರುವ ಸಾಧ್ಯತೆಯನ್ನು ತಳ್ಳಿಹಾಕುವಂತಿಲ್ಲ ಎಂದಿರುವ ನ್ಯಾಯಾಲಯ, ಮೂವರಿಗೂ ಜಾಮೀನು ನೀಡಲು ನಿರಾಕರಿಸಿದೆ.


ಉದಯವಾಹಿನಿ ಚಿತ್ರ

> ಮೂರ್ನಾಲ್ಕು ತಿಂಗಳಲ್ಲಿ ಕೋರ್ಟ್ ವ್ಯಾಪ್ತಿಯಲ್ಲಿ (ನಗರ ಪೊಲೀಸ್ ಕಮಿಷನರೇಟ್) ಲಂಚ ಸ್ವೀಕರಿಸಿದ ಪ್ರಕರಣಗಳಲ್ಲಿ 10ಕ್ಕೂ ಹೆಚ್ಚು ಪೊಲೀಸ್ ಅಧಿಕಾರಿಗಳ ಬಂಧನವಾಗಿದ್ದು, ಇದು ಠಾಣೆಗಳಲ್ಲಿ ವ್ಯಾಪಕವಾಗಿ ಬೇರು ಬಿಟ್ಟಿರುವ ಭ್ರಷ್ಟಾಚಾರ ಹಾಗೂ ಜನರಿಗಾಗುತ್ತಿರುವ ಕಿರುಕುಳಕ್ಕೆ ನಿದರ್ಶನವಾಗಿದೆ.
> -ಕೆ.ಎಂ. ರಾಧಾಕೃಷ್ಣ, ಲೋಕಾಯುಕ್ತ ನ್ಯಾಯಾಧೀಶ

**ಪೋಸ್ಟಿಂಗ್‌ಗೆ ಕಾಸು ಕೊಟ್ಟು, ವಸೂಲಿ ಮಾಡಬೇಡಿ**

ಇತ್ತೀಚಿನ ದಿನಗಳಲ್ಲಿ ಕಾಸು ಕೊಟ್ಟು ಪೋಸ್ಟಿಂಗ್ ಪಡೆದಿದ್ದು, ಅಧಿಕಾರ ಪಡೆದು ಅದನ್ನು ವಾಪಸ್ ಪಡೆದುಕೊಳ್ಳುತ್ತೇವೆ ಎಂಬ ಹುಂಬ ಸಮರ್ಥನೆಯನ್ನು ಪೊಲೀಸರು ಮಾಡುತ್ತಿರುವುದು ಆಘಾತಕಾರಿ ಸಂಗತಿಯಾಗಿದೆ' ಎಂದು ಮತ್ತೊಂದು ಪ್ರಕರಣದಲ್ಲಿ ನ್ಯಾಯಾಲಯ ಅಭಿಪ್ರಾಯ ವ್ಯಕ್ತಪಡಿಸಿತ್ತು. ಪ್ರಕರಣವೊಂದರಲ್ಲಿ 'ಬಿ' ರಿಪೋರ್ಟ್ ಸಲ್ಲಿಸಲು 1.25 ಲಕ್ಷ ರೂ. ಲಂಚ ಪಡೆದು ಬಂಧಿತರಾಗಿದ್ದ ಗೋವಿಂದಪುರ ಠಾಣೆ ಮಹಿಳಾ ಪಿಎಸ್‌ಐ ಜೆ.ಕೆ. ಸಾವಿತ್ರಿ ಬಾಯಿ ಅವರಿಗೆ ಜಾಮೀನು ನಿರಾಕರಿಸಿದ್ದ ನ್ಯಾಯಾಲಯ, ಪೊಲೀಸರ ಮೇಲೆ ಜನರಿಗೆ ಕುಸಿಯುತ್ತಿರುವ ನಂಬಿಕೆ ಬಗ್ಗೆ ಕಳವಳ ವ್ಯಕ್ತಪಡಿಸಿತ್ತು. ಪೊಲೀಸ್ ಠಾಣೆಗಳಲ್ಲಿ ವ್ಯಾಪಕವಾಗಿ ಹಬ್ಬಿರುವ ಭ್ರಷ್ಟಾಚಾರದಿಂದ ಪೊಲೀಸರ ಮೇಲೆ ಜನಸಾಮಾನ್ಯರಿಗೆ ನಂಬಿಕೆ ಕುಸಿಯುತ್ತಿದೆ. ಅಪರಾಧಗಳಿಗೆ ಕಡಿವಾಣ ಹಾಕಿ ಸುರಕ್ಷಿತ ವಾತಾವರಣ ನಿರ್ಮಾಣ ಮಾಡಬೇಕಿರುವ ಪೊಲೀಸರು, ಭ್ರಷ್ಟಾಚಾರದಲ್ಲಿ ತೊಡಗಿರುವುದು ಒಪ್ಪುವ ವಿಚಾರವಲ್ಲ'' ಎಂದು ನ್ಯಾಯಾಲಯ ಆಕ್ರೋಶ ವ್ಯಕ್ತಪಡಿಸಿತ್ತು.

**ಅಪರಾಧಕ್ಕೆ ಕಡಿಮೆ ಏನಲ್ಲ**

## ಕೇಸರಿ ಶಾಲು ಧರಿಸಿದ್ದ ಟ್ರಾವೆಲ್ಸ್ ಕಾರ್ಮಿಕ, ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ್ದ ಮೂವರು ಕಿಡಿಗೇಡಿಗಳ ಸೆರೆ

• ಉದಯವಾಹಿನಿ, ಬೆಂಗಳೂರು



ಕೇಸರಿ ಶಾಲು ಹಾಕಿಕೊಂಡು ಕೆಲಸ ಮಾಡುತ್ತಿದ್ದಿಯಾ ಎಂದು ಟ್ರಾವೆಲ್ಸ್‌ನ ಕೂಲಿ ಕಾರ್ಮಿಕ ಹಾಗೂ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿ ಪರಾರಿಯಾಗಿದ್ದ 3 ಕಿಡಿಗೇಡಿಗಳನ್ನು ಕಲಾಸಿಪಾಳ್ಯ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಕಲಾಸಿಪಾಳ್ಯ ಬಸ್ ನಿಲ್ದಾಣದ ಎ.ವಿ ರಸ್ತೆಯ ರಾಯಲ್ ಟ್ರಾವೆಲ್ಸ್ ಕಚೇರಿ ಬಳಿ ಕಳೆದ ರಾತ್ರಿ 9.30ರಲ್ಲಿ ಈ ಘಟನೆ ನಡೆದಿದ್ದು, ಈ ಸಂಬಂಧ ಗುರಪ್ಪನಪಾಳ್ಯದ ಅಜೀತ್‌ಖಾನ್ (37), ನಾಗವಾರಪಾಳ್ಯದ ತಬ್ರೇಜ್ (30), ಬನಶಂಕರಿಯ ಇಬ್ರಾನ್ ಖಾನ್(36) ಎಂಬುವವರನ್ನು ಬಂಧಿಸಲಾಗಿದೆ. ಘಟನೆಯಲ್ಲಿ ಟ್ರಾವೆಲ್ಸ್ ಸಿಬ್ಬಂದಿ ಹರಿಕೃಷ್ಣ ಮತ್ತು ಕೂಲಿ ಕಾರ್ಮಿಕ ಸ್ಲಿಂಧರ್ ಕುಮಾರ್ ಎಂಬುವವರ ಮೇಲೆ ಹಲ್ಲೆ ನಡೆಸಿ ಆರೋಪಿಗಳು ಬೆದರಿಕೆ ಹಾಕಿ ಪರಾರಿಯಾಗಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

**ಘಟನೆ ವಿವರ:** ಕಳೆದ ರಾತ್ರಿ ಟ್ರಾವೆಲ್ಸ್ ಬಳಿ ಬಿಹಾರ ಮೂಲದ ಸ್ಲಿಂಧರ್‌ಕುಮಾರ್ ಕೇಸರಿ ಶಾಲು ಹಾಕಿಕೊಂಡು ಕೆಲಸ ಮಾಡುತ್ತಿದ್ದರು. ಈ ವೇಳೆ ಅಲ್ಲಿಗೆ ಬಂದ ಆರೋಪಿಗಳು ನೀನು ಕೇಸರಿ ಶಾಲು ಹಾಕಿಕೊಂಡಿರುವುದು ಏಕೆ. ಅದನ್ನು ತೆಗೆದುಹಾಕು ಎಂದು ಬೆದರಿಸಿದ್ದಾರೆ. ಈ ವೇಳೆ ಮಾತಿನ ಚಕಮಕಿ ನಡೆದು ಏಕಾಏಕಿ ಆರೋಪಿಗಳು ಸ್ಲಿಂಧರ್ ಕುಮಾರ್‌ನನ್ನು ಹಿಡಿದು ಹೊಡೆದಿದ್ದಾರೆ.

ಇದನ್ನು ನೋಡಿದ ಟ್ರಾವೆಲ್ಸ್‌ನ ಸರಕನ್ನು ಇಳಿಸುವ ಉಸ್ತುವಾರಿ ವಹಿಸಿದ್ದ ಹರಿಕೃಷ್ಣ ಅವರು, ಜಗಳ ಬಿಡಿಸಲು ಹೋದಾಗ ಅವರ ಮೇಲೂ ದರ್ಪ ತೋರಿಸಿ ಬಟ್ಟೆಯನ್ನು ಹರಿದು ಹಲ್ಲೆ ನಡೆಸಿದ್ದಾರೆ. ನಂತರ ನಿಮನ್ನು ಸುಮನೆ ಬಿಡುವುದಿಲ್ಲ ಎಂದು ಬೆದರಿಕೆ ಹಾಕಿ ಆರೋಪಿಗಳು ಅಲ್ಲಿಂದ ಪರಾರಿಯಾಗಿದ್ದರು. ವಿಷಯ ತಿಳಿದ ಕಲಾಸಿಪಾಳ್ಯ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡು, ಅಲ್ಲಿನ ರಸ್ತೆಗಳಲ್ಲಿರುವ ಸಿಸಿ ಟಿವಿಗಳು ಹಾಗೂ ಬಂದಿದ್ದ ವಾಹನಗಳ ಮಾಹಿತಿ ಕಲೆಹಾಕಿ ಕ್ಷಿಪ್ರಕಾರ್ಯಾಚರಣೆ ನಡೆಸಿ ಬೆಳಗ್ಗೆ ಆರೋಪಿಗಳನ್ನು ಬಂಧಿಸಿದ್ದಾರೆ. ಕಲಾಸಿಪಾಳ್ಯ ಪೊಲೀಸ್ ಠಾಣೆಯಲ್ಲಿ ಘಟನೆ ಸಂಬಂಧ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

## 278 ಎಕರೆ ಭೂ ಒತ್ತುವರಿ ತೆರವು

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಒತ್ತುವರಿ ಆಗಿರುವ ಸರ್ಕಾರಿ ಜಾಗವನ್ನು ತೆರವುಗೊಳಿಸುವ ಪ್ರಕ್ರಿಯೆ ವೇಗ ಪಡೆದುಕೊಂಡಿದ್ದು, ಆರು ತಿಂಗಳಿನಿಂದ ಈಚೆಗೆ 278.19 ಎಕರೆ ಒತ್ತುವರಿ ತೆರವು ಮಾಡಲಾಗಿದೆ. ಮಾರ್ಗಸೂಚಿ ಪ್ರಕಾರ ಇದರ ಮೌಲ್ಯ 912.48 ಕೋಟಿ. ಆದರೆ, ಮಾರುಕಟ್ಟೆಯಲ್ಲಿನ 7,299.84 ಕೋಟಿ ರೂ. ಎಂದು ಅಂದಾಜಿಸಲಾಗಿದೆ.

ಬೆಂಗಳೂರು ಸುತ್ತಮುತ್ತ ನಡೆದಿರುವ ಸರ್ಕಾರಿ ಭೂಮಿಯ ಒತ್ತುವರಿ ತೆರವುಗೊಳಿಸುವುದಕ್ಕೆ ಮೊದಲ ಆದ್ಯತೆ ನೀಡಿದ್ದೇವೆ. ಎಲ್ಲೆಲ್ಲಿ ಒತ್ತುವರಿ ಆಗಿದೆ ಎಂದು ತಹಶೀಲ್ದಾರ್‌ಗಳ ಮೂಲಕ ಗುರುತಿಸಿ, ಅದನ್ನು ತೆರವು ಗೊಳಿಸುವ ಕಾರ್ಯವನ್ನು ಪ್ರತಿವಾರ ಮಾಡುತ್ತಿದ್ದೇವೆ ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ್ ಅವರು ತಿಳಿಸಿದರು.

ಸರ್ಕಾರಿ ಭೂಮಿ ಒತ್ತುವರಿಗೆ ಸಂಬಂಧಪಟ್ಟಂತೆ ಎ.ಟಿ.ರಾಮಸ್ವಾಮಿ ನೇತೃತ್ವದ ಸಮಿತಿ ಮತ್ತು ಸರ್ಕಾರಿ ಜಮೀನುಗಳ ಸಂರಕ್ಷಣೆ ಕಾರ್ಯಪಡೆ ಅಧ್ಯಕ್ಷರಾಗಿದ್ದ ವಿ.ಬಾಲಸುಬ್ರಮಣಿಯನ್ ಸಮಿತಿ ನೀಡಿರುವ ವರದಿಗಳಲ್ಲಿ ಸಾಕಷ್ಟು ವ್ಯತ್ಯಾಸಗಳಿವೆ. ಹೀಗಾಗಿ ಎಷ್ಟು ಭೂಮಿ ಒತ್ತುವರಿಯಾಗಿದೆ ಎಂದು ಖಚಿತವಾಗಿ ಹೇಳಲು ಆಗುವುದಿಲ್ಲ. ಈ ವರದಿಗಳಲ್ಲಿ ಪ್ರಸ್ತಾಪವಾಗಿರುವ ಸರ್ವೆ ನಂಬರ್‌ಗಳನ್ನು ಆಧರಿಸಿ, ತಹಶೀಲ್ದಾರ್‌ಗಳಿಂದ ವರದಿ ಪಡೆದು ಒತ್ತುವರಿ ತೆರವು ಮಾಡುತ್ತಿದ್ದೇವೆ ಎಂದು ಅವರು ವಿವರಿಸಿದರು.

ಬಾಗಲೂರಿನಲ್ಲಿ 30 ಎಕರೆ ಸರ್ಕಾರಿ ಭೂಮಿ ಒತ್ತುವರಿ ಮಾಡಿಕೊಂಡು ಖಾಸಗಿಯವರು ಬಡಾವಣೆ ನಿರ್ಮಿಸಿದ್ದಾರೆ. ಅಲ್ಲಿ ಖಾಸಗಿ ಜಾಗ ಇರುವುದು 12 ಎಕರೆ ಮಾತ್ರ. ಸರ್ಕಾರಿ ಭೂಮಿ ತೆರವುಗೊಳಿಸುವ ಸಂಬಂಧ ನೋಟಿಸ್ ನೀಡಲಾಗಿತ್ತು. ಆದರೆ, ನ್ಯಾಯಾಲಯಕ್ಕೆ ಹೋಗಿ ರಜಾ ದಿನವಾದ ಭಾನುವಾರ ತಡೆಯಾಜ್ಞೆ ತಂದಿದ್ದಾರೆ. ಇಂತಹ ಹಲವು ಪ್ರಕರಣಗಳು ಇವೆ. ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ನಲ್ಲಿ ವಿಶೇಷ ವಕೀಲರನ್ನು ನೇಮಕ ಮಾಡಿ, ತಡೆಯಾಜ್ಞೆ ತೆರವಿಗೆ ಪ್ರಯತ್ನ ಮಾಡುತ್ತಿದ್ದೇವೆ ಎಂದು ಹೇಳಿದರು.

**ಮಂಜೂರು ಮಾಡಲು ಬರಲ್ಲ:** ಬಿಬಿಎಂಪಿಯಿಂದ 18 ಕೀ.ಮೀ. ವ್ಯಾಪ್ತಿಯ ಒಳಗೆ ಅಕ್ರಮವಾಗಿ ಸಾಗುವಳಿ ಮಾಡುತ್ತಿರುವ ಜಾಗವನ್ನು ರೈತರಿಗೆ ಮಂಜೂರು ಮಾಡಿಕೊಡಲು ಬರುವುದಿಲ್ಲ. ಆದರೂ, ರೈತರು ಅರ್ಜಿ ಹಾಕಿದ್ದಾರೆ. ಈ ರೀತಿ ಸಾಗುವಳಿ ಮಾಡುತ್ತಿರುವ ನಾಲ್ಕು ಸಾವಿರ ಎಕರೆ ಜಮೀನನ್ನು ಗುರುತಿಸಲಾಗಿದೆ. ಈ ಪ್ರಕರಣಗಳನ್ನು ಯಾವ ರೀತಿ ಇತ್ಯರ್ಥ ಮಾಡಬೇಕು ಎಂದು ಸರ್ಕಾರದ ಮಟ್ಟದಲ್ಲಿ ತೀರ್ಮಾನವಾಗಬೇಕಾಗುತ್ತದೆ ಎಂದು ಅವರು ವಿವರಿಸಿದರು.

**ಕೆರೆಗಳ ಒತ್ತುವರಿ ತೆರವು**

ನಗರ ಜಿಲ್ಲೆಯಲ್ಲಿ ಎಲ್ಲಾ ಕೆರೆಗಳ ಅಳತೆ ಮಾಡಿದ್ದು 837 ಕೆರೆಗಳ ಪೈಕಿ 724 ಕೆರೆಗಳು ಒತ್ತುವರಿಯಾಗಿವೆ. ಈಗಾಗಲೇ 484 ಕೆರೆಗಳ ಒತ್ತುವರಿ ತೆರವುಗೊಳಿಸಲಾಗಿದೆ. 240 ಕೆರೆಗಳ ಒತ್ತುವರಿ ತೆರವು ಬಾಕಿ ಇದ್ದು, ಹಂತ ಹಂತವಾಗಿ ತೆರವು ಮಾಡಲು ಜಿಲ್ಲಾಡಳಿತ ಯೋಜನೆ ರೂಪಿಸಿದೆ.

## ಅಲೆಮಾರಿಗಳಿಗೆ ನ್ಯಾಯ ಸಿಗಲಿ: ಮುಖಂಡರ ಒತ್ತಾಯ

• ಉದಯವಾಹಿನಿ, ದೊಡ್ಡಬಳ್ಳಾಪುರ


ಉದಯವಾಹಿನಿ ಚಿತ್ರ

ಮಾದಿಗ ಸಮುದಾಯದ 35 ವರ್ಷಗಳ ಹೋರಾಟದ ಫಲವಾಗಿ ಒಳ ಮೀಸಲಾತಿ ಜಾರಿಯಾಗಿದೆ. ಅನ್ಯಾಯದ ಸಣ್ಣ ನೋವಿನಲ್ಲಿಯೂ ಮಾದಿಗ ಸಮುದಾಯದ ಮುಖಂಡರು ಪರಸ್ಪರ ಸಿಹಿ ಹಂಚಿಕೊಂಡು ಸಂಭ್ರಮ ಪಡೆಯಬೇಕಿದೆ. ಆದರೆ, ಅಲೆಮಾರಿ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಸರ್ಕಾರ ಸರಿಪಡಿಸಬೇಕು. ಅಲೆಮಾರಿ ಸಮುದಾಯದ ಹೋರಾಟಕ್ಕೆ ಸಂಪೂರ್ಣ ಬೆಂಬಲ ಇದೆ ಎಂದು ಮಾದಾರ ಮಹಾಸಭಾ ಒಕ್ಕೂಟದ ಮುಖಂಡರು ತಿಳಿಸಿದರು. ನಗರದಲ್ಲಿ ಮಾದಿಗ ಸಮುದಾಯಗಳ ಒಕ್ಕೂಟದ ಪತ್ರಿಕಾಗೋಷ್ಠಿಯಲ್ಲಿ ಒಳ ಮೀಸಲಾತಿ ಜಾರಿಯನ್ನು ಮಾದಿಗ ಸಮುದಾಯ ಮುಖಂಡರು ಸ್ವಾಗತಿಸಿದರು.

ಇದೇ ವೇಳೆ ಮಾತನಾಡಿದ ಸಮುದಾಯದ ಮುಖಂಡರು, ಕಾಂಗ್ರೆಸ್ ಸರ್ಕಾರ ಚುನಾವಣಾ ಪ್ರಣಾಳಿಕೆಯಲ್ಲಿ ಒಳ ಮೀಸಲಾತಿ ಜಾರಿ ಮಾಡುವುದಾಗಿ ನೀಡಿದ್ದ ಭರವಸೆಯನ್ನು ಈಡೇರಿಸಿದೆ. 101 ಜಾತಿಗಳಲ್ಲಿ ಮಾದಿಗ ಸಮುದಾಯ ರಾಜಕೀಯ, ಶೈಕ್ಷಣಿಕ, ಆರ್ಥಿಕವಾಗಿ ಹಿಂದುಳಿದಿರುವ ಬಗ್ಗೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ವರದಿಯಲ್ಲಿಯೂ ಉಲ್ಲೇಖವಾಗಿದೆ. ವರದಿಯಲ್ಲಿ ಪರಿಶಿಷ್ಟ ಜಾತಿಗಳನ್ನು 5 ಭಾಗಗಳಾಗಿ ವಿಂಗಡಿಸಿದ್ದರು. ಸರ್ಕಾರ 3 ಭಾಗಗಳಾಗಿ ವಿಂಗಡಿಸಿ ಒಳ ಮೀಸಲಾತಿ ಜಾರಿ ಮಾಡಿದೆ ಎಂದರು. ನ್ಯಾ.ನಾಗಮೋಹನ್ ದಾಸ್ ಕೊಟ್ಟ ವರದಿಯನ್ನು ಸರ್ಕಾರ ಗಾಳಿಗೆ ತೂರಿ ಓಲೈಕೆ ರಾಜಕೀಯ, ಸಮುದಾಯದ ವೋಟ್ ಬ್ಯಾಂಕ್‌ಗಾಗಿ ಮಣಿದಿದೆ. ಅಲೆಮಾರಿಗಳು ನಮಗಿಂತ ಕೆಟ್ಟ ಸ್ಥಿತಿಯಲ್ಲಿದ್ದಾರೆ. ಅವರನ್ನು ಸ್ಪೃಶ್ಯ ಜಾತಿಗಳಿಗೆ ಸೇರಿಸಿದ್ದಾರೆ. ಜನಸಂಖ್ಯೆಯಲ್ಲಿ ಹೆಚ್ಚಿರುವ ನಾವೇ ಅವರೊಂದಿಗೆ ಹೋರಾಟ ಮಾಡಿಕೊಂಡು ಬಂದಿದ್ದೇವೆ. ಇಂತಹ ಪರಿಸ್ಥಿತಿಯಲ್ಲಿ ಅಲೆಮಾರಿಗಳು ಸ್ಪೃಶ್ಯ ಜಾತಿಗಳೊಂದಿಗೆ ಸ್ಪರ್ಧಿಸಲು ಸಾಧ್ಯವೇ ಇಲ್ಲ ಎಂದರು.

## ಕಿಟಕಿಯ ಸಜ್ಜಾ ಕುಸಿದು ಗಾಯಗೊಂಡ ವಿದ್ಯಾರ್ಥಿಗಳ ಚಿಕಿತ್ಸಾ ವೆಚ್ಚವನ್ನು ಶಿಕ್ಷಣ ಇಲಾಖೆ ಭರಿಸಲಿದೆ

• ಉದಯವಾಹಿನಿ, ಬೆಂಗಳೂರು



ದೇವನಹಳ್ಳಿ ಪಟ್ಟಣದ ಕೋಟೆ ಸರ್ಕಾರಿ ಬಾಲಕರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಟ್ಟಡದ ಕಿಟಕಿಯ ಸಜ್ಜಾ ಕುಸಿದು ಗಾಯಗೊಂಡಿದ್ದ ಮೂವರು ವಿದ್ಯಾರ್ಥಿಗಳಿಗೆ ಸೂಕ್ತ ಚಿಕಿತ್ಸೆ ನೀಡಲು ಸೂಚಿಸಿರುವ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್. ಮಧು ಬಂಗಾರಪ್ಪ ಅವರು ವೈದ್ಯಕೀಯ ವೆಚ್ಚವನ್ನು ಶಿಕ್ಷಣ ಇಲಾಖೆ ಭರಿಸುವುದಾಗಿ ಪ್ರಕಟಿಸಿದ್ದಾರೆ. ಗಾಯಗೊಂಡ ವಿದ್ಯಾರ್ಥಿ ಚಿಕಿತ್ಸೆ ಪಡೆಯುತ್ತಿರುವ ನಗರದ ಖಾಸಗಿ ಆಸ್ಪತ್ರೆಗೆ ಮಂಗಳವಾರ ಭೇಟಿ ನೀಡಿ ವೈದ್ಯರೊಂದಿಗೆ ಚರ್ಚಿಸಿ ಸಂಪೂರ್ಣ ಮಾಹಿತಿ ಪಡೆದು ಸೂಕ್ತ ಚಿಕಿತ್ಸೆ ನೀಡಲು ಕೋರಿದರು. ನಂತರ ಗಾಯಾಳು ವಿದ್ಯಾರ್ಥಿಯನ್ನು ಹಾಗೂ ಅವರ ಕುಟುಂಬಗಳನ್ನು ಸಂಪರ್ಕಿಸಿ ಧೈರ್ಯ ಹೇಳಿದರು. ಗಾಯಾಳು ಮಕ್ಕಳ ಎಲ್ಲಾ ವೈದ್ಯಕೀಯ ವೆಚ್ಚವನ್ನು ಶಿಕ್ಷಣ ಇಲಾಖೆ ಭರಿಸಲಿದೆ. ವಿದ್ಯಾರ್ಥಿಗಳ ಆರೋಗ್ಯದ ಮೇಲೆ ಅಧಿಕಾರಿಗಳು 24 ಗಂಟೆಗಳ ಕಾಲ ನಿಗಾವಹಿಸಬೇಕು ಎಂದು ಅವರು ಸೂಚಿಸಿದರು. ಗಾಯಗೊಂಡ ಮೂವರು ವಿದ್ಯಾರ್ಥಿಗಳಲ್ಲಿ ಓರ್ವ ಹೊಸಟ್ ಆಸ್ಪತ್ರೆಗೆ ದಾಖಲಾಗಿದ್ದು, ಇನ್ನೊಬ್ಬ ವಿದ್ಯಾರ್ಥಿಯನ್ನು ಹೆಚ್ಚಿನ ಚಿಕಿತ್ಸೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ಸ್ಥಳಾಂತರಿಸಲಾಗಿತ್ತು.

ಈ ಮುನ್ನ ಬೌರಿಂಗ್, ಲೇಡಿ ಕರ್ಜನ್ ಆಸ್ಪತ್ರೆಯಲ್ಲಿ ದಾಖಲಾಗಿದ್ದ ಓರ್ವ ವಿದ್ಯಾರ್ಥಿಯನ್ನು ಈಗಾಗಲೇ ಡಿಸ್ಚಾರ್ಜ್ ಮಾಡಲಾಗಿದೆ. ಸಚಿವರು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಶಾಲಾ ಕಟ್ಟಡವನ್ನು ಸಂಪೂರ್ಣ ಪರಿಶೀಲಿಸಿ ವರದಿ ಸಲ್ಲಿಸಲು ಆದೇಶಿಸಿದ್ದು, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಸಿಇಒ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ. ಮಕ್ಕಳ ಆರೋಗ್ಯ ಮತ್ತು ಭದ್ರತೆ ಸರ್ಕಾರದ ಪ್ರಮುಖ ಜವಾಬ್ದಾರಿ. ಇಂತಹ ಘಟನೆಗಳು ಮರುಕಳಿಸದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಹೇಳಿದ್ದಾರೆ.

# ಖಾಸಗಿ ಬಸ್ ಮಾಲೀಕರಿಗೆ ಬಿಸಿ ಮುಟ್ಟಿಸಿದ ಸಾರಿಗೆ ಇಲಾಖೆ

### ದುಪ್ಪಟ್ಟು ಪ್ರಯಾಣ ದರ 4 ದಿನದಲ್ಲಿ 2,250 ಪ್ರಕರಣ, ತೆರಿಗೆ ಬಾಕಿ, ಇತರೆ ನಿಯಮಗಳ ಉಲ್ಲಂಘನೆ ಸಂಬಂಧ ಪರಿಶೀಲನೆ

• ಉದಯವಾಹಿನಿ, ಬೆಂಗಳೂರು

ಗೌರಿ-ಗಣೇಶ ಹಬ್ಬ, ಸರಣಿ ರಜೆ ಹಿನ್ನೆಲೆಯಲ್ಲಿ ಸಾರ್ವಜನಿಕರಿಂದ ದುಪ್ಪಟ್ಟು ಪ್ರಯಾಣ ದರ ವಸೂಲಿ ಮಾಡುತ್ತಿದ್ದ ಖಾಸಗಿ ಬಸ್ ಮಾಲೀಕರಿಗೆ ಸಾರಿಗೆ ಇಲಾಖೆ ಅಧಿಕಾರಿಗಳು ಬಿಸಿ ಮುಟ್ಟಿಸಿದ್ದಾರೆ. ರಾಜ್ಯದೆಲ್ಲೆಡೆ ಆ.22ರಿಂದ ವಿಶೇಷ ಕಾರ್ಯಾಚರಣೆ ನಡೆಸಿರುವ ಆರ್‌ಟಿಒ ಅಧಿಕಾರಿಗಳು, ಪ್ರಯಾಣಿಕರನ್ನು ಸುಲಿಗೆ ಮಾಡುತ್ತಿದ್ದ ಬಸ್ ಮಾಲೀಕರ ವಿರುದ್ಧ ಬರೋಬ್ಬರಿ 2,250 ಪ್ರಕರಣ ದಾಖಲಿಸಿದ್ದಾರೆ. ಹಬ್ಬ, ಸಾಲು ಸರಕಾರಿ ರಜೆಗಳ ಹಿನ್ನೆಲೆಯಲ್ಲಿ ರಾಜ್ಯದೆಲ್ಲೆಡೆ ಹೊರ ಊರುಗಳಿಗೆ ಹೋಗುವ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿದೆ. ಈ ಪರಿಸ್ಥಿತಿಯ ಲಾಭ ಪಡೆದು ಖಾಸಗಿ ಬಸ್, ಟ್ರಾವೆಲ್ಸ್ ಮಾಲೀಕರು ಆನ್‌ಲೈನ್ ಟಿಕೆಟ್ ಬುಕ್ಕಿಂಗ್‌ನಲ್ಲಿ ಮೂರ್ನಾಲ್ಕು ಪಟ್ಟು ಹೆಚ್ಚು ಪ್ರಯಾಣ ದರ ವಸೂಲಿ ಮಾಡುತ್ತಿದ್ದ ಸಂಬಂಧ ಸಾರಿಗೆ ಇಲಾಖೆಗೆ ವ್ಯಾಪಕ ದೂರು ಸಲ್ಲಿಕೆಯಾಗಿದ್ದವು.

ಸಾರ್ವಜನಿಕರ ದೂರಿನ ಹಿನ್ನೆಲೆಯಲ್ಲಿ ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದೆಲ್ಲೆಡೆ ವಿಶೇಷ ಕಾರ್ಯಾಚರಣೆ ಆರಂಭಿಸಿರುವ ಸಾರಿಗೆ ಇಲಾಖೆ ಅಧಿಕಾರಿಗಳು, ದುಬಾರಿ ಪ್ರಯಾಣ ದರ ವಸೂಲಿ ಮಾಡುತ್ತಿದ್ದ ಖಾಸಗಿ ಬಸ್ ಹಾಗೂ ಟ್ರಾವೆಲ್ಸ್ ಏಜೆನ್ಸಿಗಳ ಮಾಲೀಕರ ವಿರುದ್ಧ ಪ್ರಕರಣಗಳನ್ನು ದಾಖಲಿಸಿದ್ದಾರೆ. ಪ್ರಯಾಣ ದರ ಹೆಚ್ಚಳದ ಜತೆಗೆ ತೆರಿಗೆ ಬಾಕಿ, ಇತರೆ ನಿಯಮಗಳ ಉಲ್ಲಂಘನೆ ಸಂಬಂಧ ಪರಿಶೀಲನೆ ಮಾಡಿದ್ದಾರೆ. 21.83 ಲಕ್ಷ ರೂ. ತೆರಿಗೆ ಬಾಕಿ ಮತ್ತು 31.75 ಲಕ್ಷ ರೂ. ದಂಡ ವಸೂಲಿ ಮಾಡಲಾಗಿದೆ. ಗೌರಿ-ಗಣೇಶ ಹಬ್ಬ ಹಾಗೂ ಸರಣಿ ರಜೆಯ ಸಂದರ್ಭದ ಲಾಭ ಪಡೆದು ಸಾರ್ವಜನಿಕರಿಂದ ಸಾಮಾನ್ಯ ದರಕ್ಕಿಂತ ದುಪ್ಪಟ್ಟು ದರ ವಸೂಲಿ ಮಾಡದಂತೆ ಸಾರಿಗೆ ಇಲಾಖೆ ಆಯುಕ್ತ ಎ.ಎಂ.ಯೋಗೀಶ್ ಅವರು ಖಾಸಗಿ ಬಸ್ ಮಾಲೀಕರಿಗೆ ಮತ್ತು ಟ್ರಾವೆಲ್ಸ್ ಏಜೆನ್ಸಿಗಳಿಗೆ ಮೊದಲೇ ಸೂಚನೆ ಕೊಟ್ಟಿದ್ದರು. ಇಲಾಖೆಯ ಸೂಚನೆ ಲೆಕ್ಕಿಸದೆ ಪ್ರಯಾಣಿಕರಿಂದ ನಿಯಮಬಾಹಿರವಾಗಿ ದುಪ್ಪಟ್ಟು ಪ್ರಯಾಣ ದರ ಪಡೆದು ಸಮಸ್ಯೆ ಮಾಡಿದರೆ ಅಂತಹ ಖಾಸಗಿ ಬಸ್ ಅಥವಾ ಟ್ರಾವೆಲ್ಸ್ ಮಾಲೀಕರು, ಟಿಕೆಟ್ ಬುಕ್ಕಿಂಗ್ ಆ್ಯಪ್‌ಗಳ ವಿರುದ್ಧ ಕಾನೂನು ಕ್ರಮ ಜರುಗಿಸುತ್ತೇವೆ. ಬಸ್‌ಗಳ ಪರ್ಮಿಟ್, ನೋಂದಣಿ ಪ್ರಮಾಣಪತ್ರ, (ಆರ್.ಸಿ.) ರದ್ದು ಪಡಿಸುತ್ತೇವೆ, ಎಂದು ಸಾರಿಗೆ ಇಲಾಖೆ ಹೆಚ್ಚುವರಿ ಆಯುಕ್ತೆ ಎಂ.ಪಿ.ಓಂಕಾರೇಶ್ವರಿ ತಿಳಿಸಿದ್ದಾರೆ.



- ಸಾರ್ವಜನಿಕರಿಂದ ದುಪ್ಪಟ್ಟು ಪ್ರಯಾಣ ದರ ವಸೂಲಿ ಮಾಡುತ್ತಿದ್ದ ಖಾಸಗಿ ಬಸ್ ಮಾಲೀಕರ ವಿರುದ್ಧ ಸಾರಿಗೆ ಇಲಾಖೆ 2,250 ಪ್ರಕರಣಗಳನ್ನು ದಾಖಲಿಸಿದೆ.
- ಗೌರಿ-ಗಣೇಶ ಹಬ್ಬ ಮತ್ತು ಸರಣಿ ರಜೆಯ ಹಿನ್ನೆಲೆಯಲ್ಲಿ ಖಾಸಗಿ ಬಸ್ ಮತ್ತು ಟ್ರಾವೆಲ್ಸ್ ಏಜೆನ್ಸಿಗಳಿಗೆ ದುಬಾರಿ ದರವು ವಸೂಲಾಗುತ್ತಿದೆ ಎಂಬ ದೂರುಗಳು ಬಂದವು.
- ಸಾರಿಗೆ ಇಲಾಖೆ ಅಧಿಕಾರಿಗಳು ಖಾಸಗಿ ಬಸ್ ಮಾಲೀಕರು ಮತ್ತು ಟ್ರಾವೆಲ್ಸ್ ಏಜೆನ್ಸಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಮತ್ತು ಪರ್ಮಿಟ್ ಮತ್ತು ನೋಂದಣಿ ಪ್ರಮಾಣಪತ್ರಗಳನ್ನು ರದ್ದುಪಡಿಸುವುದಾಗಿ ಎಚ್ಚರಿಸಿದ್ದಾರೆ.

**ವಿಶೇಷ ಕಾರ್ಯಾಚರಣೆ**

ಗೌರಿ-ಗಣೇಶ ಹಬ್ಬದ ಸಂದರ್ಭದಲ್ಲಿ ದುಪ್ಪಟ್ಟು ದರ ವಸೂಲಿ ಮಾಡುತ್ತಿದ್ದ ಖಾಸಗಿ ಬಸ್ ಮಾಲೀಕರಿಗೆ ಸಾರಿಗೆ ಇಲಾಖೆ ಬಿಸಿ ಮುಟ್ಟಿಸಿದೆ. ಅಧಿಕಾರಿಗಳು ರಾಜ್ಯಾದ್ಯಂತ ವಿಶೇಷ ಕಾರ್ಯಾಚರಣೆ ನಡೆಸಿ 2,250 ಪ್ರಕರಣಗಳನ್ನು ದಾಖಲಿಸಿದ್ದಾರೆ. ದುಬಾರಿ ದರ ವಸೂಲಿ ಮತ್ತು ತೆರಿಗೆ ಬಾಕಿ ಹಿನ್ನೆಲೆಯಲ್ಲಿ 21.83 ಲಕ್ಷ ರೂ. ತೆರಿಗೆ ಮತ್ತು 31.75 ಲಕ್ಷ ರೂ. ದಂಡ ವಸೂಲಿ ಮಾಡಲಾಗಿದೆ.

# ರಾ.ಹೆ. - 948ರ ಮೇಲ್ಸೇತುವೆ ಕಾಮಗಾರಿ ಕಳಪೆ ಆರೋಪ

## ಮೇಲೇತುವೆ ತಡೆಗೋಡೆ ಕುಸಿತ: ಸ್ಥಳಕ್ಕೆ ಎನ್.ಮಹೇಶ್, ಎಸ್.ಬಾಲರಾಜು ಭೇಟಿ ನೀಡಿ ವೀಕ್ಷಣೆ

• ಉದಯವಾಹಿನಿ, ಕೊಳ್ಳೇಗಾಲ

ತಾಲ್ಲೂಕಿನ ಉತ್ತಂಬಳ್ಳಿ ಬಳಿ ಹಾದುಹೋಗಿರುವ ರಾಷ್ಟ್ರೀಯ ಹೆದ್ದಾರಿ- 948ರ ಮೇಲೇತುವೆ ಕುಸಿದ ಸ್ಥಳಕ್ಕೆ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಹಾಗೂ ಮಾಜಿ ಶಾಸಕ ಎಸ್.ಬಾಲರಾಜು ಭೇಟಿ ನೀಡಿ ವೀಕ್ಷಣೆ ಮಾಡಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮಹೇಶ್, ಸೇತುವೆ ಕಾಮಗಾರಿ ಮುಕ್ತಾಯವಾಗಿ ಒಂದು ವರ್ಷ ಕಳೆದಿಲ್ಲ ಅಷ್ಟರಲ್ಲಿ ಇಂತಹ ದುರ್ಘಟನೆ ನಡೆದಿದೆ. ಈ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಸಂಪೂರ್ಣ ಕಳಪೆಯಿಂದ ಕೂಡಿದೆ. ಈ ಬಗ್ಗೆ ಕಾಮಗಾರಿ ನಡೆಯುವ ಸಂದರ್ಭದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದೆ ಎಂದರು. ಆದರೆ, ಯಾವ ಅಧಿಕಾರಿಯು ಇದರ ಬಗ್ಗೆ ಗಮನ ಹರಿಸಲಿಲ್ಲ, ಗುತ್ತಿಗೆದಾರರು ರಸ್ತೆ ಕಾಮಗಾರಿಯಲ್ಲಿ ಕೋಟ್ಯಂತರ ಹಣ ನುಂಗಿದ್ದಾರೆ.


ಉದಯವಾಹಿನಿ ಚಿತ್ರ

ಪುನರ್ ನಿರ್ಮಾಣಕ್ಕೆ ಒತ್ತಾಯ

ಹಾಗಾಗಿ ಸಂಬಂಧಪಟ್ಟ ಅಧಿಕಾರಿಗಳು, ಸಂಸದರು ಗಮನಹರಿಸಬೇಕು ಎಂದು ಒತ್ತಾಯಿಸಿದರು.

ಮೇಲೇತುವೆ ತಡೆಗೋಡೆ ಕುಸಿದು ಒಂದು ದಿನ ಕಳೆದರೂ, ಜಿಲ್ಲಾಧಿಕಾರಿಯಾಗಲಿ, ಸಂಬಂಧಪಟ್ಟ ಅಧಿಕಾರಿಗಳು ಯಾರು ಭೇಟಿ ನೀಡಿಲ್ಲ. ಈ ಬಗ್ಗೆ ಅನುಮಾನ ಮೂಡುತ್ತಿದೆ. ರಸ್ತೆ ಕಾಮಗಾರಿಗೆ ಕಳಪೆ ಮಣ್ಣನ್ನು ಹಾಕಿರುವ ಕಾರಣ ಇಂತಹ ಘಟನೆ ಸಂಭವಿಸಿದೆ ಎಂದು ದೂರಿದರು. ಈಗಾಗಲೇ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ನಿರ್ದೇಶಕರ ಜೊತೆ ಮಾತನಾಡಿದ್ದೇನೆ. ಅವರು ಕೆಲಸ ಅಚ್ಚುಕಟ್ಟಾಗಿ ಮಾಡಿಕೊಡುತ್ತೇನೆ ಎಂದು ಹೇಳಿದ್ದಾರೆ. ಆದರೂ ಇಂತಹ ಕಳಪೆ ಕಾಮಗಾರಿ ನಾನು ಎಲ್ಲೂ ನೋಡಿಲ್ಲ, ರಾಜ್ಯ ಸರ್ಕಾರ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಮಧ್ಯಪ್ರವೇಶಿಸಿ ಕೂಡಲೇ ಕಳಪೆ ಮೇಲ್ಸೇತುವೆ ಕಿತ್ತುಹಾಕಿ, ಪುನರ್ ನಿರ್ಮಾಣದೊಂದಿಗೆ ಗುಣಮಟ್ಟದ ಕಾಮಗಾರಿ ಮಾಡಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಮಾಜಿ ಶಾಸಕ ಬಾಲರಾಜು ಮಾತನಾಡಿ, ಕಳಪೆ ಕಾಮಗಾರಿ ಮಾಡಿರುವುದು ನಿಜಕ್ಕೂ ದುರಂತದ ವಿಷಯ. ಕಳಪೆ ಕಾಮಗಾರಿ ಮಾಡಿದವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು. ಜೊತೆಗೆ ಅಧಿಕಾರಿಗಳನ್ನು ಅಮಾನತು ಮಾಡಬೇಕು. ಈ ವಿಷಯವನ್ನು ಸಂಸದ ಸುನಿಲ್ ಬೋಸ್ ಗಂಭೀರವಾಗಿ ಪರಿಗಣಿಸಬೇಕು ಎಂದರು.

**ಜಿಲ್ಲೆಯ ಬಗ್ಗೆ ಕಿಂಚಿತ್ತೂ ಕಾಳಜಿ ಇಲ್ಲ**

**ಸಂಸದರು ಜಿಲ್ಲಾ ಉಸ್ತುವಾರಿ ಸಚಿವರು ಇದುವರೆಗೂ ಭೇಟಿ ನೀಡಿಲ್ಲ, ಇವರಿಗೆ ಚಾಮರಾಜನಗರ ಜಿಲ್ಲೆಯ ಬಗ್ಗೆ ಕಿಂಚಿತ್ತೂ ಕಾಳಜಿ ಇಲ್ಲ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ದೂರಿದರು.**

**ಬೆಳಗ್ಗೆ ಬೇಗ ಎದ್ದೇಳಿ: ಸಂಸದ ಸುನೀಲ್ ಬೋಸ್ ಅವರು ಬೆಳಗ್ಗೆ ಬೇಗ ಎದ್ದೇಳಬೇಕು. ಮೈಸೂರಿನಿಂದ ಕೊಳ್ಳೇಗಾಲಕ್ಕೆ ಬರುವುದಕ್ಕೆ ಕೇವಲ 40 ನಿಮಿಷ ಸಾಕು. ಮೇಲೇತುವೆ ತಡೆಗೋಡೆ ಕುಸಿದು ಒಂದು ದಿನ ಕಳೆದರೂ ಇದುವರೆಗೂ ಬಂದಿಲ್ಲ. ನಾನು ಬಾಗಲಕೋಟೆಯಿಂದ ವಿಷಯ ತಿಳಿದು ಬಂದಿದ್ದೇನೆ. ಬಾಲರಾಜು ಅವರು ಬೆಂಗಳೂರಿನಿಂದ ಬಂದಿದ್ದಾರೆ. ಆದರೆ ನಮ್ಮ ಸಂಸದರಿಗೆ ಬರುವಷ್ಟು ಸಮಯವಿಲ್ಲ ಎಂದರು.**

# ಪಂಚಾಯಿತಿ ಕಚೇರಿಗೆ ಬೀಗಹಾಕಿ ಪ್ರತಿಭಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಬ್ಬಿ

ಗ್ರಾಮಸ್ಥರಿಗೆ ಅಗತ್ಯವಿರುವ ಕುಡಿಯುವ ನೀರು ಹಾಗೂ ನಿವೇಶ ಹಂಚಿಕೆಯಲ್ಲಿ ತಾರತಮ್ಯ ಎಸಗಲಾಗುತ್ತಿದೆ. ಆಡಳಿತಾತ್ಮಕ ವಿಚಾರಗಳಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆಯ ಪತಿ ಹಸ್ತಕ್ಷೇಪ ನಡೆಸಲು ಮುಂದಾಗುತ್ತಿದ್ದಾರೆ ಎಂದು ಆರೋಪಿಸಿ ಜಿ.ಹೊಸಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಹರ್ಷನ್ ನೇತೃತ್ವದಲ್ಲಿ ಪಂಚಾಯಿತಿ ಕಚೇರಿಗೆ ಬೀಗಹಾಕಿ ಪ್ರತಿಭಟನೆ ನಡೆಸಲಾಯಿತು. ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಡೇನಹಳ್ಳಿ ಗ್ರಾಮದ ಹಲವು ಮನೆಗಳಿಗೆ ಒಂದು ವರ್ಷದಿಂದ ನೀರು ಸರಬರಾಜಾಗದಿರುವ ಬಗ್ಗೆ ಗಮನಕ್ಕೆ ತರಲಾಗಿದೆ. ಆದರೂ ಅಧಿಕಾರಿಗಳು ಕ್ರಮಕ್ಕೆ ಮುಂದಾಗಿಲ್ಲ. ಗ್ರಾಮಸ್ಥರು ಹಣಕೊಟ್ಟು ಟ್ಯಾಂಕರ್ ಮೂಲಕ ನೀರು ಪಡೆಯುವಂತಾಗಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮ ಪಂಚಾಯಿತಿ ಸದಸ್ಯ ಹರ್ಷನ್ ಮಾತನಾಡಿ, ಗ್ರಾಮ ಪಂಚಾಯಿತಿಯ ಸದಸ್ಯನಾಗಿದ್ದು ತುರ್ತು ಸೌಕರ್ಯ ಒದಗಿಸಲು ಸಾಧ್ಯವಾಗದಿದ್ದಲ್ಲಿ ಸಾಮಾನ್ಯ ಜನರ ಗತಿ ಏನು. ಎಲ್ಲಾ ಸದಸ್ಯರ ವಾರ್ಡ್‌ಗಳ ಸಮಸ್ಯೆಗೂ ಸ್ಪಂದಿಸಬೇಕಾಗಿರುವ ಅಧ್ಯಕ್ಷರು ರಾಜಕೀಯ ದುರುದ್ದೇಶದಿಂದ ಸಾರ್ವಜನಿಕರ ಹಿತ ರಕ್ಷಣೆಗೆ ಮುಂದಾಗದಿರುವುದು ಎಷ್ಟರ ಮಟ್ಟಿಗೆ ಸರಿ ಎಂದರು. ಸಂಬಂಧಿಸಿದ ಅಧಿಕಾರಿಗಳು ಸ್ಥಳಕ್ಕೆ ಬಂದು ಕ್ರಮ ಕೈಗೊಳ್ಳುವವರೆಗೂ ಪ್ರತಿಭಟನೆ ಮುಂದುವರೆಸುತ್ತೇವೆ ಎಂದು ಎಚ್ಚರಿಸಿದರು. ತಾಲ್ಲೂಕು ಪಂಚಾಯಿತಿ, ಜೆಜೆಎಂ ಅಧಿಕಾರಿಗಳು ಸ್ಥಳಕ್ಕೆ ಭೇಟಿನೀಡಿ ಗ್ರಾಮಸ್ಥರಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸುತ್ತೇವೆ ಎಂದು ಭರವಸೆ ನೀಡಿದ ನಂತರ ಪ್ರತಿಭಟನೆ ಹಿಂಪಡೆಯಲಾಯಿತು.

## ನಾನು ದಲಿತ ವಿರೋಧಿಯಲ್ಲ, ಅವರಿಗಾಗಿ ಊರನ್ನೇ ಕಟ್ಟಿಕೊಟ್ಟಿದ್ದೇವೆ: ಜಿಟಿ ದೇವೇಗೌಡ

# ಸಹಕಾರಿ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ್ದೇನೆ, ದಲಿತ ವಿರೋಧಿಯಲ್ಲ

• ಉದಯವಾಹಿನಿ, ಮೈಸೂರು

ವಿಧಾನಸಭೆ ಅಧಿವೇಶನದಲ್ಲಿ ಸಹಕಾರ ಕ್ಷೇತ್ರದ ಬಗ್ಗೆ ಮಾತನಾಡಿದ್ದ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ. ನಾನು ದಲಿತವಿರೋಧಿಯಲ್ಲ ಎಂದು ಜೆಡಿಎಸ್ ನ ಹಿರಿಯ ಶಾಸಕ ಜಿ ಟಿ ದೇವೇಗೌಡರಿಂದ ಮೈಸೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಸ್ಪಷ್ಟನೆ ನೀಡಿದರು. ಸಹಕಾರ ಸಂಘಗಳಿಗೆ ಸರ್ಕಾರದಿಂದ ಅನುದಾನ ಬರುವುದಿಲ್ಲ. ಸರ್ಕಾರ ಹಸ್ತಕ್ಷೇಪ ಮಾಡುತ್ತಿದೆ ಎಂದು ವಿಧಾನಸಭೆಯಲ್ಲಿ ಮಾತನಾಡಲಾಗಿತ್ತು.

ಅದನ್ನು, ದಲಿತ ವಿರೋಧಿ ಎಂದು ಬಿಂಬಿಸಲಾಗಿದೆ. ಆದರೆ, ದಲಿತ ವಿರೋಧಿಯಲ್ಲ. ಸಹಕಾರ ಕ್ಷೇತ್ರದಲ್ಲಿ 1970 ರಿಂದಲೂ ಕೆಲಸ ಮಾಡಿದ್ದೇನೆ. ಕಾರ್ಯದರ್ಶಿಯಾಗಿ, ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದೇನೆ ಎಂದು ಮೈಸೂರಿನಲ್ಲಿ ಜಿಟಿ ದೇವೇಗೌಡ ಹೇಳಿದರು.

**ನಾನು ಜಾತಿ ನೋಡಲ್ಲ:** ನಾನು ನಮ್ಮ ತಂದೆ ಈ ಹಿಂದೆ ದಲಿತರಿಗೆ ಒಂದು ಊರನ್ನೇ ಕಟ್ಟಿಕೊಟ್ಟಿದ್ದೇವೆ . ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದಾಗ ದಲಿತರ ಮನೆಯಲ್ಲಿ ವಾಸ್ತವ್ಯ ಮಾಡಿಸಿದ್ದೇನೆ. ನಾನು ಯಾವತ್ತೂ ಜಾತಿ ಮಾಡಿಲ್ಲ.ದಲಿತರನ್ನು ಅಗೌರವದಿಂದ ಕಂಡಿಲ್ಲ. ಆಡಳಿತ ಪಕ್ಷ ತಂದಿದ್ದ ಕಾಯ್ದೆಯನ್ನು ವಿರೋಧ ಮಾಡಿದ್ದೇನೆ.


ಉದಯವಾಹಿನಿ ಚಿತ್ರ

**ಸರ್ಕಾರದ ಹಸ್ತಕ್ಷೇಪ ಪ್ರಶ್ನಿಸಿದ್ದೆ**

**ಸಹಕಾರ ಕ್ಷೇತ್ರದಲ್ಲಿ ಸುದೀರ್ಘ ಸೇವೆಯನ್ನು ಸಲ್ಲಿದ್ದೇನೆ. ವಿಧಾನಸಭೆ ಅಧಿವೇಶನದಲ್ಲಿ ನಾನು ಹೇಳಿದ ಮಾತನ್ನು ತಪ್ಪಾಗಿ ಅರ್ಥೈಸಿಕೊಳ್ಳಲಾಗಿದೆ. ಸರ್ಕಾರದ ಹಸ್ತಕ್ಷೇಪ ಸಹಕಾರ ಕ್ಷೇತ್ರದಲ್ಲಿ ಹೆಚ್ಚಾಗಿದೆ ಎಂದು ನಾನು ಸ್ಪಷ್ಟವಾಗಿ ಹೇಳಿದ್ದನ್ನು ತಪ್ಪಾಗಿ ಅರ್ಥೈಸಿಕೊಂಡಿದ್ದಾರೆ. ನಾನು ದಲಿತ ವಿರೋಧಿಯಲ್ಲ. ಸಹಕಾರ ಸಂಘಗಳಿಗೆ ಸರ್ಕಾರದಿಂದ ಅನುದಾನ ಬರುವುದಿಲ್ಲ. ಸಹಕಾರ ಕ್ಷೇತ್ರದಲ್ಲಿ ಸರ್ಕಾರ ಹಸ್ತಕ್ಷೇಪ ಮಾಡುತ್ತಿದೆ, ಈ ರೀತಿ ಮಾಡುವ ಬದಲು ಸಹಕಾರ ಕ್ಷೇತ್ರವನ್ನು ಮುಚ್ಚಿಬಿಡಿ ಎಂದು ಹೇಳಿದ್ದೆ. ದಲಿತರು ಬಂದರೆ ಮುಚ್ಚಬೇಕಾ ಅಂತ ಶಿವರಾಜ್ ತಂಗಡಗಿ ಹೇಳಿದ್ರು.**

ಅದನ್ನೇ ದಲಿತರ ವಿರೋಧಿ ಎಂಬ ರೀತಿ ಬಿಂಬಿಸಿದ್ದಾರೆ ಎಂದು ಶಾಸಕ ಜಿ ಟಿ ದೇವೇಗೌಡ ಮೈಸೂರಿನಲ್ಲಿ ಸ್ಪಷ್ಟನೆ.

**ಧರ್ಮಸ್ಥಳದ ಪ್ರಕರಣ:** ಧರ್ಮಸ್ಥಳದ ಬುರುಡೆ ಪ್ರಕರಣದ ಬಗ್ಗೆ ಮಾತನಾಡಿ, ಇದು ಷಡ್ಯಂತ್ರ ಎಂದು ಕೈನವರೇ ಹೇಳಿದ್ದಾರೆ. ಸರ್ಕಾರ ಎಸ್‌ಐಟಿ ತನಿಖೆ ಮಾಡಿಸುತ್ತಿದೆ. ಧರ್ಮಸ್ಥಳಕ್ಕೆ ಅಂಟಿರುವ ಕಳಂಕ ಹೋಗಬೇಕು. ಅಲ್ಲಿಗೆ ದೇಶ ವಿದೇಶಗಳಿಂದ ಭಕ್ತರು ಬರುತ್ತಾರೆ. ಕನ್ನಡನಾಡಿನ ಜನರಿಗೆ ನೋವಾಗಿದೆ. ತನಿಖೆ ಶೀಘ್ರವಾಗಿ ನಡೆಸಬೇಕುತಪ್ಪಿಸ್ಥತರನ್ನು ನೇಣಿಗೆ ಹಾಕಬೇಕು.ಜನರ ಮನಸ್ಸಿಗೆ ನೆಮ್ಮದಿ ನೀಡಬೇಕು.ಧರ್ಮಸ್ಥಳ ಯಾವುದೇ ಕಾರಣಕ್ಕೂ ಟಾರ್ಗೆಟ್ ಆಗಲ್ಲ. ವೀರೇಂದ್ರ ಹೆಗಡೆ ಅವರು ಕೂಡ ಟಾರ್ಗೆಟ್ ಆಗಲ್ಲ. ಸತ್ಯ ಹೊರ ಬರುತ್ತದೆ, ಸತ್ಯವೇ ಉಳಿಯುತ್ತದೆ ಎಂದು ಶಾಸಕ ಜಿ ಟಿ ದೇವೇಗೌಡ ಮೈಸೂರಿನಲ್ಲಿ ಹೇಳಿದರು.

**ಬಾನು ಮುಷ್ತಾಕ್ ರಿಂದ ದಸರಾ ಉದ್ಘಾಟನೆ:** ಪ್ರತಿವರ್ಷ ಒಬ್ಬೊಬ್ಬ ಸಾಧಕರಿಂದ ದಸರಾ ಉದ್ಘಾಟನೆ ಮಾಡಿಸುತ್ತಾರೆ. ಅದಕ್ಕಾಗಿ ಒಂದು ಹೈ ಪವರ್ ಕಮಿಟಿ ಮಾಡಿದ್ದೇವೆ. ಸಿಎಂ ಸಿದ್ದರಾಮಯ್ಯರಿಗೆ ಅದರ ಪವರ್ ಕೊಟ್ಟಿದ್ದೇವೆ. ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಆಯ್ಕೆ ಮಾಡಿರೋದು ಸಿಎಂ ಸಿದ್ದರಾಮಯ್ಯ. ಬಾನು ಮುಷ್ತಾಕ್ ಅವರಿಗೆ ದೇವರ ಮೇಲೆ ನಂಬಿಕೆ ಇಲ್ಲ ಎಂದು ಬಿಜೆಪಿ ನಾಯಕರ ಆರೋಪ ವಿಚಾರ ಚಾಮುಂಡೇಶ್ವರಿಯ ಮೇಲೆ ನಂಬಿಕೆ ಇಲ್ಲದಿದ್ದರೆ ಬಾನು ಮುಷ್ತಾಕ್ ಅವರು ಬರೋದಿಲ್ಲ. ನಂಬಿಕೆ ಇದ್ರೇ ಬಂದು ಉದ್ಘಾಟನೆ ಮಾಡ್ತಾರೆ ಎಂದು ಹೇಳಿದರು.

**ಊಹಿಸಲಾಗದಷ್ಟು ದುಡಿದಿದ್ದೇನೆ**

**ಸಹಕಾರ ಕ್ಷೇತ್ರದ ಬಗ್ಗೆ ನಾನು ವಿಧಾನಸಭೆಯಲ್ಲಿ ಮಾತನಾಡಿದ್ದನ್ನು ಬೇರೆ ರೀತಿಯಾಗಿ ಅರ್ಥೈಸಿ ನಾನು ದಲಿತ ವಿರೋಧಿ ಎಂದು ಬಿಂಬಿಸಲಾಗುತ್ತಿದೆ. ಆದರೆ ನಾನು ದಲಿತ ವಿರೋಧಿಯಲ್ಲ. ಅವರಿಗಾಗಿ ಊರು ಕಟ್ಟಿದ್ದೇವೆ. ಸಹಕಾರ ಕ್ಷೇತ್ರದಲ್ಲಿ ಊಹಿಸಲಾಗದಷ್ಟು ದುಡಿದಿದ್ದೇನೆ ಎಂದು ಮೈಸೂರಿನಲ್ಲಿ ಜಿ ಟಿ ದೇವೇಗೌಡ ಅವರು ಸುದ್ದಿಗೋಷ್ಠಿಯಲ್ಲಿ ಹೇಳೀದರು. ಇದೇ ವೇಳೆ ಧರ್ಮಸ್ಥಳದ ಬಗ್ಗೆ ಹಾಗೂ ಬಾನು ಮುಷ್ತಾಕ್ ದಸರಾ ಉದ್ಘಾಟನೆ ಬಗ್ಗೆ ಮಾತನಾಡಿದರು.**


# ಮೈಸೂರು ದಸರಾ ಉದ್ಘಾಟನೆಗೆ ಬಾನೂ ಮುಷ್ತಾಕ್‌ರಿಗೆ ಆಹ್ವಾನ ದುರದೃಷ್ಟಕರ

• ಶ್ರೀ. ಮೋಹನ ಗೌಡ

• ಉದಯವಾಹಿನಿ, ಮೈಸೂರು

ಮೈಸೂರು ದಸರಾ ಕರ್ನಾಟಕದ ಅತ್ಯಂತ ಭವ್ಯವಾದ ಸಾಂಸ್ಕೃತಿಕ ಮತ್ತು ಧಾರ್ಮಿಕ ಹಬ್ಬವಾಗಿದ್ದು, ಕೋಟ್ಯಂತರ ಹಿಂದೂಗಳಿಗೆ ಭಕ್ತಿ, ಸಂಪ್ರದಾಯ ಮತ್ತು ಪರಂಪರೆಯ ಸಂಕೇತವಾಗಿದೆ. ನವರಾತ್ರಿಯ ಸಮಯದಲ್ಲಿ ಒಂಬತ್ತು ದಿನಗಳ ಕಾಲ, ಹಿಂದೂಗಳು ಕಾಳಿ, ಮಹಾಲಕ್ಷ್ಮಿ ಮತ್ತು ಸರಸ್ವತಿ ದೇವಿಯನ್ನು ಪೂಜಿಸುತ್ತಾರೆ, 10ನೇ ದಿನ ಚಾಮುಂಡೇಶ್ವರಿ ದೇವಿಯ ವಿಜಯೋತ್ಸವದ ಆಚರಣೆಯಲ್ಲಿ ಕೊನೆಗೊಳ್ಳುತ್ತದೆ.

ಆದ್ದರಿಂದ ಅಂತಹ ಪವಿತ್ರ ಉತ್ಸವವನ್ನು



ಉದ್ಘಾಟಿಸುವವರಿಗೆ ದೇವಿಯ ಮೇಲೆ ನಂಬಿಕೆ, ವಿಗ್ರಹ ಪೂಜೆಯನ್ನು ಗೌರವಿಸುವವರು ಮತ್ತು ಈ ನೆಲದ ದೇವತೆಯ ಬಗ್ಗೆ ಭಕ್ತಿ ಹೊಂದಿರಬೇಕು. ಆದಾಗ್ಯೂ, ಕರ್ನಾಟಕದ ನಾಡ ದೇವತೆ ಭುವನೇಶ್ವರಿಯಲ್ಲಿ ತಾನು ನಂಬಿಕೆ ಇಡುವುದಿಲ್ಲ ಎಂದು ಬಹಿರಂಗವಾಗಿ ಹೇಳಿರುವ ಮತ್ತು ಈ ಹಿಂದೆ ದತ್ತ ಪೀಠ ವಿವಾದದ ಸಂದರ್ಭದಲ್ಲಿ ಮುಸ್ಲಿಮರ ಪರವಾಗಿ ನಿಲುವು ತೆಗೆದುಕೊಂಡಿರುವ ಬಾನೂ ಮುಷ್ತಾಕ್ ಅವರನ್ನು ಸರ್ಕಾರ ಆಹ್ವಾನಿಸಿದೆ. ಇಂತಹ ಆಯ್ಕೆಯು ಹಿಂದೂಗಳ ಭಾವನೆಗಳನ್ನು ತೀವ್ರವಾಗಿ ನೋಯಿಸುತ್ತದೆ. ಭಾರತದ

**ಸರ್ಕಾರ ತಕ್ಷಣ ಮರುಪರಿಶೀಲಿಸಬೇಕು**

ಅತ್ಯುನ್ನತ ಸಾಹಿತ್ಯ ಗೌರವಗಳು ಮತ್ತು ಪದ್ಮಭೂಷಣ ಪ್ರಶಸ್ತಿ ಪುರಸ್ಕೃತರಾದ ಖ್ಯಾತ ಲೇಖಕ ಡಾ. ಎಸ್. ಎಲ್. ಭೈರಪ್ಪ ಅವರು ಈ ದಸರಾ ಉತ್ಸವವನ್ನು ಉದ್ಘಾಟಿಸಲು ಅತ್ಯಂತ ಅರ್ಹ ವ್ಯಕ್ತಿ. ಸಾಹಿತ್ಯ ಮತ್ತು ತತ್ವಶಾಸ್ತ್ರಕ್ಕೆ ಅವರ ಅತ್ಯುನ್ನತ ಕೊಡುಗೆಯಿಂದ ರಾಷ್ಟ್ರದಾದ್ಯಂತ ಅಪಾರ ಗೌರವವನ್ನು ಗಳಿಸಿದ್ದಾರೆ.

ಹಾಗಾದರೆ ಸರ್ಕಾರ ಕರ್ನಾಟಕದ ಅಂತಹ ಶ್ರೇಷ್ಠ ಪುತ್ರನನ್ನು ಏಕೆ ನಿರ್ಲಕ್ಷಿಸಿದೆ? ಬೂಕರ್ ಪ್ರಶಸ್ತಿಯಂತಹ ವಿದೇಶಿ ಮನ್ನಣೆಗಳಿಗೆ ನಾವು ಏಕೆ ಅಧೀನರಾಗಿರಬೇಕು? ಭಾರತದ ಸಾಹಿತ್ಯ ಪರಂಪರೆ ವಿಶಾಲ ಮತ್ತು ಆಳವಾದದ್ದು, ಮತ್ತು ನಮ್ಮದೇ ಪ್ರಶಸ್ತಿಗಳು ಮತ್ತು ಸಂಸ್ಥೆಗಳು ಸಮಾನ ಅಥವಾ ಹೆಚ್ಚಿನ ಮೌಲ್ಯವನ್ನು ಹೊಂದಿವೆ.


ಸರ್ಕಾರದ ಉದ್ದೇಶವು ಅಂತರರಾಷ್ಟ್ರೀಯ ಮನ್ನಣೆಯನ್ನು ಪ್ರದರ್ಶಿಸುವುದಾಗಿದ್ದರೆ, ಬೂಕರ್ ಪ್ರಶಸ್ತಿ ವಿಜೇತ ಸಲ್ಮಾನ್ ರಶ್ದಿ ಅವರನ್ನು ದಸರಾ ಉದ್ಘಾಟಿಸಲು ಆಹ್ವಾನಿಸುವ ಧೈರ್ಯವಿದೆಯೇ? ಹಾಗಾದರೆ ಬಾನೂ ಮುಷ್ತಾಕ್ ಅವರನ್ನು ಮಾತ್ರ ಏಕೆ ಆಯ್ಕೆ ಮಾಡಿದ್ದೀರಿ ಆದ್ದರಿಂದ, ಹಿಂದೂ ಜನಜಾಗೃತಿ ಸಮಿತಿಯು ಸರ್ಕಾರವನ್ನು ಬಾನೂ ಮುಷ್ತಾಕ್ ಅವರನ್ನು ಆಹ್ವಾನಿಸುವ ನಿರ್ಧಾರವನ್ನು ತಕ್ಷಣವೇ ಹಿಂತೆಗೆದುಕೊಳ್ಳುವಂತೆ ಮತ್ತು ಈ ಪವಿತ್ರ ಉತ್ಸವವನ್ನು ಉದ್ಘಾಟಿಸಲು ಡಾ. ಎಸ್. ಎಲ್. ಭೈರಪ್ಪ ಅವರಂತಹ ಧೀಮಂತರನ್ನು ಗೌರವಿಸುವಂತೆ ಬಲವಾಗಿ ಒತ್ತಾಯಿಸುತ್ತದೆ. ಇಂತಹ ನಿರ್ಧಾರದಿಂದ ಮಾತ್ರ ಕರ್ನಾಟಕದಾದ್ಯಂತ ಇರುವ ಕೋಟ್ಯಂತರ ಹಿಂದೂಗಳ ಭಾವನೆಗಳಿಗೆ ಗೌರವ ಲಭಿಸಲಿದೆ.

# ವಿ.ಸಿ.ನಾಲೆ ಕೊನೆ ಭಾಗಕ್ಕೆ ನೀರು ಹರಿಸುವಂತೆ ಆಗ್ರಹ

• ಉದಯವಾಹಿನಿ, ಮಂಡ್ಯ

ಜಿಲ್ಲೆಯ ಕೊನೆ ಭಾಗದಲ್ಲಿರುವ ವಿ.ಸಿ.ನಾಲೆಗಳಿಗೆ ನೀರು ಹರಿಸಬೇಕೆಂದು ಆಗ್ರಹಿಸಿ ರೈತ ಸಂಘದ ಕಾರ್ಯಕರ್ತರು ನಗರದ ಕಾವೇರಿ ನೀರಾವರಿ ನಿಗಮದ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ವಿ.ಸಿ.ನಾಲೆ ಲೋಕಸರ ಶಾಖೆಯ ಕೊನೆಯ ಅಚ್ಚುಕಟ್ಟು ಭಾಗ, ಮದ್ದೂರು ತಾಲ್ಲೂಕು ಹಾಗೂ ಮಳವಳ್ಳಿ ತಾಲ್ಲೂಕಿನ ಕೊನೆ ಭಾಗದ ಜಮೀನುಗಳಿಗೆ ನೀರು ಬಿಡದೆ ನೀರಾವರಿ ಇಲಾಖೆ ಬೇಜವಾಬ್ದಾರಿತನ ಪ್ರದರ್ಶಿಸುತ್ತಿದೆ. ಮದ್ದೂರು ಶಾಸಕ ಕೆ.ಎಂ. ಉದಯ್ ಅವರು ಹೇಳಿದ್ದಾರೆ ಎಂದು ಈಗ ನಾಲೆ ಕಾಮಗಾರಿ ಮಾಡುತ್ತಿದ್ದಾರೆ. ಇದರಿಂದ ಮಕ್ಕೆ ಮಳೆಯ ವೇಳೆಯಲ್ಲಿ ನಾಟಿ ಮಾಡಲಿಲ್ಲ. ಇಷ್ಟು ಸಾಮಾನ್ಯ ಜ್ಞಾನವಿಲ್ಲದ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳನ್ನು ಪಡೆದ ನಾವೆ ಧನ್ಯರು ಎಂದು ಕಿಡಿಕಾರಿದರು.

ಸರಿಯಾದ ಸಮಯದಲ್ಲಿ ನಾಟಿ ಮಾಡದೇ ಹೋದರೆ, ಭತ್ತದ ಪೈರು ಚಳಿಗೆ ಸಿಕ್ಕಿ ಒಡೆ ಸರಿಯಾಗಿ ಬರಲ್ಲ ಎಂಬುವ ಕನಿಷ್ಠ ಜ್ಞಾನವು ಕೂಡ ನಮ್ಮ ಜನಪ್ರತಿನಿಧಿಗಳಿಗೆ ಇಲ್ಲವಾಗಿದೆ. ನಾಲೆಯಲ್ಲಿ ಜೋರಾಗಿ ನೀರು ಕೊಡದಿದ್ದರೆ ಕೊನೆ ಭಾಗಕ್ಕೆ ಹರಿಯಲ್ಲ, ನಾಟಿ ಮಾಡಲು ಆಗಲ್ಲ ಎಂದು ಆರೋಪಿಸಿದರು. ರೈತರು ಮಾಡಿರುವ ಖರ್ಚು ಸಹ ನಷ್ಟ ಆಗುತ್ತದೆ. ಕಾವೇರಿ


ಉದಯವಾಹಿನಿ ಚಿತ್ರ

ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಬಂದಿದ್ದಾರೆ ಎಂದು ಗೊತ್ತಾಗಿದೆ. ಚಳವಳಿ ಸ್ಥಳಕ್ಕೆ ಬಂದು ನೀರು ಬಿಡುವುದಾಗಿ ಭರವಸೆ ನೀಡಿದರೆ ಚಳವಳಿ ವಾಪಸ್ ಪಡೆಯುತ್ತೇವೆ. ಇಲ್ಲವಾದಲ್ಲಿ ಅನಿರ್ದಿಷ್ಟಾವಧಿ ಹೋರಾಟ ಮುಂದುವರಿಯುತ್ತದೆ ಎಂದು ಎಚ್ಚರಿಕೆ ನೀಡಿದರು.

ಚಳವಳಿಯಲ್ಲಿ 80 ವರ್ಷ ವಯಸ್ಸಾದ ರೈತರು ಸಹ ಭಾಗವಹಿಸಿದ್ದಾರೆ. ನೀರಾವರಿ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳಿಗೆ ಕನಿಷ್ಠ ಜ್ಞಾನ ಬೇಡವೇ ಸಚಿವರು, ಶಾಸಕರು ನೀರು ಬಿಟ್ಟಿದ್ದೇವೆ ಎಂದು ಹೇಳುತ್ತಿದ್ದಾರೆ. ಮದ್ದೂರು ಮತ್ತು ಮಳವಳ್ಳಿ ಶಾಸಕರು ನೀರು ಬಿಟ್ಟಿರುವುದನ್ನು ತೋರಿಸಲಿ, ಕಾಮಗಾರಿ ನಿಲ್ಲಿಸಿ ನೀರು ಬಿಡಲಿ, ನೀರು ನಿಲ್ಲಿಸಿದ ನಂತರ ಕಾಮಗಾರಿ ಮಾಡಲಿ ಎಂದು ರಾಜ್ಯ ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಎ.ಎಲ್.ಕೆಂಪೂಗೌಡ ಆಗ್ರಹಿಸಿದರು.

**ಮದ್ದೂರು ಮಳವಳ್ಳಿ ತಾಲ್ಲೂಕುಗಳಿಗೆ ನೀರು ಹರಿಸುವಂತೆ ನಾನು ನಿರಂತರವಾಗಿ ಕಾವೇರಿ ನೀರಾವರಿ ನಿಗಮದ ಅಧೀಕ್ಷಕ ಎಂಜಿನಿಯರ್ ರಘುರಾಂ ಅವರ ಸಂಪರ್ಕದಲ್ಲಿದ್ದು ಬೆಳೆ ಬೆಳೆದ ನಂತರ ಕಾಮಗಾರಿ ಮಾಡಿ ಈಗ ನೀರು ಹರಿಸುವಂತೆ ಹೇಳಿದರೂ ಇನ್ನೂ ಹರಿಸಿಲ್ಲ. ಅವರಿಗೆ ಯಾರ ಒತ್ತಡವೋ ಏನೋ ಗೊತ್ತಿಲ್ಲ ಕಾಮಗಾರಿ ಆರಂಭಿಸಿದ್ದಾರೆ.**

**- ಎ.ಎಲ್.ಕೆಂಪೂಗೌಡ ರಾಜ್ಯ ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ**

ದೊಡ್ಡ ದೊಡ್ಡ ನಾಲೆಗಳನ್ನು ಬೇಗ ಮಾಡಿದ್ದಾರೆ. ಸಣ್ಣ ಕಾಲುವೆಗಳನ್ನು 15 ದಿನಗಳಲ್ಲಿ ಕಾಮಗಾರಿ ಮುಗಿಸಬಹುದಾಗಿದೆ. ಆದರೆ, ಬೇಕಂತಲೇ ತಡ ಮಾಡುತ್ತಿದ್ದಾರೆ.

ರೈತರ ಜೀವ ತೆಗೆಯಲು ಅಧಿಕಾರಿಗಳು, ಜನಪ್ರತಿನಿಧಿಗಳು ನಿಂತಿದ್ದಾರೆ. ಕಾವೇರಿ ನೀರಾವರಿ ನಿಗಮದ ಅಧೀಕ್ಷಕ ಇಂಜಿನಿಯರ್ ರಘುರಾಂ ಅವರು ಸ್ಥಳಕ್ಕೆ ಬಂದು ನೀರು ಬಿಡುವುದಾಗಿ ಆಶ್ವಾಸನೆ ಕೊಡಬೇಕು ಎಂದು ಒತ್ತಾಯಿಸಿದರು.


# ನರೇಗಾದಲ್ಲಿ ಮಹಿಳಾ ಕಾರ್ಮಿಕರಿಗೆ ಅನ್ಯಾಯ ಆರೋಪ

• ಉದಯವಾಹಿನಿ, ಚಿಕ್ಕನಾಯಕನಹಳ್ಳಿ

ತಾಲ್ಲೂಕಿನಲ್ಲಿ ಭ್ರಷ್ಟ ಅಧಿಕಾರಿಗಳಿಂದ ನರೇಗಾ ಯೋಜನೆಯಡಿ ಮಹಿಳಾ ಕಾರ್ಮಿಕರಿಗೆ ಅನ್ಯಾಯವಾಗುತ್ತಿದೆ. ಈ ಬಗ್ಗೆ ಸರ್ಕಾರ ಸೂಕ್ತ ಕ್ರಮಕೈಗೊಳ್ಳಬೇಕು ಎಂದು ಹಿಂದ್ ಮಜ್ದೂರ್ ಸಭಾ ರಾಜ್ಯಾಧ್ಯಕ್ಷ ಎಸ್.ಕುಮಾರ್ ಆಗ್ರಹಿಸಿದರು. ನರೇಗಾ ಯೋಜನೆ ಸಮರ್ಪಕ ಅನುಷ್ಠಾನಕ್ಕೆ, ನಿರ್ಲಕ್ಷಿಸುವ ಅಧಿಕಾರಿಗಳ ಮೇಲೆ ಕ್ರಮಕ್ಕೆ ಒತ್ತಾಯಿಸಿ ರಾಜ್ಯ ಮಹಿಳಾ ಕಾರ್ಮಿಕರ ಸಹಯೋಗದಲ್ಲಿ ಪಟ್ಟಣದ ಕಂಬಳಿ ಸೊಸೈಟಿಯಿಂದ ತಾಲ್ಲೂಕು ಕಚೇರಿವರೆಗೆ ಮೆರವಣಿಗೆ ಮೂಲಕ ತೆರಳಿ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.

ತಾಲ್ಲೂಕಿನಲ್ಲಿ ಸಾವಿರಾರು ಮಹಿಳಾ ಕಾರ್ಮಿಕರಿದ್ದಾರೆ.

ಪ್ರತಿ ಹಳ್ಳಿಗಳಲ್ಲೂ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಿಂದ ತಮ್ಮ ಬಡತನವನ್ನು ಮೆಟ್ಟಿ ನಿಂತು ತನ್ನ ಕುಟುಂಬ ನಿರ್ವಹಿಸಲು ಮಹಿಳಾ ಕಾರ್ಮಿಕರು ದುಡಿಯುತ್ತಿದ್ದಾರೆ. ಗ್ರಾಮ ಪಂಚಾಯಿತಿಗಳಲ್ಲಿ ಮಹಿಳಾ ಕಾರ್ಮಿಕರು ಕೆಲಸ ಕೇಳಲು ಹೋದಾಗ ಕೆಲಸವಿಲ್ಲವೆಂದು ಉತ್ತರ ನೀಡುತ್ತಾರೆ ಎಂದರು. ಸಂಚಲನ ಅಧ್ಯಕ್ಷೆ ಮಂಜುಳಾ ಮಾತನಾಡಿ, ಕೆಲಸ ಕೇಳಲು ಹೋದಾಗ ಎರಡು ವಾರ ಕೆಲಸ ನೀಡಿದರು. ನಂತರ ಕೊಳಚೆ ಶುಚಿಗೊಳಿಸುವ ಕೆಲಸ ನೀಡಿ, ಮಾಡಿದರೆ ಮಾಡಿ ಇಲ್ಲವೇ ಬಿಡಿ ಎಂದರು.


ಉದಯವಾಹಿನಿ ಚಿತ್ರ

**ಮಹಿಳಾ ಕಾರ್ಮಿಕರಿಗೂ ಪುರುಷ ಕಾರ್ಮಿಕ ಸಮಾನವಾದ ಕೆಲಸ ಮಾಡುವಂತೆ ಸೂಚಿಸುತ್ತಾರೆ. ಅಲ್ಲದೆ ಕೊಳಚೆ ಪ್ರದೇಶ ಶುಚಿಗೊಳಿಸುವಂತೆ, ಕೆರೆ, ಕಟ್ಟೆಗಳಲ್ಲಿ ಕೆಲಸ ಮಾಡುವಂತೆ ತಿಳಿಸಿ ಮಹಿಳಾ ಕಾರ್ಮಿಕರನ್ನು ಹೆದರಿಸುವ ಕೆಲಸ ಮಾಡುತ್ತಿದ್ದಾರೆ. ಯಂತ್ರೋಪಕರಣಗಳಿಂದ ಕೆಲಸ ಮಾಡಿಸುತ್ತಿದ್ದಾರೆ. ಈ ಬಗ್ಗೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.**

ನಮ್ಮ ಹಕ್ಕನ್ನು ಅಧಿಕಾರಿಗಳು ಕಸಿಯುತ್ತಿದ್ದಾರೆ. ಪಿಡಿಒ ಗ್ರಾಮ ಪಂಚಾಯಿತಿ ಸದಸ್ಯರ ಜೊತೆ ಶಾಮೀಲಾಗಿ ಯಂತ್ರೋಪಕರಣಗಳಿಂದ ಕೆಲಸ ಮಾಡಿಸಿ ನಮಗೆ ಕೆಲಸವಿಲ್ಲದಂತೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

# ಭ್ರೂಣ ಪತ್ತೆ, ಹತ್ಯೆ ಜಾಲ ಮರುಸಕ್ರಿಯವಾಗಿರುವ ಸಂಶಯ

## ರಾಮನಗರ ಜಿಲ್ಲಾಸ್ಪತ್ರೆಯಲ್ಲೇ ಭ್ರೂಣಲಿಂಗ ಪತ್ತೆ ಶಂಕೆ, ಸ್ಕ್ಯಾನಿಂಗ್ ಯಂತ್ರ ಸೀಜ್ ಮಾಡಿದ ಅಧಿಕಾರಿಗಳು

• ಉದಯವಾಹಿನಿ, ರಾಮನಗರ

ಭ್ರೂಣ ಪತ್ತೆ, ಹತ್ಯೆ ಜಾಲ ರಾಮನಗರದಲ್ಲಿ ಮತ್ತೆ ಸಕ್ರಿಯವಾಗಿದೆ ಎಂದು ದೂರುಗಳು ಕೇಳಿಬಂದಿವೆ. ಇದೀಗ ಜಿಲ್ಲಾ ಆಸ್ಪತ್ರೆಯಲ್ಲಿಯೇ ಭ್ರೂಣ ಲಿಂಗ ಪತ್ತೆ ಮಾಡಿರುವ ಆರೋಪದ ಮೇರೆಗೆ ಆಸ್ಪತ್ರೆಯಲ್ಲಿನ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಮಿಷಿನ್‌ಅನ್ನು ಸೀಜ್ ಮಾಡಲಾಗಿದೆ.

ಬೆಂಗಳೂರು ಆರೋಗ್ಯ, ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ ಡಿ.ಡಿ ಡಾ. ವಿವೇಕ್ ದೊರೈ ಅವರು ಸ್ಕ್ಯಾನಿಂಗ್ ಕೇಂದ್ರವನ್ನು ಸಂಜೆ ಸೀಜ್ ಮಾಡಿದ್ದಾರೆ. ಬೆಂಗಳೂರು ತಾತಗುಣಿ ಮೂಲದ ಪೋಷಕರು ಈಗಾಗಲೇ ಎರಡು ಹೆಣ್ಣು ಮಕ್ಕಳಿದ್ದಾರೆ. ಮೂರನೇಯದ್ದು ಹೆಣ್ಣಾಗುತ್ತಿದೆ, ನಮಗೆ ಬೇಡ ಎಂದು ಪೋಷಕರು ಭ್ರೂಣ ಲಿಂಗ ಪತ್ತೆ, ಹತ್ಯೆ ಮಾಡಿದ್ದಾರೆ ಎಂದು ದೂರುಗಳು ಕೇಳಿಬಂದಿದೆ. ಆಶಾ ಕಾರ್ಯಕರ್ತೆಯರ ಸಹಾಯದಿಂದ ರಾಮನಗರ ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯರ ನೆರವಿನೊಂದಿಗೆ ಅಲ್ಟ್ರಾಸೌಂಡ್ ಸ್ಕ್ಯಾನ್ ಮೂಲಕ ಭ್ರೂಣ ಲಿಂಗ ಪತ್ತೆ ಮಾಡಲಾಗಿದೆ. ನಂತರ ನಿರ್ಜನ ಪ್ರದೇಶದ ಮನೆಯೊಂದರಲ್ಲಿ ಚಿಕಿತ್ಸೆ ನೀಡಲಾಗಿದೆ



ತಪ್ಪಿತಸ್ಥರ ವಿರುದ್ಧ ಕ್ರಮ

ಎಂದು ಆರೋಪ ಕೇಳಿಬಂದಿದೆ. ಭ್ರೂಣ ಲಿಂಗ ಹತ್ಯೆ ಚಿಕಿತ್ಸೆ ವೇಳೆ ಮಹಿಳೆಗೆ ರಕ್ತಸ್ರಾವವಾಗಿದೆ. ಹೆಚ್ಚಿನ ಚಿಕಿತ್ಸೆಗೆ ಬೆಂಗಳೂರಿನ ವಾಣಿ ವಿಲಾಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ವೇಳೆ ಭ್ರೂಣ ಲಿಂಗ ಹತ್ಯೆಯಾಗಿರುವ ಮಾಹಿತಿ ಬಹಿರಂಗೊಂಡಿದೆ. ರಾಮನಗರ ಜಿಲ್ಲಾ ಆಸ್ಪತ್ರೆಯಲ್ಲಿ ಸ್ಕ್ಯಾನ್ ಮಾಡಲಾಗಿದೆಯೇ ಎಂಬ ಶಂಕೆಯ ಮೇರೆಗೆ ಪರಿಶೀಲಿಸಿ ಸ್ಕ್ಯಾನಿಂಗ್ ಕೇಂದ್ರವನ್ನು ಸೀಜ್ ಮಾಡಲಾಗಿದೆ. ಈ ಕುರಿತು ಪ್ರತಿಕ್ರಿಯಿಸಿದ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಮಂಜುನಾಥ್ ಅವರು, ಜಿಲ್ಲಾ ಆಸ್ಪತ್ರೆಯ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಕೇಂದ್ರದಲ್ಲಿ ಭ್ರೂಣ ಲಿಂಗ ಪತ್ತೆ ಮಾಡಲಾಗಿದೆ ಎಂದು ಅನುಮಾನದ ಮೇರೆಗೆ ಸ್ಕ್ಯಾನಿಂಗ್ ಮೆಷಿನ್‌ನಲ್ಲಿನ ದಾಖಲೆಗಳು ನಾಶವಾಗುವುದನ್ನು ತಡೆಯಲು ಸೀಜ್ ಮಾಡಲಾಗಿದೆ. ಈ ಕುರಿತು ವೈದ್ಯರು ಆರೋಪವನ್ನು ನಿರಾಕರಿಸಿದ್ದಾರೆ ಎಂದರು.

**ಆರೋಪ ಸಾಬೀತಾದರೆ ಕ್ರಮ**

**ರಾಮನಗರ ಜಿಲ್ಲಾ ಆಸ್ಪತ್ರೆಯಲ್ಲಿ ಭ್ರೂಣ ಲಿಂಗ ಪತ್ತೆ ದೂರು ಕೇಳಿಬಂದ ಹಿನ್ನೆಲೆಯಲ್ಲಿ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಮಿಷನ್ ಅನ್ನು ಸೀಜ್ ಮಾಡಲಾಗಿದೆ. ಬೆಂಗಳೂರಿನ ಪೋಷಕರು ಹೆಣ್ಣು ಭ್ರೂಣವನ್ನು ತೆಗೆಸಲು ರಾಮನಗರ ಆಸ್ಪತ್ರೆಯಲ್ಲಿ ಸ್ಕ್ಯಾನ್ ಮಾಡಿಸಿದ್ದರು ಎಂಬ ಆರೋಪ ಈಗ ಕೇಳಿಬಂದಿದೆ. ಈ ಸಂಬಂಧ ತನಿಖೆ ನಡೆಯುತ್ತಿದ್ದು, ಆರೋಪ ಸಾಬೀತಾದರೆ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.**

**ಬೆಂಗಳೂರು ವಾಣಿ ವಿಲಾಸ್ ಆಸ್ಪತ್ರೆಯಲ್ಲಿ ಭ್ರೂಣ ಲಿಂಗ ಹತ್ಯೆ ಪ್ರಕರಣದ ತನಿಖೆಯಲ್ಲಿ ರಾಮನಗರದ ಜಿಲ್ಲಾ ಆಸ್ಪತ್ರೆಯಲ್ಲಿ ಸ್ಕ್ಯಾನ್ ಮಾಡಲಾಗಿದೆ ಎಂದು ಆರೋಪ ಕೇಳಿಬಂದಿದೆ. ದಾಖಲೆಗಳು ನಾಶವಾಗದಿರಲಿ ಎಂದು ಅಲ್ಟ್ರಸೌಂಡ್ ಸ್ಕ್ಯಾನಿಂಗ್ ಯಂತ್ರವನ್ನು ಸೀಜ್ ಮಾಡಲಾಗಿದೆ. ತನಿಖೆ ಮುಂದುವರಿಯುತ್ತಿದೆ. ಆರೋಪ ಸಾಬೀತಾದರೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು.**

**-ಡಾ. ನಿರಂಜನ್**
**ಬೆಂಗಳೂರು ದಕ್ಷಿಣ ಜಿಲ್ಲೆಯ ಡಿಎಚ್‌ಒ**





# ಮಿನಿ ನ್ಯೂಸ್

## ದಸರಾ ಗಜಪಡೆಗೆ ಎರಡನೇ ತಂಡಕ್ಕೆ ತೂಕಪರೀಕ್ಷೆ, ತಾಲೀಮು

• ಉದಯವಾಹಿನಿ, ಮೈಸೂರು

ವಿಶ್ವವಿಖ್ಯಾತ ಮೈಸೂರು ದಸರಾದಲ್ಲಿ ಪಾಲ್ಗೊಳ್ಳಲು ಎರಡನೇ ತಂಡದಲ್ಲಿ ಬಂದ ಗಜಪಡೆಗೆ ಇಂದು ತೂಕ ಪರೀಕ್ಷೆ ನಡೆಸಲಾಯಿತು. ನಿನ್ನೆಯಷ್ಟೇ ಕಾಡಿನಿಂದ ಅರಮನೆ ಅಂಗಳಕ್ಕೆ ಪ್ರವೇಶ ಮಾಡಿದ ಎರಡನೇ ತಂಡದ ಐದು ಆನೆಗಳಿಗೆ ಧನ್ವಂತರಿ ರಸ್ತೆಯಲ್ಲಿರುವ ಸಾಯಿರಾಂ ತೂಕಮಾಪನ ಕೇಂದ್ರದಲ್ಲಿ ತೂಕ ಪರಿಶೀಲನೆ ಮಾಡಲಾಯಿತು. ಹೇಮಾವತಿ-2440 ಕೆಜಿ, ಶ್ರೀಕಂಠ-5540 ಕೆಜಿ, ಸುಗ್ರೀವ-5545 ಕೆಜಿ, ರೂಪ-3320 ಕೆಜಿ, ಗೋಪಿ-4990 ಕೆಜಿ ತೂಕ ಹೊಂದಿವೆ.

ಮೊದಲ ಹಂತದ ಕ್ಯಾಪ್ಟನ್ ಅಭಿಮನ್ಯು ನೇತೃತ್ವದ ಗಜಪಡೆಗಳ ತೂಕ ನೋಡುವುದಾದರೆ ಅಭಿಮನ್ಯು 5360 ಕೆಜಿ, ಧನಂಜಯ-5310 ಕೆಜಿ, ಕಾವೇರಿ-3010 ಕೆಜಿ, ಲಕ್ಷ್ಮಿ-3730 ಕೆಜಿ, ಭೀಮ-5465 ಕೆಜಿ, ಏಕಲವ್ಯ-5305 ಕೆಜಿ, ಮಹೇಂದ್ರ-5120 ಕೆಜಿ, ಕಂಜನ್-4880 ಕೆಜಿ, ಪ್ರಶಾಂತ-5110 ಕೆಜಿ ತೂಗಿವೆ. ಆನೆಗಳಿಗೆ ಪ್ರತಿನಿತ್ಯ ಪೌಷ್ಟಿಕ ಆಹಾರ ನೀಡಲಾಗುತ್ತಿದ್ದು, ಅಂಬಾರಿ ಸಂದರ್ಭದಲ್ಲಿ ಯಾವುದೇ ಸದ್ದುಗದ್ದಲದಿಂದ ವಿಚಲಿತವಾಗದಂತೆ ತರಬೇತಿ ನೀಡಲಾಗುತ್ತಿದ್ದು, ಬೆಳಿಗ್ಗೆ ಮತ್ತು ಸಂಜೆ ಅರಮನೆಯಿಂದ ಬನ್ನಿಮಂಟಪದವರೆಗೂ ತಾಲೀಮು ನಡೆಸಲಾಗುತ್ತಿದೆ.

## ಶಾಸಕ ಸ್ಥಾನದಿಂದ ಜಿ.ಟಿ.ದೇವೇಗೌಡ ಅನರ್ಹಗೊಳಿಸಲು ಒತ್ತಾಯ

• ಉದಯವಾಹಿನಿ, ಕನಕಪುರ

ಶಾಸಕ ಜಿ.ಟಿ.ದೇವೇಗೌಡ ಅವರನ್ನು ಶಾಸಕ ಸ್ಥಾನದಿಂದ ಅನರ್ಹಗೊಳಿಸುವಂತೆ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಸೋಮವಾರ ತಾಲ್ಲೂಕು ಕಚೇರಿ ಮುಂಭಾಗ ಒತ್ತಾಯಿಸಿ ತಹಶೀಲ್ದಾರ್ ಸಂಜಯ್.ಎಂ ಅವರ ಮೂಲಕ ಸ್ಪೀಕರ್‌ಗೆ ಮನವಿ ಸಲ್ಲಿಸಿದರು. ವಿಧಾನಸೌಧದಲ್ಲಿ ಜನಪ್ರತಿನಿಧಿಗಳ ಮುಂದೆ ದಲಿತರನ್ನು ಅವಮಾನಿಸಿರುವ ಶಾಸಕ ಜಿ.ಟಿ.ದೇವೇಗೌಡ ಅವರನ್ನು ಶಾಸಕ ಸ್ಥಾನದಿಂದ ಅನರ್ಹಗೊಳಿಸಬೇಕು.

ರಾಜಕೀಯವಾಗಿ ಬೆಳೆಯಲು ದಲಿತರು ಬೇಕು. ಬೆಳೆದ ಮೇಲೆ ದಲಿತರನ್ನು ಅವಮಾನಿಸುವುದು ಖಂಡನೀಯ ಎಂದು ದಲಿತ ಮುಖಂಡ ರಾಂಪುರ ನಾಗೇಶ್ ಕಿಡಿ ಕಾರಿದರು. ದಲಿತರನ್ನು ಅವಮಾನಿಸಿರುವ ಜಿ.ಟಿ. ದೇವೇಗೌಡ ಅವರು ಸಾರ್ವಜನಿಕರವಾಗಿ ಕ್ಷಮೆಯಾಚಿಸಬೇಕು. ಅವರ ವಿರುದ್ಧ ಸ್ಪೀಕರ್ ಶಿಸ್ತುಕ್ರಮ ಜರುಗಿಸಬೇಕು. ಅದಕ್ಕಾಗಿ ರಾಜ್ಯದ ಎಲ್ಲೆಡೆ ದಲಿತ ಮುಖಂಡರು ಒತ್ತಾಯದ ಮನವಿ ಪತ್ರವನ್ನು ಸ್ಪೀಕರ್ ಅವರಿಗೆ ಸಲ್ಲಿಸುತ್ತಿದ್ದೇವೆ ಎಂದರು. ಒಂದು ವೇಳೆ ಅವರು ಸಾರ್ವಜನಿಕವಾಗಿ ಕ್ಷಮೆಯಾಚಿಸದಿದ್ದರೆ, ಸರ್ಕಾರವು ಅವರ ವಿರುದ್ಧ ಶಿಸ್ತು ಕ್ರಮ ಜರುಗಿಸದಿದ್ದರೆ ಅವರ ಮನೆಗೆ ಮುತ್ತಿಗೆ ಹಾಕಲಾಗುವುದು ಎಂದು ಎಚ್ಚರಿಕೆ ನೀಡಿದರು. ತಹಶೀಲ್ದಾರ್ ಸಂಜಯ್.ಎಂ ದಲಿತ ಮುಖಂಡರಿಂದ ಮನವಿ ಪತ್ರ ಸ್ವೀಕರಿಸಿದರು.

## ರಾಜಣ್ಣಗೆ ಸಚಿವ ಸ್ಥಾನಕ್ಕೆ ಆಗ್ರಹ

• ಉದಯವಾಹಿನಿ, ತುಮಕೂರು

ಸಚಿವ ಸಂಪುಟದಿಂದ ಕೆ.ಎನ್.ರಾಜಣ್ಣ ಅವರನ್ನು ವಜಾಗೊಳಿಸಿರುವುದನ್ನು ಖಂಡಿಸಿ ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಕೆಎನ್‌ಆರ್ ಅಭಿಮಾನಿ ಬಳಗದ ನೇತೃತ್ವದಲ್ಲಿ ಧರಣಿ ಸತ್ಯಾಗ್ರಹ ನಡೆಯಿತು. ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ವಿವಿಧ ಸಮುದಾಯದ ಮುಖಂಡರು ಸತ್ಯಾಗ್ರಹದಲ್ಲಿ ಪಾಲ್ಗೊಂಡಿದ್ದರು. ರಾಜಣ್ಣ ಅವರಿಗೆ ಮತ್ತೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿದರು. ರಾಜಣ್ಣ ಅವರು ಹಿಂದುಳಿದ, ಶೋಷಿತರ ಧ್ವನಿಯಾಗಿ ಕೆಲಸ ಮಾಡುತ್ತಿದ್ದಾರೆ. ಪ್ರಭಾವಿ ನಾಯಕರ ವಿರುದ್ಧ ಕ್ರಮ ತೆಗೆದುಕೊಂಡ ಸಮಯದಲ್ಲಿ ಕಾಂಗ್ರೆಸ್ ಹೀನಾಯ ಸ್ಥಿತಿ ಅನುಭವಿಸಿತ್ತು. ಈಗ ರಾಜಣ್ಣ ಅವರನ್ನು ವಜಾಗೊಳಿಸಿರುವುದು ವಿಷಾದನೀಯ ಎಂದು ಧರಣಿನಿರತರು ಅಸಮಾಧಾನ ವ್ಯಕ್ತಪಡಿಸಿದರು. ಜನಪರ ಯೋಜನೆ ಜಾರಿಗೊಳಿಸಿ, ಜನರ ವಿಶ್ವಾಸ ಗಳಿಸಿದ್ದ ದೇವರಾಜ ಅರಸು ಅವರನ್ನು ಕಾಂಗ್ರೆಸ್ ಕಡೆಗಣಿಸಿತ್ತು. ಈಗ ರಾಜಣ್ಣ ಅವರಿಗೆ ಅಪಮಾನ ಮಾಡಲಾಗಿದೆ. ಇದು ಅಭಿಮಾನಿಗಳ ನೋವಿಗೆ ಕಾರಣವಾಗಿದೆ ಎಂದು ಬೇಸರ ಹೊರ ಹಾಕಿದರು.

## ಕಾಳಸಂತೆಯಲ್ಲಿ ಮಾರುತ್ತಿದ್ದ 42 ಕ್ವಿಂಟಲ್ ಅನ್ನಭಾಗ್ಯದ ಅಕ್ಕಿ ವಶ

• ಉದಯವಾಹಿನಿ, ಸೋಮವಾರಪೇಟೆ

ಕಾಳಸಂತೆಯಲ್ಲಿ ಮಾರಾಟ ಮಾಡಲು ಸಂಗ್ರಹಿಸಿದ್ದ 42 ಕ್ವಿಂಟಲ್ ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಇಲ್ಲಿನ ಆಹಾರ ಇಲಾಖೆ. ಪೊಲೀಸ್ ಇಲಾಖೆಯ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

ಕೊಣನೂರಿನ ಇದ್ರಿಸ್ ಎಂಬಾತ ಅಕ್ಕಿಯನ್ನು ಖರೀದಿಸಿ ಮಾರಾಟ ಮಾಡಲು ಕೊಂಡೊಯ್ಯುವ ಸಂದರ್ಭ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ ವಾಹನದೊಂದಿಗೆ ಅಕ್ಕಿಯನ್ನು ವಶಪಡಿಸಿಕೊಂಡರು. ಸ್ಥಳೀಯರು ನೀಡಿದ ಮಾಹಿತಿ ಮೇರೆಗೆ ದಾಳಿ ನಡೆಸಿದ್ದು, 1,42,970ರೂ.ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದ್ದು, ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಆಹಾರ ಇಲಾಖೆ ನಿರೀಕ್ಷಕಿ ಯಶಸ್ವಿನಿ ತಿಳಿಸಿದರು.

## ಗಣೇಶ ಮೂರ್ತಿ ಪ್ರತಿಷ್ಠಾಪನೆಯ ನಿಯಮ ಪಾಲಿಸಿ: ಎಸ್‌ಐ

• ಉದಯವಾಹಿನಿ, ಕೆ.ಆರ್.ನಗರ

ಗೌರಿ-ಗಣೇಶ ಮೂರ್ತಿ ಪ್ರತಿಷ್ಠಾಪನೆ ಮಾಡುವ ಆಯೋಜಕರು ಸರ್ಕಾರದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು, ಯಾವುದೇ ಅಹಿತಕರ ಘಟನೆ ನಡೆಯದಂತೆ ಎಚ್ಚರ ವಹಿಸಬೇಕು ಎಂದು ಸಬ್ ಇನ್‌ಸ್ಪೆಕ್ಟರ್ ಸಿ.ಎಂ.ಲಿಂಗರಾಜು ತಿಳಿಸಿದರು. ಇಲ್ಲಿನ ಪೊಲೀಸ್ ಠಾಣೆಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಗೌರಿ-ಗಣೇಶ ಮೂರ್ತಿ ಪ್ರತಿಷ್ಠಾಪನೆ ಮತ್ತು ವಿಸರ್ಜನೆ ಮಾಡುವ ಆಯೋಜಕರು ಕಡ್ಡಾಯವಾಗಿ ಸ್ಥಳೀಯ ಸಂಸ್ಥೆಗಳು, ಅಗ್ನಿಶಾಮಕ, ಸೆಸ್ಕ್, ಪೊಲೀಸ್ ಇಲಾಖೆ ಸೇರಿದಂತೆ ಸಂಬಂಧಿಸಿದ ಇಲಾಖೆಯಿಂದ ಅನುಮತಿ ಪಡೆಯಬೇಕು ಎಂದರು. ಪ್ರತಿಷ್ಠಾಪನೆಯ ಸ್ಥಳ ಖಾಸಗಿ ಜಾಗವಾಗಿದ್ದರೆ ಸ್ಥಳದ ಮಾಲೀಕರಿಂದ ಅನುಮತಿ ಪಡೆಯಬೇಕು, ಡಿ.ಜೆ ಬಳಸುವುದನ್ನು ಸರ್ಕಾರ ಕಡ್ಡಾಯವಾಗಿ ನಿಷೇಧಿಸಲಾಗಿದ್ದು, ರಾತ್ರಿ 10ರಿಂದ ಬೆಳಿಗ್ಗೆ 6ಗಂಟೆ ವರೆಗೆ ಧ್ವನಿವರ್ಧಕ ಬಳಸುವಂತಿಲ್ಲ, ಬಳಸುವುದಾದರೆ ಕಡ್ಡಾಯವಾಗಿ ಅನುಮತಿ ಪಡೆಯಬೇಕು ಎಂದು ತಿಳಿಸಿದರು. ಸಾರ್ವಜನಿಕ ಸುರಕ್ಷತೆಗೆ ಹೆಚ್ಚು ಒತ್ತು ಕೊಡಬೇಕು. ಪರಿಸರ ಮಾಲಿನ್ಯ ಉಂಟಾಗದಂತೆ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಪ್ರತಿಷ್ಠಾಪನೆ ಸ್ಥಳದಲ್ಲಿ ಸಿ.ಸಿ ಟಿವಿ ಕ್ಯಾಮೆರಾ ಅಳವಡಿಸಬೇಕು, ರಾತ್ರಿ. ಹಗಲು ವೇಳೆಯಲ್ಲಿ ಕಾವಲಿಗಾಗಿ ಸ್ವಯಂ ಸೇವಕರನ್ನು ನೇಮಿಸಿಕೊಳ್ಳಬೇಕು ಎಂದರು. ಮೂರ್ತಿಗಳನ್ನು ಸುರಕ್ಷಿತ, ನಿಯೋಜಿಸಿದ ಕಡೆ ವಿಸರ್ಜನೆ ಮಾಡಬೇಕು. ಇದರ ಸಂಪೂರ್ಣ ಜವಾಬ್ದಾರಿ ಆಯೋಜಕರದ್ದಾಗಿದೆ. ಸಾರ್ವಜನಿಕ ಸಂಚಾರಕ್ಕೆ ತೊಂದರೆ ಆಗದಂತೆ ಕಾರ್ಯಕ್ರಮ ಆಯೋಜಿಸಬೇಕು, ಮುಂಚಿತವಾಗಿ ಮಾಹಿತಿ ನೀಡಬೇಕು ಎಂದರು.



## ಚಿಗರಿ ಬಸ್‌ಗಳು ಮಾರ್ಗಮಧ್ಯೆ ಕೆಟ್ಟು ನಿಲ್ಲುತ್ತಿವೆ, ಬೆಂಕಿ ಕಾಣಿಸಿಕೊಳ್ಳುತ್ತಿದೆ, ರಾಡ್‌ಗಳು ಕಿತ್ತು ಬಂದಿವೆ ಎಂದು ಆಕ್ರೋಶ

# ಹುಬ್ಬಳ್ಳಿ ಧಾರವಾಡದಲ್ಲಿ ಬಿಆರ್‌ಟಿಎಸ್ ಅವ್ಯವಸ್ಥೆ: ಪಾಲಿಕೆ ಸದಸ್ಯರ ಆಕ್ರೋಶ

• **ಉದಯವಾಹಿನಿ ಹುಬ್ಬಳ್ಳಿ**

ಬಿಆರ್‌ಟಿಎಸ್ ಮಾರ್ಗದ ಅವ್ಯವಸ್ಥೆ, ಚಿಗರಿ ಬಸ್‌ಗಳ ಕಾರ್ಯಾಚರಣೆಯಲ್ಲಿ ಸಮಸ್ಯೆ ಕುರಿತು ಇಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಸದಸ್ಯರಿಂದ ಆಕ್ರೋಶ ವ್ಯಕ್ತವಾಯಿತು. ಶೂನ್ಯವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದ ಬಿಜೆಪಿಯ ಶಿವು ಹಿರೇಮಠ, 'ಚಿಗರಿ ಬಸ್‌ಗಳು ಮಾರ್ಗಮಧ್ಯೆ ಕೆಟ್ಟು ನಿಲ್ಲುತ್ತಿವೆ. ಬೆಂಕಿ ಕಾಣಿಸಿಕೊಳ್ಳುತ್ತಿದೆ. ಮಾರ್ಗದಲ್ಲಿ ರಾಡ್‌ಗಳು ಕಿತ್ತು ಬಂದಿವೆ' ಎಂದು ಆಕ್ರೋಶ ವ್ಯಕ್ತಪಡಿಸಿದರು

'ಬಿಆರ್‌ಟಿಎಸ್ ವ್ಯವಸ್ಥಾಪಕ ನಿರ್ದೇಶಕರು (ಎಂ.ಡಿ) ಸಭೆಗೆ ಹಾಜರಾಗದೆ ಮೇಯರ್, ಸದನಕ್ಕೆ ಅಗೌರವ ತೋರಿದ್ದಾರೆ' ಎಂದು ಸದಸ್ಯರು ಆಕ್ರೋಶ ಹೊರಹಾಕಿದರು. 'ಜಿಲ್ಲಾಧಿಕಾರಿ ಸಭೆಯಲ್ಲಿ ಪಾಲ್ಗೊಂಡ ಕಾರಣ, ಎಂ.ಡಿ ಇಲ್ಲಿ ಬಂದಿಲ್ಲ' ಎಂದು ಸಂಸ್ಥೆಯ ಸಾರ್ವಜನಿಕ ಸಂಪರ್ಕಾಧಿಕಾರಿ ತಿಳಿಸಿದರು.

'ಹಳೇ ಹುಬ್ಬಳ್ಳಿ ಭಾಗದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಪಾಲಿಕೆಯವರು ಕ್ರಮ ಕೈಗೊಳ್ಳುತ್ತಿಲ್ಲ. 2023-24ರಲ್ಲಿ 5,595 ಬೀದಿ ನಾಯಿಗಳನ್ನು ಹಿಡಿದು ಸಂತಾನಶಕ್ತಿಹರಣ ಶಸ್ತ್ರಚಿಕಿತ್ಸೆ (ಎಬಿಸಿ) ಮಾಡಲಾಗಿದೆ ಎಂದು ಅಧಿಕಾರಿಗಳು ಹೇಳುತ್ತಾರೆ. ಪ್ರತಿ ದಿನ 15 ನಾಯಿಗಳಿಗೆ ಎಬಿಸಿ ಮಾಡಿದರೂ ಸಮಸ್ಯೆ ಏಕೆ ಬಗೆಹರಿದಿಲ್ಲ' ಎಂದು ಎಐಎಂಐಎಂ ಸದಸ್ಯ ನಜೀರ್ ಅಹ್ಮದ್ ಹೊನ್ಯಾಳ ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಪಾಲಿಕೆಯ ಮುಖ್ಯ ಆರೋಗ್ಯಾಧಿಕಾರಿ ಶ್ರೀಧರ ದಂಡಪ್ಪನವರ, 'ಎಬಿಸಿಗಾಗಿ 2022ರಲ್ಲಿ ಟೆಂಡರ್ ಕರೆಯಲಾಗಿತ್ತು. ಸದ್ಯ ಒಂದು ತಂಡ ಮಾತ್ರ ಕಾರ್ಯನಿರ್ವಹಿಸುತ್ತಿದೆ.

ತಂಡಗಳನ್ನು ಹೆಚ್ಚಿಸಿ, ಇನ್ನು ಮುಂದೆ ವರ್ಷಕ್ಕೆ 10ರಿಂದ 12 ಸಾವಿರ ನಾಯಿಗಳನ್ನು ಹಿಡಿದು ಎಬಿಸಿ ಮಾಡಲಾಗುವುದು' ಎಂದರು. ಕಿರು ಅಕ್ಕ ಕೆಫೆ' ಆರಂಭಿಸಲು ಹುಬ್ಬಳ್ಳಿಯ ಜೆ.ಸಿ ನಗರದ ಟೌನ್ ಹಾಲ್ ಆವರಣದಲ್ಲಿ ಜಾಗ ನೀಡುವುದಕ್ಕೆ ಬಿಜೆಪಿಯ ವೀರಣ್ಣ ಸವಡಿ, ಈರೇಶ ಅಂಚಟಗೇರಿ ಆಕ್ಷೇಪಿಸಿದರು.

'ನಾಟಕ, ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಇರುವ ಟೌನ್‌ಹಾಲ್ ಅಭಿವೃದ್ಧಿಪಡಿಸಬೇಕು. ಅಲ್ಲಿ ಅಕ್ಕ ಕೆಫೆಗೆ ಜಾಗ ನೀಡಬಾರದು. ಅದರ ನಿರ್ವಹಣೆಗೆ ಪಾಲಿಕೆಯಿಂದ ಯಾವುದೇ ಅನುದಾನ ನೀಡಬಾರದು' ಎಂದರು. 'ಟೌನ್‌ಹಾಲ್ ಬದಲು ಬೇರೆ ಕಡೆ ಸೂಕ್ತ ಜಾಗ ಒದಗಿಸಬೇಕು' ಎಂದು ಮೇಯರ್ ಜ್ಯೋತಿ ಪಾಟೀಲ ಹೇಳಿದರು. ಹಳೇ ಹುಬ್ಬಳ್ಳಿ ಆಸ್ಪತ್ರೆಯನ್ನು ಆರೋಗ್ಯ ಇಲಾಖೆ, ಮಹಾನಗರ ಪಾಲಿಕೆ ಜಂಟಿಯಾಗಿ ನಿರ್ವಹಿಸಬೇಕು. ಆರೋಗ್ಯ ಸುರಕ್ಷಾ ಸಮಿತಿಯಲ್ಲಿ ಮೇಯರ್ ಅವರನ್ನು ಸದಸ್ಯರನ್ನಾಗಿ ಸೇರಿಸಬೇಕು ಎಂದು ಮೇಯರ್ ಆದೇಶಿಸಿದರು.

''ಅಮ್ಮಿನಬಾವಿಯಿಂದ ಧಾರವಾಡಕ್ಕೆ ಬರುವ 24×7 ಕುಡಿಯುವ ನೀರಿನ ಕಾಮಗಾರಿಯ ಪೈಪ್ ಲೈನ್ ಅಳವಡಿಕೆ ಕಾರ್ಯ ಅಪೂರ್ಣವಾಗಿದೆ' ಎಂದು ಸದಸ್ಯ ಚಂದ್ರಶೇಖರ ಮನಗುಂಡಿ ಆರೋಪಿಸಿದರು.

ಇದಕ್ಕೆ ಉತ್ತರಿಸಿದ ಕೆಯುಐಡಿಎಫ್‌ಸಿ ಕಾರ್ಯನಿರ್ವಾಹಕ ಎಂಜಿನಿಯರ್, ಪರಿಹಾರ ಹಣ ಬಿಡುಗಡೆ ಆಗದ ಕಾರಣ ಕಾಮಗಾರಿ ವಿಳಂಬವಾಗಿತ್ತು.

ಈಗ ಹಣ ಮಂಜೂರಾಗಿದ್ದು, 10 ದಿನದಲ್ಲಿ ಕಾಮಗಾರಿ ಪೂರ್ಣ ಆಗಲಿದೆ' ಎಂದರು. ಪಾಲಿಕೆ ಹೇಳಿದ ರೀತಿ ಎಲ್ ಆ್ಯಂಡ್ ಟಿ, ಕೆಯುಐಡಿಎಫ್‌ಸಿ ಕಾಮಗಾರಿ ನಿರ್ವಹಿಸಬೇಕು. ಕಾಮಗಾರಿ ಕುರಿತು ವಾರ್ಡ್‌ಗೆ ಭೇಟಿ ನೀಡಿ ಪರಿಶೀಲಿಸಲಾಗುವುದು ಎಂದು ಮೇಯರ್ ಹೇಳಿದರು.



ಉದಯವಾಹಿನಿ ಚಿತ್ರ

### ಪಾಲಿಕೆ ಸಭಾಭವನ; ಕಾಮಗಾರಿ ಆರಂಭಿಸಲು ಸೂಚನೆ

**ಪಾಲಿಕೆ ಆವರಣದಲ್ಲಿ ಸಭಾಭವನ ನಿರ್ಮಾಣ ಕಾಮಗಾರಿಗೆ 5 ಕೋಟಿ ಬಿಡುಗಡೆಯಾಗಿತ್ತು. ಕಾಮಗಾರಿ ಏಕೆ ಆರಂಭಿಸಿಲ್ಲ ಎಂದು ವೀರಣ್ಣ ಸವಡಿ ಪ್ರಶ್ನಿಸಿದರು. ವಿರೋಧ ಪಕ್ಷದ ನಾಯಕ ಇಮ್ರಾನ್ ಯಲಿಗಾರ 'ಕಾಮಗಾರಿಗಾಗಿ ತೋಡಲಾದ ತಗ್ಗಿನಲ್ಲಿ ನೀರು ಸಂಗ್ರಹವಾಗಿದೆ. ಅದರಲ್ಲಿ ಬಿದ್ದು ಸತ್ತರೆ ಯಾರು ಹೊಣೆ' ಎಂದು ಪ್ರಶ್ನಿಸಿದರು. 'ಅಕ್ಕಪಕ್ಕ ಪಾರಂಪರಿಕ ಕಟ್ಟಡಗಳು ಇರುವ ಕಾರಣ ಕಟ್ಟಡದ ವಿನ್ಯಾಸ ಬದಲಿಸಬೇಕಿದೆ. ಹೀಗಾಗಿ ಕಾಮಗಾರಿ ವಿಳಂಬವಾಗಿದೆ' ಎಂದು ಆಯುಕ್ತ ರುದ್ರೇಶ ಘಾಳಿ ಹೇಳಿದರು. 'ಸಾಮಾನ್ಯ ಆಡಳಿತ ಕಚೇರಿಯ ಕಟ್ಟಡ ಸೇರಿ ಅಗತ್ಯ ಇರುವ ಕಟ್ಟಡ ತೆರವು ಮಾಡಿ ಸಭಾಭವನ ಕಾಮಗಾರಿ ಆರಂಭಿಸಬೇಕು; ಎಂದ ಜ್ಯೋತಿ ಪಾಟೀಲ ಸೂಚಿಸಿದರು.**

### ಪಾಲಿಕೆ ಸದಸ್ಯರ ಗೌರವಧನ ಹೆಚ್ಚಳ: ಠರಾವು

**ಮೇಯರ್ ಗೌರವಧನವನ್ನು 25 ಸಾವಿರ ಉಪಮೇಯರ್‌ಗೆ 20 ಸಾವಿರ ಮತ್ತು ಪಾಲಿಕೆ ಸದಸ್ಯರ ಗೌರವಧನವನ್ನು 15 ಸಾವಿರಕ್ಕೆ ಹೆಚ್ಚಿಸಿ ಠರಾವು ಪಾಸು ಮಾಡಲಾಯಿತು. '2021ರಿಂದ ಗೌರವಧನ ಹೆಚ್ಚಳವಾಗಿಲ್ಲ. ಈ ಬಗ್ಗೆ ಠರಾವು ಪಾಸು ಮಾಡಿ ಸರ್ಕಾರಕ್ಕೆ ಕಳಿಸಿದರೂ ಯಾವುದೇ ನಿರ್ಣಯವಾಗಿಲ್ಲ. ಹೀಗಾಗಿ ಅದನ್ನು ನೇರವಾಗಿ ಅನುಷ್ಠಾನಗೊಳಿಸಬೇಕು' ಎಂದು ಈರೇಶ ಅಂಚಟಗೇರಿ ಹೇಳಿದರು. ಸದಸ್ಯರ ಗೌರವಧನ ಹೆಚ್ಚಳದ ಜತೆಗೆ ಸಾಮಾನ್ಯ ಸಭೆ ಭತ್ಯೆ ಹೆಚ್ಚಿಸಬೇಕು ಎಂದು ಶಿವು ಹಿರೇಮಠ ಒತ್ತಾಯಿಸಿದರು.**

**ಬಿದ್ದು ಸತ್ತರೆ ಹೊಣೆ ಯಾರು?**

# ಸನಾತನ ಧರ್ಮದ ಸಂಸ್ಕೃತಿಯ ಪ್ರತೀಕವಾದ ಬಾಗಿನ ನೀಡಿದ್ದಕ್ಕೆ ಪ್ರಶಂಸೆ ವ್ಯಕ್ತಪಡಿಸಿದ ಶಾಸಕ ಕೆ ಎಂ ಶಿವಲಿಂಗೇಗೌಡ



ಉದಯವಾಹಿನಿ ಚಿತ್ರ

**ಅರಸೀಕೆರೆ ನಗರ ಸ್ವಚ್ಛತೆಯಿಂದ ಇರುವುದಕ್ಕೆ ಪೌರಕಾರ್ಮಿಕರೇ ಕಾರಣರಾಗಿದ್ದು ಇವರ ಶ್ರಮ ಮತ್ತು ಕರ್ತವ್ಯ. ಇತ್ತೀಚಿಗೆ ರಾಜ್ಯದ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳ ಹಾಗೂ ಸಚಿವರು ಅರಸೀಕೆರೆಯ ಸರ್ಕಾರಿ ಕಾರ್ಯಕ್ರಮಕ್ಕೆ ಆಗಮಿಸಿದ ವೇಳೆಯಲ್ಲಿ ಸ್ವಚ್ಛತೆಗಾಗಿ ಶ್ರಮವಹಿಸಿದ್ದಕ್ಕೆ ಪೌರಕಾರ್ಮಿಕರಿಗೆ ವೈಯಕ್ತಿಕವಾಗಿ ಅಭಿನಂದನೆ ಸಲ್ಲಿಸುತ್ತಿದ್ದೇನೆ ಮತ್ತೆ ಮುಂದೆಯೂ ಸಹ ಇಂತಹ ಕಾರ್ಯಕ್ರಮಗಳನ್ನು ನಗರಸಭೆ ವತಿಯಿಂದ ನಡೆಸಿಕೊಂಡು ಹೋಗಬೇಕೆಂದು ನಗರಸಭೆ ಅಧ್ಯಕ್ಷರಾದ ಎಮ್ ಸಮೀವುಲ್ಲಾ ತಿಳಿಸಿದರು. ಅಲ್ಲದೆ ಪೌರಕಾರ್ಮಿಕರಿಗೆ ಈಗ ನೀಡಿರುವ ನಿವೇಶನ ಸಾಕಾಗದೆಯಿದ್ದು ಇನ್ನು ಹೆಚ್ಚುವರಿಯಾಗಿ ಪೌರಕಾರ್ಮಿಕರಿಗೆ ನಿವೇಶನ ನೀಡಲು ನಗರಸಭೆ ಅಧ್ಯಕ್ಷರು ಮನವಿ ಮಾಡಿದರು -ಎಮ್ ಸಮೀ ವುಲ್ಲಾ, ನಗರಸಭೆ ಅಧ್ಯಕ್ಷ**

• **ಉದಯವಾಹಿನಿ ಅರಸೀಕೆರೆ**

ಸನಾತನ ಹಿಂದೂ ಧರ್ಮದಲ್ಲಿ ಸೋದರಿ ಮತ್ತು ಸೋದರ ಬಾಂಧವ್ಯವನ್ನು ಹೆಚ್ಚಿಸುವಂತಹ ಅರಸೀಕೆರೆ ನಗರಸಭೆಯ ಪೌರಕಾರ್ಮಿಕರಿಗೆ ಬಾಗಿನ ನೀಡುವ ಕಾರ್ಯಕ್ರಮವನ್ನು ನಗರಸಭೆ ಅಧ್ಯಕ್ಷರಾದ ಎಮ್ ಸಮೀವುಲ್ಲಾ ರವರು ಆಯೋಜಿಸಿದ್ದು ಎಲ್ಲಾ ನಗರಸಭೆಯ ಸಿಬ್ಬಂದಿಗಳು ಈ ಕಾರ್ಯಕ್ರಮ ಮಾಡುತ್ತಿರುವುದು ಶ್ಲಾಘನೀಯ ವಿಚಾರ ಎಂದು ಕರ್ನಾಟಕ ರಾಜ್ಯ ಸರ್ಕಾರದ ಗೃಹ ಮಂಡಳಿ ಅಧ್ಯಕ್ಷ ಹಾಗೂ ಅರಸೀಕೆರೆ ಕ್ಷೇತ್ರದ ಶಾಸಕ ಕೆಎಂ ಶಿವಲಿಂಗೇಗೌಡ ಮಾತನಾಡಿದರು ವಿಶೇಷವಾಗಿ ಅರಸೀಕೆರೆ ನಗರಸಭೆಯ ಪೌರಕಾರ್ಮಿಕರು ನಗರವನ್ನು ಸ್ವಚ್ಛವಾಗಿರುವುದರಲ್ಲಿ ನಿಷ್ಠೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಪೌರಕಾರ್ಮಿಕರು ಎಂದರೆ ಅಸಡ್ಡೆಯಿಂದ ನೋಡುವ ಕಾಲ ಹಿಂದೆ ಇತ್ತು ಇದನ್ನು ಅರಸೀಕೆರೆ ನಗರಸಭೆಯಿಂದ ಹೋಗಲಾಡಿಸಿ ಸನಾತನ ಹಿಂದೂ ಧರ್ಮದ ಪರಂಪರೆಯನ್ನು ಎತ್ತಿ ಹಿಡಿದು ಬಾಗಿನ ನೀಡುವುದರ ಮೂಲಕ ಸೋದರ ಸೋದರಿಯರ ಬಾಂಧವ್ಯವನ್ನು ಎತ್ತಿ ಹಿಡಿದು ವಿಶೇಷ ಕಾರ್ಯಕ್ರಮವನ್ನು ನಗರಸಭೆಯಿಂದ ನಡೆಸಲಾಗಿದೆ. ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ಶಿಬಿರ ಮನೋರಂಜನ ಕಾರ್ಯಕ್ರಮಗಳನ್ನು ಸಹ ಏರ್ಪಡಿಸುವಂತೆ ಹಾಗೂ ಪೌರಕಾರ್ಮಿಕ ದಿನಾಚರಣೆಯನ್ನು ನಡೆಸುವಂತೆ ಶಾಸಕ ಶಿವಲಿಂಗೇಗೌಡರು ಸಲಹೆ ನೀಡಿದರು.

ಅಧ್ಯಕ್ಷರ ಮನವಿಗೆ ಸ್ಪಂದಿಸಿದ ಶಾಸಕ ಶಿವಲಿಂಗೇಗೌಡರು ಈಗ ನೀಡಿರುವ ಜಾಗದ ಪಕ್ಕದಲ್ಲಿಯೇ ಎಲ್ಲಾ ಪೌರಕಾರ್ಮಿಕರಿಗೆ ನಿವೇಶನ ನೀಡಲು ಅಗತ್ಯವಿರುವ ಸರ್ಕಾರದ ಸೌಲಭ್ಯಗಳನ್ನು ದೊರಕಿಸಿಕೊಡಲಾಗುವುದು ಸಾಧ್ಯವಾದರೆ ಮನೆ ನಿರ್ಮಾಣಕ್ಕೂ ಸಹ ಸರ್ಕಾರದ ಮಟ್ಟದಲ್ಲಿ ಅವಕಾಶವಿದ್ದಲ್ಲಿ ಅದಕ್ಕೂ ಸಹ ಸಂಬಂಧಪಟ್ಟ ಸರ್ಕಾರದ ಮಟ್ಟದ ಸಚಿವರು ಮತ್ತು ಇಲಾಖೆ ಅಧಿಕಾರಿಗಳ ಮನವೊಲಿಸಿ ಪೌರಕಾರ್ಮಿಕರ ನಿವೇಶನ ಮತ್ತು ಮನೆಯ ನಿರ್ಮಾಣದ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ಬಗೆಹರಿಸಿಕೊಳ್ಳಲು ನಗರಸಭೆ ಅಧ್ಯಕ್ಷರಾದ ಎಂ ಸಮೀವುಲ್ಲಾ ರವರೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ಶಾಸಕರು ತಿಳಿಸಿದರು.

ಅರಸೀಕೆರೆ ನಗರಸಭೆ ವತಿಯಿಂದ ನಗರಸಭೆಯ ಪೌರಕಾರ್ಮಿಕರಿಗೆ ಗೌರಿ ಗಣೇಶ ಹಬ್ಬದ ಪ್ರಯುಕ್ತ ಬಾಗಿನ ನೀಡುವ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು ಶಾಸಕ ಹಾಗೂ ಕರ್ನಾಟಕ ರಾಜ್ಯ ಸರ್ಕಾರದ ಗೃಹ ಮಂಡಳಿ ಅಧ್ಯಕ್ಷರಾದ ಕೆಎಂ ಶಿವಲಿಂಗೇಗೌಡ ನಗರಸಭೆ ಅಧ್ಯಕ್ಷರಾದ ಎಮ್ ಸಮೀವುಲ್ಲಾ. ಉಪಾಧ್ಯಕ್ಷರಾದ ಮನೋಹರ್ ಸೇರಿದಂತೆ ನಗರಸಭಾ ಸದಸ್ಯರುಗಳು ಆಯುಕ್ತರಾದ ಕೃಷ್ಣಮೂರ್ತಿ ಬಾಗಿನಾ ವಿತರಿಸಿದರು.

## ಕಳಚಿ ಬೀಳುತ್ತಿದೆ ಪ.ಪಂ. ವಾಣಿಜ್ಯ ಮಳಿಗೆ: ಜೀವ ಭಯದಲ್ಲಿ ವರ್ತಕರು


• **ಉದಯವಾಹಿನಿ ಮೂಡಿಗೆರೆ**

ಪಟ್ಟಣದ ಬಸ್ ನಿಲ್ದಾಣದ ಬಳಿಯಿರುವ ಪ.ಪಂಯ ವಾಣಿಜ್ಯ ಮಳಿಗೆ ಕಟ್ಟಡವು ಕಳಚಿ ಬೀಳುತ್ತಿದ್ದು, ವರ್ತಕರು ಜೀವ ಭಯದಲ್ಲಿ ದಿನ ಕಳೆಯುವಂತಾಗಿದೆ.ಎರಡಂತಸ್ತಿನ ಕಟ್ಟಡದಲ್ಲಿ 12 ವಾಣಿಜ್ಯ ಮಳಿಗೆಗಳಿದ್ದು, ಎರಡುವರೆ ದಶಕಗಳ ಹಿಂದೆ ನಿರ್ಮಿಸಲಾಗಿದೆ. ಕಟ್ಟಡದ ಮೇಲ್ಭಾಗವು ಸಂಪೂರ್ಣವಾಗಿ ಹಾನಿಯಾಗಿದ್ದು, ಮೊದಲ ಅಂತಸ್ತಿನ ಮಳಿಗೆಗಳು ಮಳೆ ನೀರಿಗೆ ಸೋರುತ್ತಿವೆ.

ವರ್ತಕರು ಪ್ಲಾಸ್ಟಿಕ್ ಹೊದಿಕೆ ಹಾಕಿಕೊಂಡು ವ್ಯಾಪಾರ, ವಹಿವಾಟು ನಡೆಸುವಂತಾಗಿದೆ. ಮೊದಲ ಅಂತಸ್ತಿಗೆ ತೆರಳುವ ಮೆಟ್ಟಿಲ ಬಳಿ ಚಾವಣಿಯ ಗಾರೆ ಕಿತ್ತು ಕಬ್ಬಿಣ ಕಾಣತೊಡಗಿದ್ದು, ಇಲ್ಲಿಗೆ ತೆರಳಲು ವರ್ತಕರು ಹಾಗೂ ಗ್ರಾಹಕರು ಭಯ ಪಡುವಂತಾಗಿದೆ. ಕಟ್ಟಡವನ್ನು ನೆಲಸಮಗೊಳಿಸಿ. ಮೂರು ಅಥವಾ ನಾಲ್ಕು ಅಂತಸ್ತಿನ ಕಟ್ಟಡ ನಿರ್ಮಿಸಿದರೆ ಪಟ್ಟಣ ಪಂಚಾಯಿತಿಗೆ ಆದಾಯ ಬರುವುದಲ್ಲದೆ ಹೆಚ್ಚಿನ ವರ್ತಕರಿಗೆ ಅನುಕೂಲವಾಗುತ್ತದೆ ಎಂಬುದು ಸಾರ್ವಜನಿಕರ ಅಭಿಪ್ರಾಯ. ಕಟ್ಟಡವು ಸಂಪೂರ್ಣವಾಗಿ ಹಾನಿಯಾಗಿದೆ. ಆರ್ ಸಿಸಿ ಕಟ್ಟಡದಲ್ಲಿ ಮಳೆನೀರು ಹೋಗಲು ಸೂಕ್ತ ವ್ಯವಸ್ಥೆ ಮಾಡದ ಕಾರಣ, ಪ್ರತಿವರ್ಷ ಮಳೆ ನೀರು ಕಟ್ಟಡದ ಗೋಡೆಯೊಳಗೆ ಇಳಿದು ಗೋಡೆಗೆ ಹಾನಿಯಾಗಿದ್ದು, ಯಾವಾಗ ಬೀಳುತ್ತದೊ ಹೇಳದಾಗಿದೆ. ಇದನ್ನರಿತ ಕಟ್ಟಡದ ಬಹುತೇಕ ಮೂಲ ಬಾಡಿಗೆದಾರರು ಒಳ ಬಾಡಿಗೆಗೆ ನೀಡಿ, ದುಬಾರಿ ಬಾಡಿಗೆ ಪಡೆಯುತ್ತಿದ್ದಾರೆ.

## ಬಡಾವಣೆ ರಸ್ತೆಗಳು ಮಳೆ ಬಂದರೆ ಕೆಸರು ಗದ್ದೆ

• **ಉದಯವಾಹಿನಿ ಚಿಕ್ಕಮಗಳೂರು**



ಉದಯವಾಹಿನಿ ಚಿತ್ರ

ನಗರದ ಉಂಡೇದಾಸರಹಳ್ಳಿ ಬಡಾವಣೆ ರಸ್ತೆಯಲ್ಲಿ ಹೆಜ್ಜೆಗೊಂದು ಗುಂಡಿಗಳಿದ್ದು, ವಾಹನ ಸಂಚಾರವೇ ದುಸ್ತರವಾಗಿದೆ. ನಗರದ ತೊಗರಿಹಂಕಲ್ ವೃತ್ತದಿಂದ ಉಂಡೇದಾಸರಹಳ್ಳಿ ಕಡೆಗೆ ಇಳಿಜಾರಿನಲ್ಲಿ ಸಾಗಿದ ಕೂಡಲೇ ಗುಂಡಿಗಳ ದರ್ಶನವಾಗುತ್ತದೆ. ಮಳೆಗಾಲಕ್ಕೂ ಮುನ್ನ ಸಣ್ಣದಾಗಿದ್ದ ಗುಂಡಿಗಳು ಈಗ ಹೊಂಡಗಳಾಗಿ ಮಾರ್ಪಟ್ಟಿವೆ. ಸದ್ಯ ಮಳೆ ನಿಂತಿರುವುದರಿಂದ ರಸ್ತೆ ತುಂಬಾ ದೂಳು ಆವರಿಸಿದ್ದು, ಸಂಚರಿಸುವುದೇ ಕಷ್ಟವಾಗಿದೆ. ವಾಹನ ಸವಾರರಿಗೆ ಈ ರಸ್ತೆಯಲ್ಲಿ ಸಂಚಾರ ನಡೆಸುವುದು ಸಂಕಟಮಯವಾಗಿದ್ದು, ನಿವಾಸಿಗಳಲ್ಲಿ ಆಕ್ರೋಶ ಹೆಚ್ಚಾಗಿದೆ.

ಯಗಚಿ ಸೇತುವೆಯ ಮೇಲೆಯೂ ಗುಂಡಿಗಳು ಬಿದ್ದಿವೆ. ತಗ್ಗಿನಲ್ಲಿರುವ ಸೇತುವೆ ಮೇಲೆ ಮಳೆಯಲ್ಲಿ ಎರಡೂ ಕಡೆಯಿಂದ ನೀರು ಬಂದು ಶೇಖರಣೆಯಾಗುತ್ತದೆ. ನೀರಿನಲ್ಲಿ ಗುಂಡಿಗಳು ಎಲ್ಲಿವೆ ಎಂಬುದು ಗೊತ್ತಾಗದೆ ದ್ವಿಚಕ್ರ ವಾಹನ ಸವಾರರು ಬಿದ್ದು ಎದ್ದು ಹೋಗುತ್ತಿದ್ದಾರೆ. ಮುಂದೆ ಸಾಗಿದರೂ ಅದೇ ಪರಿಸ್ಥಿತಿ ಮುಂದುವರಿದಿದೆ. ರಾಮಯ್ಯ ವೃತ್ತದಲ್ಲಿ ದೊಡ್ಡ ಹೊಂಡವೇ ನಿರ್ಮಾಣವಾಗಿದೆ. ಸರಿಯಾಗಿದ್ದ ರಸ್ತೆಯನ್ನು ಒಳಚರಂಡಿ ಕಾಮಗಾರಿಗಾಗಿ ನಗರಸಭೆ ಸಿಬ್ಬಂದಿಯೇ ತೆಗೆದಿದ್ದರು. ಅದಕ್ಕೆ ಮಣ್ಣು ತುಂಬಿ ಡಾಂಬರ್ ಹಾಕಿದ್ದರು. ಆ ಡಾಂಬರ್ ವಾರದಲ್ಲೇ ಕಿತ್ತು ಬಂದು ಈಗ ದೊಡ್ಡ ಹೊಂಡವಾಗಿದೆ.

ಈ ಮಾರ್ಗದಲ್ಲಿ ಸಂಚರಿಸುವ ವಾಹನ ಸವಾರರು ಗುಂಡಿಗಳಲ್ಲಿ ಬಿದ್ದು ಗಾಯಗೊಂಡ ಪ್ರಕರಣಗಳ ಲೆಕ್ಕವಿಲ್ಲ. ಕಾರುಗಳು ಸಹ ಗುಂಡಿಗಳಲ್ಲಿ ಸಿಲುಕಿ ಹಾನಿಗೊಳಗಾಗುತ್ತಿವೆ. ಗುಂಡಿಗಳನ್ನು ಮುಚ್ಚಲು ನಗರಸಭೆ ಯಾವುದೇ ಕ್ರಮ ಕೈಗೊಳದಿರುವುದು ಸಳೀಯರ ಕೋಪಕೆ ಕಾರಣವಾಗಿದೆ.

ಉಂಡೇದಾಸರಹಳ್ಳಿಮುಖ್ಯ ರಸ್ತೆಯ ಸ್ಥಿತಿ ಇದಾದರೆ ಬಡಾವಣೆ ರಸ್ತೆಗಳ ಸ್ಥಿತಿ ಹೇಳತೀರದು. ಕೆಸರು, ಗೊಟರು, ಹೊಂಡಗಳಿಂದ ತುಂಬಿ ಕೊಂಡಿರುವ ಬಡಾವಣೆ ರಸ್ತೆಗಳು ಮಳೆಗಾಲದಲ್ಲಿ ಕೆಸರುಗದ್ದೆಯಾದರೆ, ಮಳೆ ಇಲ್ಲದ ವೇಳೆ ಕೆಮ್ಮಣ್ಣಿನ ದೂಳುಗುಂಡಿಗಳಾಗಿವೆ.

## ವಸತಿ ಶಾಲೆ ವಿದ್ಯಾರ್ಥಿಗಳನ್ನು ಉತ್ತಮವಾಗಿ ನೋಡಿಕೊಳ್ಳಿ: ಜಿಲ್ಲಾಧಿಕಾರಿ

• **ಉದಯವಾಹಿನಿ ಚಿತ್ರದುರ್ಗ**

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ (ಕ್ರೈಸ್) ವ್ಯಾಪ್ತಿಯ ಮೊರಾರ್ಜಿ ದೇಸಾಯಿ, ಇಂದಿರಾಗಾಂಧಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿಗಳನ್ನು ಹೆಚ್ಚಿನ ಜಾಗೃತಿ ಹಾಗೂ ವಿಶೇಷ ಕಾಳಜಿವಹಿಸುವ ಮೂಲಕ ಉತ್ತಮವಾಗಿ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕ್ರೈಸ್ ವಸತಿ ಶಾಲೆ, ಕಾಲೇಜುಗಳ ಮೇಲುಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಸತಿ ಶಾಲೆಯ ಮಕ್ಕಳನ್ನು ತಮ್ಮ ಮನೆಯ ಮಕ್ಕಳಂತೆ ನೋಡಿಕೊಳ್ಳಬೇಕು. ಪ್ರತಿಯೊಬ್ಬ ವಿದ್ಯಾರ್ಥಿಯ ಶೈಕ್ಷಣಿಕ ಹಾಗೂ ವೈಯಕ್ತಿಕ ಆರೋಗ್ಯದ ಬಗ್ಗೆ ಕಾಳಜಿವಹಿಸಬೇಕು. ಸಣ್ಣ ಪುಟ್ಟ ವ್ಯತ್ಯಾಸ ಆದರೂ ಪೋಷಕರಿಗೆ ಮಾಹಿತಿ ನೀಡಬೇಕು. ವಸತಿ ಶಾಲೆಯ ಪ್ರಾಂಶುಪಾಲರು, ನಿಲಯ ಪಾಲಕರು ಹಾಗೂ ಸಿಬ್ಬಂದಿ ಬಹಳ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

**ಪ್ರವೇಶಾತಿಯಲ್ಲಿ ಗೊಂದಲ ಇರಬಾರದು:** ವಸತಿ ಶಾಲೆಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಗೊಂದಲ ಇರಬಾರದು. ಕಾಲಕಾಲಕ್ಕೆ ಸರ್ಕಾರ ನಿಗದಿಪಡಿಸುವ ಮಾರ್ಗಸೂಚಿಗಳನ್ವಯ ಪಾರದರ್ಶಕವಾಗಿ ಪ್ರವೇಶಾತಿ ಪ್ರಕ್ರಿಯೆ ನಡೆಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು. ವಸತಿ ಶಾಲೆಗಳಲ್ಲಿ ಪ್ರಾಂಶುಪಾಲರು ವಾಸ್ತವ್ಯ ಇರುವುದಿಲ್ಲ ಎಂಬ ದೂರುಗಳು ಬರುತ್ತಿದ್ದು, ಪ್ರಾಂಶುಪಾಲರು ಕಡ್ಡಾಯವಾಗಿ ವಸತಿ ಶಾಲೆಯಲ್ಲಿಯೇ ಇರಬೇಕು. ವಸತಿ ಶಾಲೆಗಳಿಂದ ಉತ್ತಮ ಫಲಿತಾಂಶ ಬರುವ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸಬೇಕು ಎಂದು ತಾಕೀತು ಮಾಡಿದರು.

**ಮಕ್ಕಳಿಗೆ ಗುಣಮಟ್ಟದ ಆಹಾರ ವಿತರಿಸಿ:** ವಸತಿ ಶಾಲೆಯ ವಿದ್ಯಾರ್ಥಿಳಿಗೆ ಉತ್ತಮ ಗುಣಮಟ್ಟದ ಶುಚಿ-ರುಚಿಯಾದ ಆಹಾರ ವಿತರಣೆಗೆ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು. ವಸತಿ ಶಾಲೆಗಳಿಗೆ ಕಳಪೆ ಆಹಾರ ಪದಾರ್ಥಗಳು ಸರಬರಾಜಾದರೆ ಅಂತಹ ಆಹಾರ ಪದಾರ್ಥಗಳನ್ನು ಸಂಬಂಧಪಟ್ಟವರಿಗೇ ಹಿಂದಿರುಗಿಸಬೇಕು ಎಂದು ತಿಳಿಸಿದ ಅವರು, ವಸತಿ ಶಾಲೆಯಲ್ಲಿ ಸ್ವಚ್ಛತೆ ಕಾಪಾಡಿ, ಶುದ್ಧ ಕುಡಿಯುವ ನೀರು ದೊರೆಯುವಂತೆ ನೋಡಿಕೊಳ್ಳಿ ಎಂದು ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮಹೆಬೂಬ್ ಜಿಲಾನಿ ಖುರೇಷಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಲ್ಲಿಕಾರ್ಜುನ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪುಷ್ಪಾಲತಾ ಭಾವಿಮಠ ಸೇರಿದಂತೆ ಜಿಲ್ಲೆಯ ಕ್ರೈಸ್ ವಸತಿ ಶಾಲೆ, ಕಾಲೇಜುಗಳ ಪ್ರಾಂಶುಪಾಲರು ಇದ್ದರು.



ಉದಯವಾಹಿನಿ ಚಿತ್ರ


### ದೂರುಗಳು ಬಾರದಂತೆ ಕ್ರಮವಹಿಸಿ

**ವಸತಿ ಶಾಲೆಗಳ ದಾಖಲಾತಿ ಸಮಿತಿಗೆ ನೀಡಲಾಗಿರುವ ನಿರ್ದೇಶನಗಳ ಪ್ರಕಾರವೇ ದಾಖಲಾತಿ ಪ್ರಕ್ರಿಯೆ ನಡೆಸಬೇಕು. ವಸತಿ ಶಾಲೆಗಳ ಪ್ರವೇಶಾತಿ ಸಂಬಂಧ ಸಾರ್ವಜನಿಕರಿಂದ ಯಾವುದೇ ದೂರುಗಳು ಬಾರದಂತೆ ಕ್ರಮವಹಿಸಬೇಕು ಎಂದು ತಿಳಿಸಿದ ಅವರು, ವಸತಿಶಾಲಾವಾರು, ತರಗತಿವಾರು ಲಭ್ಯವಿರುವ ಸೀಟುಗಳಲ್ಲಿ ಎಷ್ಟು ಸೀಟುಗಳಿಗೆ ಪ್ರವೇಶಾತಿ ಪ್ರಕ್ರಿಯೆ ನಡೆದಿದೆ ಹಾಗೂ ಖಾಲಿ ಇರುವ ಸೀಟುಗಳ ಮಾಹಿತಿಯನ್ನು ಎಲ್ಲಾ ಪ್ರಾಂಶುಪಾಲರು ದೃಢೀಕರಿಸಿ ಉಪವಿಭಾಗಾಧಿಕಾರಿಗಳಿಗೆ ನೀಡುವಂತೆ ಸೂಚನೆ ನೀಡಿದರು.**

## ಪಕೀರ ಬಾಬಾನ ವೇಷದಲ್ಲಿ ಗಾಂಜಾ ಮಾರಾಟ; ಗಾಂಜಾ ಕಿಂಗ್‌ಪಿನ್ ಅರೆಸ್ಟ್

• **ಉದಯವಾಹಿನಿ ಕೆಂಭಾವಿ**

ಪಟ್ಟಣದ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಅಗ್ನಿ ಗ್ರಾಮದಲ್ಲಿ ಖಚಿತ ಮಾಹಿತಿಯ ಮೇರಿಗೆ ಸಿಪಿಐ ರವಿಕುಮಾರ್ ಎನ್ ಇವರ ಮಾರ್ಗದರ್ಶನದಲ್ಲಿ ಹಾಗೂ ಕೆಂಭಾವಿ ಪೊಲೀಸ್ ಠಾಣೆಯ ಪಿಎಸ್‌ಐ ಅಮೋಜ್ ಕಾಂಬಳೆ ಇವರ ನೇತೃತ್ವದಲ್ಲಿ, ಇವರ ತಂಡವನ್ನು ದಾಳಿ ಮಾಡಿ ಗಾಂಜಾ ಮಾರಾಟಗಾರರ ಮನೆಯ ಮೇಲೆ ಮತ್ತು ಹೊಲದಲ್ಲಿ ಬೆಳೆದಿರುವ ಗಾಂಜಾ ಮೇಲೆ ಭರ್ಜರಿ ಕಾರ್ಯಾಚರಣೆ ನಡೆಸಿ ಸುಮಾರು ಗಾಂಜಾವನ್ನು ವಶಪಡಿಸಿಕೊಂಡಿದ್ದಾರೆ. ಗಾಂಜಾ ಮಾರಾಟ ಅಪರಾಧಿಗಳಾದ ಈರಮ್ಮ ಜ್ಯೋತೆಪ್ಪ ಪೂಜಾರಿ ಅಗ್ನಿ ಇವಳಿಂದ ಸುಮಾರು ನಾಲ್ಕೈದು ವರ್ಷಗಳಿಂದ ಗಾಂಜಾ ಖರೀದಿ ಮಾಡುತ್ತಿದ್ದ ಆರೋಪಿ ಹುಣಸಗಿ ಪಟ್ಟಣದಲ್ಲಿ ಪಕೀರ ಬಾಬಾನ ವೇಷ ಹಾಕಿಕೊಂಡು ಗಾಂಜಾ ಮಾರುತ್ತಿದ್ದ ದವಲಸಾ ತಂದೆ ಶಲಾಲ್ ಸಾಬ್ ಸಾಕಿನ್ ಹುಣಸಗಿ ಎಂಬಾತನನ್ನು ಪೊಲೀಸ್ ಕಾರ್ಯಾಚರಣೆ ನಡೆಸಿ ಬಂದಿಸಿದ್ದಾರೆ. ಆರೋಪಿಯಾದ ಈರಮ್ಮ ಗಂಡ ಜೊತಪ್ಪ ಪೂಜಾರಿ ವಿಷಯ ತಿಳಿದ ಕೂಡಲೇ ತಲೆಮರಿಸಿಕೊಂಡಿದ್ದಾರೆ. ತಲೆಮರಿಸಿಕೊಂಡಂತಹ ಆರೋಪಿ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ. ಪೊಲೀಸ್ ಕಾರ್ಯಾಚರಣೆ ನಡೆಸುವಾಗ ಮನೆಯಲ್ಲಿ ಸಿಕ್ಕ 860ಗ್ರಾಂ ಒಣಗಿದ ಗಾಂಜಾ ಇದರ ಅಂದಾಜು ಬೆಲೆ ರೂ.86,000 ಗಳು ಮತ್ತು ಮನೆಯಲ್ಲಿ ಬೆಳೆದಂತ 200 ಗ್ರಾಮ ಹಸಿ ಗಾಂಜಾ ಗಿಡಗಳು ಇದರ ಅಂದಾಜು ಮೊತ್ತ 20,000 ರೂ. ಗಳು ಪೊಲೀಸರು ವಶಪಡಿಸಿಕೊಂಡಿದ್ದಾರೆ, ಎನ್‌ಡಿಪೀಎಸ್ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.



ಉದಯವಾಹಿನಿ ಚಿತ್ರ

### ಉದಯ ವಾಹಿನಿ ಹೈಲೆಟ್ಸ್

- **ಕೆಂಭಾವಿ ಪೊಲೀಸರಿಂದ ಭರ್ಜರಿ ಕಾರ್ಯಾಚರಣೆ.**
- **860 ಗ್ರಾಂ ಒಣಗಿದ ಗಾಂಜಾ, ಬೆಲೆ 86,000 ರೂ. ಗಳು, ಮನೆಯಲ್ಲಿ ಬೆಳೆದಂತ 200 ಗ್ರಾಮ ಹಸಿ ಗಾಂಜಾ ಗಿಡಗಳು ಇದರ ಅಂದಾಜು ಮೊತ್ತ 20,000 ರೂ.**
- **ಒಬ್ಬ ಆರೋಪಿ ಬಂಧನ, ತಲೆಮರಿಸಿಕೊಂಡ ಆರೋಪಿ ಈರಮ್ಮ ಪೂಜಾರಿಗೆ ಬಲೆ ಬೀಸಿದ ಪೊಲೀಸರು.**

# ಗದಗ-ಹುಟಗಿ ಹೊಸ ಜೋಡಿ ಮಾರ್ಗದಲ್ಲಿ ರೈಲು ಸಂಚಾರ ಆರಂಭ

## • ಕಳೆದ 10 ದಿನಗಳಿಂದ ಸ್ಥಗಿತಗೊಂಡಿದ್ದ ಎಲ್ಲಾ ರೈಲುಗಳು ಮೊದಲಿನ ವೇಳಾಪಟ್ಟಿಯಂತೆ ಕಾರ್ಯಾರಂಭ

• **ಉದಯವಾಹಿನಿ ಆಲಮಟ್ಟಿ**

ಬಹುನಿರೀಕ್ಷಿತ ಗದಗ-ಹುಟಗಿ ರೈಲು ಮಾರ್ಗದಲ್ಲಿನ ಬಾಗಲಕೋಟೆ- ಆಲಮಟ್ಟಿ ನಡುವಿನ 35 ಕಿ.ಮೀ ರೈಲ್ವೆ ದ್ವಿಪಥ ಮಾರ್ಗ ಪೂರ್ಣಗೊಂಡಿದ್ದು, ಸಂಚಾರ ಆರಂಭಗೊಂಡಿದೆ. ಇದರಿಂದ ದಶಕಗಳ ಕನಸು ನನಸಾದಂತಾಗಿದೆ. ಕೂಡಗಿ ಉಷ್ಣ ವಿದ್ಯುತ್ ಸ್ಥಾವರಕ್ಕಾಗಿ ಅಗತ್ಯವಿರುವ ಕಲ್ಲಿದ್ದಲು ಹೊತ್ತ ಗೂಡ್ಸ್ ರೈಲು ಸಂಚಾರಕ್ಕಾಗಿ ಈ ಮಾರ್ಗ ದ್ವಿಪಥಗೊಳ್ಳುವುದು ಅಗತ್ಯವಿತ್ತು. ಗೂಡ್ಸ್ ರೈಲು ಸಂಚಾರಕ್ಕಾಗಿ ಹಲವು ಪ್ರಯಾಣಿಕ ರೈಲುಗಳು ತ್ವರಿತ ಸಂಚಾರಕ್ಕೆ ಅಡ್ಡಿಯಾಗಿತ್ತು.

ಅದಕ್ಕಾಗಿ ಕೂಡಗಿ ಎನ್‌ಟಿಪಿಸಿ ಘಟಕದವರೂ ಈ ಮಾರ್ಗ ನಿರ್ಮಾಣಕ್ಕೆ ಅಗತ್ಯ ಅನುದಾನವನ್ನು ರೈಲ್ವೆ ಇಲಾಖೆ ನೀಡಿತ್ತು. ಆಗ ಈ ರೈಲು ದ್ವಿಪಥ ಮಾರ್ಗ ನಿರ್ಮಾಣಕ್ಕೆ ವೇಗ ದೊರಕಿತ್ತು. ಕಳೆದ 8 ವರ್ಷಗಳಿಂದ ಈ ಕಾಮಗಾರಿ ನಡೆದಿತ್ತು. ಈ ರೈಲ್ವೆ ಮಾರ್ಗದಲ್ಲಿ ಬಾಗಲಕೋಟೆಯಿಂದ ಗದಗ ವರೆಗೆ ಮತ್ತು ವಂದಾಲದಿಂದ ಹುಟಗಿಯವರೆಗೆ ಪೂರ್ಣಗೊಂಡು ಹಲವು ವರ್ಷಗಳೇ ಕಳೆದಿದ್ದವು. ಆದರೆ, ಕೃಷ್ಣಾ ನದಿಯ ಕಾರಣ ಬಾಗಲಕೋಟೆ-ಆಲಮಟ್ಟಿ-ವಂದಾಲ ವರೆಗೆ ಸುಮಾರು 45 ಕಿ.ಮೀ ಮಾರ್ಗ ಮಾತ್ರ ಬಾಕಿಯಿತ್ತು. ಅದರಲ್ಲಿ ಸದ್ಯ ಆಲಮಟ್ಟಿ-ಬಾಗಲಕೋಟೆ 35 ಕಿ.ಮೀ ದ್ವಿಪಥ ಮಾರ್ಗ ಪೂರ್ಣಗೊಂಡಂತಾಗಿದೆ.

ಹೊಸ ಜೋಡಿ ರೈಲು ಮಾರ್ಗದಲ್ಲಿ ರೈಲು ಓಡಾಟ ಆರಂಭಗೊಂಡಿವೆ. ಕಳೆದ 10 ದಿನಗಳಿಂದ ಸ್ಥಗಿತಗೊಂಡಿದ್ದ ಎಲ್ಲಾ ರೈಲುಗಳು ಮೊದಲಿನ ವೇಳಾಪಟ್ಟಿಯಂತೆ ಕಾರ್ಯಾರಂಭ ಮಾಡಿವೆ ಎಂದು ರೈಲ್ವೆ ಅಧಿಕಾರಿಗಳು ಮಾಹಿತಿ ನೀಡಿದರು. ಇದರಿಂದ ಆಲಮಟ್ಟಿ-ಬಾಗಲಕೋಟೆ ಮಧ್ಯೆ ಈಗ ಜೋಡಿ ರೈಲು ಮಾರ್ಗ ಆರಂಭಗೊಂಡಂತಾಗಿದೆ. ಕೇವಲ 40 ನಿಮಿಷಗಳಲ್ಲಿ ಆಲಮಟ್ಟಿಯಿಂದ ಬಾಗಲಕೋಟೆ ತಲುಪಬಹುದು.

**10 ಕಿ.ಮೀ ಮಾತ್ರ ಬಾಕಿ:** ಆಲಮಟ್ಟಿಯಿಂದ- ವಂದಾಲ ವರೆಗೆ 10 ಕಿ.ಮೀ ರೈಲ್ವೆ ದ್ವಿಪಥ ಮಾರ್ಗ ನಿರ್ಮಾಣ ಮಾತ್ರ ಬಾಕಿಯಿದೆ. ಆಲಮಟ್ಟಿ ಜಲಾಶಯದ ಹಿನ್ನೀರಿನ ಕೃಷ್ಣಾ ನದಿಯಲ್ಲಿ ಪಾರ್ವತಿ ಕಟ್ಟೆ (ಬೇನಾಳ ಬ್ರಿಜ್) ಬಳಿ ಸೇತುವೆ (440 ಮೀ ಉದ್ದದ ಸೇತುವೆ) ನಿರ್ಮಾಣ ಕಾಮಗಾರಿ ಬಾಕಿಯಿದ್ದು, ಅದಕ್ಕಾಗಿ ಈ ಮಾರ್ಗ ಪೂರ್ಣಗೊಂಡಿಲ್ಲ. ಹಿನ್ನೀರಿನಲ್ಲಿಯೇ ಇರುವ ಈ ಸೇತುವೆ ಪೂರ್ಣಗೊಳ್ಳಲು ಇನ್ನೂ ಕನಿಷ್ಠ 8 ತಿಂಗಳಾದರೂ ಬೇಕು ಎನ್ನಲಾಗಿದೆ. ವಂದೇ ಭಾರತ್' ರೈಲು ಸೇರಿದಂತೆ ಮತ್ತೀತರ ವಿಶೇಷ ಹೊಸ ರೈಲು ಸಂಚಾರಕ್ಕೆ ಈ 10ಕಿ.ಮೀ ಮಾರ್ಗ ಮಾತ್ರ ಅಡ್ಡಿಯಾಗಿದೆ.

**ಹಸಿರು ಹಾಸಿನ ಮಾರ್ಗ:** ಆಲಮಟ್ಟಿ ಜಲಾಶಯದ ಮುಂಭಾಗದಲ್ಲಿ ಕೃಷ್ಣಾ ನದಿಯಲ್ಲಿ 610 ಮೀಟರ್ ಉದ್ದದ ಸೇತುವೆ (60 ಅಡಿ ಉದ್ದದ 44 ಸ್ಪ್ಯಾನ್ ಗಳುಳ್ಳ ಸೇತುವೆ) ಬಾಗಲಕೋಟೆ ತಾಲ್ಲೂಕಿನ ಮುಗಳೊಳ್ಳಿ ಸಮೀಪ 18 ಮೀಟರ್ ಮತ್ತು 36 ಮೀಟರ್ ಉದ್ದದ ಎರಡು ಸೇರಿ ಒಟ್ಟು ಮೂರು ಮೇಜರ್ ಸೇತುವೆ ನಿರ್ಮಾಣಕ್ಕಾಗಿ ಕಾಮಗಾರಿ ತಡವಾಗಿತ್ತು. ಈಗ ಅವು ಪೂರ್ಣಗೊಂಡು ಸಂಚಾರ ಆರಂಭಗೊಂಡಿದೆ. ಆಲಮಟ್ಟಿ ಜಲಾಶಯದ ಹಿನ್ನೀರು ಹೆಚ್ಚಿರುವ ಈ ಮಾರ್ಗದುದ್ದಕ್ಕೂ ಸಂಚರಿಸಿದರೇ ನೀರು ಹಾಗೂ ಹಸಿರು ಪರಿಸರ ಕಲ್ಲು ಗುಡ್ಡಗಳ ಮಧ್ಯದಲ್ಲಿ ಸಾಗಿದ ಅನುಭವ ಕಾಣಸಿಗುತ್ತದೆ.



ಉದಯವಾಹಿನಿ ಚಿತ್ರ

**ದಶಕಗಳ ಕನಸು ನನಸು**

### ರೈಲು ಸಂಚಾರ ಆರಂಭ

**ಆಲಮಟ್ಟಿ-ಬಾಗಲಕೋಟೆ ಮಾರ್ಗ ಮಧ್ಯದ ಈ ಕಾಮಗಾರಿಯ ಅಂತಿಮ ಕಾರ್ಯಾಚರಣೆಗಾಗಿ ಕಳೆದ 10 ದಿನಗಳಿಂದ ಈ ಮಾರ್ಗದಲ್ಲಿ ಸಂಚರಿಸುತ್ತಿದ್ದ ಬಹುತೇಕ ರೈಲುಗಳ ಸಂಚಾರ ಸ್ಥಗಿತಗೊಳಿಸಲಾಗಿತ್ತು. ರೈಲ್ವೆ ಸುರಕ್ಷಾ ವಿಭಾಗದ ಅಧಿಕಾರಿಗಳು (ಕಮಿಷನರ್ ಆಫ್ ರೈಲ್ವೆ ಸೇಪ್ಟಿಸ್) ಈ ಮಾರ್ಗದ ತಪಾಸಣೆ ನಡೆಸಿ, ಗಂಟೆಗೆ 120 ಕಿ.ಮೀ ವೇಗದಲ್ಲಿ ರೈಲು ಓಡಿಸಿ ಹೊಸ ರೈಲು ಮಾರ್ಗದಲ್ಲಿ ರೈಲು ಸಂಚಾರಕ್ಕೆ ಒಪ್ಪಿಗೆ ಸೂಚಿಸಿದ್ದರು.**

## ಮಿನಿ ನ್ಯೂಸ್

### ಧರ್ಮಸ್ಥಳ ಹಿಂದೂ ಧರ್ಮದ ಆಧಾರ ಸ್ಥಂಭ

• **ಉದಯವಾಹಿನಿ ಸೇಡಂ**

ಕರ್ನಾಟಕದಲ್ಲಿ ಹಿಂದೂ ಧರ್ಮದ ಆಧಾರ ಸ್ಥಂಭ ಧರ್ಮಸ್ಥಳವಾಗಿದ್ದು ಅದಕ್ಕೆ ತನ್ನದೇ ಆದ ಪವಿತ್ರತೆಯನ್ನು ಕಾಪಾಡಿಕೊಂಡು ಬರುತ್ತಿದೆ ಧರ್ಮಸ್ಥಳದ ವಿರುದ್ಧ ಕಾಂಗ್ರೆಸ್ ಸರ್ಕಾರ ಅಪಪ್ರಚಾರ ಮಾಡುವುದಕ್ಕೆ ಕುಮ್ಮಕು ನೀಡುತ್ತಿದ್ದರೆ ನಾವು ಹಿಂದುಗಳಾಗಿ ಸಹಿಸುವುದಿಲ್ಲ ಎಂದು ಮಾಜಿ ಶಾಸಕ ರಾಜಕುಮಾರ್ ಪಾಟೀಲ್ ತೇಲ್ಕೂರ್ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಪಟ್ಟಣದ ಶ್ರೀ ಕೊತ್ತಲ ಬಸವೇಶ್ವರ ದೇವಸ್ಥಾನದಿಂದ ತಹಶೀಲ್ದಾರ್ ಕಚೇರಿವರೆಗೆ ಧರ್ಮದ ಉಳಿವಿಗಾಗಿ ಧರ್ಮಯುದ್ಧ ಬೃಹತ್ ಪ್ರತಿಭಟನೆ ನೇತೃತ್ವವಹಿಸಿ ಅವರು ಮಾತನಾಡಿದರು.

### ಯೂರಿಯಾಕ್ಕಾಗಿ ರಸ್ತೆ ತಡೆ ನಡೆಸಿದ ರೈತರು

• **ಉದಯವಾಹಿನಿ ಹಗರಿಬೊಮ್ಮನಹಳ್ಳಿ**

ಪಟ್ಟಣದ ಕೃಷಿ ಪತ್ತಿನ ಸಹಕಾರ ಸಂಘದ ಮಳಿಗೆಯ ಮುಂದೆ ಬೆಳಗಿನ ಜಾವದಿಂದ ಸರತಿಯಲ್ಲಿ ನಿಂತಿದ್ದ ನೂರಾರು ರೈತರು ಯೂರಿಯಾ ರಸಗೊಬ್ಬರ ಸಿಗದಿದ್ದಾಗ ಆಕ್ರೋಶಗೊಂಡು ಕೆಲ ಕಾಲ ರಸ್ತೆ ತಡೆ ನಡೆಸಿದರು. ಪ್ರತಿ ದಿನ ಯೂರಿಯಾಕ್ಕಾಗಿ ಸರತಿಯಲ್ಲಿ ನಿಲ್ಲುವುದೇ ಕೆಲಸ ಆಗಿದೆ. ಇದುವರೆಗೂ ಒಂದು ಚೀಲವೂ ದೊರೆತಿಲ್ಲ, ಈ ಕುರಿತಂತೆ ಯಾರೂ ಕ್ರಮ ವಹಿಸದ್ದರಿಂದ ಬೇಸತ್ತು ರಸ್ತೆ ತಡೆ ಮಾಡಲಾಗಿದೆ' ಎಂದು ರೈತರು ತಿಳಿಸಿದರು. ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು, ರೈತರೊಂದಿಗೆ ಮಾತುಕತೆ ನಡೆಸಿದರು. ಪೊಲೀಸರು ಮತ್ತು ರೈತರ ಮಧ್ಯೆ ಮಾತಿನ ಚಕಮಕಿ ನಡೆಯಿತು. ಕೆಲ ಕಾಲ ಸ್ಥಳದಲ್ಲಿ ಆತಂಕದ ವಾತಾವರಣ ಸೃಷ್ಟಿಯಾಗಿತ್ತು. ಪಿಎಸ್‌ಐ ಬಸವರಾಜ ಅಡವಿಬಾವಿ ರೈತರಿಗೆ ತಿಳಿ ಹೇಳಿ ರಸ್ತೆ ತಡೆಯನ್ನು ಹಿಂದಕ್ಕೆ ಪಡೆಯುವಂತೆ ಮಾಡಿದರು.

ರಾಜ್ಯ ಹೆದ್ದಾರಿ ತಡೆ ಮಾಡುವುದರಿಂದ ಪ್ರಯಾಣಿಕರಿಗೆ ತೊಂದರೆಯಾಗುತ್ತದೆ, ರಸಗೊಬ್ಬರ ವಿತರಣೆ ಕುರಿತು ಕೃಷಿ ಇಲಾಖೆಯ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದಾಗ ಪರಿಸ್ಥಿತಿ ತಿಳಿಗೊಂಡಿತು.

### ಅಧಿಕಾರಿಗಳು ಸರ್ಕಾರಿ ಜಾಗ ಕಂಡುಹಿಡಿಯಿರಿ: ಶಾಸಕ ಕೆ.ರಾಘವೇಂದ್ರ ಹಿಟ್ನಾಳ

• **ಉದಯವಾಹಿನಿ ಕೊಪ್ಪಳ**

ಸರ್ಕಾರಿ ಜಾಗ ಕಬಳಿಸಿ ವೈಯಕ್ತಿಕ ಮನೆ, ಮಳಿಗೆಗಳನ್ನು ನಿರ್ಮಿಸಿಕೊಂಡಿದ್ದಾರೆ. ಅಂತಹವುಗಳನ್ನು ಅಧಿಕಾರಿಗಳು ಪರಿಶೀಲಿಸಬೇಕು ಎಂದು ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಹೇಳಿದರು. ನಗರದ ತಾ.ಪಂ ಸಭಾಂಗಣದಲ್ಲಿ ನಡೆದ ತಾ.ಪಂ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಅಧಿಕಾರಿಗಳು ಕ್ರಿಯಾಶೀಲರಾಗಿ ಮಾಹಿತಿ ನೀಡಬೇಕು. ಇಲ್ಲವಾದರೆ ಕ್ರಮ ತೆಗೆದುಕೊಳ್ಳಲು ಸರ್ಕಾರಕ್ಕೆ ಪತ್ರ ಬರೆಯುತ್ತೇವೆ' ಎಂದು ಎಚ್ಚರಿಕೆ ನೀಡಿದರು. ತಾಲ್ಲೂಕಿನಲ್ಲಿ 87 ಹಾಲು ಉತ್ಪಾದಕ ಸಂಘಗಳಿವೆ. ಗ್ರಾಮಕ್ಕೊಂದರಂತೆ ಕನಿಷ್ಠ 100 ಸಂಘ ರಚಿಸಬೇಕು. ಎಲ್ಲಾ ಯೋಜನೆಗೆ ಅರ್ಜಿ ಪಡೆದು ಸಲ್ಲಿಸಬೇಕು. ನಂದಿನಿ ಪಾರ್ಲರ್‌ಗೆ ಜಾಗ ಗುರುತಿಸಬೇಕು. ತಾಲ್ಲೂಕಿನ ಎಲ್ಲಾ ವಸತಿ ನಿಲಯಗಳಲ್ಲಿ ಆಹಾರ ಗುಣಮಟ್ಟ ಕಾಪಾಡಿಕೊಳ್ಳಬೇಕು. ತೊಂದರೆ ಬಾರದಂತೆ ಅಧಿಕಾರಿಗಳು ಕ್ರಮ ಜರುಗಿಸಬೇಕು ಎಂದು ಹೇಳಿದರು. ಎಸಿ ಕ್ಯಾ. ಮಹೇಶ ಮಾಲಗಿತ್ತಿ ಮಾತನಾಡಿ, ಉಪಗ್ರಾಮ, ಕಂದಾಯ ಗ್ರಾಮಕ್ಕೆ ಆಸಕ್ತಿ ತೋರಿಸಿದರೆ, ಕೆಲಸದ ಭಾರ ಹೆಚ್ಚಲಿದೆ ಎಂಬ ಕಾರಣಕ್ಕೆ ಪಿಡಿಒಗಳು ತಲೆಕಡೆಸಿಕೊಳ್ಳುತ್ತಿಲ್ಲ. ಇದನ್ನು ಬಿಟ್ಟು ಕ್ರಿಯಾಶೀಲರಾಗಿ ಕೆಲಸ ಮಾಡಬೇಕು. ನಿರ್ಲಕ್ಷ್ಯ ವಹಿಸಿದರೆ ಕ್ರಮ ಜರುಗಿಸಲಾಗುವುದು' ಎಂದು ಹೇಳಿದರು.

### ಭೇದ ಬೇಡ, ಭಾವೈಕ್ಯತೆ ಇರಲಿ: ಖಂಡ್ರೆ

• **ಉದಯವಾಹಿನಿ ಬಸವಕಲ್ಯಾಣ**

ಯಾವುದೇ ರೀತಿಯ ಭೇದ ಭಾವವಿಲ್ಲದೆ ಎಲ್ಲರೂ ಭಾವೈಕ್ಯತೆಯಿಂದ ಬಾಳಬೇಕು. ಧರ್ಮ ಮಾರ್ಗದಿಂದ ನಡೆಯಬೇಕು' ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು. ನಗರದ ಅಕ್ಕಮಹಾದೇವಿ ಕಾಲೇಜು ಆವರಣದಲ್ಲಿ ಹಮ್ಮಿಕೊಂಡಿದ್ದ ರಂಭಾಪುರಿ ಪೀಠದ ವೀರಸೋಮೇಶ್ವರ ಶಿವಾಚಾರ್ಯರ ನೇತೃತ್ವದಲ್ಲಿ ನಡೆಯುವ ದಸರಾ ದರ್ಬಾರ ಕಾರ್ಯಕ್ರಮದ ಮಾನವಧರ್ಮ ಸಭಾಮಂಟಪದ ಭೂಮಿಪೂಜೆ ಹಾಗೂ ಪಂಚಾಚಾರ್ಯ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಅಧರ್ಮದಿಂದ ಧರ್ಮದೆಡೆಗೆ ಸಾಗಬೇಕು. ದುಷ್ಟರು ಯಾರು ಎಂಬುದೇ ತಿಳಿಯದಾಗಿದೆ. ಆದರೂ, ಶಿಷ್ಟರ ರಕ್ಷಣೆ ಆಗಬೇಕು. ದುರ್ಗುಣ, ಮದ, ಮತ್ಸರ ಬಿಡಬೇಕು. ವಿಶಾಲ ದೃಷ್ಟಿಕೋನ, ಉತ್ತಮ ಸಂಸ್ಕಾರ ಬೆಳೆಸಿಕೊಳ್ಳಬೇಕು. ಅದಕ್ಕಾಗಿ ಗುರುಗಳ, ಮಠಾಧೀಶರ ಮಾರ್ಗದರ್ಶನ ಅಗತ್ಯವಾಗಿದೆ' ಎಂದರು.

ದಸರಾ ದರ್ಬಾರ ಕಾರ್ಯಕ್ರಮ ಅದ್ದೂರಿಯಾಗಿ ನೆರವೇರಲಿದೆ. ಅದಕ್ಕಾಗಿ ಹಾರಕೂಡ ಚನ್ನವೀರ ಶಿವಾಚಾರ್ಯರ ಸಲಹೆಯನ್ನು ಪಾಲಿಸಬೇಕಾಗಿದೆ. ರಾಜ್ಯದಲ್ಲಿ ಅಷ್ಟೇ ಅಲ್ಲ, ಮಹಾರಾಷ್ಟ್ರ ಹಾಗೂ ಇತರೆಡೆಯೂ ಅವರ ಪ್ರಭಾವವಿದೆ. ಸಮಾರಂಭ ಸುವ್ಯವಸ್ಥಿತವಾಗಿ ನೆರವೇರಲು ಎಲ್ಲರೂ ಸಹಕರಿಸಬೇಕು ಎಂದು ಹೇಳಿದರು.

### ಆರೋಗ್ಯ ಸಂಪತ್ತೇ ನಿಜವಾದ ಶ್ರೇಷ್ಠ ಸಂಪತ್ತು : ಸಿದ್ದಲಿಂಗ ಬಾಳಿ

• **ಉದಯವಾಹಿನಿ ಚಿತ್ತಾಪುರ**

ಜಗತ್ತಿನಲ್ಲಿ ಎಲ್ಲಾ ಸಂಪತ್ತುಗಳಿಗಿಂತ ಆರೋಗ್ಯವೇ ನಿಜವಾದ ಶ್ರೇಷ್ಠ ಸಂಪತ್ತು ಎಂದು ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಸಂಪನ್ಮೂಲ ಶಿಕ್ಷಕ ಸಿದ್ದಲಿಂಗ ಬಾಳಿ ಹೇಳಿದರು. ಅವರು ರಾವೂರ ಗ್ರಾಮದ ಸರಕಾರಿ ಪ್ರೌಢ ಶಾಲೆಯಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ವತಿಯಿಂದ ಸ್ವಾಸ್ತ್ಯ ಸಂಕಲ್ಪ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ನಾವು ಜೀವನದಲ್ಲಿ ಏನೆಲ್ಲಾ ಸಂಪಾದನೆ ಮಾಡಿದರೂ ಆರೋಗ್ಯ ಇಲ್ಲದಿದ್ದರೆ ಎಲ್ಲವೂ ವ್ಯರ್ಥ. ಇಂದು ವ್ಯಸನಗಳು ಹೆಚ್ಚಾಗಿ ಜನಸಾಮಾನ್ಯರ ಬದುಕನ್ನು ಸಾವಿಗೆ ದೂಡುತ್ತಿವೆ. ದೇಶದ ಪ್ರಗತಿಯಲ್ಲಿ ದೊಡ್ಡ ಕೊಡುಗೆ ಕೊಡಬೇಕಾದ ಯುವಕರೇ ಇವತ್ತು ಅನೇಕ ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ.

ಸಣ್ಣ ವಯಸ್ಸಿಗೆ ಅನೇಕ ಮಾರಕ ರೋಗಗಳಿಗೆ ಬಲಿಯಾಗಿ ತಮ್ಮ ಕುಟುಂಬವನ್ನು ಅಕ್ಷರಶಃ ಬೀದಿಗೆ ತಳ್ಳುತ್ತಿದ್ದಾರೆ. ಇಂತಹ ಕಲುಷಿತ ವಾತಾವರಣದಲ್ಲಿ ನಮ್ಮ ಆರೋಗ್ಯವನ್ನು ಸದೃಢಗೊಳಿಸುತ್ತಾ ದೇಶವನ್ನು ಸದೃಢ ಮಾಡುವ ಸಂಕಲ್ಪ ಮಾಡಬೇಕಿದೆ. ಆದ್ದರಿಂದ ಪ್ರತಿಯೊಬ್ಬರೂ ಚಟಮುಕ್ತ ಸಮಾಜಕ್ಕೆ ಸಂಕಲ್ಪ ಮಾಡೋಣ ಎಂದು ಹೇಳಿದರು. ಸಂಸ್ಥೆಯ ಯೋಜನಾಧಿಕಾರಿ ಗುರುರಾಜ್. ಬಿ ಪ್ರಾಸ್ತಾವಿಕವಾಗಿ ಮಾತನಾಡಿ ಧರ್ಮಸ್ಥಳ ಗ್ರಾಮಭಿವೃದ್ಧಿ ಸಂಸ್ಥೆ ಸಮಾಜದ ವಿವಿಧ ವರ್ಗದವರಿಗೆ ಜಾತಿ. ಮತ. ಪಂಥಗಳನ್ನು ಮೀರಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿ ಅವರ ಬದುಕನ್ನು ಹಸನುಮಾಡುವ ಕೆಲಸ ಮಾಡುತ್ತಿದೆ. ಪ್ರತಿಯೊಬ್ಬರೂ ಯೋಜನೆಯ ಲಾಭವನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ.

**ವೃಷಭ** ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ.

**ಮಿಥುನ** ಕೆಲವು ಒತ್ತಡ ನಿಮ್ಮ ಸಹನೆಯನ್ನು ಪರೀಕ್ಷಿಸುತ್ತದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಮನೆಯಲ್ಲಿನ ಪರಿಸ್ಥಿತಿಗಳಿಂದ ನಿಮಗೆ ಅಸಮಾಧಾನ ಉಂಟಾಗಬಹುದು.

**ಕರ್ಕಾಟಕ** ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ.

**ಸಿಂಹ** ಆದರೆ ಧೃತಿಗೆಡಬೇಡಿ. ಅಭ್ಯುದಯ ಮನಸ್ಸಿಗೆ ಮುದ ನೀಡಿದರೆ ಅಭಾವ ಅದನ್ನು ಬಲಗೊಳಿಸುತ್ತದೆಂದು ನೆನಪಿಡಿ. ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಲಾಭದಾಯಕವಾಗಬಹುದು.

**ಕನ್ಯಾ** ಉತ್ತಮ ಲಾಭ ಪಡೆಯಲು ಶಕ್ತಿಯನ್ನು ಸಕಾರಾತ್ಮಕ ಬಳಕೆಗೆ ವಿನಿಯೋಗಿಸಬೇಕು. ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು.

**ತುಲಾ** ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ವ್ಯಾಪಾರಿಗಳಿಗೆ ವ್ಯಾಪಾರದಲ್ಲಿ ಹಾನಿ ಉಂಟಾಗಬಹುದು.

**ವೃಶ್ಚಿಕ** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ಪತ್ನಿಯೊಂದಿಗೆ ಶಾಪಿಂಗ್ ಅನ್ನು ಆನಂದಿಸುತ್ತೀರಿ.

**ಧನಸ್ಸು** ನಿಮ್ಮ ಅಸೂಯೆ ವರ್ತನೆ ನಿಮ್ಮನ್ನು ದುಃಖಿಗಳಾಗಿಯೂ ಮತ್ತು ಖಿನ್ನರಾಗಿಯೂ ಮಾಡಬಹುದು. ಆದರೆ ಇದು ಒಂದು ಸ್ವಯಂಕೃತ ಗಾಯವಾಗಿರುವುದರಿಂದ ಇದರ ಬಗ್ಗೆ ಪ್ರಲಾಪಿಸುವ ಅಗತ್ಯವಿಲ್ಲ.

**ಮಕರ** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ದೀರ್ಘಕಾಲದ ದೃಷ್ಟಿಕೋನದಿಂದ ಹೂಡಿಕೆ ಮಾಡಬೇಕು.

**ಕುಂಭ** ಗರ್ಭಿಣಿಯರಿಗೆ ವಿಶೇಷ ಕಾಳಜಿಯ ದಿನ. ರಾತ್ರಿಯ ವೇಳೆಯಲ್ಲಿ ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ನಿಮಗೆ ಮರಳಿ ಸಿಗಬಹುದು.

**ಮೀನ** ಅನಾವಶ್ಯಕ ಉದ್ವೇಗ ಮತ್ತು ಚಿಂತೆ ನಿಮ್ಮ ಜೀವನದ ರಸ ಹೀರಬಹುದು ನಿಮ್ಮನ್ನು ಖಾಲಿಯಾಗಿಸಬಹುದು. ಇವುಗಳನ್ನು ತೊಡೆದುಹಾಕದಿದ್ದಲ್ಲಿ ಅವು ಕೇವಲ ನಿಮ್ಮ ಸಮಸ್ಯೆಯನ್ನು ಉಲ್ಬಣಗೊಳಿಸುತ್ತವೆ.

### ಸಿದ್ಧಸಿರಿ ಕಾರ್ಖಾನೆಯ ಎನ್‌ಓಸಿ ರದ್ದುಗೊಳಿಸಲು ಒಮ್ಮತದ ನಿರ್ಣಯ: ಪುರಸಭೆ ಅಧ್ಯಕ್ಷ ಆನಂದ ಟೈಗರ್

# ಪಟ್ಟಣದಲ್ಲಿ ರಸ್ತೆ ಅಗಲಿಕರಣಕ್ಕೆ ನಿರ್ಣಯ ಪಾಸ್

• **ಉದಯವಾಹಿನಿ, ಚಿಂಚೋಳಿ**

ಪಟ್ಟಣದಲ್ಲಿ ಆಕ್ರಮವಾಗಿ ಕಟ್ಟಡ ನಿರ್ಮಾಣ ಮಾಡಿರುವ ಹಾಗೂ ರಸ್ತೆಗಳು ಆಕ್ರಮಿಸಿದ್ದು ಅವುಗಳನ್ನು ತೆರವುಗೊಳಿಸಿ ರಸ್ತೆ ಅಗಲಿಕರಣಕ್ಕೆ ಹಾಗೂ ಸಿದ್ದಸಿರಿ ಕಾರ್ಖಾನೆಯ ಎನ್‌ಓಸಿ ರದ್ದುಗೊಳಿಸಲು ಒಮ್ಮತದ ನಿರ್ಣಯ ಸಾಮಾನ್ಯ ಸಭೆಯಲ್ಲಿ ತೆಗೆದುಕೊಳ್ಳಲಾಗಿದ್ದು ಕಾನೂನು ತಜ್ಞರ ಜೊತೆ ಸಮಲೋಚನೆ ನಡೆಸಿ ಕ್ರಮಕೈಗೊಳ್ಳಲಾಗುವುದು ಎಂದು ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್ ಹೇಳಿದರು. ಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ಹಮ್ಮಿಕೊಂಡ ಸಾಮಾನ್ಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,ಸಿದ್ದಸಿರಿ ಕಾರ್ಖಾನೆಗೆ ಸಂಬಂಧಪಟ್ಟ ಯಾವುದೇ ದಾಖಲಾತಿಗಳು ಕಾರ್ಖಾನೆಯವರು ಪುರಸಭೆಗೆ ಹಸ್ತಾಂತರ ಮಾಡಿಲ್ಲ,ಅನೇಕ ಬಾರಿ ನೋಟಿಸ್ ಜಾರಿ ಮಾಡಿದರೂ ಕ್ಯಾರೆ ಅನ್ನದೆ ನಿರ್ಲಕ್ಷ್ಯ ತೋರುತ್ತಿದ್ದಾರೆ ಅದ್ದಕ್ಕಾಗಿ ಸಾಮಾನ್ಯ ಸಭೆಯಲ್ಲಿ ಕಾರ್ಖಾನೆಯ ಎನ್‌ಓಸಿ ರದ್ದುಗೊಳಿಸಲು ನಿರ್ಣಯ ತೆಗೆದುಕೊಂಡಿದ್ದು ಕಾನೂನು ತಜ್ಞರ ಜೊತೆ ಸಮಲೋಚನೆ ನಡೆಸಲಾಗುವುದು.

ಇಂದಿರಾ ಕ್ಯಾಂಟೀನ್ ಸಮರ್ಪಕವಾಗಿ ಮೇನು ಚಾಟ್ ಪ್ರಕಾರ ಗುಣಮಟ್ಟದ ಆಹಾರ ವಿತರಣೆ ಮಾಡುತ್ತಿಲ್ಲವೆಂದು ಪುರಸಭೆ ಸದಸ್ಯರ ಹಾಗೂ ಅನೇಕ ಮುಖಂಡರ ದೂರುಗಳು ಬರುತ್ತಿದ್ದು ಗುತ್ತಿಗೆದಾರರಿಗೆ ಬಿಲ್ಲು ಪಾವತಿ ಮಾಡದೆ ತಡೆಹಿಡಿಯಲು ನಿರ್ಣಯ ಮಾಡಲಾಗಿದೆ.

ಸ್ಲಂ ಬೋರ್ಡ್ ಇಲಾಖೆ ವತಿಯಿಂದ 1363 ಮನೆಗಳು ನಿರ್ಮಾಣ ಹಂತದಲ್ಲಿದ್ದು ಕಳಪೆ ಕಾಮಗಾರಿ ಮಾಡಲಾಗುತ್ತಿದೆ ಎಂದು ಅನೇಕ ದೂರುಗಳು ಬಂದಿರುತ್ತವೆ ಅದಕಾರಣ ಪುರಸಭೆ ವತಿಯಿಂದ ಸಾಮಾನ್ಯ ಸಭೆಯಲ್ಲಿ ನಡುವಳಿ ತಯ್ಯಾರಿಸಿ ಗುಣಮಟ್ಟದ ಕಾಮಗಾರಿ ಮಾಡಿ ಜನರಿಗೆ ಹಸ್ತಾಂತರ ಮಾಡಬೇಕೆಂದು ಈಗಾಗಲೇ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ತಿಳಿಸಲಾಗಿದೆ. ನನ್ನ ಅಧಿಕಾರದ ಅವಧಿಯಲ್ಲಿ ನಗರೋತ್ಥಾಪನ ಯೋಜನೆಯಲ್ಲಿ ಈಗಾಗಲೇ 45ಲಕ್ಷ ರೂ.ಕುಡಿಯುವ ನೀರಿಗಾಗಿ 40ಎಚ್.ಪಿ.ಮೋಟರ್, 20ಎಚ್.ಪಿ.ಮೋಟರ್, ವಿವಿಧ ಕಾಮಗಾರಿಗಳು ಕ್ರೀಯಾಯೋಜನೆ ಸಿದ್ಧಪಡಿಸಲಾಗಿದೆ,ಹಾಗೂ 4ಕೋಟಿ ರೂ.ಸಿಸಿ ರಸ್ತೆಗಳು,ಚರಂಡಿಗಳು,ಕುಡಿಯುವ ನೀರಿನ ಪೈಪ್ ಲೈನ್,ಸಿಸಿಟಿವಿ,ಬೀದಿ ದ್ವೀಪ ದುರಸ್ತಿ,ಹೀಗೆ ಹತ್ತಾರು ಕಾಮಗಾರಿಗಳು ಮಾಡಲಾಗಿದೆ,ಐತಿಹಾಸಿಕ ಕ್ಷೇತ್ರ ಬುಗ್ಗಿಯ ಅಭಿವೃದ್ಧಿಗೆ 10ಲಕ್ಷ ರೂ.ವೀರೇಂದ್ರ ಪಾಟೀಲ ಉದ್ಯಾನವನ ಅಭಿವೃದ್ಧಿಗಾಗಿ 5ಲಕ್ಷ ರೂ.ಕ್ರೀಯಾಯೋಜನೆ ಮಾಡಲಾಗಿದ್ದು ಶೀಘ್ರದಲ್ಲೇ ಕಾಮಗಾರಿ ಪ್ರಾರಂಭಿಸಲಾಗುವುದು.






ಉದಯವಾಹಿನಿ ಚಿತ್ರ

> ಏಪ್ರಿಲ್ 2025ರಿಂದ ಜುಲೈ ವರೆಗೆ ಪುರಸಭೆಗೆ 1.79ಕೋಟಿ ಆದಾಯ ಬಂದಿದ್ದು,1.39ಕೋಟಿ ಖರ್ಚಾಗಿದೆ,39.74ಲಕ್ಷ ಉಳಿತಾಯ ಆಗಿದೆ,ಪುರಸಭೆ ಅಭಿವೃದ್ಧಿಗಾಗಿ ಈಗಾಗಲೇ ಅನುದಾನಕ್ಕಾಗಿ ಉಸ್ತುವಾರಿ ಸಚಿವ ಪ್ರೀಯಾಂಕ್ ಖರ್ಗೆಯವರಿಗೆ ಮನವಿ ಮಾಡಲಾಗಿದ್ದು ಬರುವ ದಿನಗಳಲ್ಲಿ ಚಿಂಚೋಳಿಗೆ ಆಗಮಿಸಿ ಸ್ಥಳದಲ್ಲೇ ಅನುದಾನ ಘೋಷಣೆ ಮಾಡಲಾಗುವುದು ಎಂದು ಹೇಳಿದ್ದಾರೆ,ಅದರಂತೆ ಶಾಸಕ ಡಾ.ಅವಿನಾಶ ಜಾಧವ ಅವರಿಗೂ ಅನುದಾನಕ್ಕಾಗಿ ಮನವಿ ಮಾಡಲಾಗಿದ್ದು ಶಾಸಕರು ಕೂಡ ಅನುದಾನ ನೀಡುವುದಾಗಿ ಭರವಸೆ ನೀಡಿದ್ದಾರೆ. – ಆನಂದಕುಮಾರ ಟೈಗರ್, ಪುರಸಭೆ ಅಧ್ಯಕ್ಷರು.

**ಕಾನೂನು ತಜ್ಞರ ಜೊತೆ ಸಮಲೋಚನೆ**

ಬರುವ ದಿನಗಳಲ್ಲಿ ಚಿಂಚೋಳಿ ನಗರ ಅಭಿವೃದ್ಧಿಗಾಗಿ ಪದ್ಮಾ ಕಾಲೇಜುದಿಂದ ಹಳೆ ತಹಶೀಲ್ ವರೆಗೆ ವಿಭಜಕ,ಅಂಬೇಡ್ಕರ್ ವೃತ್ತದಿಂದ ಗಾಂಧೀಜಿ ವೃತ್ತದವರೆಗೆ ಬೀದಿದ್ವೀಪ ಅಳವಡಿಕೆ , ಬುಗ್ಗಿದಿಂದ ಹನುಮಾನ್ ಮಂದಿರದವರೆಗೆ ಮುಲ್ಲಾಮಾರಿ ನದಿಗೆ ತಡೆಗೋಡೆ, ಪಟ್ಟಣದ್ಯಂತ ಸಿಸಿಟಿವಿ ಅಳವಡಿಕೆ, ಹೈಮಾಸ್ಟ್ ದ್ವೀಪ ಅಳವಡಿಕೆ,ಎಲ್ಲಾ ಬಡಾವಣೆಯಲ್ಲಿ ಮೂಲಭೂತ ಸೌಕರ್ಯ ಒದಗಿಸುವುದು ಮಾಡಲಾಗುವುದು.

ನೀಮಾಹೋಸಳ್ಳಿ ರಸ್ತೆಗೆ ಇರುವ ಆಶ್ರಯ ಮನೆಗಳು ಈಗಾಗಲೇ ಕೆಲವೊಂದು ಹಂಚಿಕೆ ಮಾಡಲಾಗಿದ್ದು ಉಳಿದ ಎಲ್ಲಾ ಮನೆಗಳು ಹಂಚಿಕೆ ಮಾಡಲಾಗುವುದು,ವಿದ್ಯುತ್ ಸಂಪರ್ಕ ಸೇರಿದಂತೆ ಮೂಲಭೂತ ಸೌಕರ್ಯ ಒದಗಿಸಲಾಗುವುದು ಎಂದರು. ಸದಸ್ಯ ಅನ್ವರ್ ಖತೀಬ್ ಮಾತನಾಡಿ ಬೀದಿ ನಾಯಿಗಳ ಹವಾಳಿ ಹೆಚ್ಚಾಗಿದ್ದು ಬಹಳಷ್ಟು ಜನರಿಗೆ ನಷ್ಟವುಂಟು ಮಾಡಿವೆ ಅವುಗಳು ತಡೆಗಟ್ಟಬೇಕು,ಸಿಬ್ಬಂದಿ ವರ್ಗದವರ ವೇತನ,ಬಡವರ ಆಶ್ರಯ ಮನೆಗಳು ವಿತರಣೆ ಮಾಡುವಂತೆ ಒತ್ತಾಯಿಸಿದರು.

ಸದಸ್ಯ ಸಂತೋಷ ಮಾಳಪ್ಪನೋರ ಮಾತನಾಡಿ ಇಂದಿರಾ ಕ್ಯಾಂಟೀನ್‌ನಲ್ಲಿ ಸಮರ್ಥವಾಗಿ ಮೇನು ಚಾಟ್ ಪ್ರಕಾರ ಆಹಾರ ವಿತರಣೆ ಮಾಡುತ್ತೀಲ್ಲಾ ಗುತ್ತಿಗೆದಾರರ ಬಿಲ್ಲು ಪಾವತಿ ಮಾಡದೆ ನೋಟಿಸ್ ಜಾರಿ ಮಾಡಿ ಇಂದಿರಾ ಕ್ಯಾಂಟೀನ್ ನಿರ್ವಹಣೆ ವಹಿಸಿದ ಪುರಸಭೆ ಅಧಿಕಾರಿಗೂ ನೋಟಿಸ್ ಜಾರಿ ಮಾಡುವಂತೆ ಒತ್ತಾಯಿಸಿದರು.


ಸದಸ್ಯ ಭೀಮರಾವ ರಾಠೋಡ ಮಾತನಾಡಿ ಪಟ್ಟಣದಲ್ಲಿ ಸಮರ್ಪಕವಾಗಿ ನೀರು ಸರಬರಾಜು ಆಗುತ್ತಿಲ್ಲ,ಬೀದಿದ್ವೀಪ ಉರಿಯುತ್ತಿಲ್ಲ, ರಸ್ತೆಗಳ ನಿರ್ಮಾಣ,ಚರಂಡಿ ಸ್ವಚ್ಚಗೊಳಿಸುತ್ತಿಲ್ಲ, ಸಿಸಿಟಿವಿ ಅಳವಡಿಸಿ,ಬಿ ಮತ್ತು ಸಿ.ಖಾತೆಗಳನ್ನು ವಿತರಿಸಿದರೆ ಪುರಸಭೆಗೆ ಆದಾಯ ಬರುತ್ತದೆ ಎಂದರು. ಸದಸ್ಯರಾದ ಅಬ್ದುಲ್ ಬಾಷೀದ್,ಶಬ್ಬೀರ ಅಹೇಮದ್,ರಾಧಾಬಾಯಿ,ಶಿವಕುಮಾರ ಪೋಚಾಲಿ, ಶ್ರೀಕಾಂತ ಸುಂಕದ,ಬಸವರಾಜ ಸಿರ್ಸಿ ಮಾತನಾಡಿದರು. ಈ ಸಂದರ್ಭದಲ್ಲಿ ಮುಖ್ಯಾಧಿಕಾರಿ ನಿಂಗಮ್ಮ ಬಿರಾದಾರ,ಉಪಾಧ್ಯಕ್ಷ ಸುಲ್ತಾನಬೇಗಂ ಖಲೀಲ್ ಪಟೇಲ,ಸ್ಥಾಯಿ ಸಮಿತಿ ಅಧ್ಯಕ್ಷ ಜಗನ್ನಾಥ ಗುತ್ತೇದಾರ,ರೂಪಕಲಾ ಕಟ್ಟಿಮನಿ, ನಾಗೇಂದ್ರಪ್ಪ ಗುರಂಪಳ್ಳಿ, ಸವಿತಾಬಾಯಿ ರಾಜು ಪವ್ಹಾರ,ಶಶೀಧರ ಕಳಸ್ಕರ್, ಸುಲೋಚನಾ ಕಟ್ಟಿ,ಫರ್ಜಾನಬೇಗಂ,ಜಗದೇವಿ ಗಡಂತಿ, ಸೇರಿದಂತೆ ಸಿಬ್ಬಂದಿ ವರ್ಗದವರು ಇದ್ದರು.

## ಪತ್ರಕರ್ತರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿದ ಪ್ರಿನ್ಸಿಪಾಲ್ ಸೇವೆಯಿಂದ ಅಮಾನತ್ತುಗೊಳಿಸಲು ಒತ್ತಾಯ

• **ಉದಯವಾಹಿನಿ, ಸಿಂಧನೂರು**

ಪ್ರಜಾಪ್ರಭುತ್ವದ ನಾಲ್ಕನೇ ಅಂಗವೆಂದು ಆಯಲ್ಪಡುವ ಪತ್ರಿಕಾ ಮಾಧ್ಯಮದ ಮೇಲೆ ನಿರಂತರ ದಾಳಿ, ದೌರ್ಜನ್ಯ, ಅವಮಾನಗಳು ನಡೆಯುತ್ತಿವೆ. ಅದರ ಭಾಗವಾಗಿ ಜಿಲ್ಲೆಯ ಅರಕೇರ ಪಟ್ಟಣದಲ್ಲಿ ವರದಿಗೆ ತೆರಳಿದ್ದ ಪತ್ರಕರ್ತರನ್ನು ಅವಾಚ್ಯವಾಗಿ ನಿಂದಿಸಿದ ಘಟನೆ ಜರುಗಿದ್ದು ಖಂಡನೀಯವಾಗಿದೆ ಎಂದು ಹೇಳಿದರು

ಪ್ರತಿಭಟನೆ ಕುರಿತು ಮಾತನಾಡಿದ ಸಂಘದ ಅಧ್ಯಕ್ಷರು ಡಿ.ಎಚ್ ಕಂಬಳಿ ಅವರು ಕೊತ್ತದೊಡ್ಡ ವಸತಿ ಶಾಲೆಯಲ್ಲಿ ಅನಾರೋಗ್ಯಕ್ಕೆ ತುತ್ತಾದ ವಿದ್ಯಾರ್ಥಿಗಳನ್ನು ಅರಕೇರ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ತಪಾಸಣೆಗೆ ಕರೆತರಲಾಗಿತ್ತು. ಈ ಸಂದರ್ಭದಲ್ಲಿ ಪತ್ರಕರ್ತರು ವಿಡಿಯೋ, ಫೋಟೊ ಚಿತ್ರೀಕರಣ ಮಾಡುತ್ತಿರುವಗೆ ಜವಾಬ್ದಾರಿಯುತ ಸ್ಥಾನದಲ್ಲಿದ್ದ ಪ್ರಿನ್ಸಿಪಾಲ್ ಸುರೇಶ ವರ್ಮಾ ಮಾಹಿತಿ ಮತ್ತು ಚಿತ್ರ ಸಂಗ್ರಹಿಸಿದ ಮಾಧ್ಯಮದವರೊಂದಿಗೆ ಅನುಚಿತವಾಗಿ ವರ್ತಿಸಿದರು. ಮಾಧ್ಯಮದವರು ಲೋಫರ್ಸ್, ಉಪಯೋಗಕ್ಕೆ ಬಾರದವರು. ಇಡಿಯಟ್ಸ್ ನೀವೇನು ಮಾಹಿತಿ ಪಡೆಯುತ್ತೀರಿ ಎಂದು ನಿಂದಿಸಿರುವುದು ಖಂಡನೀಯ.



ಉದಯವಾಹಿನಿ ಚಿತ್ರ

**ನಿರಂತರ ದಾಳಿ, ದೌರ್ಜನ್ಯ**

ಪತ್ರಕರ್ತರು ಮಕ್ಕಳ ಹಿತದೃಷ್ಟಿಯಿಂದ ಮಾಹಿತಿ ಪಡೆಯಲು ಹೋಗಿದ್ದು ತಪ್ಪಾ? ಜವಬ್ದಾರಿಯುತ ಸ್ಥಾನದಲ್ಲಿರುವ ಪ್ರಿನ್ಸಿಪಾಲ್ ಸಂವಿಧಾನದ ನಾಲ್ಕನೇ ಅಂಗದಲ್ಲಿ ನಿಷ್ಪಕ್ಷಪಾತವಾಗಿ, ನಿಷ್ಠುರವಾದಿಯಾಗಿ ಸೇವೆಗೈಯುವವರಿಗೆ ಅಗೌರವ ತೋರಿದ್ದಾರೆ.

ಹೀಗಾದರೆ ಪತ್ರಕರ್ತರು ಸಮಾಜದಲ್ಲಿ ಸ್ವತಂತ್ರವಾಗಿ ವರದಿಗಾರಿಕೆ ಮಾಡುವುದು ಹೇಗೆ ಸಾಧ್ಯವಾಗುತ್ತದೆ. ಇಂತಹ ಬೇಜವಬ್ದಾರಿಯುತ ಅಧಿಕಾರಿಗಳಿಂದ ಪತ್ರಕರ್ತರ ಮೇಲೆ ನಿರಂತರ ಅಪಮಾನಗಳು ನಡೆಯುತ್ತಿವೆ. ಇದರಿಂದ ಪತ್ರಕರ್ತರು ಮಾನಸಿಕವಾಗಿ ನೊಂದಿದ್ದಾರೆ. ಇಡೀ ಮಾಧ್ಯಮ ಕ್ಷೇತ್ರವನ್ನು ಮನಬಂದಂತೆ ಹೀಯಾಳಿಸಿ, ಪತ್ರಕರ್ತರೊಂದಿಗೆ ಅನುಚಿತವಾಗಿ ವರ್ತಿಸಿ, ಅವಾಚ್ಯ ಶಬ್ದಗಳಿಂದ ನಿಂದಿಸಿದ ಕೊತ್ತದೊಡ್ಡಿ ಏಕಲವ್ಯ ವಸತಿ ಶಾಲೆಯ ಪ್ರಿನ್ಸಿಪಾಲನನ್ನು ಕೂಡಲೇ ಸೇವೆಯಿಂದ ಅಮಾನತುಗೊಳಿಸಬೇಕೆಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ತಾಲ್ಲೂಕು ಘಟಕ ಒತ್ತಾಯಿಸುತ್ತಿದೆ. .ಕಾ.ನಿ.ಪ. ಜಿಲ್ಲಾ ಉಪಾಧ್ಯಕ್ಷ ವೀರಭದ್ರಪ್ಪ ಜವಳಗೇರಾ. ಮಹ್ಮದ್ ಮುಸ್ತಫಾ.ಯಮನಪ್ಪ ಪವರ್ ಪ್ರಹ್ಲಾದ್ ಗುಡಿ ವಕೀಲರು. ಶ್ಯಾಮ್ .ಅಶೋಕ್ ಬೆನ್ನೂರು . ಶರಣಪ್ಪ. ವೀರೇಶ್ ಹೊಸಳ್ಳಿ ಚಂದ್ರು ಶೇಖರ್ ಯರಿದಿಹಾಳ. ಪಂಪಾಪತಿ, ದುರುಗೇಶ್ ಶಿವರಾಜ್ ಇದ್ದರು.

## ವಿಜಯಪುರ- ಬಬಲೇಶ್ವರ 2 ಬಸ್ಸುಗಳ ಸೇವೆ ಆರಂಭ

• **ಉದಯವಾಹಿನಿ, ವಿಜಯಪುರ**



ವಿಜಯಪುರ- ಬಬಲೇಶ್ವರ ಮತ್ತು ಬಬಲೇಶ್ವರ- ವಿಜಯಪುರ ಮಧ್ಯೆ ಸಾಮಾನ್ಯ ಸಾರಿಗೆ ಎರಡು ಬಸ್ಸುಗಳ ಸೇವೆ ಪ್ರಾರಂಭವಾಗಿದೆ. ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರ ಸೂಚನೆ ಮೇರೆಗೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಪ್ರತಿದಿನ ಸಾರಿಗೆ ಎರಡು ಬಸ್ಸುಗಳನ್ನು ಈ ಮಾರ್ಗದಲ್ಲಿ ಓಡಿಸಲಿದೆ. ಒಂದು ಬಸ್ಸು ವಿಜಯಪುರ- ಖತಿಜಾಪುರ- ಸಾರವಾಡ ಮಾರ್ಗವಾಗಿ ಬಬಲೇಶ್ವರಕ್ಕೆ ಸಂಚರಿಸಿದರೆ ಮತ್ತೊಂದು ಬಸ್ಸು ಬಬಲೇಶ್ವರ- ಸಾರವಾಡ- ಖತಿಜಾಪುರ ಮಾರ್ಗವಾಗಿ ವಿಜಯಪುರಕ್ಕೆ ಸಂಚರಿಸಲಿದೆ. ಪ್ರತಿದಿನ ಎರಡೂ ಬಸ್ಸುಗಳು ತಲಾ ಎಂಟು ಬಾರಿ ಈ ಮಾರ್ಗದಲ್ಲಿ ಸಂಚಾರ ನಡೆಸಲಿವೆ.

ಬಬಲೇಶ್ವರ ತಾಲ್ಲೂಕಿನ ಸಾರವಾಡ ಗ್ರಾಮದ ವಿದ್ಯಾರ್ಥಿಗಳು ಮತ್ತು ಗ್ರಾಮಸ್ಥರು ತಮ್ಮ ಶಾಲೆ, ಕಾಲೇಜುಗಳು ಮತ್ತು ದೈನದಿಂದ ಚಟುವಟಿಕೆಗಳ ಅನುಕೂಲಕ್ಕಾಗಿ ಸಾರಿಗೆ ಇಲಾಖೆಯ ಬಸ್ಸುಗಳನ್ನು ನಿಲುಗಡೆ ಮಾಡಬೇಕು ಎಂದು ಸಚಿವರಿಗೆ ಮನವಿ ಮಾಡಿದ್ದರು. ಈ ಬೇಡಿಕೆಗೆ ಕೂಡಲೇ ಸ್ಪಂದಿಸಿದ ಸಚಿವರು ತಕ್ಷಣ ಕ್ರಮ ಕೈಗೊಳ್ಳುವಂತೆ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಸೂಚನೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆ ವಿಭಾಗೀಯ ಸಾರಿಗೆ ಅಧಿಕಾರಿಗಳು ಆ. 26 ಮಂಗಳವಾರದಿಂದಲೇ ನಗರ ಸಾರಿಗೆ ಬಸ್ ಸೇವೆ ಪ್ರಾರಂಭಿಸಿ ಆದೇಶ ಹೊರಡಿಸಿದ್ದಾರೆ.

## ಲ್ಯಾಪ್‌ಟ್ಯಾಪ್ ವಿತರಿಸಿದ ಸಚಿವ ಶಿವಾನಂದ ಎಸ್ ಪಾಟೀಲ



ಉದಯವಾಹಿನಿ ಚಿತ್ರ

• **ಉದಯವಾಹಿನಿ ಬಸವನಬಾಗೇವಾಡಿ**

ತಾಲ್ಲೂಕಿನ ಟಕ್ಕಳಕಿ ಸರ್ಕಾರಿ ಪಾಲಿಟೆಕ್ನಿಕ್ 2023-24ನೇ ಸಾಲಿನಲ್ಲಿ ಡಿಪ್ಲೊಮಾ ತರಗತಿಗೆ ಪ್ರವೇಶ ಪಡೆದು ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ /ಪಂಗಡ ನಾಲ್ವರು ವಿದ್ಯಾರ್ಥಿಗಳಿಗೆ ಮಂಗಳವಾರ ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್ ಪಾಟೀಲ ವಿತರಿಸಿದರು. ಈ ಸಂದರ್ಭದಲ್ಲಿ ಪ್ರಾಚಾರ್ಯರಾದ ಡಾ. ನಟರಾಜ ಕುಂಟೋಜಿ ಸೇರಿದಂತೆ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ದೇವರನ್ನೂ ಬಿಡದ ಕಳ್ಳರು

• **ಉದಯವಾಹಿನಿ ಜಮಖಂಡಿ**

ತಾಲ್ಲೂಕಿನ ಮರೆಗುದ್ದಿ ಗ್ರಾಮದಲ್ಲಿ ದೇವರನ್ನೆ ಕಳ್ಳತನ ಮಾಡಿರುವ ಘಟನೆ ತಡರಾತ್ರಿಯಲ್ಲಿ ಜರುಗಿದೆ. ಗ್ರಾಮದ ದಿಗಂಬೇಶ್ವರ ಸಂಸ್ಥಾನ ಮಠದಲ್ಲಿ ತಡ ರಾತ್ರಿ ದೇವಸ್ಥಾನದಲ್ಲಿ ಈ ಘಟನೆ ನಡೆದಿದೆ. ದೇವಸ್ಥಾನದ ಮುಖ್ಯ ದ್ವಾರದ ಮೂಲಕವೇ ದೇವಸ್ಥಾನದಲ್ಲಿ ಪ್ರವೇಶ ಮಾಡಿರುವ ಕಳ್ಳರು ದೇವಾಲಯದಲ್ಲಿದ ಸುಮಾರು 8 ಕೆಜಿ ಬೆಳ್ಳಿಯ ಮೂರ್ತಿ ಹಾಗೂ ದೇವರ ಹುಂಡಿಯನ್ನು ಕದ್ದು ಪರಾರಿಯಾಗಿದ್ದಾರೆ. ಮೂರ್ತಿಗೆ ಬಂಗಾರದ ಕಣ್ಣುಬಟ್ಟುಗಳು, ಇದ್ದವು ಎಂದು ತಿಳಿದು ಬಂದಿದೆ. ದೇವರನ್ನೂ ಬಿಡದ ಖದೀಮರು ಸ್ಥಳಕ್ಕೆ ಸಿ.ಪಿ.ಐ ಮಲ್ಲಪ್ಪ ಮಡ್ಡಿ ಹಾಗೂ ಗ್ರಾಮಿಣ ಪೊಲೀಸ್ ಠಾಣೆ ಪಿ.ಎಸ್.ಐ ಗಂಗಾಧರ ಪೂಜಾರಿ ಅವರ ಪೊಲೀಸ ತಂಡ ಶ್ವಾನ ದಳ, ಹಾಗೂ ಬೆರಳಚ್ಚು ತಜ್ಞರು ಆಗಮಿಸಿ ಪರಿಶೀಲನೆ ನಡೆಸಿದ್ದಾರೆ.

## ಧರ್ಮಸ್ಥಳದ ಅಪಪ್ರಚಾರ ಖಂಡಿಸಿ ಬಿಜೆಪಿ ಪಕ್ಷ ಪ್ರತಿಭಟನೆ

• **ಉದಯವಾಹಿನಿ, ಸಿಂಧನೂರು**

ಹಿಂದುಗಳ ಧಾರ್ಮಿಕ ಕ್ಷೇತ್ರ, ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಸಂಚು ಮತ್ತು ಅಪಪ್ರಚಾರ ಮಾಡುತ್ತಿರುವುದನ್ನು ಖಂಡಿಸಿ ಬಿಜೆಪಿ ವಿಧಾನಸಭಾ ಕ್ಷೇತ್ರದ ವತಿಯಿಂದ ನಗರದ ಪ್ರವಾಸಿ ಮಂದಿರದಿಂದ ತಹಶೀಲ್ದಾರ್ ಕಛೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಲಾಯಿತು. ನಂತರ ಪ್ರತಿಭಟನೆ ಕುರಿತು ಮಾತನಾಡಿದ ಬಿಜೆಪಿ ಪಕ್ಷದ ನಗರ ಘಟಕದ ಅಧ್ಯಕ್ಷರಾದ ಸಿದ್ರಾಮೇಶ ಮನ್ನಾಪುರ ಇವರು ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಅಪಪ್ರಚಾರವನ್ನು ಖಂಡಿಸುತ್ತಾ, ಪದೇ ಪದೇ ಹಿಂದು ಧಾರ್ಮಿಕ ಸ್ಥಳಗಳ ಮೇಲೆ ದಾಳಿಗಳಾಗುತ್ತಿದ್ದು, ಈ ಹಿಂದೆ ಶ್ರೀರಾಮ ಚಂದ್ರಪುರಮಠ, ಶಬರಿಮಲೆ ಅಯ್ಯಪ್ಪ ಸ್ವಾಮಿ ದೇಗುಲ ಹಾಗೂ ಇನ್ನಿತರ ಧಾರ್ಮಿಕ ಸ್ಥಳಗಳ ಮೇಲೆ ನಿರಂತರ ದಾಳಿಗಳಾಗುತ್ತಿದ್ದು ಈ ಬಗ್ಗೆ ಹಿಂದುಗಳ ಧ್ವನಿ ಎತ್ತಬೇಕಾಗಿದೆ.



ಉದಯವಾಹಿನಿ ಚಿತ್ರ

ಕೆಜೆ ಹಳ್ಳಿ ಡಿಜೆ ಹಳ್ಳಿ ಹಿಂಸಾಚಾರ ಪೋಲಿಸ್ ಠಾಣೆಯ ಮೇಲೆ ದಾಳಿ, ದಲಿತ ಶಾಸಕನ ಮನೆಗೆ ಬೆಂಕಿ ಹಚ್ಚಿದ ಪ್ರಕರಣಗಳು ಈ ಕಾಂಗ್ರೇಸ್ ಸರ್ಕಾರದ ವೈಫಲ್ಯತೆಯನ್ನು ತೋರಿಸುತ್ತದೆ.

ಈಗ ಹಿಂದುಗಳು ಒಗ್ಗಟ್ಟು ಪ್ರದರ್ಶಿಸಬೇಕಾಗಿದೆ. ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ರೂಪಿಸಿ ಹಿಂದುಗಳ ಭಾವನೆಗಳಿಗೆ ಧಕ್ಕೆ ತಂದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮುಖಂಡರು ಕೆ.ಕರಿಯಪ್ಪ ಅವರು ಧರ್ಮಸ್ಥಳ ವಿರುದ್ಧ ನಡೆಯುತ್ತಿರುವ ಸಂಚನ್ನು ಖಂಡನೆ ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದರು ಈ ಸಂದರ್ಭದಲ್ಲಿ ಬ್ಯಾಂಕಿನ ಅಧ್ಯಕ್ಷರಾದ ದೊಡ್ಡಬವರಾಜ, ಗ್ರಾಮೀಣ ಮಂಡಲದ ಅಧ್ಯಕ್ಷರಾದ ಯಂಕೋಬ ನಾಯಕ ಅವರು, ಹರ್ಷ, ಪರಮೇಶಪ್ಪ ಆದಿಮನ, ಮಧ್ವರಾಜ್ ಆಚಾರ್ಯ, ಸುಬ್ಬರಾವ್, ಶರಣಪ್ಪ ಡುಮತಿ,ಸೋಮಣ್ಣ ಪತ್ತಾರ್, ಪ್ರಶಾಂತ ಶೆಟ್ಟಿ, ನಾಗರಾಜ ದೇವರಗುಡಿ, ರವಿರಾಠೋಡ್ , ಪ್ರಕಾಶ ಅಚೋಲ, ರಮೇಶ ಯಾದವ , ಭಾಗವಹಿಸಿದ್ದರು.

## ಭಕ್ತಿಯಲ್ಲಿ ನಿಜವಾದ ಶಕ್ತಿ ಇದೆ : ಮಾಸಿಮಾಡೆ

• **ಉದಯವಾಹಿನಿ, ಬೀದರ್**

ಭಕ್ತಿಯಿಂದ ನಮ್ಮೊಳಗಿನ ದರ್ಪ ಮಾಯವಾಗಿ ಶಕ್ತಿಯು ಹೆಚ್ಚುತ್ತದೆ. ಶರಣರ ಹಾಗೆ ನಡೆ-ನುಡಿಗಳನ್ನು ಒಂದಾಗಿಸಿ ಸರಳತೆಯಿಂದ ಬದುಕಿದಾಗ ಮಾತ್ರ ಸಮಾಜದಲ್ಲಿ ನೈತಿಕತೆ ಬೆಳೆಸಬಹುದು, ಎಂದು ಕರ್ನಾಟಕ ಸಾಹಿತ್ಯ ಪರಿಷತ್ತಿನ ನಿಕಟ ಪೂರ್ವಾಧ್ಯಕ್ಷರಾದ ಪ್ರೊ. ಸಿದ್ದರಾಮಪ್ಪ ಮಾಸಿಮಾಡೆ ಹೇಳಿದರು.

ಇವರು ಶ್ರೀ ದತ್ತಾಶ್ರಮ ಚಾರಿಟಬಲ್ ಟ್ರಸ್ಟ್ ವತಿಯಿಂದ ರಾಂಪುರೆ ಕಾಲೋನಿಯ ಶ್ರೀ ದತ್ತಾಶ್ರಮ ಆವರಣದಲ್ಲಿ ಶ್ರಾವಣ ಮಾಸದ ಸಮಾಪ್ತಿಯ ನಿಮಿತ್ಯ ಏರ್ಪಡಿಸಿದ್ದ ಉಪನ್ಯಾಸ ಹಾಗೂ ಎಸ್‌ಎಸ್‌ಎಲ್‌ಸಿ ಉತ್ತಮ ಶ್ರೇಣಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.



ಉದಯವಾಹಿನಿ ಚಿತ್ರ

''ವಿದ್ಯಾರ್ಥಿಗಳಲ್ಲಿ ಸಂಸ್ಕಾರ ಬೆಳಗಬೇಕು, ಗುರುಹಿರಿಯರ ಗೌರವ ರೂಢಿಸಬೇಕು, ಅಷ್ಟೇ ಅಲ್ಲದೇ ಶಾಲೆ, ಕಾಲೇಜು, ವಿಶ್ವವಿದ್ಯಾಲಯಗಳಿಗೆ ಉತ್ತಮ ಹೆಸರು ಬರಲು ಉತ್ತಮ ವಿದ್ಯಾರ್ಥಿಗಳು ಕಾರಣರಾಗುತ್ತಾರೆ'' ಎಂದು ಅವರು ಅಭಿಪ್ರಾಯಪಟ್ಟರು.

## ಧರ್ಮಸಂರಕ್ಷಣಾ ಜಾಥಾ

• **ಉದಯವಾಹಿನಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಧರ್ಮಸ್ಥಳ, ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗಡೆಯವರ ವಿರುದ್ಧ ನಡೆಸಿರುವ ವ್ಯವಸ್ಥಿತ ಸಂಚು ಮತ್ತು ಅಪಪ್ರಚಾರವನ್ನು ಖಂಡಿಸಿ ಬೃಹತ ಧರ್ಮ ಸಂರಕ್ಷಣಾ ಜಾಥಾ ಹಮ್ಮಿಕೊಳ್ಳಲಾಗಿತ್ತು.

ಜಾಥಾಕ್ಕೆ ಬೆಳ್ಳಟ್ಟಿಯ ರಾಮಲಿಂಗೇಶ್ವರ ಮಠದ ಶ್ರೀಗಳು ಗಂಜಿಗಟ್ಟಿಯ ಚರ ಮೂರ್ತೇಶ್ವರ ಶ್ರೀಗಳು ಹೂವಿನ ಶಿಗ್ಲಿಯ ವಿರಕ್ತ ಮಠದ ಶ್ರೀಗಳು ಆದರಳಿ ಗವಿಮಠದ ಕುಮಾರ ಮಹಾರಾಜರು ಚಾಲನೆ ನೀಡಿದರು. ಸಭೆಯಲ್ಲಿ ಮಾತನಾಡಿದ ಬೆಳ್ಳಟ್ಟಿಯ ರಾಮಲಿಂಗೇಶ್ವರ ಮಠದ ಶ್ರೀ ಗಳು ಹಿಂದೂ ಧರ್ಮವನ್ನು ನಾಶಮಾಡಲು ಹೊರಟವರು ತಾವೇ ನಾಶವಾಗುತ್ತಾರೆ ನಮ್ಮ ಧರ್ಮ ಸಂಸ್ಕೃತಿ ಹಾಳು ಮಾಡಲು ಯಾರಿಂದಲೂ ಸಾಧ್ಯವಿಲ್ಲ ಎಂದು ಆನ್ಲೈನ್ ಮುಖಾಂತರ ಶಿರಹಟ್ಟಿ ಸಂಸ್ಥಾನ ಮಠದ ಪಕೀರದಿಂಗಾಲೇಶ್ವರ ಶ್ರೀಗಳು ಭಾಷಣ ಮಾಡಿದರು. ಗವಿಮಠದ ಕುಮಾರ್ ಮಹಾರಾಜರು ಮತ್ತು ಗಂಜಿಗಟ್ಟಿಯ ಶ್ರೀಗಳು ಮಾತನಾಡಿದರು.

ಪ್ರತಿಭಟನಾ ಸಭೆಯಲ್ಲಿ ಮಾಜಿ ಶಾಸಕ ಜಿಎಸ್ ಗಡ್ಡದೇವರ ಮಠ ಸಂಘಟಕ ಮಂಜುನಾಥ ಮಾಗಡಿ ನಾಗರಾಜ್ ಚಿಂಚಲಿ ಪಿಬಿ ಕರಾಟೆ ಬಸವೇಶ ಮಾಹಾಂತಶೆಟ್ಟರ ರವಿಕಾಂತ್ ಅಂಗಡಿ ಬಸಣ್ಣ ಬೆಂಡಿಗೇರಿ ಹೊನ್ನಪ್ಪ ವಡ್ಡರ ಮುಂತಾದವರು ಮಾತನಾಡಿದರು.

## ರೈತ ಮೊಸಳೆ ದಾಳಿಗೆ ಬಲಿ, ಕುಟುಂಬಕ್ಕೆ 20 ಲಕ್ಷ ಪರಿಹಾರ ನೀಡಲಿ : ಬಿ.ಬಿ. ಪಾಟೀಲ್

• **ಉದಯವಾಹಿನಿ, ಮುದ್ದೇಬಿಹಾಳ**

ತಾಲ್ಲೂಕಿನ ಕುಂಚಗನೂರ ಗ್ರಾಮದ ರೈತ ಕಾಶಪ್ಪ ಹಣಮಂತ ಕಂಬಳಿ ಕೃಷ್ಣ ನದಿಯಲಿ ಎತ್ತುಗಳ ಮೈ ತೊಳೆಯುವ ವೇಳೆ ಮೊಸಳೆ ದಾಳಿಗೆ ಬಲಿಯಾದ ಘಟನೆ ಗ್ರಾಮದಲ್ಲಿ ಶೋಕಸಾಗರ ಉಂಟುಮಾಡಿದೆ. ಮಂಗಳವಾರ ಜೆಡಿಎಸ್ ಪಕ್ಷ ಹಾಗೂ ರೈತ ಸಂಘದ ಮುಖಂಡ ಬಿ.ಬಿ. ಪಾಟೀಲ್ ಮುರಾಳ ಅವರು ಕುಂಚಗನೂರ ಗ್ರಾಮಕ್ಕೆ ಭೇಟಿ ನೀಡಿ ಮೃತ ರೈತನ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಅವರು ಕುಟುಂಬಕ್ಕೆ ವೈಯಕ್ತಿಕವಾಗಿ 5,000 ನೆರವು ನೀಡಿ, ''ಮೃತ ರೈತನಿಗೆ ನಾಲ್ಕು ಚಿಕ್ಕ ಮಕ್ಕಳು ಹಾಗೂ ಪತ್ನಿ ಇದ್ದಾರೆ. ಅವರ ಶಿಕ್ಷಣ ಮತ್ತು ಕುಟುಂಬದ ಬದುಕಿನ ಜವಾಬ್ದಾರಿಯನ್ನು ಸರ್ಕಾರ ವಹಿಸಿಕೊಳ್ಳಬೇಕು. ಕನಿಷ್ಠ 20 ಲಕ್ಷ ರೂ ಪರಿಹಾರ ಒದಗಿಸಬೇಕು'' ಎಂದು ಒತ್ತಾಯಿಸಿದರು.

ಕರ್ನಾಟಕ ರಾಜ್ಯ ಹಸಿರುಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಸಂಗಣ್ಣ ಬಾಗೇವಾಡಿ, ಜಿಲ್ಲಾ ಪ್ರ.ಕಾ ಗುರುಸಂಗಪ್ಪಗೌಡ ಹಂಡರಗಲ್ ಅವರು ಮಾತನಾಡಿ ''ಕುಂಚಗನೂರ ಸೇರಿದಂತೆ ನದಿತೀರ ಗ್ರಾಮಗಳಲ್ಲಿ ತಡೆಗೋಡೆ ನಿರ್ಮಿಸಿ, ಎಚ್ಚರಿಕೆ ಫಲಕ ಅಳವಡಿಸಬೇಕು. ಪ್ರವಾಹ ಸಮಯದಲ್ಲಿ ಗ್ರಾಮಸ್ಥರ ಜೀವ ರಕ್ಷಣೆಗಾಗಿ ಸ್ಥಳಾಂತರ ಕ್ರಮ ಕೈಗೊಳ್ಳಬೇಕು. ಜಾನುವಾರುಗಳಿಗೆ ಪ್ರತ್ಯೇಕ ನೀರು, ಬಟ್ಟೆ ಒಗೆಯಲು ದೋಬಿ ಘಾಟ್ ನಿರ್ಮಾಣ ಅಗತ್ಯ'' ಎಂದು ಆಗ್ರಹಿಸಿದರು. ಈ ವೇಳೆ ಮುಖಂಡರು ಮಲ್ಲನಗೌಡ ಬಿರಾದಾರ, ಮಲ್ಲು ಬಿಸಲದಿನ್ನಿ, ಧರೆಯಪ್ಪ ಬಿಸಲದಿನ್ನಿ, ಎಸ್.ಬಿ. ಸಾತಿಹಾಳ, ಶಿವು ವಣಕ್ಯಾಳ ಸೇರಿದಂತೆ ಗ್ರಾಮದ ಹಿರಿಯರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

> ಮೊಸಳೆ ದಾಳಿಗೆ ಬಲಿಯಾದ ಬಡ ರೈತ ಕಾಶಪ್ಪ ಕಂಬಳಿ ಕುಟುಂಬಕ್ಕೆ ವೈಯಕ್ತಿಕವಾಗಿ ನೆರವು ನೀಡಿದ್ದೇನೆ. ನಾಲ್ಕು ಮಕ್ಕಳು ಮತ್ತು ಮಡದಿಯೊಂದಿಗೆ ಬದುಕಬೇಕಾದ ಕುಟುಂಬಕ್ಕೆ ಸರ್ಕಾರ ತಕ್ಷಣ ಆರ್ಥಿಕ ನೆರವು ನೀಡಬೇಕು. -ಬಿ.ಬಿ. ಪಾಟೀಲ್, ಜೆಡಿಎಸ್ ಹಾಗೂ ರೈತ ಮುಖಂಡರು

> ಪ್ರವಾಹ ಪೀಡಿತ ಕುಂಚಗನೂರ, ಕಮಲದಿನ್ನಿ, ಗಂಗೂರು ಗ್ರಾಮಗಳನ್ನು ಸ್ಥಳಾಂತರ ಮಾಡಬೇಕು. ''ಶಾಂತಪ್ಪ ಕಂಬಳಿ ಬಲಿಯಾದಂತೆ ಇನ್ನಷ್ಟು ಜನರ ಜೀವ ಹಾನಿ ಆಗಬಾರದು. ಕೃಷ್ಣಜಲ ನಿಗಮ, ಜಿಲ್ಲಾಡಳಿತ, ತಾಪಂ ಮತ್ತು ತಾಲ್ಲೂಕು ಆಡಳಿತ ತಕ್ಷಣ ಕ್ರಮ ಕೈಗೊಳ್ಳಬೇಕು. - ಬಿ.ಬಿ. ಪಾಟೀಲ್

## ಕುವೈತ್‌ನಲ್ಲಿ ಉದ್ಯೋಗ ಕೊಡಿಸುವ ಆಮಿಷ: 55 ಲಕ್ಷ ಮೋಸ

• **ಉದಯವಾಹಿನಿ ಹೊನ್ನಾವರ**

ಕುವೈತ್ ದೇಶದ ರಕ್ಷಣಾ ಮಂತ್ರಾಲಯದಲ್ಲಿ ಉದ್ಯೋಗ ದೊರಕಿಸಿಕೊಡುವ ಆಮಿಷವೊಡ್ಡಿ 33 ಜನರಿಂದ ಒಟ್ಟೂ 55 ಲಕ್ಷ ಪಡೆದು ಉದ್ಯೋಗ ಕೊಡಿಸದೆ ಮೋಸ ಮಾಡಿರುವ ಕುರಿತು ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ತಾಲ್ಲೂಕಿನ ಹೆರಂಗಡಿಯ ಜಾಫರ್ ಸಾದಿಕ್ ಹುಸೇನ್ ಮುಕ್ತಸರ್, ಹೊನ್ನಾವರದ ನೌಶಾದ್ ಕ್ವಾಜಾ ದಾವೂದ್ ಹಾಗೂ ಹೈದ್ರಾಬಾದ್‌ನ ಸುಜಾತಾ ಜುಮ್ಮಿ ಕುಂಟಾ ಆರೋಪಿಗಳು.

ಘಟನೆಯ ಕುರಿತಂತೆ ಕೇರಳ ರಾಜ್ಯದ ಬಿಜ್ಜು ದಾಮೋದರನ್ ಉದಯಂತಿಲ್ ಇಲ್ಲಿನ ಪೊಲೀಸರಿಗೆ ದೂರು ನೀಡಿದ್ದಾರೆ. 'ಬಿಜ್ಜು ಹಾಗೂ ಆತನ ಸ್ನೇಹಿತ ನೌಶಾದ್ ಅಂಗೀಲತ್ ಅಸ್ಸಿನಾರ್ ಕೆ.ಪಿ ಅವರಿಗೆ ಕುವೈತ್‌ನಲ್ಲಿ ಪರಿಚಯವಾಗಿದ್ದ ಜಾಫರ್, ಕುವೈತ್ ರಕ್ಷಣಾ ಮಂತ್ರಾಲಯದಲ್ಲಿ ಉದ್ಯೋಗ ಕೊಡಿಸುವುದಾಗಿ ಹೇಳಿದ್ದ. ಜಾಫರ್ ಮಾತನ್ನು ನಂಬಿದ ಬಿಜ್ಜು, ನೌಶಾದ್ 33 ಉದ್ಯೋಗಾಕಾಂಕ್ಷಿಗಳಿಂದ ಹಣ ಸಂಗ್ರಹಿಸಿ ಮೂವರು ಆರೋಪಿಗಳ ಬ್ಯಾಂಕ್ ಖಾತೆಗಳಿಗೆ ಒಟ್ಟೂ 55 ಲಕ್ಷ ಹಣ ಜಮೆ ಮಾಡಿದ್ದರು. ಉದ್ಯೋಗ ಕೊಡಿಸಿಲ್ಲ ಹಾಗೂ ಹಣವನ್ನೂ ವಾಪಸ್ ನೀಡಿಲ್ಲ ಎಂದು ದೂರಿನಲ್ಲಿ ತಿಳಿಸಲಾಗಿದೆ.

# ಮೋಟೆಬೆನ್ನೂರು: ಆರೋಗ್ಯ ಕೆಂದ್ರದ ಕನಸಿಗೆ ಹೊಡೆತ

• ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣಕ್ಕೆ ಸಲ್ಲಿಕೆಯಾಗಿದ್ದ ಪ್ರಸ್ತಾವಕ್ಕೆ ಸದ್ಯಕ್ಕೆ ಅನುದಾನವಿಲ್ಲ

• **ಉದಯವಾಹಿನಿ ಬ್ಯಾಡಗಿ**

ತಾಲ್ಲೂಕಿನ ಮೋಟೆಬೆನ್ನೂರು ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣವಾಗುತ್ತದೆ' ಎಂದು ತಿಳಿದಿದ್ದ ಗ್ರಾಮಸ್ಥರ ಕನಸಿಗೆ ರಾಜ್ಯ ಸರ್ಕಾರ ದೊಡ್ಡ ಹೊಡೆತ ನೀಡಿದೆ. ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣಕ್ಕೆ ಸಲ್ಲಿಕೆಯಾಗಿದ್ದ ಪ್ರಸ್ತಾವಕ್ಕೆ ಸದ್ಯಕ್ಕೆ ಅನುದಾನವಿಲ್ಲ. ಮುಂದಿನ ವರ್ಷಗಳಲ್ಲಿ ಅನುದಾನ ಲಭ್ಯತೆಗೆ ಅನುಗುಣವಾಗಿ ಪರಿಶೀಲಿಸಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ವಿಧಾನಸಭೆ ಅಧಿವೇಶನದಲ್ಲಿ ಉತ್ತರ ನೀಡಿದ್ದು, ಇದು ಸ್ಥಳೀಯರಲ್ಲಿ ನಿರಾಶೆ ಮೂಡಿಸಿದೆ.

ಮೋಟೆಬೆನ್ನೂರಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣ ಮಾಡಿಸಬೇಕೆಂಬ ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ ಅವರ ಪ್ರಯತ್ನವೂ ಸದ್ಯಕ್ಕೆ ವಿಫಲವಾಗಿದೆ. ಕೇಂದ್ರ ಮಂಜೂರು ಆಗದಿದ್ದರಿಂದ ಆಕ್ರೋಶ ಹೊರಹಾಕುತ್ತಿರುವ ಗ್ರಾಮಸ್ಥರು, ಸರ್ವಪಕ್ಷಗಳ ಜೊತೆಗೂಡಿ ಹೋರಾಟ ನಡೆಸಲು ಸಿದ್ಧತೆ ಆರಂಭಿಸಿದ್ದಾರೆ.




ಉದಯವಾಹಿನಿ ಚಿತ್ರ

**ಗ್ರಾಮಸ್ಥರ ಕನಸಿಗೆ ಹೊಡೆತ**

ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಮೋಟೆಬೆನ್ನೂರು ಗ್ರಾಮದಲ್ಲಿ ನಿತ್ಯವೂ ಸಾವಿರಾರು ವಾಹನಗಳು ಸಂಚರಿಸುತ್ತವೆ. ಹೆದ್ದಾರಿಯಲ್ಲಿ ಮೇಲಿಂದ ಮೇಲೆ ಅಪಘಾತಗಳು ಸಂಭವಿಸುತ್ತಿದ್ದು, ಚಿಕಿತ್ಸೆ ದೊರೆಯುವುದು ವಿಳಂಬವಾಗುತ್ತಿರುವುದರಿಂದ ಹಲವು ಗಾಯಾಳುಗಳು ಪ್ರಾಣ ಕಳೆದುಕೊಂಡಿದ್ದಾರೆ. ಇದಕ್ಕೆ ಪರಿಹಾರವಾಗಿ, ಪ್ರಾಥಮಿಕ ಆರೋಗ್ಯ ಕೇಂದ್ರ ಆರಂಭಿಸುವಂತೆ ಸ್ಥಳೀಯರು ಹಲವು ವರ್ಷಗಳಿಂದ ಒತ್ತಾಯಿಸುತ್ತಿದ್ದಾರೆ.

ಗ್ರಾಮಸ್ಥರ ಒತ್ತಾಯಕ್ಕೆ ಮಣಿದಿದ್ದ ಈ ಹಿಂದಿನ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು, ಸ್ಥಳೀಯ ದಾನಿಯೊಬ್ಬರಿಂದ 2 ಎಕರೆ ಜಾಗವನ್ನು ಪಡೆದುಕೊಂಡು ಆರೋಗ್ಯ ಇಲಾಖೆಗೂ ಹಸ್ತಾಂತರಿಸಿದ್ದಾರೆ. 1 ಲಕ್ಷವನ್ನೂ ಠೇವಣಿ ಇರಿಸಿದ್ದಾರೆ. ಜಾಗ ಲಭ್ಯವಿದ್ದರೂ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡಲು ಸರ್ಕಾರ ಹಿಂದೇಟು ಹಾಕುತ್ತಿರುವುದು ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ.

**ಅಕ್ಕ-ಪಕ್ಕದ ಊರುಗಳಿಗೆ ಅಲೆದಾಟ**

> ಬ್ಯಾಡಗಿ ತಾಲ್ಲೂಕಿನಲ್ಲಿಯೇ ಅತೀ ದೊಡ್ಡ ಗ್ರಾಮ ಮೋಟೆಬೆನ್ನೂರು. ಇಲ್ಲಿ ಸುಮಾರು 15 ಸಾವಿರ ಜನಸಂಖ್ಯೆಯಿದೆ. ಆದರೆ, ಪ್ರಾಥಮಿಕ ಆರೋಗ್ಯ ಕೇಂದ್ರವಿಲ್ಲ. ಇಲ್ಲಿಯ ಜನರು, 18 ಕಿ.ಮೀ. ದೂರದಲ್ಲಿರುವ ಶಂಕ್ರಿಪುರ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿದ್ದಾರೆ. ಗುಂಡೇನಹಳ್ಳಿ, ಕಲ್ಲೇದೇವರು, ಕೆಂಗೊಂಡ, ಅರಬಗೊಂಡ, ಕಲ್ಲೇದೇವರು, ಅಳಲಗೇರಿ ಗ್ರಾಮಗಳ ಜನರು ಸಹ ಶಂಕ್ರಿಪುರ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿದ್ದಾರೆ' ಎಂದು ಮೋಟೆಬೆನ್ನೂರು ಗ್ರಾಮಸ್ಥರು ಹೇಳಿದರು.

18 ಕಿ.ಮೀ. ದೂರದಲ್ಲಿರುವ ಶಂಕ್ರಪುರಕ್ಕೆ ಹೋಗಿ ಬರಲು ಸೂಕ್ತ ಸಾರಿಗೆ ವ್ಯವಸ್ಥೆಯಿಲ್ಲ. ಇದೇ ಕಾರಣಕ್ಕೆ ಮೋಟೆಬೆನ್ನೂರು ಮತ್ತು ಸುತ್ತಲಿನ ಗ್ರಾಮಗಳನ್ನು ಸೇರಿಸಿ 'ಮೋಟೆಬೆನ್ನೂರು ಪ್ರಾಥಮಿಕ ಆರೋಗ್ಯ ಕೇಂದ್ರ' ಸ್ಥಾಪಿಸುವಂತೆ ಹೋರಾಟ ಮಾಡುತ್ತಿದ್ದೇವೆ. ಇದಕ್ಕೆ ಸರ್ಕಾರ ಸ್ಪಂದಿಸುತ್ತಿಲ್ಲ ಎಂದು ತಿಳಿಸಿದರು. ರಾಷ್ಟ್ರೀಯ ಹೆದ್ದಾರಿ ಇರುವುದರಿಂದ, ನಿತ್ಯವೂ ಅಪಘಾತಗಳು ಸಂಭವಿಸುತ್ತಿರುತ್ತವೆ. ಅಪಘಾತದಲ್ಲಿ ಗಾಯಗೊಂಡವರನ್ನು 18 ಕಿ.ಮೀ. ದೂರದ ಶಂಕ್ರಿಪುರದ ಕೇಂದ್ರಕ್ಕೆ ಕರೆದೊಯ್ಯಲು ಆಗುವುದಿಲ್ಲ. 8 ಕಿ.ಮೀ. ದೂರದಲ್ಲಿರುವ ಬ್ಯಾಡಗಿ ಅಥವಾ 13 ಕಿ.ಮೀ. ದೂರದಲ್ಲಿರುವ ಹಾವೇರಿಗೆ ಕರೆದುಕೊಂಡು ಹೋಗಬೇಕು ಎಂದು ಹೇಳಿದರು.



## ಮಿನಿ ನ್ಯೂಸ್

• ಭಾರತ-ರಷ್ಯಾ-ಚೀನಾ ಒಗ್ಗಟ್ಟಿನ ಶಕ್ತಿ ಪ್ರದರ್ಶನಕ್ಕೆ ಸಾಕ್ಷಿಯಯಾಗಲಿದೆ ಎಸ್‌ಸಿಒ ಶೃಂಗಸಭೆ

# ನರೇಂದ್ರ ಮೋದಿ ಮತ್ತು ವ್ಲಾಡಿಮಿರ್ ಪುಟಿನ್ ಸ್ವಾಗತಿಸಲಿದ್ದಾರೆ ಕ್ಸಿ-ಜಿನ್‌ಪಿಂಗ್

**ಬೀಜಿಂಗ್:** ಮುಂದಿನ ವಾರ ಚೀನಾದಲ್ಲಿ ನಡೆಯಲಿರುವ ಶಾಂಘೈ ಸಹಕಾರ ಒಕ್ಕೂಟ (ಎಸ್‌ಸಿಒ)ದ ಪ್ರಾದೇಶಿಕ ಶೃಂಗಸಭೆಗೆ, ಚೀನಾ 20ಕ್ಕೂ ಹೆಚ್ಚು ಜಾಗತಿಕ ನಾಯಕರನ್ನು ಒಟ್ಟುಗೂಡಿಸಲಿದೆ. ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಚೀನಾದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಖುದ್ದಾಗಿ ಸ್ವಾಗತಿಸಲಿದ್ದು, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನೂ ಕೈಹಿಡಿದು ಕರೆದುಕೊಂಡು ಬರಲಿದ್ದಾರೆ.

**ಅಮರ್, ಅಕ್ಬರ್, ಆ್ಯಂಥೋನಿ ಸ್ಕ್ರಿಪ್ಟ್ ರೆಡಿ**

ಹೌದು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿರುದ್ಧ ಜಾಗತಿಕ ದಕ್ಷಿಣದ ಒಗ್ಗಟ್ಟಿನ ಪ್ರಬಲ ಪ್ರದರ್ಶನಕ್ಕೆ ವೇದಿಕೆ ಸಿದ್ಧವಾಗುತ್ತಿದ್ದು, ಚೀನಾ ಎಸ್‌ಸಿಒ ಶೃಂಗಸಭೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಸಜ್ಜಾಗಿದೆ. ಆ.31ರಂದು ಪ್ರಧಾನಿ ಮೋದಿ ಅವರ ಚೀನಾ ಪ್ರವಾಸ ಆರಂಭವಾಗಲಿದೆ.

ಚೀನಾದ ಟಿಯಾಂಜಿನ್ ನಗರದಲ್ಲಿ ಆಗಸ್ಟ್ 31 ರಿಂದ ಸೆಪ್ಟೆಂಬರ್ 1 ರವರೆಗೆ ನಡೆಯಲಿರುವ ಎಸ್‌ಸಿಒ ಶೃಂಗಸಭೆಯಲ್ಲಿ ಭಾರತದ ಪ್ರಧಾನಿ ನರೇಂದ್ರ ಮೋದಿ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಸೇರಿದಂತೆ ಮಧ್ಯ ಏಷ್ಯಾ, ದಕ್ಷಿಣ ಏಷ್ಯಾ, ಆಗ್ನೇಯ ಏಷ್ಯಾ ಮತ್ತು ಮಧ್ಯಪ್ರಾಚ್ಯದ ಉನ್ನತ ನಾಯಕರು ಭಾಗವಹಿಸಲಿದ್ದಾರೆ.

ಅದೇ ರೀತಿ ಉಕ್ರೇನ್ ಯುದ್ಧದ ಕಾರಣದಿಂದಾಗಿ ಪಾಶ್ಚಿಮಾತ್ಯ ರಾಷ್ಟ್ರಗಳು ರಷ್ಯಾದಿಂದ ದೂರ ಸರಿದಿವೆ. ಅಮೆರಿಕವಂತೂ ರಷ್ಯಾ ಮೇಲೆ ಸಾಕಷ್ಟು ಕಠಿಣ ನಿರ್ಬಂಧಗಳನ್ನು ವಿಧಿಸಿದೆ. ಈ ಪರಿಸ್ಥಿತಿಯಲ್ಲಿ ರಷ್ಯಾಗೆ ದೊರೆಯಬಹುದಾದ ಚೀನಾ ಮತ್ತು ಭಾರತದ ಬೆಂಬಲ, ಅದರ ಜಾಗತಿಕ ಔಚಿತ್ಯವನ್ನು ದ್ವಿಗುಣಗೊಳಿಸಲಿದೆ. ಕಳೆದ ವರ್ಷ ರಷ್ಯಾದ ಕಜಾನ್‌ನಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾರತದ ಪ್ರಧಾನಿ ಮೋದಿ, ಚೀನಾದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಒಂದೇ ವೇದಿಕೆಯನ್ನು ಹಂಚಿಕೊಂಡಿದ್ದರು. ಈ ಶೃಂಗಸಭೆಯಲ್ಲೇ, ಪ್ರಧಾನಿ ಮೋದಿ ಅವರು ವ್ಲಾಡಿಮಿರ್ ಪುಟಿನ್ ಅವರಿಗೆ ಇದು ಯುದ್ಧದ ಸಮಯವಲ್ಲ ಎಂಬ ಅಮೂಲ್ಯ ಸಲಹೆ ನೀಡಿದ್ದರು. **ಗುರಿ:** ಅಮೆರಿಕ ಹೊರತಾದ ಅಂತಾರಾಷ್ಟ್ರೀಯ ಕ್ರಮವನ್ನು ಹೇಗೆ ನಿರೂಪಿಸಬಹುದು ಮತ್ತು ಅದು ಯಾವೆಲ್ಲಾ ಉದ್ದೇಶಗಳೊಂದಿಗೆ ಕಾರ್ಯಾಚರಣೆ ನಡೆಸಬಬಹುದು ಎಂಬುದರ ಕುರಿತು ಚರ್ಚಿಸುವುದು ಈ ಎಲ್ಲಾ ಸಭೆಗಳ ಪ್ರಮುಖ ಗುರಿಯಾಗಿದೆ. ಅಮೆರಕವಿಲ್ಲದೇ ಜಾಗತುಕ ಕ್ರಮವಿಲ್ಲ ಎಂಬ ಸಾಮಾನ್ಯ ನಂಬಿಕೆಯನ್ನು ಹೋಗಲಾಡಿಸಿ, ಜಾಗತಿಕ ವೇದಿಕೆಯಲ್ಲಿ ಜಂಟಿ ಪಾಲುದಾರಿಕೆಯನ್ನು ಸ್ಥಾಪಿಸುವುದು ಭಾರತ, ಚೀನಾ ಮತ್ತು ರಷ್ಯಾ ಸೇರಿದಂತೆ ಬ್ರಿಕ್ಸ್ ರಾಷ್ಟ್ರಗಳ ಉದ್ದೇಶ ಎಂಬುದು ಈಗ ಸ್ಪಷ್ಟವಾಗಿದೆ. ಅಲ್ಲದೇ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಜಾಗತಿಕ ಸುಂಕ ಸಮರ ಯಾವದೇ ಪರಿಣಾಮ ಬೀರಿಲ್ಲ ಎಂಬುದನ್ನು ಸಾಬೀತುಪಡಿಸಲು ಈ ಒಗ್ಗಟ್ಟಿನ ಶಕ್ತಿ ಪ್ರದರ್ಶನ ಅತ್ಯಗತ್ಯವಾಗಿದೆ. ಚೀನಾ ಇದಕ್ಕಾಗಿ ಎಸ್‌ಸಿಒ ಶೃಂಗಸಭೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಿದೆ.

**ತಜ್ಞರು ಏನಂತಾರೆ?:** ಚೀನಾದಲ್ಲಿ ನಡೆಯಲಿರುವ ಎಸ್‌ಸಿಒ ಶೃಂಗಸಭೆ ಒಂದು ರೀತಿಯಲ್ಲಿ ಬ್ರಿಕ್ಸ್ ರಾಷ್ಟ್ರಗಳ ಶಕ್ತಿ ಪ್ರದರ್ಶನವಾಗಿರಲಿದೆ. ಅಮೆರಿಕವನ್ನು ಕೆರಳಿಸಲೆಂದೇ ವಿನ್ಯಾಸಗೊಳಿಸಲಾದ ಈ ಒಕ್ಕೂಟ ತನ್ನ ಉದ್ದೇಶವನ್ನು ಈಡೇರಿಸಿದೆ. ಪ್ರಸ್ತುತ ನಡೆಯಲಿರುವ ಎಸ್‌ಸಿಒ ಶೃಂಗಸಭೆ ಅದರ ಇತಿಹಾಸದಲ್ಲೇ ಅತ್ಯಂತ ಮಹತ್ವದ ಸಭೆಯಾಗಿದೆ ಎಂದು ಸಂಶೋಧನಾ ಸಂಸ್ಥೆಯಾದ ದಿ ಚೀನಾ-ಗ್ಲೋಬಲ್ ಸೌತ್ ಪ್ರಾಜೆಕ್ಟ್‌ನ ಪ್ರಧಾನ ಸಂಪಾದಕ ಎರಿಕ್ ಒಲಾಂಡರ್ ಅಭಿಪ್ರಾಯಪಟ್ಟಿದ್ದಾರೆ.



- ಚೀನಾದ ಟಿಯಾಂಜಿನ್‌ನಲ್ಲಿ ಆ.31ರಂದು ಎಸ್‌ಸಿಒ ಶೃಂಗಸಭೆ.
- ಪ್ರಧಾನಿ ಮೋದಿ ಅವರನ್ನು ಸ್ವಾಗತಿಸಲಿದ್ದಾರೆ ಕ್ಸಿ ಜಿನ್‌ಪಿಂಗ್.
- ಭಾರತ-ರಷ್ಯಾ-ಚೀನಾ ಒಗ್ಗಟ್ಟಿನ ಶಕ್ತಿ ಪ್ರದರ್ಶನಕ್ಕೆ ಸಾಕ್ಷಿಯಯಾಗಲಿದೆ ಎಸ್‌ಸಿಒ ಶೃಂಗಸಭೆ.

### ಜಾಗತಿಕ ಶಕ್ತಿ ಪ್ರದರ್ಶನಕ್ಕೆ ವೇದಿಕೆ ಸಿದ್ಧ

2020ರಲ್ಲಿ ನಡೆದ ಗಲ್ವಾನ್ ಗಡಿ ಘರ್ಷಣೆ ಬಳಿಕ ಭಾರತ ಮತ್ತು ಚೀನಾದ ನಡುವಿನ ರಾಜತಾಂತ್ರಿಕ ಸಂಬಂಧ ಸಂಪೂರ್ಣವಾಗಿ ಹದಗೆಟ್ಟಿತ್ತು. ಆದರೆ ಸದ್ಯ ಬದಲಾದ ಜಾಗತಿಕ ರಾಜಕೀಯ ಪರಿಸ್ಥಿತಿಗಳು ಮತ್ತು ಉಭಯ ದೇಶಗಳು ಸಂಬಂಧ ಸುಧಾರಣೆಗೆ ನಡೆಸಿದ ಪ್ರಯತ್ನಗಳು, ಎರಡೂ ರಾಷ್ಟ್ರವನ್ನು ಗಮನಾರ್ಹವಾಗಿ ಹತ್ತಿರಕ್ಕೆ ತಂದಿವೆ. ಈದೇ ಕಾರಣಕ್ಕೆ ಬರೋಬ್ಬರಿ ಏಳು ವರ್ಷಗಳ ಬಳಿಕ ಪ್ರಧಾನಿ ಮೋದಿ ಚೀನಾ ನೆಲದಲ್ಲಿ ಕಾಲಿಡಲಿದ್ದಾರೆ.

### ನವದೆಹಲಿಯಲ್ಲಿ ತ್ರಿಪಕ್ಷೀಯ ಮಾತುಕತೆ

ಭಾರತ-ರಷ್ಯಾ ಮತ್ತು ಚೀನಾದ ತ್ರಿಕೋನ ಒಗ್ಗಟ್ಟನ್ನು ಪ್ರದರ್ಶಿಸುವ ಉದ್ದೇಶದೊಂದಿಗೆ, ಭಾರತದ ರಾಜಧಾನಿ ಹೊಸದಿಲ್ಲಿಯಲ್ಲಿರುವ ರಷ್ಯಾದ ರಾಯಭಾರ ಕಚೇರಿ ಮತ್ತು ಚೀನಾದ ರಾಯಭಾರ ಕಚೇರಿಯ ಅಧಿಕಾರಿಗಳು, ಭಾರತದೊಂದಿಗೆ ತ್ರಿಪಕ್ಷೀಯ ಮಾತುಕತೆಗಳು ಶೀಘ್ರದಲ್ಲೇ ನಡೆಯಲಿವೆ ಎಂದು ಆಶಾಭಾವನೆ ವ್ಯಕ್ತಪಡಿಸಿವೆ. ಈ ಮಾತುಕತೆಗಳಿಗೆ ಭಾರತವೇ ವೇದಿಕೆಯಾಗಲಿದೆ ಎಂಬ ಮಾತುಗಳೂ ಕೇಳಿಬರುತ್ತಿವೆ.

## ರಷ್ಯಾ - ಉಕ್ರೇನ್ ಯುದ್ಧ ಅಂತ್ಯಕ್ಕೆ ಭಾರತದ ನೆರವು ಅಗತ್ಯ ; ಝೆಲೆನ್ಸ್ಕಿ

**ಕೈವ್:** ಉಕ್ರೇನ್‌ನ ಸ್ವಾತಂತ್ರ್ಯ ದಿನದಂದು ಪ್ರಧಾನಿ ನರೇಂದ್ರ ಮೋದಿ ಅವರ ಆತ್ಮೀಯ ಶುಭಾಶಯಗಳಿಗೆ ಉಕ್ರೇನಿಯನ್ ಅಧ್ಯಕ್ಷ ವ್ಲಾಡಿಮಿರ್ ಝೆಲೆನ್ಸ್ಕಿ ಧನ್ಯವಾದ ಅರ್ಪಿಸಿದ್ದಾರೆ ಮತ್ತು ರಷ್ಯಾದೊಂದಿಗಿನ ಯುದ್ಧವನ್ನು ಕೊನೆಗೊಳಿಸಲು ಭಾರತದ ಕೊಡುಗೆಯನ್ನು ಕೀವ್ ನಂಬುತ್ತಿದೆ ಎಂದು ತಿಳಿಸಿದ್ದಾರೆ. ಝೆಲೆನ್ಸ್ಕಿ, ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಶಾಂತಿ ಮತ್ತು ಸಂವಾದ ಕ್ಕೆ ಭಾರತದ ಸಮರ್ಪಣೆಯನ್ನು ಉಕ್ರೇನ್ ಮೆಚ್ಚುತ್ತದೆ ಎಂದು ಹೇಳಿದರು.

ಈಗ, ಇಡೀ ಜಗತ್ತು ಈ ಭಯಾನಕ ಯುದ್ಧವನ್ನು ಘನತೆ ಮತ್ತು ಶಾಶ್ವತ ಶಾಂತಿಯಿಂದ ಕೊನೆಗೊಳಿಸಲು ಶ್ರಮಿಸುತ್ತಿರುವಾಗ, ನಾವು ಭಾರತದ ಕೊಡುಗೆಯನ್ನು ನಂಬುತ್ತೇವೆ ಎಂದು ಝೆಲೆನ್ಸ್ಕಿ ಹೇಳಿದರು.

ರಾಜತಾಂತ್ರಿಕತೆಯನ್ನು ಬಲಪಡಿಸುವ ಪ್ರತಿಯೊಂದು ನಿರ್ಧಾರವು ಯುರೋಪ್‌ನಲ್ಲಿ ಮಾತ್ರವಲ್ಲದೆ ಇಂಡೋ-ಪೆಸಿಫಿಕ್ ಮತ್ತು ಅದರಾಚೆಗೂ ಉತ್ತಮ ಭದ್ರತೆಗೆ ಕಾರಣವಾಗುತ್ತದೆ ಎಂದು ಅವರು ಹೇಳಿದರು.

**ನಾವು ಭಾರತದ ಕೊಡುಗೆಯನ್ನು ನಂಬುತ್ತೇವೆ**

ಆಗಸ್ಟ್ 16 ರಂದು, ಪ್ರಧಾನಿ ಮೋದಿ ಅವರು ಉಕ್ರೇನ್ ಜನರಿಗೆ ಶಾಂತಿ ಮತ್ತು ಪ್ರಗತಿಯಿಂದ ಗುರುತಿಸಲ್ಪಟ್ಟ ಭವಿಷ್ಯವನ್ನು ಹಾರೈಸಿದರು, ಝೆಲೆನ್ಸ್ಕಿ ಅವರ ಸ್ವಾತಂತ್ರ್ಯ ದಿನಾಚರಣೆಯ ಶುಭಾಶಯಗಳಿಗೆ ಧನ್ಯವಾದ ಹೇಳಿದರು.

ಭಾರತ ಮತ್ತು ಉಕ್ರೇನ್ ನಡುವೆ ಇನ್ನಷ್ಟು ನಿಕಟ ಸಂಬಂಧಗಳನ್ನು ಬೆಸೆಯುವ ಜಂಟಿ ಬದ್ಧತೆಯನ್ನು ನಾನು ಬಹಳವಾಗಿ ಗೌರವಿಸುತ್ತೇನೆ. ಉಕ್ರೇನ್‌ನಲ್ಲಿರುವ ನಮ್ಮ ಸ್ನೇಹಿತರಿಗೆ ಶಾಂತಿ, ಪ್ರಗತಿ ಮತ್ತು ಸಮೃದ್ಧಿಯಿಂದ ಗುರುತಿಸಲ್ಪಟ್ಟ ಭವಿಷ್ಯವನ್ನು ನಾವು ಪ್ರಾಮಾಣಿಕವಾಗಿ ಹಾರೈಸುತ್ತೇವೆ.

ಭಾರತದ ಸ್ವಾತಂತ್ರ್ಯ ದಿನದಂದು ಉಕ್ರೇನಿಯನ್ ಅಧ್ಯಕ್ಷರ ಚಿಂತನಶೀಲ ಸಂದೇಶ ಮತ್ತು ದಯೆಯಿಂದ ಹಾರೈಕೆಗಳು ಧನ್ಯವಾದಗಳನ್ನು ಅರ್ಪಿಸಿದ ಆಗಸ್ಟ್ 24 ರಂದು ಪ್ರಧಾನಿ ಮೋದಿಯವರಿಂದ ಸ್ವೀಕರಿಸಿದ ಪತ್ರವನ್ನು ವ್ಲಾಡಿಮಿರ್ ಝೆಲೆನ್ಸ್ಕಿ ಇಂದು ಪೋಸ್ಟ್ ಮಾಡಿದ್ದಾರೆ.



## ಜಮ್ಮುವಿನಲ್ಲಿ ಭೂಕುಸಿತಕ್ಕೆ 9 ಬಲಿ

**ಜಮ್ಮು:** ಕಣಿವೆ ರಾಜ್ಯ ಜಮ್ಮು ಮತ್ತು ಕಾಶ್ಮೀರದ ದೋಡಾ ಜಿಲ್ಲೆಯಲ್ಲಿ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಭೀಕರ ಭೂಕುಸಿತ ಉಂಟಾಗಿದ್ದು, ಹಠಾತ್ ಪ್ರವಾಹವೂ ಸಂಭವಿಸಿದೆ. ಇದರಿಂದ ಕನಿಷ್ಠ 9 ಮಂದಿ ಸಾವನ್ನಪ್ಪಿದ್ದಾರೆ. ಮೃತರ ಪೈಕಿ ಐವರು ವೈಷ್ಣೋದೇವಿ ದೇಗುಲಕ್ಕೆ ಯಾತ್ರೆ ಹೊರಟವರಾಗಿದ್ದಾರೆ. ಇವರು ಮಾರ್ಗದಲ್ಲಿ ದುರಂತಕ್ಕೆ ಬಲಿಯಾಗಿದ್ದು, ಈ ಘಟನೆಯಲ್ಲಿ ಹಲವರು ಗಾಯಗೊಂಡಿದ್ದಾರೆ.

ವೈಷ್ಣೋದೇವಿ ದೇಗುಲಕ್ಕೆ ಸಾಗುವ ಮಾರ್ಗದಲ್ಲಿ ಬರುವ ಅದ್ಕುವಾರಿಯ ಇಂದ್ರಪ್ರಸ್ಥ ಭೋಜನಾಲಯದ ಬಳಿ ಭೂ ಕುಸಿತ ಸಂಭವಿಸಿದೆ. ಇದರ ಬೆನ್ನಲ್ಲೇ, ಯಾತ್ರೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ದೇಗುಲದ ಆಡಳಿತ ಮಂಡಳಿ ತಿಳಿಸಿದೆ. ಅಗತ್ಯ ಸಿಬ್ಬಂದಿ ಮತ್ತು ಯಂತ್ರೋಪಕರಣಗಳೊಂದಿಗೆ ಸ್ಥಳದಲ್ಲಿ ರಕ್ಷಣಾ ಕಾರ್ಯಾಚರಣೆಗಳು ಭರದಿಂದ ಸಾಗಿದೆ.

ಈ ಪ್ರದೇಶದಲ್ಲಿ ಮೇಘಸ್ಫೋಟ ಸಂಭವಿಸಿದ್ದು, ಇದರಿಂದ ಭೂಕುಸಿತ ಉಂಟಾಗಿದೆ. ಪರಿಣಾಮ ಅನೇಕ ಮನೆಗಳು ಮತ್ತು ಆಸ್ತಿಪಾಸ್ತಿಗಳಿಗೆ ಹಾನಿಯಾಗಿದೆ. ಮನೆ ಕುಸಿದು ಇಬ್ಬರು ಮತ್ತು ಹಠಾತ್ ಪ್ರವಾಹಕ್ಕೆ ಸಿಲುಕಿ ಇನ್ನಿಬ್ಬರು ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು ಖಚಿತಪಡಿಸಿದ್ದಾರೆ. ನದಿ ತೀರಗಳಿಂದ ದೂರವಿರುವಂತೆ ಮತ್ತು ಸದಾ ಜಾಗರೂಕರಾಗಿರುವಂತೆ ಜಿಲ್ಲಾಡಳಿತವು ಸಾರ್ವಜನಿಕರಿಗೆ ಕಟ್ಟುನಿಟ್ಟಿನ ಎಚ್ಚರಿಕೆಯನ್ನು ನೀಡಿದೆ.


**ಹೆದ್ದಾರಿ ಸಂಪರ್ಕ ಕಟ್:** ಭಾರೀ ಮಳೆ, ಭೂಕುಸಿತ ಮತ್ತು ಕಲ್ಲುಗಳು ಉರುಳುತ್ತಿರುವ ಕಾರಣ, ದೋಡಾ ಮತ್ತು ಕಿಶ್ತ್‌ವಾರ್ ಅನ್ನು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ-244ರಲ್ಲಿ ರಸ್ತೆಯ ಒಂದು ಭಾಗ ಕೊಚ್ಚಿ ಹೋಗಿದೆ. ಹೀಗಾಗಿ ಇಲ್ಲಿ ಸಂಚಾರವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿದೆ.

## 350 ಕೋಟಿ ರೂ. ವಂಚಿಸಿದ ಹೈಟೆಕ್ ಸೈಬರ್ ಕ್ರೈಂ ಸಿಂಡಿಕೇಟ್ ಪತ್ತೆ, ಮೂವರ ಬಂಧನ

**ನವದೆಹಲಿ:** ಅಮೆರಿಕದ ಮೂಲದ ವ್ಯಕ್ತಿಗೆ 350 ಕೋಟಿ ರೂ.ಗಳಿಗೂ ಹೆಚ್ಚು ವಂಚಿಸಿದ ಅತ್ಯಾಧುನಿಕ ಸೈಬರ್ ಅಪರಾಧ ಸಿಂಡಿಕೇಟ್‌ಅನ್ನು ಸಿಬಿಐ ಪತ್ತೆಹಚ್ಚಿ ಮೂವರು ವಂಚಕರನ್ನು ಬಂಧಿಸಿದೆ. ಅಮೆರಿಕದ ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್ ಜೊತೆ ನಿಕಟ ಸಮನ್ವಯದೊಂದಿಗೆ ನಡೆಸಲಾದ ಈ ಸೂಕ್ಷ್ಮ ಕಾರ್ಯಾಚರಣೆಯಲ್ಲಿ ಗ್ಯಾಂಗ್‌ನ ಮೂವರು ಪ್ರಮುಖ ಆರೋಪಿಗಳಾದ ಜಿಗರ್ ಅಹದ್ ,ಯಶ್ ಖುರಾನಾ ಮತ್ತು ಇಂದರ್ ಜೀತ್ ಸಿಂಗ್ ಬಾಲಿ ಅವರನ್ನು ಬಂಧಿಸಿ 54 ಲಕ್ಷ ಹಣ ,ಎಂಟು ಮೊಬೈಲ್‌ಗಳು ಮತ್ತು ಲ್ಯಾಪ್‌ಟಾಪ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಕಳೆದ ಆ.18 ರಂದು ಪ್ರಕರಣ ದಾಖಲಾದ ನಂತರ ಅಮೃತಸರ ಮತ್ತು ದೆಹಲಿಯಲ್ಲಿ ಸಿಬಿಐ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದಾಗ ಅಮೆರಿಕದ ನಾಗರಿಕರನ್ನು ಗುರಿಯಾಗಿಸಲಾಗಿತ್ತು ಮತ್ತು ಇದು ಪಂಜಾಬ್‌ನಿಂದ ವಾಷಿಂಗ್ಟನ್ ಡಿಸಿವರೆಗೆ ವ್ಯಾಪಿಸಿರುವ ವಂಚನೆ ಎಂದು ಕಾಂಡುಬಂದಿತ್ತು.

ಅಧಿಕಾರಿಗಳು ಡಿಜಿಟಲ್ ಕುಶಲತೆ ಮತ್ತು ಆರ್ಥಿಕ ಕುಶಲತೆಯಿಂದ ಕೆಲವೇ ದಿನದಲ್ಲಿ ಜಾಲವನ್ನು ಭೇದಿಸಿದೆ ಎಂದು ಅವರು ಹೇಳಿದರು.2023-2025ರ ಅವಧಿಯಲ್ಲಿ, ಆರೋಪಿಗಳು ಅಮೆರಿಕ ಪ್ರಜೆಯ ಕಂಪ್ಯೂಟರ್ ವ್ಯವಸ್ಥೆಗಳು ಮತ್ತು ಬ್ಯಾಂಕ್ ಖಾತೆಗಳಿಗೆ ಅನಧಿಕೃತ ರಿಮೋಟ್ ಪ್ರವೇಶವನ್ನು ಪಡೆಯುವ ಮೂಲಕ ಸಂಚು ರೂಪಿಸಿದ್ದರು.




## ತೇಜಸ್ವಿ ಯಾದವ್ ಬಿಹಾರ ಸಿಎಂ ಅಭ್ಯರ್ಥಿ..?

**ಪಾಟ್ನಾ:** ಬಿಹಾರ ಚುನಾವಣೆಯಲ್ಲಿ ಇಂಡಿಯಾ ಒಕ್ಕೂಟದಿಂದ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಆಯ್ಕೆಯಾಗುವ ಸುಳಿವು ಸಿಕ್ಕಿದೆ.ಒಕ್ಕೂಟದ ಅಂಗವಾಗಿರುವ ಸಿಪಿಐ (ಎಂಎಲ್) ಲಿಬರೇಶನ್ ಪಕ್ಷದ ಪ್ರಧಾನ ಕಾರ್ಯದರ್ಶಿ ದೀಪಂಕರ್ ಭಟ್ಟಾಚಾರ್ಯ ಅವರು ಈ ಸುಳಿವು ನೀಡಿದ್ದಾರೆ.

ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಬಿಹಾರದಲ್ಲಿ ತೇಜಸ್ವಿ ಅವರೇ ಮುಖ್ಯಮಂತ್ರಿ ಅಭ್ಯರ್ಥಿ ಎಂಬ ಸಾಕಷ್ಟು ಸುಳಿವುಗಳನ್ನು ನೀಡಲಾಗಿದೆ ಎಂದು ಪ್ರತಿಪಾದಿಸಿದರು, ಆದರೆ ಔಪಚಾರಿಕ ಘೋಷಣೆಯಾಗಿಲ್ಲದಿರಬಹುದು. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರು ಯಾದವ್ ಅವರನ್ನು ಮುಂದಿನ ಪ್ರಧಾನಿಯನ್ನಾಗಿ ಮಾಡಲು ಬಹಿರಂಗವಾಗಿ ಧ್ವನಿ ಎತ್ತಿದ್ದರೂ, ಯಾದವ್ ಅವರನ್ನು ಬಿಂಬಿಸಲು ಹಿಂಜರಿಯುತ್ತಿರುವ ಬಗ್ಗೆ ಇಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಹೇಳಿಕೆಗಳು ಬಂದವು. ಬುದ್ಧಿವಂತರು ಸುಳಿವುಗಳನ್ನು ಗಮನಿಸಬಹುದು ಎಂದು ಭಟ್ಟಾಚಾರ್ಯ ವ್ಯಂಗ್ಯವಾಡಿದರು, ನಿನ್ನೆಯಷ್ಟೇ, ನೀವೆಲ್ಲರೂ ರಾಹುಲ್ ಮತ್ತು ತೇಜಸ್ವಿ ಪರಸ್ಪರ ಪಕ್ಕದಲ್ಲಿ ಮೋಟಾರ್ ಸೈಕಲ್ ಸವಾರಿ ಮಾಡುವುದನ್ನು ನೋಡಿದ್ದೀರಿ (ಮತದಾರ ಅಧಿಕಾರ ಯಾತ್ರೆಯ ಸಮಯದಲ್ಲಿ). ಇಂಡಿಯಾ ಬ್ಲಾಕ್ ಯಾವುದೇ ಔಪಚಾರಿಕ ಘೋಷಣೆ ಮಾಡದಿದ್ದರೂ, ಕಾಲಕಾಲಕ್ಕೆ ಸಾಕಷ್ಟು ಸುಳಿವುಗಳನ್ನು ನೀಡಲಾಗಿದೆ.

ಅರಾರಿಯಾ ಜಿಲ್ಲೆಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ, ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಗೆ ಯಾದವ್ ಅವರನ್ನು ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಘೋಷಿಸುವ ಬಗ್ಗೆ ಒಮ್ಮತ ಮೂಡಿದೆಯೇ ಎಂಬ ಪ್ರಶ್ನೆಗೆ ರಾಹುಲ್ ಗಾಂಧಿಯವರು ಅಡ್ಡಗಾಲು ಹಾಕಿದ್ದರು.

ಇದು ಬಿಜೆಪಿಯ ರವಿಶಂಕರ್ ಪ್ರಸಾದ್ ಅವರಂತಹ ಹಿರಿಯ ನಾಯಕರು, ಕಾಂಗ್ರೆಸ್ ನಡುವೆ ವಿಶ್ವಾಸದ ಕೊರತೆ ಇದೆ ಎಂದು ಹೇಳಿಕೊಳ್ಳಲು ಕಾರಣವಾಯಿತು, ಇದು ಚುನಾವಣೆಯಲ್ಲಿ ಬಣದ ಪತನಕ್ಕೆ ಕಾರಣವಾಗುತ್ತದೆ.

> **ಒಕ್ಕೂಟವು ಅಧಿಕಾರಕ್ಕೆ ಬಂದರೆ ಯಾರು ಮುಖ್ಯಮಂತ್ರಿಯಾಗುತ್ತಾರೆ ಎಂಬುದರ ಬಗ್ಗೆ ಬಣದಲ್ಲಿ ಸಂಪೂರ್ಣ ಸ್ಪಷ್ಟತೆ ಇದೆ. ಮತ್ತೊಂದೆಡೆ ನಿತೀಶ್ ಕುಮಾರ್ ಅವರನ್ನು ಪ್ರಸ್ತುತ ತಮ್ಮ ಮುಖವಾಗಿ ಬಿಂಬಿಸಲಾಗುತ್ತಿದೆ ಎಂಬ ಬಗ್ಗೆಯಲ್ಲಿ ಸಂಪೂರ್ಣ ಸ್ಪಷ್ಟತೆ ಇದೆ, ಆದರೆ ಪರದೆಯ ಹಿಂದೆ ಆಟ ನಡೆಯುತ್ತಿದೆ** -ಭಟ್ಟಾಚಾರ್ಯ



## ಹೊಸೂರಿನಲ್ಲಿ ಹೊಸ ವಿಮಾನ ನಿಲ್ದಾಣ: ತಮಿಳುನಾಡು ಸರ್ಕಾರ ನಿರ್ಧಾರ

**ಚೆನ್ನೈ:** ಕರ್ನಾಟಕ ಸರ್ಕಾರ ಬೆಂಗಳೂರು ಸಮೀಪ ವಿಮಾನ ನಿಲ್ದಾಣದ ಬಗ್ಗೆ ಇನ್ನೂ ಚರ್ಚೆಯಲ್ಲಿರುವಾಗಲೆ ತಮಿಳುನಾಡು ಸರ್ಕಾರವು ಪ್ರಸ್ತಾವಿತ ಹೊಸೂರು ವಿಮಾನ ನಿಲ್ದಾಣದ ಸ್ಥಳವನ್ನು ಅಂತಿಮಗೊಳಿಸಿದೆ. ಕರ್ನಾಟಕದ ಗಡಿಯಿಂದ ಕೇವಲ 19 ಕಿ.ಮೀ ದೂರದಲ್ಲಿರುವ ಬೆರಿಗೈ ಮತ್ತು ಬಾಗಲೂರು ನಡುವಿನ ಶೂಲಗಿರಿ ತಾಲ್ಲೂಕಿನಲ್ಲಿ ಹೊಸ ವಿಮಾನ ನಿಲ್ದಾಣಕ್ಕೆ ತಮಿಳುನಾಡು ಸರ್ಕಾರ ಮುಂದಾಗಿದೆ.

ಈ ಜಾಗ ತನೇಜಾ ಏರೋಸ್ಪೇಸ್‌ನಿಂದ ಪೂರ್ವಕ್ಕೆ ಸುಮಾರು 15.5 ಕಿಲೋಮೀಟರ್ ದೂರದಲ್ಲಿದ್ದರೆ ಕರ್ನಾಟಕ ಗಡಿಯಲ್ಲಿರುವ ಅತ್ತಿಬೆಲೆಯಿಂದ 19 ಕಿ.ಮೀ ದೂರದಲ್ಲಿದೆ. ಮುಂದಿನ ಎರಡು ವಾರಗಳಲ್ಲಿ ತಮಿಳುನಾಡು ಸರ್ಕಾರ ಅನುಮೋದನೆಗಾಗಿ ಕೇಂದ್ರ ನಾಗರಿಕ ವಿಮಾನಯಾನ ಸಚಿವಾಲಯವನ್ನು ಸಂಪರ್ಕಿಸಲಿದೆ ಎಂದು ಮೂಲಗಳು ತಿಳಿಸಿವೆ. ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅಭಿವೃದ್ಧಿಪಡಿಸುತ್ತಿರುವ ಬೆಂಗಳೂರು ಸ್ಯಾಟಲೈಟ್ ಟೌನ್ ರಿಂಗ್ ರಸ್ತೆ ಬಳಿಯೇ ಈ ಜಾಗ ಇರುವುದು ವಿಶೇಷ. ಈ ವಿಮಾನ ನಿಲ್ದಾಣ ಯೋಜನೆಗೆ ಸುಮಾರು 2,300 ಎಕರೆ ಭೂಮಿಯ ಅಗತ್ಯವಿದೆ.

**6ವಾರಗಳಲ್ಲಿ ಭೂ ಸ್ವಾಧೀನ**

ಹೀಗಾಗಿ ಆರು ವಾರಗಳಲ್ಲಿ ಭೂ ಸ್ವಾಧೀನ ಯೋಜನೆಯನ್ನು ಸಿದ್ಧಪಡಿಸುವಂತೆ ಕೃಷ್ಣಗಿರಿ ಜಿಲ್ಲಾಧಿಕಾರಿಗೆ ಸೂಚಿಸಲಾಗಿದೆ.

ಹೊಸೂರು ವಿಮಾನ ನಿಲ್ದಾಣ ಯೋಜನೆಯು ಪೂರ್ಣಗೊಳ್ಳಲು ಸುಮಾರು 8 ವರ್ಷಗಳು ಬೇಕಾಗಬಹುದು ಎಂದು ಅಂದಾಜಿಸಲಾಗಿದೆ. ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಕಳೆದ ವರ್ಷ ಘೋಷಿಸಿದ ಪ್ರಸ್ತಾವಿತ ವಿಮಾನ ನಿಲ್ದಾಣವನ್ನು ವಾರ್ಷಿಕ 3 ಕೋಟಿ ಪ್ರಯಾಣಿಕರ ನಿರ್ವಹಣಾ ಸಾಮರ್ಥ್ಯದೊಂದಿಗೆ ವಿನ್ಯಾಸಗೊಳಿಸಲಾಗಿದೆ.

ಅಭಿವೃದ್ಧಿ ಹೊಂದುತ್ತಿರುವ ಉತ್ಪಾದನಾ ಕೇಂದ್ರವೆಂದು ಕರೆಯಲ್ಪಡುವ ಹೊಸೂರಿನಲ್ಲಿ 500 ಕ್ಕೂ ಹೆಚ್ಚು ದೊಡ್ಡ ಕೈಗಾರಿಕೆಗಳು ಸ್ಥಾಪನೆಯಾಗಿದೆ. ಆಟೋಮೊಬೈಲ್ ಮತ್ತು ಎಲೆಕ್ಟ್ರಾನಿಕ್ಸ್ ನಂತಹ ವಲಯಗಳಿಗೆ ಸಂಬಂಧಿಸಿದಂತೆ 3,000 ಕಂಪನಿಗಳು ಹೊಸೂರು ವಲಯದಲ್ಲಿದೆ.

ಈ ಯೋಜನೆಯು ಒಮ್ಮೆ ಕಾರ್ಯರೂಪಕ್ಕೆ ಬಂದರೆ, ಚೆನ್ನೈ ಮತ್ತು ಬೆಂಗಳೂರು ವಿಮಾನ ನಿಲ್ದಾಣಗಳ ಜನದಟ್ಟಣೆಯನ್ನು ಕಡಿಮೆ ಮಾಡಲಿದೆ. ಕೃಷ್ಣಗಿರಿ ಜಿಲ್ಲೆ ಮತ್ತು ಉತ್ತರ ತಮಿಳುನಾಡಿನ ಕೈಗಾರಿಕಾ ಬೆಳವಣಿಗೆಯನ್ನು ಹೆಚ್ಚಿಸಲಿದೆ.



## ಬಾಟಲಿನಲ್ಲಿ ತುಂಬಿದ್ದ ಸುಮಾರು 3 ಕೋಟಿ ರೂ. ಮೌಲ್ಯದ ಅಕ್ರಮ ಕೆಮ್ಮಿನ ಸಿರಪ್ ವಶ

**ಗುವಾಹಟಿ:** ಅಸ್ಸಾಂನ ಶ್ರೀಭೂಮಿ ಜಿಲ್ಲೆಯಲ್ಲಿ ಇಬ್ಬರನ್ನು ಬಂಧಿಸಿ ಬಾಟಲಿನಲ್ಲಿ ತುಂಬಿದ್ದ ಸುಮಾರು 3 ಕೋಟಿ ರೂ ಮೌಲ್ಯದ ಕೆಮ್ಮಿನ ಸಿರಪ್‌ಅನ್ನು ವಶಪಡಿಸಿಕೊಂಡಿದ್ದಾರೆ.

ಅಸ್ಸಾಂ-ತ್ರಿಪುರ ಅಂತರರಾಜ್ಯ ಗಡಿಯಲ್ಲಿರುವ ಚುರೈಬರಿ ಹೊರಠಾಣೆ ಸಮೀಪ ತಡೆಹಿಡಿಯಲಾದ ವಾಹನದಿಂದ ಕೊಡೈನ್ ಹೊಂದಿರುವ ಒಟ್ಟು 30,420 ಬಾಟಲಿಗಳನ್ನು ವಶಪಡಿಸಿಕೊಳ್ಳಲಾಗಿದೆ. ಇಬ್ಬರು ಮಾದಕವಸ್ತು ಮಾರಾಟಗಾರರನ್ನು ಜೈಲಿಗೆ ಅಟ್ಟಾಲಾಗಿದೆ ಮಾದಕವಸ್ತು ಪಿಡುಗಿನ ವಿರುದ್ಧ ಇದು ದೊಡ್ಡ ಹೋರಾಟ ಎಂದು ಶರ್ಮಾ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಕೊಡೈನ್ ಫಾಸ್ಫೇಟ್ ಎಂಬುದು ಸೌಮ್ಯದಿಂದ ನೋವು, ಕೆಮ್ಮು ಮತ್ತು ಅತಿಸಾರಕ್ಕೆ ಚಿಕಿತ್ಸೆ ನೀಡಲು ಅಫೀಮು ಅಥವಾ ಮಾರ್ಫಿನ್ ನಿಂದ ತಯಾರಿಸಿದ ಔಷಧವಾಗಿದೆ. ಇದು ನಾರ್ಕೋಟಿಕ್ ನೋವು ನಿವಾರಕಗಳು ಎಂದು ಕರೆಯಲ್ಪಡುವ ಔಷಧಿಗಳ ಗುಂಪಿಗೆ ಸೇರಿದ್ದು, ದೀರ್ಘಕಾಲದವರೆಗೆ ಬಳಸಿದರೆ, ಅದು ವ್ಯಸನಕಾರಿಯಾಗಿ ಪರಿಣಮಿಸಬಹುದು, ಮಾನಸಿಕ ಅಥವಾ ದೈಹಿಕ ಅವಲಂಬನೆಗೆ ಕಾರಣವಾಗಬಹುದು ಎಂದು ಅಧಿಕಾರಿ ತಿಳಿಸಿದ್ದಾರೆ.



# ಚೀನಾ ಸರ್ವನಾಶಕ್ಕೆ ಪ್ಲ್ಯಾನ್ ರೆಡಿ ಎಂದ ಡೊನಾಲ್ಡ್ ಟ್ರಂಪ್

• ಚೀನಾದೊಂದಿಗೆ ಉತ್ತಮ ಬಾಂಧವ್ಯ ಹೊಂದಲು ಪ್ರಯತ್ನ ಎಂದ ಅಮೆರಿಕ ಅಧ್ಯಕ್ಷ

**ವಾಷಿಂಗ್ಟನ್ ಡಿಸಿ:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿವಾದ ಸೃಷ್ಟಿಸಲೆಂದೇ ಹೇಳಿಕೆ ನೀಡುತ್ತಾರೋ ಅಥವಾ ಅವರು ನೀಡುವ ಹೇಳಿಕೆ ವಿವಾದಕ್ಕೆ ಗುರಿಯಾಗುತ್ತದೆಯೋ ತಿಳಿಯದು. ಒಟ್ಟಿನಲ್ಲಿ ಜಗತ್ತಿನ ದೊಡ್ಡಣ್ಣ ಬಾಯಿ ಬಿಟ್ಟರೆ ವಿನಾಶದ ಮುತ್ತುಗಳು ಉದುರುತ್ತಿರುತ್ತವೆ.

ಭಾರತದ ಸರಕುಗಳ ಮೇಲೆ ಶೇ. 50ರಷ್ಟು ಸುಂಕ ವಿಧಿಸಿರುವ ಡೊನಾಲ್ಡ್ ಟ್ರಂಪ್, ಇದೀಗ ಚೀನಾದ ಮೇಲೂ ಸುಂಕಗಳನ್ನು ವಿಧಿಸಲು ಯೋಜನೆ ಸಿದ್ಧವಾಗುತ್ತಿದೆ ಎಂದು ಘೋಷಿಸಿದ್ದಾರೆ. ಅಲ್ಲದೇ ತಮ್ಮ ಬಳಿ ಚೀನಾದ ಆರ್ಥಿಕತೆಯನ್ನು ಸರ್ವನಾಶ ಮಾಡುವ ಘೋರ ಯೋಜನೆಗಳೂ ಇವೆ ಎಂದು ಅಮೆರಿಕ ಅಧ್ಯಕ್ಷರು ಎಚ್ಚರಿಸಿದ್ದಾರೆ.

ವಾಷಿಂಗ್ಟನ್ ಬೀಜಿಂಗ್ ವಿರುದ್ಧ ನಂಬಲಾಗದ ಕಾರ್ಡ್‌ಗಳನ್ನು ಹೊಂದಿದೆ. ಒಂದು ವೇಳೆ ನಾವು ಈ ಕಾರ್ಡ್‌ಗಳನ್ನು ಬಳಸಲು ಆರಂಭಿಸಿದರೆ, ವಿಶ್ವದ ಎರಡನೇ ಅತಿದೊಡ್ಡ ಆರ್ಥಿಕತೆಯನ್ನು ಸಂಪೂರ್ಣವಾಗಿ ನಾಶ ಮಾಡುತ್ತೇವೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಆದಾಗ್ಯೂ, ವಿಶ್ವದ ಎರಡನೇ ಅತಿದೊಡ್ಡ ಜಾಗತಿಕ ಆರ್ಥಿಕತೆಯಾದ ಚೀನಾದೊಂದಿಗೆ ಅಮೆರಿಕವು ಉತ್ತಮ ಸಂಬಂಧ ಕಾಯ್ದುಕೊಳ್ಳುತ್ತದೆ ಎಂದು ಡೊನಾಲ್ಡ್ ಟ್ರಂಪ್ ಒತ್ತಿ ಹೇಳಿದ್ದಾರೆ. ಒಮ್ಮೆ ಚೀನಾದ ಆರ್ಥಿಕತೆಯನ್ನು ನಾಶ ಮಾಡುವ ಮಾತುಗಳನ್ನಾಡುವ ಟ್ರಂಪ್, ಮತ್ತೊಮ್ಮೆ ಚೀನಾದೊಂದಿಗೆ ಉತ್ತಮ ಸಂಬಂಧದ ಮಾತುಗಳನ್ನಾಡುತ್ತಿರುವುದು ಗಮನ ಸೆಳೆದಿದೆ.

ರಷ್ಯಾದಿಂದ ಕಚ್ಚಾತೈಲ ಖರೀದಿಸುವ ಭಾರತದ ಮೇಲೆ ದಂಡದ ಸುಂಕ ವಿಧಿಸರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಚೀನಾ ಮೇಲೆ ಸುಂಕ ಹೇರಿಕೆ ಮಾಡಲು ಹಿಂದೇಟು ಹಾಕುತ್ತಿದ್ದಾರೆ. ನಾವು ಚೀನಾದೊಂದಿಗೆ ಉತ್ತಮ ಸಂಬಂಧವನ್ನು ಹೊಂದಲಿದ್ದೇವೆ. ಅವರು ಕೆಲವು ಕಾರ್ಡ್‌ಗಳನ್ನು ಹೊಂದಿದ್ದಾರೆ. ಅದೇ ರೀತಿ ನಮ್ಮಲ್ಲೂ ನಂಬಲಾಗದ ಕಾರ್ಡ್‌ಗಳಿವೆ. ಆದರೆ ನಾನು ಆ ಕಾರ್ಡ್‌ಗಳನ್ನು ಆಡಲು ಬಯಸುವುದಿಲ್ಲ. ಒಂದು ವೇಳೆ ಆ ಕಾರ್ಡ್‌ಗಳನ್ನು ಆಡಿದರೆ ಚೀನಾದ ಆರ್ಥಿಕತೆ ನಾಶವಾಗಲಿದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿಕೆ ನೀಡಿದ್ದಾರೆ. ಓವಲ್ ಕಚೇರಿಯಲ್ಲಿ ದಕ್ಷಿಣ ಕೊರಿಯಾದ ಅಧ್ಯಕ್ಷ ಲೀ ಜೇ ಮ್ಯುಂಗ್ ಅವರೊಂದಿಗೆ ಸಭೆ ನಡೆಸಿದ ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಡೊನಾಲ್ಡ್ ಟ್ರಂಪ್, ಚೀನಾದ ಪ್ರಾಬಲ್ಯದ ಎದುರು ನಮ್ಮ ಸ್ನೇಹಿತರ ಹಿತಾಸಕ್ತಿ ಕಾಪಾಡಲು ಅಮೆರಿಕ ಬದ್ಧವಾಗಿದೆ ಎಂದು ಭರವಸೆ ನೀಡಿದರು.

ಇದೇ ವೇಳೆ ಚೀನಾ ಅಧ್ಯಕ್ಷರೊಂದಿಗಿನ ತಮ್ಮ ಇತ್ತೀಚಿನ ಮಾತುಕತೆಯ ಕುರಿತು ಮಾತನಾಡಿದ ಡೊನಾಲ್ಡ್ ಟ್ರಂಪ್, ಬಹುಶಃ ಈ ವರ್ಷದ ಕೊನೆಯಲ್ಲಿ ತಾವು ಬೀಜಿಂಗ್ ಪ್ರವಾಸ ಮಾಡಬಹುದು ಎಂದು ಹೇಳಿದ್ದಾರೆ. ಅಮೆರಿಕ ಮತ್ತು ಚೀನಾ ನಡುವಿನ ಸುಂಕ ಸಮರ ನಂಬಲು ಅಸಾಧ್ಯವಾಗಿದೆ. ಟ್ರಂಪ್ ಆಡಳಿತ ಕಳೆದ ಏಪ್ರಿಲ್‌ನಲ್ಲಿ ಚೀನಾದ ಸರಕುಗಳ ಮೇಲೆ ಶೇ. 145ರಷ್ಟು ಸುಂಕ ಹೇರಿದೆ. ಅಲ್ಲದೇ ಅಮೆರಿಕಕ್ಕೆ ಆಯಸ್ಕಾಂತ ಪೂರೈಕೆ ಮಾಡದಿದ್ದರೆ ಸುಂಕಗಳನ್ನು ಶೇ. 200ಕ್ಕೆ ಏರಿಸುವ ಬೆದರಿಕೆಯೂ ಹಾಕಿದೆ.

> **ಬೀಜಿಂಗ್ ಪ್ರವಾಸದ ಬಗ್ಗೆ ನಾನು ಆಲೋಚಿಸುತ್ತಿದ್ದೇನೆ. ಬಹುಶಃ ಅದು ಈ ವರ್ಷದ ಕೊನೆಯಲ್ಲಿ ನೆರವೇರಬಹುದು. ಚೀನಾದೊಂದಿಗೆ ಉತ್ತಮ ಸಂಬಂಧ ಕಾಪಾಡುವುದು ನಮ್ಮ ಬಯಕೆ. ಆದರೆ ಅಮೆರಿಕಕ್ಕೆ ತನ್ನ ವಾಣಿಜ್ಯ ಹಿತಾಸಕ್ತಿಯೇ ಪ್ರಾಥಮಿಕ ಆದ್ಯತೆ ಎಂದು ಡೊನಾಲ್ಡ್ ಟ್ರಂಪ್ ಸ್ಪಷ್ಟಪಡಿಸಿದರು.** -ಡೊನಾಲ್ಡ್ ಟ್ರಂಪ್

- ಚೀನಾದ ಆರ್ಥಿಕತೆ ನಾಶ ಮಾಡಲು ಸಾಧ್ಯ ಎಂದ ಡೊನಾಲ್ಡ್ ಟ್ರಂಪ್.
- ಚೀನಾದೊಂದಿಗೆ ಉತ್ತಮ ಬಾಂಧವ್ಯ ಹೊಂದಲು ಪ್ರಯತ್ನ ಎಂದ ಅಮೆರಿಕ ಅಧ್ಯಕ್ಷ.
- ವಿಶ್ವದ ಎರಡನೇ ಆರ್ಥಿಕ ದೈತ್ಯ ಶಕ್ತಿ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದೇನು?




## ಗುರುವಯೂರು ದೇಗುಲದ ನಿಯಮ ಉಲ್ಲಂಘಿಸಿದ ಅನ್ಯಕೋಮಿನ ಬ್ಲಾಗರ್

**ತಿರುವನಂತಪುರಂ:** ಜಸ್ಮಿನ್ ಜಾಫರ್ ಎಂಬ ಮಹಿಳೆಯು ಕೇರಳದ ತ್ರಿಶೂರ್‌ನಲ್ಲಿರುವ ಪ್ರಸಿದ್ಧ ಶ್ರೀ ಕೃಷ್ಣನ ದೇವಾಲಯಕ್ಕೆ ಭೇಟಿ ನೀಡಿದ ಹಿನ್ನೆಲೆ, ದೇವಸ್ಥಾನದ ಶುದ್ಧೀಕರಣದ ಪ್ರಕ್ರಿಯೆಯನ್ನು ಆಡಳಿತ ಮಂಡಳಿ ಆರಂಭಿಸಿದೆ. ಜೊತೆಗೆ, ದೇಗುಲದ ಐತಿಹಾಸಿಕ ಶ್ರೀ ಕೃಷ್ಣನ ದೇಗುಲಕ್ಕೆ ಭೇಟಿ ನೀಡಿದ್ದರು. ಚಿನ್ನದ ಬಣ್ಣದ ಸೀರೆ ಉಟ್ಟಿದ್ದ ಜಸ್ಮಿನ್ ಅಲ್ಲಿ ಕಾಲು ತೊಳೆದು ಪ್ರದರ್ಶನ ಹಾಕಿ, ಕೆರೆ ಸುತ್ತ-ಮುತ್ತ ಓಡಾಡಿರುವ ವಿಡಿಯೋವನ್ನು ಇನ್‌ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಮಾಡಲಾಗಿತ್ತು. ಇದನ್ನು ವೀಕ್ಷಿಸಿದ ನೆಟ್ಟಿಗರಲ್ಲಿ ಪರ-ವಿರೋಧ ಚರ್ಚೆ ಹೆಚ್ಚಾಯ್ತು. ವಿಡಿಯೋ ಎಲ್ಲೆಡೆ ವೈರಲ್ ಆಗುತ್ತಿದ್ದಂತೆ ಭಕ್ತಾಧಿಗಳು ಟೀಕೆ ಮಾಡಲು ಶುರು ಮಾಡಿದರು. ಆರು ದಿನದ ಹಿಂದೆ ಮಾಡಿದ ವಿಡಿಯೋವನ್ನು ಜಸ್ಮಿನ್ ಡಿಲೀಟ್ ಮಾಡಿದ್ದರು. ತನಗೆ ನಿಯಮಗಳ ಬಗ್ಗೆ ಅರಿವಿರಲಿಲ್ಲ ಎಂದು ಎಲ್ಲರ ಬಳಿ ಕ್ಷಮೆಯಾಚಿಸಿದ್ದಾರೆ.

## ಭ್ರಷ್ಟಾಚಾರ ಪ್ರಕರಣ: ಮಾಜಿ ಅಧ್ಯಕ್ಷ ವಿಕ್ರಮಸಿಂಘೆಗೆ ಜಾಮೀನು

**ಕೊಲಂಬೊ:** ಸಾರ್ವಜನಿಕರ ಹಣ ದುರುಪಯೋಗಪಡಿಸಿಕೊಂಡ ಆರೋಪದ ಮೇಲೆ ಬಂಧನಕೊಳ್ಳಗಾಗಿದ್ದ ಶ್ರೀಲಂಕಾ ಮಾಜಿ ಅಧ್ಯಕ್ಷ ರನಿಲ್ ವಿಕ್ರಮಸಿಂಘೆ ಅವರಿಗೆ ನ್ಯಾಯಾಲಯ ಮಂಗಳವಾರ ಜಾಮೀನು ಮಂಜೂರು ಮಾಡಿದೆ. ಕೊಲಂಬೊ ರಾಷ್ಟ್ರೀಯ ಆಸ್ಪತ್ರೆಯ ತೀವ್ರ ನಿಗಾ ಘಟಕದಿಂದ, ನ್ಯಾಯಾಲಯದ ಆವರಣದ ಹೊರಗೆ ಬಿಗಿ ಭದ್ರತೆ ಮತ್ತು ಪ್ರತಿಭಟನೆಗಳ ನಡುವೆ ವಿಕ್ರಮಸಿಂಘೆ ಅವರು ವರ್ಚುವಲ್ ಮೂಲಕ ಕೋರ್ಟ್ ವಿಚಾರಣೆಗೆ ಹಾಜರಾದರು.

ವಿಕ್ರಮಸಿಂಘೆ ಅವರ ಜಾಮೀನು ಅರ್ಜಿಯ ವಿಚಾರಣೆ ನಡೆಸಿದ ಕೊಲಂಬೊ ಫೋರ್ಟ್ ಮ್ಯಾಜಿಸ್ಟ್ರೇಟ್ ನಿಲುಪುಲಿ ಲಂಕಾಪುರ ಅವರು, ಮಾಜಿ ಅಧ್ಯಕ್ಷರಿಗೆ ಜಾಮೀನು ಮಂಜೂರು ಮಾಡಿ ಆದೇಶಿಸಿದ್ದಾರೆ.

ಆರಂಭದಲ್ಲಿ ಜೈಲು ಆಸ್ಪತ್ರೆಗೆ ದಾಖಲಾಗಿದ್ದ ವಿಕ್ರಮಸಿಂಘೆ ಅವರನ್ನು ನಿರ್ಜಲೀಕರಣದಿಂದಾಗಿ ಅವರ ಆರೋಗ್ಯ ತೀವ್ರ ಹದಗೆಟ್ಟ ನಂತರ ರಾಷ್ಟ್ರೀಯ ಆಸ್ಪತ್ರೆಯ ಐಸಿಯುಗೆ ವರ್ಗಾಯಿಸಲಾಯಿತು.

ವಿಕ್ರಮಸಿಂಘೆ ಅವರು ಸರ್ಕಾರದ 16 ಲಕ್ಷ ರೂಪಾಯಿಗಳನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ.

76 ವರ್ಷದ ವಿಕ್ರಮಸಿಂಘೆ ಅವರು ದೇಶದ ಮುಖ್ಯಸ್ಥರಾಗಿದ್ದಾಗ ಬ್ರಿಟಿಷ್ ವಿಶ್ವವಿದ್ಯಾಲಯದಲ್ಲಿ ತಮ್ಮ ಪತ್ನಿ ಪ್ರೊಫೆಸರ್ ಮೈತ್ರೀ ಅವರ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲು ಸೆಪ್ಟೆಂಬರ್ 2023 ರಲ್ಲಿ ಲಂಡನ್‌ಗೆ ಭೇಟಿ ನೀಡಲು ಸರ್ಕಾರದ ಹಣ ಬಳಸಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ.

## ಹಮಾಸ್ ಸೋಲಿಸುವುದಷ್ಟೇ ನಮ್ಮ ಗುರಿ, ನಾಗರೀಕರನ್ನು ಗೌರವಿಸುತ್ತೇವೆ: ಇಸ್ರೇಲ್

**ಇಸ್ರೇಲ್:** ದಕ್ಷಿಣ ಗಾಜಾದ ಮುಖ್ಯ ಆಸ್ಪತ್ರೆ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಐವರು ಪತ್ರಕರ್ತರು ಸೇರಿ 21 ಮಂದಿ ಸಾವಿಗೀಡಾಗಿದ್ದು, ದಾಳಿ ಕುರಿತು ಇಸ್ರೇಲ್ ಪ್ರಧಾನಮಂತ್ರಿ ಬೆಂಜಮಿನ್ ನೆತನ್ಯಾಹು ಅವರು ಇದೇ ಮೊದಲ ಬಾರಿಗೆ ತೀವ್ರ ವಿಷಾದ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿ ಹೇಳಿಕೆ ನೀಡಿರುವ ಅವರು, ಗಾಜಾದ ನಾಸರ್ ಆಸ್ಪತ್ರೆಯಲ್ಲಿ ಇಂದು ಸಂಭವಿಸಿದ ದುರಂತಕ್ಕೆ ಇಸ್ರೇಲ್ ತೀವ್ರ ವಿಷಾದ ವ್ಯಕ್ತಪಡಿಸುತ್ತದೆ ಎಂದು ಹೇಳಿದ್ದಾರೆ. ಪತ್ರಕರ್ತರು, ವೈದ್ಯಕೀಯ ಸಿಬ್ಬಂದಿ ಮತ್ತು ಎಲ್ಲಾ ನಾಗರಿಕರನ್ನು ಇಸ್ರೇಲ್ ಗೌರವಿಸುತ್ತದೆ. ನಮ್ಮ ಯುದ್ಧ ಹಮಾಸ್ ಭಯೋತ್ಪಾದಕರ ವಿರುದ್ಧವಾಗಿದ್ದು, ಹಮಾಸ್ ಅನ್ನು ಸೋಲಿಸುವುದು ಮತ್ತು ನಮ್ಮ ಒತ್ತೆಯಾಳುಗಳನ್ನು ತಾಯಿನಾಡಿಗೆ ಕರೆತರುವುದು ನಮ್ಮ ಗುರಿಯಾಗಿದೆ ಎಂದು ತಿಳಿಸಿದ್ದಾರೆ.

ದಕ್ಷಿಣ ಗಾಜಾದ ಮುಖ್ಯ ಆಸ್ಪತ್ರೆಯ ನಾಲ್ಕನೇ ಮಹಡಿಯ ಮೇಲೆ ಇಸ್ರೇಲ್ ವೈಮಾನಿಕ ದಾಳಿ ನಡೆಸಿದ್ದು, ಐವರು ಪತ್ರಕರ್ತರು ಸೇರಿದಂತೆ ಕನಿಷ್ಠ 20 ಮಂದಿ ಸಾವನ್ನಪ್ಪಿದ್ದಾರೆ. ನಾಸರ್ ಆಸ್ಪತ್ರೆಯ ನಾಲ್ಕನೇ ಮಹಡಿಯಲ್ಲಿದ್ದ 20 ಜನ ಡಬಲ್-ಟ್ಯಾಪ್ ದಾಳಿಯಲ್ಲಿ ಸಾವನ್ನಪ್ಪಿದ್ದಾರೆ ಎಂದು ಗಾಜಾ ಆರೋಗ್ಯ ಸಚಿವಾಲಯ ತಿಳಿಸಿದೆ. ಮೊದಲು ಒಂದು ಕ್ಷಿಪಣಿ ಆಸ್ಪತ್ರೆಗೆ ಅಪ್ಪಳಿಸಿತು. ನಂತರ ರಕ್ಷಣಾ ಸಿಬ್ಬಂದಿ ಆಗಮಿಸುತ್ತಿದ್ದಂತೆ ಮತ್ತೊಂದು ಕ್ಷಿಪಣಿ ಅಪ್ಪಳಿಸಿದೆ ಎಂದು ಹೇಳಿದೆ. ದಾಳಿಯಲ್ಲಿ ಸಾವನ್ನಪ್ಪಿದವರಲ್ಲಿ ತನ್ನ ಪತ್ರಕರ್ತ ಮೊಹಮ್ಮದ್ ಸಲಾಮ್ ಕೂಡ ಸೇರಿದ್ದಾರೆ ಎಂದು ಅಲ್ ಜಜೀರಾ ದೃಢಪಡಿಸಿದೆ. ತನ್ನ ಕ್ಯಾಮೆರಾಮನ್ ಹುಸ್ಸಾಮ್ ಅಲ್-ಮಸ್ರಿ ಕೂಡ ಮುಷ್ಕರದಲ್ಲಿ ಸಾವನ್ನಪ್ಪಿದ್ದಾರೆ ಎಂದು ರಾಯಿಟರ್ಸ್ ವರದಿ ಮಾಡಿದೆ. ರಾಯಿಟರ್ಸ್ ಮತ್ತೊಬ್ಬ ಛಾಯಾಗ್ರಾಹಕ ಹಾತೆಮ್ ಖಲೀದ್ ಗಾಯಗೊಂಡಿದ್ದಾರೆ ಎಂದು ಸುದ್ದಿ ಸಂಸ್ಥೆ ವರದಿ ಮಾಡಿದೆ.

## ನನ್ನ ಕುರ್ಚಿಗೆ ಪ್ರಧಾನಿ ಮೋದಿ ಗೌರವ ನೀಡಬೇಕು: ಪಶ್ಚಿಮ ಬಂಗಾಳ ಸಿಎಂ

**ಕೋಲ್ಕತ್ತಾ:** ನನ್ನ ಕುರ್ಚಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ನೀಡಬೇಕು ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಹೇಳಿದ್ದಾರೆ. ನಮ್ಮನ್ನು ಕಳ್ಳರು ಎಂದು ಕರೆಯುವ ಮೂಲಕ ಇಡೀ ರಾಜ್ಯವನ್ನು ಅಗೌರವಿಸುತ್ತಾರೆ ಎಂದು ನಾನು ಎಂದಿಗೂ ನಿರೀಕ್ಷಿಸಿರಲಿಲ್ಲ ಎಂದು ಹೇಳಿದ್ದಾರೆ. ಭ್ರಷ್ಟಾಚಾರ, ಅಪರಾಧ ಮತ್ತು ತೃಣಮೂಲ ಕಾಂಗ್ರೆಸ್ ಸಮಾನಾರ್ಥಕ ಪದಗಳು' ಎಂದು ಹೇಳಿದ್ದ ಪ್ರಧಾನಿಯವರ ಇತ್ತೀಚಿನ ಹೇಳಿಕೆಗಳನ್ನು ಉಲ್ಲೇಖಿಸಿದ ಬ್ಯಾನರ್ಜಿ, ನಾನು ಪ್ರಧಾನಿಯಿಂದ ಇದನ್ನು ನಿರೀಕ್ಷಿಸುವುದಿಲ್ಲ. ನಾನು ಅವರ ಕುರ್ಚಿಯನ್ನು ಗೌರವಿಸುತ್ತೇನೆ. ಆದರೆ ಅವರು ನಮ್ಮ ಕುರ್ಚಿಯನ್ನು ಗೌರವಿಸಬೇಕು. ಬಂಗಾಳದಲ್ಲಿ ಕಳ್ಳರಿರುವುದರಿಂದ ಅನುದಾನ ನಿಲ್ಲಿಸಿದೆ ಎಂದು ಪ್ರಧಾನಿ ಯಾಕೆ ಹೇಳಿದರು ಎಂದು ಪ್ರಶ್ನಿಸಿದರು. ಆಗಸ್ಟ್ 22 ರಂದು ಕೋಲ್ಕತ್ತಾದ ಡಮ್ ಡಮ್‌ನಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಮೋದಿ, ಕೇಂದ್ರವು ಪಶ್ಚಿಮ ಬಂಗಾಳ ಸರ್ಕಾರಕ್ಕೆ ಕಳುಹಿಸುವ ಹಣ ಜನರಿಗೆ ತಲುಪುವುದಿಲ್ಲ ಆದರೆ ಸಂಪೂರ್ಣವಾಗಿ ಟಿಎಂಸಿ ಕಾರ್ಯಕರ್ತರು ಕಬಳಿಸುತ್ತಾರೆ ಎಂಬ ಆರೋಪದ ವಿರುದ್ಧ ಕಿಡಿಕಾರಿದ ಮಮತಾ, ಇದು ಪಶ್ಚಿಮ ಬಂಗಾಳದ ಜನರಿಗೆ ಮಾಡಿದ ಅಪಮಾನ ಎಂದು ಹೇಳಿದರು.

ಬುರ್ದ್ವಾನ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಬ್ಯಾನರ್ಜಿ, ಕೇಂದ್ರ ಸರ್ಕಾರ ಪಶ್ಚಿಮ ಬಂಗಾಳಕ್ಕೆ ನ್ಯಾಯಸಮ್ಮತ ಹಾಗೂ ಸಮಂಜಸವಾಗಿ ಅನುದಾನ ನೀಡುತ್ತಿಲ್ಲ, ಅದರ ಮಲತಾಯಿ ಧೋರಣೆಯಿಂದ ರಾಜ್ಯದ ಬೊಕ್ಕಸಕ್ಕೆ ಭಾರಿ ನಷ್ಟ ಆಗಿದೆ ಎಂದು ಆರೋಪಿಸಿದರು. ನಮ್ಮ ಆಡಳಿತದ ಅವಧಿಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಶೇ. 76 ಮತ್ತು ನಗರ ಪ್ರದೇಶಗಳಲ್ಲಿ ಶೇ. 78 ರಷ್ಟು ನೀರು ಪೂರೈಸಿದ್ದೇವೆ. ಇದಕ್ಕಾಗಿ ರೂ. 38,000 ಕೋಟಿ ವೆಚ್ಚ ಮಾಡಿದ್ದೇವೆ. ಉಚಿತವಾಗಿ ಭೂಮಿ ನೀಡಿದ್ದೇವೆ. ಕೇಂದ್ರದಿಂದ ಇನ್ನೂ ರೂ. 65,000 ಕೋಟಿ ಬರಬೇಕಾಗಿದೆ ಎಂದು ಅವರು ಟೀಕಾ ಪ್ರಹಾರ ನಡೆಸಿದರು.


# ಡ್ಯಾಡ್ ಮೊದಲ ಹಂತದ ಶೂಟಿಂಗ್ ಮುಕ್ತಾಯ

ಕರುನಾಡ ಚಕ್ರವರ್ತಿ ಶಿವರಾಜ್‌ಕುಮಾರ್ ಅವರು ನಾಯಕರಾಗಿ ನಟಿಸುತ್ತಿರುವ ಹಾಗೂ ಶೀರ್ಷಿಕೆಯಲ್ಲೇ ಕುತೂಹಲ ಮೂಡಿಸಿರುವ ''ಡ್ಯಾಡ್'' ಚಿತ್ರದ ಮುಹೂರ್ತ ಸಮಾರಂಭ ಇತ್ತೀಚೆಗಷ್ಟೇ ಮೈಸೂರಿನ ಚಾಮುಂಡಿ ಬೆಟ್ಟದಲ್ಲಿರುವ ನಂದಿ ದೇವಸ್ಥಾನದಲ್ಲಿ ನೆರವೇರಿತ್ತು. ಪ್ರಸ್ತುತ ಅರಮನೆ ನಗರಿ ಮೈಸೂರಿನಲ್ಲೇ ''ಡ್ಯಾಡ್'' ಚಿತ್ರಕ್ಕೆ ಮೊದಲ ಹಂತದ ಚಿತ್ರೀಕರಣ ಮುಕ್ತಾಯವಾಗಿದೆ. ಸದ್ಯದಲ್ಲೇ ಎರಡನೇ ಹಂತದ ಚಿತ್ರೀಕರಣ ಪ್ರಾರಂಭವಾಗಲಿದೆ. ಹರೀಶ್ ಪೆದ್ದಿ ಅವರು ಮೈರಾ ಕ್ರಿಯೇಷನ್ಸ್ ಲಾಂಛನದಡಿ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ತೆಲುಗಿನ ಖ್ಯಾತ ನಿರ್ದೇಶಕ ಅನಿಲ್ ಕನ್ನೆಗಂಟಿ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ನಿರ್ಮಾಪಕರಿಗೆ ಹಾಗೂ ನಿರ್ದೇಶಕರಿಗೆ ಇದು ಕನ್ನಡದಲ್ಲಿ ಮೊದಲ ಚಿತ್ರ. ಬಿ.ಎಸ್.ಸುಧೀಂದ್ರ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಶಿವರಾಜ್‌ಕುಮಾರ್ ಅವರು ಅನೇಕ ವರ್ಷಗಳ ನಂತರ ಈ ಚಿತ್ರದಲ್ಲಿ ವೈದ್ಯನ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಶರ್ಮಿಳಾ ಮಾಂಡ್ರೆ, ಬೇಬಿ ನಕ್ಷತ್ರ, ಬಾಬು, ಮಲಯಾಳಂ ನಟ ಸೂರಜ್ ವೆಂಜರಮೂಡು ಮುಂತಾದವರು ಚಿತ್ರದ ತಾರಾಬಳಗದಲ್ಲಿದ್ದಾರೆ.

ಕನ್ನಡ, ತೆಲುಗು ಮತ್ತು ಮಲಯಾಳಂನಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರಕ್ಕೆ ಅರ್ಜುನ್ ಜನ್ಯ ಅವರ ಸಂಗೀತ ನಿರ್ದೇಶನ ಹಾಗೂ ಬಿ.ರಾಜಶೇಖರ್ ಅವರ ಛಾಯಾಗ್ರಹಣವಿದೆ.





# ಕಿಚ್ಚನ ಬರ್ತ್‌ಡೇಗೆ ಬಿಗ್ ನ್ಯೂಸ್!

ಕಿಚ್ಚ ಸುದೀಪ್ ಹುಟ್ಟುಹಬ್ಬಕ್ಕೆ ಕೌಂಟ್‌ಡೌನ್ ಶುರುವಾಗಿದೆ. ಇದೇ ಸಪ್ಟೆಂಬರ್ 2 ರಂದು ಕಿಚ್ಚ 52ನೇ ವರ್ಷಕ್ಕೆ ಕಾಲಿಡಲಿದ್ದಾರೆ. ಹುಟ್ಟುಹಬ್ಬದ ಆಚರಣೆ ಕುರಿತಾಗಿ ಈಗಾಗ್ಲೇ ಅಭಿಮಾನಿಗಳಿಗೆ ಪತ್ರದ ಮೂಲಕ ಮನವಿ ಮಾಡಿಕೊಂಡಿದ್ದಾರೆ.

ಹುಟ್ಟುಹಬ್ಬದ ದಿನವೇ ಅಭಿಮಾನಿಗಳು ಕಾದಿರುವ ಸ್ಪೆಷನ್ ನ್ಯೂಸ್ ಕೊಡುವ ಸಾಧ್ಯತೆ ಇದೆ ಸುದೀಪ್. ಅಂದರೆ ಕನ್ನಡದ ಬಿಗ್‌ಬಾಸ್ ಸೀಸನ್ 12ರ ಪ್ರಸಾರದ ಡೇಟ್ ಅನೌನ್ಸ್ ಮಾಡಿ ಟೀಸರ್ ರಿಲೀಸ್ ಆಗುವ ಸಂಭವವಿದೆ. ಕಿಚ್ಚನ ಬಹುನಿರೀಕ್ಷಿತ ರಿಯಾಲಿಟಿ ಶೋ ಕನ್ನಡದ ಬಿಗ್‌ಬಾಸ್ ಶೋ, ಇದೇ ಬರುವ ಸಪ್ಟೆಂಬರ್ ಕೊನೆಯ ವಾರದಿಂದ ಪ್ರಸಾರವಾಗುವ ಸಾಧ್ಯತೆ ಇದೆ. ಹೀಗಾಗಿ ದಿನಾಂಕ ಘೋಷಣೆಯನ್ನ ಕಿಚ್ಚನ ಹುಟ್ಟುಹಬ್ಬದ ದಿನ ಅಭಿಮಾನಿಗಳಿಗೆ ಸರ್ಪ್ರೈಸ್ ಮಾಡಲು ತಂಡ ಸಿದ್ಧವಾಗಿದೆ ಅನ್ನುವ ಮಾಹಿತಿ ಇದೆ.

ಬಿಗ್‌ಬಾಸ್‌ಗೆ ವಿದಾಯ ಹೇಳಿದ್ದ ಕಿಚ್ಚ ಮತ್ತೆ ವಾಪಸ್ ಬಂದ್ರು. ಈ ಬಾರಿ ಒಂದಷ್ಟು ಬದಲಾವಣೆಗಳನ್ನ ಸೂಚಿಸಿದ್ದರು ಕಿಚ್ಚ. ಅದರ ಪ್ರಕಾರ ಈ ಸೀಸನ್ ಬಹು ನಿರೀಕ್ಷಿತ ಸೀಸನ್ ಆಗಿರಲಿದೆ. ಹೀಗಾಗಿ ಬಿಗ್‌ಬಾಸ್ ಬರುವ ದಿನಾಂಕ ಅಂದೇ ರಿವೀಲ್ ಆಗುವ ಸಾಧ್ಯತೆ ಇದೆ. ಹೊಸ ಸೀಸನ್‌ನಲ್ಲಿ ಕಿಚ್ಚನ ಪ್ರೋಮೋ ನೋಡಲು ಫ್ಯಾನ್ಸ್ ಕಾದಿದ್ದಾರೆ. ಇನ್ನೊಂದು ವಿಶೇಷ ಅಂದ್ರೆ, ಕಿಚ್ಚನ ಹುಟ್ಟುಹಬ್ಬದ ದಿನ ಕೆ47 ಚಿತ್ರದ ಟೈಟಲ್ ಟೀಸರ್ ರಿಲೀಸ್ ಸಾಧ್ಯತೆಯೂ ಇದೆ. ಒಟ್ಟಿನಲ್ಲಿ ಈ ಸಲದ ಕಿಚ್ಚನ ಹುಟ್ಟುಹಬ್ಬಕ್ಕೆ ಫ್ಯಾನ್ಸ್‌ಗಂತೂ ಹಬ್ಬವೋ ಹಬ್ಬ.

**ಕೆ47 ಚಿತ್ರದ ಟೈಟಲ್ ಟೀಸರ್ ರಿಲೀಸ್**





# ಅನುಷ್ಕಾ ಶೆಟ್ಟಿ ಚಿತ್ರಕ್ಕೆ ಪುಷ್ಪಾ ವಿತರಕಿ

ಕೊತ್ತಲವಾಡಿ ಚಿತ್ರದ ಮೂಲಕ ನಿರ್ಮಾಪಕಿಯಾಗಿ ಚಿತ್ರರಂಗ ಪ್ರವೇಶಿಸಿದ ರಾಕಿಂಗ್ ಸ್ಟಾರ್ ಯಶ್ ಅವರ ತಾಯಿ ಪುಷ್ಪ ಅರುಣ್ ಕುಮಾರ್ ಈಗ ವಿತರಣಾ ವಲಯಕ್ಕೆ ಅಡಿಯಿಟ್ಟಿದ್ದಾರೆ. ಯಶ್ ತಾಯಿಯ ಈ ನಡೆಯು ಸಿನಿ ಪ್ರಿಯರಿಗೆ ಅಚ್ಚರಿ ತಂದಿದೆ. ಒಂದೇ ಒಂದು ಸಿನಿಮಾ ಮಾಡಿರೋ ಪುಷ್ಪಾ, ವಿತರಣೆ ಹೇಗೆ ಮಾಡ್ತಾರೆ ಅನ್ನೋ ಕುತೂಹಲ ಕೂಡ ಮೂಡಿದೆ.

ಕಂ ಪ್ರೊಡಕ್ಷನ್ಸ್ ಲಾಂಛನದಲ್ಲಿ ಥ್ರೂ ಶ್ರೀಧರ್ ಕೃಪಾ ಕಂಬೈನ್ಸ್ ಮೂಲಕ ಇದೇ ಮೊದಲ ಬಾರಿಗೆ ಅನುಷ್ಕಾ ಶೆಟ್ಟಿ ಅಭಿನಯದ ಬಹು ನಿರೀಕ್ಷಿತ ಪ್ಯಾನ್ ಇಂಡಿಯಾ ಘಾಟಿ ಚಿತ್ರವನ್ನು ಪುಷ್ಪ ಅರುಣ್ ಕುಮಾರ್ ಅವರು ಕರ್ನಾಟಕದಾದ್ಯಂತ ವಿತರಣೆ ಮಾಡುತ್ತಿದ್ದಾರೆ. ಸೆಪ್ಟೆಂಬರ್ 5 ರಂದು ಅದ್ದೂರಿಯಾಗಿ ರಾಜ್ಯಾದ್ಯಂತ ಅಧಿಕ ಸಂಖ್ಯೆಯ ಚಿತ್ರಮಂದಿರಗಳಲ್ಲಿ ಈ ಚಿತ್ರವನ್ನು ಬಿಡುಗಡೆ ಮಾಡುತ್ತಿದ್ದಾರೆ.

ಘಾಟಿ ಚಿತ್ರದ ಮೂಲಕ ಸಿನಿಮಾ ವಿತರಣೆ ಆರಂಭಿಸುತ್ತಿದ್ದೇವೆ. ಮುಂದೆ ಕೂಡ ಕನ್ನಡ ಸೇರಿದಂತೆ ಎಲ್ಲಾ ಭಾಷೆಗಳ ಚಿತ್ರಗಳನ್ನು ಕಂ ಪ್ರೊಡಕ್ಷನ್ಸ್ ಮೂಲಕ ವಿತರಣೆ ಮಾಡುತ್ತೇವೆ. ಚಿತ್ರ ನಿರ್ಮಾಣಕ್ಕೆ ಬಂದಾಗ ತಾವು ತೋರಿದ ಪ್ರೀತಿಗೆ ಅನಂತ ಧನ್ಯವಾದ. ಈಗ ವಿತರಕಿಯಾಗಿ ಹೊಸ ಹೆಜ್ಜೆ ಇಡುತ್ತಿದ್ದೇನೆ. ತಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದು ಪುಷ್ಪ ಅರುಣ್ ಕುಮಾರ್ ತಿಳಿಸಿದ್ದಾರೆ.

# ದರ್ಶನ್ ಜೊತೆಗಿನ ಫೋಟೋ ಪೋಸ್ಟ್ ಮಾಡಿರುವ ವಿಜಯಲಕ್ಷ್ಮಿ

ಎಲ್ಲವೂ ಸರಿಯಾಗಿದಿದ್ದ್ರೆ ನಟ ದರ್ಶನ್ ಇಂದು ಗೌರಿ ಗಣೇಶ ಹಬ್ಬವನ್ನು ಮನೆಯಲ್ಲಿ ಆಚರಿಸುತ್ತಿದ್ರು. ಆದರೆ ಇದೀಗ ಜೈಲಲ್ಲಿ ಆಚರಿಸಿಬೇಕಾಗಿದೆ. ಸಾಮಾನ್ಯವಾಗಿ



ನಟ ದರ್ಶನ್ ಹಬ್ಬಗಳಲ್ಲಿ ಶುಭಾಶಯ ಕೋರಿ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಹಾಕುವ ಪದ್ಧತಿ ಪಾಲಿಸಿಕೊಂಡು ಬಂದಿದ್ದರು. ಕಳೆದ ವರ್ಷವೂ ದರ್ಶನ್ ಪಾಲಿನ ಗೌರಿ ಗಣೇಶ ಹಬ್ಬ ಜೈಲಲ್ಲೇ ನಡೀತು, ಈ ವರ್ಷವೂ ಜೈಲೇ ಕಂಟಿನ್ಯೂ ಆಗಿದೆ. ಇಂಥಹ ವಿಪರ್ಯಾಸದಲ್ಲೂ ವಿಜಯಲಕ್ಷ್ಮಿ ಪತಿ ಜೊತೆ ಫೋಟೋ ಪೋಸ್ಟ್ ಮಾಡಿ ಎಲ್ಲರಿಗೂ ಗೌರಿ ಗಣೇಶ ಹಬ್ಬದ ಶುಭಾಶಯ ಕೋರಿದ್ದಾರೆ. ಫಾರ್ಮ್‌ಹೌಸ್‌ನಲ್ಲಿ ಪೂಜಾ ಸಮಯವೊಂದರಲ್ಲಿ ತೆಗೆದಿರುವ ಫೋಟೋವನ್ನ ದರ್ಶನ್ ಪತ್ನಿ ವಿಜಯಲಕ್ಷ್ಮಿ ಪೋಸ್ಟ್ ಮಾಡಿದ್ದಾರೆ. ಬಹುಶಃ ದರ್ಶನ್ ಹೊರಗಡೆ ಇದ್ದಿದ್ರೆ ಸಂಭ್ರಮದಿಂದ ಈ ಬಾರಿಯಾದರೂ ಗೌರಿ ಗಣೇಶ ಹಬ್ಬವನ್ನ ಆಚರಿಸುತ್ತಿದ್ದರೋ ಏನೋ, ಆದರೆ ಈ ಬಾರಿಯೂ ಪರಪ್ಪನ ಅಗ್ರಹಾರದಲ್ಲೇ ಗಣೇಶ ಪ್ರಸಾದ ಸವಿಯಬೇಕಾದ ಪರಿಸ್ಥಿತಿ ಬಂದಿದೆ.

ಒಟ್ನಲ್ಲಿ ಎಲ್ಲಾ ದುಗುಡ ದುಮ್ಮಾನದ ನಡುವೆಯೂ ವಿಜಯಲಕ್ಷ್ಮಿ ಇನ್‌ಸ್ಟಾಗ್ರಾಂನಲ್ಲಿ ದರ್ಶನ್ ಫೋಟೋ ಪೋಸ್ಟ್ ಮಾಡಿ ಅಭಿಮಾನಿಗಳಿಗೆ ಖುಷಿ ಕೊಟ್ಟಿದ್ದಾರೆ. ಟೀಕೆ ಟಿಪ್ಪಣಿಗೆ ಅವಕಾಶ ನೀಡಲೇಬಾರದು ಎಂದು ತೀರ್ಮಾನಿಸಿ ಕಾಮೆಂಟ್ಸ್ ಸೆಕ್ಷನ್‌ನ್ನು ಆಫ್ ಮಾಡಿದ್ದಾರೆ ವಿಜಯಲಕ್ಷ್ಮಿ ದರ್ಶನ್.

# ಕೊಹ್ಲಿಯಿಂದ ಫೋಟೋಗೆ ಲೈಕ್

ಅವನೀತ್ ಕೌರ್ ಈಕೆ ಹೇಳಿಕೊಳ್ಳುವಂಥಹ ಹಿಟ್ ಸಿನಿಮಾ ಕೊಟ್ಟ ನಟಿಯಲ್ಲ. ಆದರೆ ಡಾನ್ಸ್ ರಿಯಾಲಿಟಿ ಶೋ ಮೂಲಕ ಜನಪ್ರಿಯತೆ ಗಳಿಸಿರುವ ಪಂಜಾಬ್ ಬ್ಯೂಟಿ. ಹಾಲ್ಗೆನ್ನೆಯ ಈ ಚೆಲುವೆ ರಾತ್ರೋರಾತ್ರಿ ಹೆಡ್‌ಲೈನ್ಸ್ ಸುದ್ದಿ ಆಗ್ತಾರೆ. ಕಾರಣ ಈಕೆಯ ಇನ್‌ಸ್ಟಾ ಫೋಟೋಗೆ ವಿರಾಟ್ ಕೊಹ್ಲಿ ಅಫಿಷಿಯಲ್ ಐಡಿಯಿಂದ ಲೈಕ್ ಬಂದಿರುತ್ತೆ.

ಸಿಕ್ಕಾಪಟ್ಟೆ ಟ್ರೋಲ್ ಆದ ಬಳಿಕ ವಿರಾಟ್ ಪ್ರತಿಕ್ರಿಯಿಸಿ, ಇದು ಅವರ ಇನ್‌ಸ್ಟಾಗ್ರಾಂ ಹ್ಯಾಂಡಲ್ ಮಾಡುವ ವ್ಯಕ್ತಿಯ ಆಕ್ಸಿಡೆಂಟಲ್ ಕರಾಮತ್ ಅನ್ನೋದಾಗಿ ಸ್ಪಷ್ಟಪಡಿಸಿದ್ರು. ಆದರೆ ಈ ಆಕ್ಸಿಡೆಂಟ್ ಪ್ರಕ್ರಿಯೆಯ ಲಾಭ ಪಡೆದುಕೊಂಡಿದ್ದ ನಟಿ ಅವನೀತ್ ಕೌರ್. 4 ತಿಂಗಳ ಹಿಂದೆ ನಡೆದ ಆ ಘಟನೆ ಬಗ್ಗೆ ಫಸ್ಟ್ ರಿಯಾಕ್ಷನ್ ಕೊಟ್ಟಿದ್ದಾರೆ.

ತನ್ನ ಮುಂದಿನ ಚಿತ್ರ 'ಲವ್ ಇನ್ ವಿಯೆಟ್ನಾಂ ಟ್ರೈಲರ್ ಬಿಡುಗಡೆ ಸಮಾರಂಭದಲ್ಲಿ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ್ದಾರೆ. ದೊಡ್ಡ ದೊಡ್ಡ ಸೆಲೆಬ್ರಿಟಿಗಳು ಕೂಡ ನಿಮ್ಮ ಫೋಟೋಗೆ ಲೈಕ್ ಕೊಡ್ತಾರಲ್ಲ ಎಂಬ ಪ್ರಶ್ನೆಗೆ ನಾಚಿ ಕೆಯಿಂದಲೇ, ಮಿಲ್ತಾ ರಹೇ ಪ್ಯಾರ್, ಬಸ್. ಔರ್ ಕ್ಯಾ ಬೋಲೂ ಮೈ (ಪ್ರೀತಿ ಸಿಗ್ತಾನೆ ಇರುತ್ತೆ, ಇನ್ನೇನು ಹೇಳಲಿ) ಎಂದು ಉತ್ತರಿಸಿದ್ದಾರೆ.

ಒಟ್ನಲ್ಲಿ ಎಲ್ಲರಿಗೂ ಒಂದ್ ಟೈಂ ಬರುತ್ತೆ ಅಂತಾರಲ್ಲ ಹಾಗೆ ಅವನೀತ್ ಕೌರ್‌ಗೆ ಲಕ್ ಬಂದಿದೆ. ಆದರೆ ವಿರಾಟ್ ಕೊಹ್ಲಿ ಇನ್‌ಸ್ಟಾ ಮ್ಯಾನೇಜರ್ ಮಾಡಿರುವ ಎಡವಟ್ಟಿನಿಂದ ಕೊಹ್ಲಿ ಮೇಲೆ ಅನುಮಾನ ಪಡುವಂತಾಯ್ತು.



# 797 ನಿಮಿಷ, 847 ಎಸೆತಗಳನ್ನು ಎದುರಿಸಿದ್ದ ಲಿಯೊನಾರ್ಡ್ ಹಟ್ಟನ್

ಲಿಯೊನಾರ್ಡ್ ಹಟ್ಟನ್ ಇಂಗ್ಲೆಂಡ್ ತಂಡದ ಮಾಜಿ ಆರಂಭಿಕ ದಾಂಡಿಗ. 1937 ರಿಂದ 1955 ರವರೆಗೆ ಇಂಗ್ಲೆಂಡ್ ಪರ ಕಣಕ್ಕಿಳಿದಿದ್ದ ಲಿಯೊನಾರ್ಡ್ 138 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿದ್ದು, ಈ ವೇಳೆ 19 ಸೆಂಚುರಿ ಸಿಡಿಸಿದ್ದಾರೆ. ಅಲ್ಲದೆ 33 ಅರ್ಧಶತಕಗಳೊಂದಿಗೆ ಒಟ್ಟು 6971 ರನ್ ಕಲೆಹಾಕಿದ್ದಾರೆ.



797 ನಿಮಿಷ, 847 ಎಸೆತಗಳನ್ನು ಎದುರಿಸಿದ್ದ ಲಿಯೊನಾರ್ಡ್ ಹಟ್ಟನ್ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಇನಿಂಗ್ಸ್‌ವೊಂದರಲ್ಲಿ ಅತ್ಯಧಿಕ ಎಸೆತಗಳನ್ನು ಎದುರಿಸಿದ ಬ್ಯಾಟ್ಸ್‌ಮನ್ ಯಾರೆಂಬ ಪ್ರಶ್ನೆಗೆ ಉತ್ತರ ಲಿಯೊನಾರ್ಡ್ ಹಟ್ಟನ್. ಇಂಗ್ಲೆಂಡ್‌ನ ಲಿಯೊನಾರ್ಡ್ ಹಟ್ಟನ್ ಬರೋಬ್ಬರಿ 797 ನಿಮಿಷಗಳ ಕಾಲ ಬ್ಯಾಟಿಂಗ್ ಮಾಡಿದ್ದರು ಎಂದರೆ ನಂಬಲೇಬೇಕು. ಇದರ ನಡುವೆ ಎದುರಿಸಿದ್ದು ಬರೋಬ್ಬರಿ 847 ಎಸೆತಗಳು ಎಂಬುದೇ ಅಚ್ಚರಿ.

ಲಿಯೊನಾರ್ಡ್ ಹಟ್ಟನ್ ಇಂತಹದೊಂದು ವಿಶ್ವದಾಖಲೆ ನಿರ್ಮಿಸಿದ್ದು 1938 ರಲ್ಲಿ. 87 ವರ್ಷಗಳ ಹಿಂದೆ ನಿರ್ಮಾಣವಾಗಿದ್ದ ಈ ದಾಖಲೆಯನ್ನು ಈವರೆಗೆ ಯಾರಿಂದಲೂ ಮುರಿಯಲು ಸಾಧ್ಯವಾಗಿಲ್ಲ ಎಂಬುದು ವಿಶೇಷ.

1938, ಆಗಸ್ಟ್ 20 ರಂದು ಲಂಡನ್‌ನ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಆಸ್ಟ್ರೇಲಿಯಾ ಹಾಗೂ ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಟಾಸ್ ಗೆದ್ದ ಆಂಗ್ಲ ಪಡೆಯ ನಾಯಕ ವ್ಯಾಲಿ ಹ್ಯಾಮಂಡ್ ಬ್ಯಾಟಿಂಗ್ ಆಯ್ದುಕೊಂಡಿದ್ದರು.

ಅದರಂತೆ ಇಂಗ್ಲೆಂಡ್ ಪರ ಇನಿಂಗ್ಸ್ ಆರಂಭಿಸಿದ್ದು ಲಿಯೊನಾರ್ಡ್ ಹಟ್ಟನ್ ಹಾಗೂ ಬಿಲ್ ಎಡ್ರಿಚ್. ಆದರೆ ತಂಡದ ಮೊತ್ತ 29 ರನ್ ಆಗುವಷ್ಟರಲ್ಲಿ ಎಡ್ರಿಚ್ (12) ವಿಕೆಟ್ ಒಪ್ಪಿಸಿದ್ದರು. ಈ ಹಂತದಲ್ಲಿ ಹಟ್ಟನ್‌ಗೆ ಸಾಥ್ ನೀಡಿದ್ದು ಮೌರಿಸ್ ಲೇಲ್ಯಾಂಡ್. ಆಸ್ಟ್ರೇಲಿಯಾ ವೇಗಿಗಳ ಮಾರಕ ದಾಳಿಯನ್ನು ಎಚ್ಚರಿಕೆಯಿಂದ ಎದುರಿಸಿದ ಈ ಜೋಡಿಯುವ 2ನೇ ವಿಕೆಟ್‌ಗೆ 382 ರನ್‌ಗಳ ಜೊತೆಯಾಟವಾಡಿದರು. ಇದರ ನಡುವೆ 438 ಎಸೆತಗಳನ್ನು ಎದುರಿಸಿದ ಮೌರಿಸ್ ಲೇಲ್ಯಾಂಡ್ 187 ರನ್‌ಗಳಿಸಿ ಔಟಾದರು.



# ವಿಶ್ವಕಪ್ ಗೆಲುವಿನಲ್ಲಿ ಸಚಿನ್ 'ಮೈಂಡ್ ಗೇಮ್'

ಟೀಮ್ ಇಂಡಿಯಾ ಏಕದಿನ ವಿಶ್ವಕಪ್ ಗೆದ್ದು ಬರೋಬ್ಬರಿ 14 ವರ್ಷಗಳು ಕಳೆದಿವೆ. 2011, ಏಪ್ರಿಲ್ 2 ರಂದು ವಾಂಖೆಡೆ ಸ್ಟೇಡಿಯಂನಲ್ಲಿ ನಡೆದ ಏಕದಿನ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಶ್ರೀಲಂಕಾ ತಂಡವನ್ನು ಬಗ್ಗು ಬಡಿದು ಟೀಮ್ ಇಂಡಿಯಾ ವಿಶ್ವ ಚಾಂಪಿಯನ್ ಕಿರೀಟ ಮುಡಿಗೇರಿಸಿಕೊಂಡಿತು. ಈ ವಿಶ್ವಕಪ್ ಗೆಲುವು ಹಲವು ಕಾರಣಗಳಿಂದ ಆಗಾಗ್ಗೆ ಸುದ್ದಿಯಲ್ಲಿರುತ್ತದೆ. ಇದೀಗ ಈ ಗೆಲುವಿನ ಹಿಂದಿರುವ ಮಾಸ್ಟರ್ ಮೈಂಡ್ ಯಾರದ್ದು ಎಂಬುದರ ಮಾಹಿತಿಯೊಂದು ಹೊರಬಿದ್ದಿದೆ.

ಟೀಮ್ ಇಂಡಿಯಾದ ಮಾಜಿ ಆರಂಭಿಕ ಆಟಗಾರ ವೀರೇಂದ್ರ ಸೆಹ್ವಾಗ್ ಇತ್ತೀಚೆಗೆ ಸಂದರ್ಶನವೊಂದರಲ್ಲಿ 2011 ರ ವಿಶ್ವಕಪ್ ಫೈನಲ್‌ನಲ್ಲಿ ಯುವರಾಜ್ ಸಿಂಗ್ ಗಿಂತ ಮೊದಲು ಮಹೇಂದ್ರ ಸಿಂಗ್ ಧೋನಿ ಅವರನ್ನು ಬ್ಯಾಟಿಂಗ್ ಮಾಡಲು ಸಚಿನ್ ತೆಂಡೂಲ್ಕರ್ ಕಾರಣ ಎಂಬ ವಿಚಾರವನ್ನು ಬಹಿರಂಗಪಡಿಸಿದ್ದರು.


**ಯುವಿಗಿಂತ ಮೊದಲು ಧೋನಿ**

ಈ ಬಗ್ಗೆ ಅಭಿಮಾನಿಯೊಬ್ಬರು ರೆಡ್ಡಿಟ್‌ನಲ್ಲಿ ಸಚಿನ್ ತೆಂಡೂಲ್ಕರ್ ಅವರನ್ನ ಕೇಳಿದ್ದಾರೆ. ಅಲ್ಲದೆ ಇದು ನಿಜವೇ ಇದರ ಹಿಂದೆ ನೀವು ಯಾವ ತಂತ್ರವನ್ನು ಯೋಚಿಸಿದ್ದೀರಿ ಎಂಬುದು ನನಗೆ ತಿಳಿಯಬೇಕು ಎಂದು ಆಗ್ರಹಿಸಿದ್ದಾರೆ.

ಅಭಿಮಾನಿಯ ಈ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿನ್ ತೆಂಡೂಲ್ಕರ್, ಇದರ ಹಿಂದೆ ಎರಡು ಪ್ರಮುಖ ಕಾರಣಗಳಿದ್ದವು. ಮೊದಲನೆಯದು ಎಡ-ಬಲ ಬ್ಯಾಟಿಂಗ್ ಸಂಯೋಜನೆ. ಏಕೆಂದರೆ ಶ್ರೀಲಂಕಾ ತಂಡದಲ್ಲಿದ್ದ ಆಫ್-ಸ್ಪಿನ್ನರ್ ತೊಂದರೆ ಉಂಟುಮಾಡಬಹುದು. ಹೀಗಾಗಿ ಲೆಫ್ಟ್ ಅಯಂಡ್ ರೈಟ್ ಕಾಂಬಿನೇಷನ್ ಮುಂದುವರೆಸಲು ನಿರ್ಧರಿಸಿದ್ದೆ. ಇನ್ನು ಎರಡನೆಯ ಕಾರಣ, ಮುತ್ತಯ್ಯ ಮುರಳೀಧರನ್ 2008 ರಿಂದ 2010 ರವರೆಗೆ ಮೂರು ವರ್ಷಗಳ ಕಾಲ ಚೆನ್ನೈ ಸೂಪರ್ ಕಿಂಗ್ಸ್ ಪರ ಆಡಿದ್ದರು. ಹಾಗಾಗಿ, ಎಂಎಸ್ ಧೋನಿ ನೆಟ್ಸ್‌ನಲ್ಲಿಯೂ ಮುರಳೀಧರನ್ ಅವರನ್ನು ಎದುರಿಸಿದ್ದಾರೆ. ಅಲ್ಲದೆ, ಮುರಳೀಧರನ್ ಅವರ ಬೌಲಿಂಗ್‌ನಲ್ಲಿ 3 ವರ್ಷ ಆಡಿದ ಅನುಭವ ಧೋನಿಗೆ ಇತ್ತು. ಹೀಗಾಗಿ ಯುವರಾಜ್ ಸಿಂಗ್ ಅವರಿಗಿಂತ ಮುಂಚಿತವಾಗಿ ಧೋನಿಯನ್ನು ಬ್ಯಾಟಿಂಗ್‌ಗೆ ಕಳುಹಿಸಲು ಸೂಚಿಸಿದ್ದೆ ಎಂಬುದನ್ನು ಸಚಿನ್ ತೆಂಡೂಲ್ಕರ್ ತಿಳಿಸಿದ್ದಾರೆ.

**ಒಟ್ಟಿಗೆ ಕಾಣಿಸಿಕೊಂಡ ಬಚ್ಚನ್ ಜೋಡಿ**

# ಗುಲ್ಬರ್ಗ-ಬೆಂಗಳೂರು ಎಲಿಮಿನೇಟರ್ ಪಂದ್ಯ




ಮಹಾರಾಜ ಟ್ರೋಫಿಯ ಪ್ಲೇಆಫ್ ಸುತ್ತಿಗೆ ನಾಲ್ಕು ತಂಡಗಳು ಪ್ರವೇಶಿಸಿದೆ. ಅದರಂತೆ ನಾಕೌಟ್ ಹಂತದಲ್ಲಿ ಬೆಂಗಳೂರು ಬ್ಲಾಸ್ಟರ್ಸ್, ಗುಲ್ಬರ್ಗ ಮಿಸ್ಟಿಕ್ಸ್, ಹುಬ್ಬಳ್ಳಿ ಟೈಗರ್ಸ್ ಹಾಗೂ ಮಂಗಳೂರು ಡ್ರ್ಯಾಗನ್ಸ್ ತಂಡಗಳು ಕಣಕ್ಕಿಳಿಯಲಿವೆ. ಇಲ್ಲಿ ಗುಲ್ಬರ್ಗ ಮಿಸ್ಟಿಕ್ಸ್ ಹಾಗೂ ಬೆಂಗಳೂರು ಬ್ಲಾಸ್ಟರ್ಸ್ ನಡುವೆ ಎಲಿಮಿನೇಟರ್ ಪಂದ್ಯ ನಡೆದರೆ, ಹುಬ್ಬಳ್ಳಿ ಟೈಗರ್ಸ್ ಹಾಗೂ ಮಂಗಳೂರು ಡ್ರ್ಯಾಗನ್ಸ್ ನಡುವೆ ಮೊದಲ ಕ್ವಾಲಿಫೈಯರ್ ಮ್ಯಾಚ್ ಜರುಗಲಿದೆ.

ಕರ್ನಾಟಕ ಸ್ಟೇಟ್ ಕ್ರಿಕೆಟ್ ಅಸೋಸಿಯೇಷನ್ ಆಯೋಜಿಸುವ ಮಹಾರಾಜ ಟ್ರೋಫಿ ಟಿ20 ಟೂರ್ನಿಯು ನಿರ್ಣಾಯಕ ಹಂತಕ್ಕೆ ಬಂದು ನಿಂತಿದೆ.

ಆರು ತಂಡಗಳೊಂದಿಗೆ ಶುರುವಾದ ಈ ಟೂರ್ನಿಯಿಂದ ಈಗಾಗಲೇ ಹಾಲಿ ಚಾಂಪಿಯನ್ ಮೈಸೂರು ವಾರಿಯರ್ಸ್ ಹಾಗೂ ಶಿವಮೊಗ್ಗ ಲಯನ್ಸ್ ತಂಡಗಳು ಹೊರಬಿದ್ದಿವೆ. ಇನ್ನುಳಿದಿರುವುದು ಬೆಂಗಳೂರು ಬ್ಲಾಸ್ಟರ್ಸ್, ಗುಲ್ಬರ್ಗ ಮಿಸ್ಟಿಕ್ಸ್, ಮಂಗಳೂಡು ಡ್ರ್ಯಾಗನ್ಸ್ ಹಾಗೂ ಹುಬ್ಬಳ್ಳಿ ಟೈಗರ್ಸ್.

ಈ ನಾಲ್ಕು ತಂಡಗಳು ಪ್ಲೇಆಫ್ ಹಂತಕ್ಕೆ ಪ್ರವೇಶಿಸಿದ್ದು, ಪ್ಲೇಆಫ್ ಹಂತದಲ್ಲಿ ಇಂದು ನಡೆಯಲಿರುವ ಎಲಿಮಿನೇಟರ್ ಪಂದ್ಯದಲ್ಲಿ ಗುಲ್ಬರ್ಗ ಮಿಸ್ಟಿಕ್ಸ್ ಹಾಗೂ ಬೆಂಗಳೂರು ಬ್ಲಾಸ್ಟರ್ಸ್ ತಂಡಗಳು ಮುಖಾಮುಖಿಯಾಗಲಿದೆ.



# ಕೆಸಿಎಲ್‌ನಲ್ಲಿ ವಿಷ್ಣು ವಿನೋದ್ ಆರ್ಭಟ

ಕೇರಳ ಕ್ರಿಕೆಟ್ ಲೀಗ್‌ನಲ್ಲಿ ವಿಷ್ಣು ವಿನೋದ್ ಆರ್ಭಟ ಮುಂದುವರೆದಿದೆ. ಕೊಚ್ಚಿ ಬ್ಲೂ ಟೈಗರ್ಸ್ ವಿರುದ್ಧದ ಪಂದ್ಯದಲ್ಲಿ 41 ಎಸೆತಗಳಲ್ಲಿ 10 ಭರ್ಜರಿ ಸಿಕ್ಸರ್‌ಗಳೊಂದಿಗೆ 94 ರನ್ ಬಾರಿಸಿದ್ದ ವಿನೋದ್ ಇದೀಗ 9ನೇ ಪಂದ್ಯದಲ್ಲೂ ಅಬ್ಬರಿಸಿದ್ದಾರೆ. ತಿರುವನಂತಪುರದ ಗ್ರೀನ್ ಫೀಲ್ಡ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಕೊಲ್ಲಂ ಸೈಲರ್ಸ್ ಹಾಗೂ ತ್ರಿಶ್ಯೂರ್ ಟೈಟಾನ್ಸ್ ತಂಡಗಳು ಮುಖಾಮುಖಿಯಾಗಿದ್ದವು.

ಈ ಪಂದ್ಯದಲ್ಲಿ ಟಾಸ್ ಗೆದ್ದ ಸಚಿನ್ ಬೇಬಿ ಬೌಲಿಂಗ್ ಆಯ್ದುಕೊಂಡರು.

ಅದರಂತೆ ಮೊದಲು ಬ್ಯಾಟ್ ಮಾಡಿ ತ್ರಿಶ್ಯೂರ್ ಟೈಟಾನ್ಸ್ ತಂಡವು 19.5 ಓವರ್‌ಗಳಲ್ಲಿ 144 ರನ್‌ಗಳಿಸಿ ಆಲೌಟ್ ಆಯಿತು. 145 ರನ್‌ಗಳ ಸುಲಭ ಗುರಿ ಬೆನ್ನತ್ತಿದ ಕೊಲ್ಲಂ ಸೈಲರ್ಸ್ ಪರ ಆರಂಭಿಕನಾಗಿ ಕಣಕ್ಕಿಳಿದ ವಿಷ್ಣು ವಿನೋದ್ ಸಿಡಿಲಬ್ಬರದ ಬ್ಯಾಟಿಂಗ್ ಪ್ರದರ್ಶಿಸಿದರು. ಮೊದಲ ಓವರ್‌ನಿಂದಲೇ ಹೊಡಿಬಡಿ ಆಟಕ್ಕೆ ಒತ್ತು ನೀಡಿದ ವಿಷ್ಣು 38 ಎಸೆತಗಳಲ್ಲಿ 8 ಭರ್ಜರಿ ಸಿಕ್ಸ್ ಹಾಗೂ 7 ಫೋರ್‌ಗಳೊಂದಿಗೆ 86 ರನ್ ಬಾರಿಸಿದರು. ಈ ಸ್ಫೋಟಕ ಅರ್ಧಶತಕದ ನೆರವಿನೊಂದಿಗೆ ಕೊಲ್ಲಂ ಸೈಲರ್ಸ್ ತಂಡವು 14.1 ಓವರ್‌ಗಳಲ್ಲಿ 150 ರನ್ ಬಾರಿಸಿ 8 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಇನ್ನು ಈ ಪಂದ್ಯದಲ್ಲಿ ಬ್ಯಾಟಿಂಗ್ ಪರಾಕ್ರಮ ಮೆರೆದ ವಿಷ್ಣು ವಿನೋದ್ ಪಂದ್ಯ ಶ್ರೇಷ್ಠ ಪ್ರಶಸ್ತಿ ಪಡೆದರು.

# ಆಸ್ಟ್ರೇಲಿಯಾ ಸರಣಿಯಿಂದ ಮೂವರು ಔಟ್



ಸೌತ್ ಆಫ್ರಿಕಾ ವಿರುದ್ಧದ ಏಕದಿನ ಸರಣಿಯನ್ನು 2-1 ಅಂತರದಿಂದ ಸೋತಿರುವ ಆಸ್ಟ್ರೇಲಿಯಾ ತಂಡವು ಅಕ್ಟೋಬರ್‌ನಲ್ಲಿ ನ್ಯೂಝಿಲೆಂಡ್ ತಂಡವನ್ನು ಎದುರಿಸಲಿದೆ. ನ್ಯೂಝಿಲೆಂಡ್‌ನಲ್ಲಿ ನಡೆಯಲಿರುವ ಈ ಸರಣಿಯಲ್ಲಿ ಒಟ್ಟು 3 ಟಿ20 ಪಂದ್ಯಗಳನ್ನಾಡಲಿದೆ. ಈ ಪಂದ್ಯಗಳಿಗೆ ಕಿವೀಸ್ ತಂಡದ ಪ್ರಮುಖ ಮೂವರು ಆಟಗಾರರು ಅಲಭ್ಯರಾಗಿದ್ದಾರೆ.

ಆಸ್ಟ್ರೇಲಿಯಾ ವಿರುದ್ಧದ ಸರಣಿಯಿಂದ ಮೂವರು ಔಟ್ ಆಸ್ಟ್ರೇಲಿಯಾ-ನ್ಯೂಝಿಲೆಂಡ್ ನಡುವಣ ಟಿ20 ಸರಣಿಯು ಅಕ್ಟೋಬರ್ 1 ರಿಂದ ಶುರುವಾಗಲಿದೆ. ಈ ಸರಣಿಯಿಂದ ನ್ಯೂಝಿಲೆಂಡ್‌ನ ಮೂವರು ಆಟಗಾರರು ಹೊರಬಿದ್ದಿದ್ದಾರೆ. ಬೆನ್ನಿನ ನೋವಿನಿಂದ ಬಳಲುತ್ತಿರುವ ಪ್ರಮುಖ ವೇಗಿ ವಿಲಿಯಂ ಒರೋಕ್ ಕನಿಷ್ಠ ಮೂರು ವಾರಗಳ ಕಾಲ ಕ್ರಿಕೆಟ್ ಅಂಗಳದಿಂದ ದೂರ ಉಳಿಯಲಿದ್ದಾರೆ.

ಇನ್ನು ಸ್ಫೋಟಕ ಆರಂಭಿಕ ದಾಂಡಿಗ ಫಿನ್ ಅಲೆನ್ ಅವರ ಬಲಗಾಲಿಗೆ ಗಾಯವಾಗಿದ್ದು, ಹೀಗಾಗಿ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದಾರೆ. ಇದೇ ಕಾರಣದಿಂದಾಗಿ ಆಸ್ಟ್ರೇಲಿಯಾ ವಿರುದ್ಧದ ಸರಣಿಗೆ ಅಲಭ್ಯರಾಗಿದ್ದಾರೆ.

ಮತ್ತೊಂದೆಡೆ ಆಲ್‌ರೌಂಡರ್ ಗ್ಲೆನ್ ಫಿಲಿಪ್ಸ್ ತೊಡೆಸಂದು ನೋವಿನ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಇದೀಗ ಚಿಕಿತ್ಸೆ ಪಡೆಯುತ್ತಿರುವ ಫಿಲಿಪ್ಸ್ ಕೂಡ ಇನ್ನೂ ಒಂದು ತಿಂಗಳ ಕಾಲ ಮೈದಾನಕ್ಕಿಳಿಯಲ್ಲ. ಅತ್ತ ದಿ ಹಂಡ್ರೆಡ್ ಲೀಗ್‌ನಲ್ಲಿ ಕಣಕ್ಕಿಳಿಯುತ್ತಿದ್ದ ಮಿಚೆಲ್ ಸ್ಯಾಂಟ್ನರ್ ಕೂಡ ತೊಡೆಸಂದು ಗಾಯದ ಸಮಸ್ಯೆಗೆ ಒಳಗಾಗಿದ್ದಾರೆ. ಇದೀಗ ವಿಶ್ರಾಂತಿಯಲ್ಲಿರುವ ಸ್ಯಾಂಟ್ನರ್ ಆಸ್ಟ್ರೇಲಿಯಾ ವಿರುದ್ಧದ ಸರಣಿ ಆರಂಭಕ್ಕೂ ಮುನ್ನ ಸಂಪೂರ್ಣ ಫಿಟ್ ಆಗುವ ನಿರೀಕ್ಷೆಯಿದೆ.

**ನ್ಯೂಝಿಲೆಂಡ್ ಟಿ20 ತಂಡ:** ಮಿಚೆಲ್ ಸ್ಯಾಂಟ್ನರ್ (ನಾಯಕ), ಮೈಕೆಲ್ ಬ್ರೇಸ್‌ವೆಲ್, ಮಾರ್ಕ್ ಚಾಪ್‌ಮನ್, ಜೇಕಬ್ ಡಫಿ, ಜ್ಯಾಕ್ ಫೌಲ್ಕ್ಸ್, ಮ್ಯಾಟ್ ಹೆನ್ರಿ, ಬೆವೊನ್ ಜೇಕಬ್ಸ್, ಆಡಮ್ ಮಿಲ್ನ್, ಡ್ಯಾರಿಲ್ ಮಿಚೆಲ್, ರಚಿನ್ ರವೀಂದ್ರ, ಟಿಮ್ ಸೀಫರ್ಟ್, ಇಶ್ ಸೋಧಿ, ವಿಲಿಯಂ ಒರೋಕ್ (ಅಲಭ್ಯ), ಗ್ಲೆನ್ ಫಿಲಿಪ್ಸ್ (ಅಲಭ್ಯ), ಫಿನ್ ಅಲೆನ್ (ಅಲಭ್ಯ).

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966